

ಸುದ್ದಿಗಳ ಹೊನಲು

# ಸಂಜೆ ಮುಗಿಲು

ವೇಣು ಸಾರಥ್ಯದಲ್ಲಿ...

ಸಂಪುಟ: 21, ಸಂಚಿಕೆ: 165, ಪುಟಗಳು: 8, ಭಾನುವಾರ, 24 ಮಾರ್ಚ್ 2024 RNI NO. KARKAN/2002/08054
epaper: www.sanjemugilu.com
ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ
ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

**ಸುಭಾಷಿತ**

ಸ್ವಲ್ಪ ಉಳ್ಳವನು ಬಡವನಲ್ಲ;
ಇನ್ನೂ ಬೇಕೆನ್ನುವವನು ಬಡವ

। ಸೆಬೇಕಾ

**ಪಂಚಾಂಗ**

(ಭಾನುವಾರ 24, ಮಾರ್ಚ್ -2024)

- ಸಂವತ್ಸರ: ಶೋಭಕೃತ್,
- ಋತು: ಶಿಶಿರ, ಅಯನ: ಉತ್ತರಾಯಣ
- ಮಾಸ: ಫಾಲ್ಗುಣ,
- ಪಕ್ಷ : ಶುಕ್ಲ
- ತಿಥಿ : ಚತುರ್ದಶಿ, ನಕ್ಷತ್ರ : ಪುಬ್ಬಾ
- ರಾಹುಕಾಲ: 04: 59- 06 : 30
- ಗುಳಿಕಕಾಲ: 03: 28- 04 : 59
- ಯಮಗಂಡಕಾಲ:12: 25- 01 : 56

## ಮಂಡ್ಯ ಗೆಲ್ಲಲು ಸಂಧಾನ ಸೂತ್ರಕ್ಕೆ ಮೊರೆ ಹೋದ ದಳಪತಿಗಳು





**ಮಂಡ್ಯ:** ಲೋಕಸಮರಕ್ಕೆ ಈಗಾಗಲೇ ಮಹೂರ್ತ ಫಿಕ್ಸ್ ಆಗಿದೆ. ಈ ನಡುವೆ ಸಕ್ಕರಿನಗರಿ ಮಂಡ್ಯದಲ್ಲಿ ಚುನಾವಣಾ ಕಾವು ದಿನದಿಂದ ದಿನಕ್ಕೆ ರಂಗೇರುತ್ತಿದೆ. ಮೈತ್ರಿ ಟಿಕೆಟ್ ಜೆಡಿಎಸ್‌ಗೆ ಫಿಕ್ಸ್ ಆಗಿದೆ. ಮೈತ್ರಿ ಅಭ್ಯರ್ಥಿಯಾಗಿ ಹೆಚ್‌ಡಿ ಕುಮಾರಸ್ವಾಮಿ ಅಖಾಡಕ್ಕೆ ಧುಮುಕುವುದು ಬಹುತೇಕ ಕನ್ಫರ್ಮ್ ಆಗಿದೆ. ಇನ್ನು ಮೈತ್ರಿ ಟಿಕೆಟ್ ಜೆಡಿಎಸ್‌ಗೆ ಎಂದು ಬಿಜೆಪಿ ಸ್ಪಷ್ಟ ಪಡಿಸಿದೆ. ಹಾಗಾದ್ರೆ, ಸುಮಲತಾ ನಡೆ ಏನು ಎಂಬುದು ಸಾಕಷ್ಟು ಕುತೂಹಲಕ್ಕೆ ಕಾರಣವಾಗಿದೆ. ಮತ್ತೊಂದೆಡೆ ದಳಪತಿಗಳು ಮಂಡ್ಯ ಗೆಲ್ಲಲು ಸಂಧಾನ ಸೂತ್ರಕ್ಕೆ ಮೊರೆ ಹೋಗಿದ್ದಾರೆ.

ಮಂಡ್ಯ ಕಾರ್ಯಕರ್ತರ ಒತ್ತಡಕ್ಕೆ ಮಣಿದು ಮಂಡ್ಯದಿಂದ ಸ್ಪರ್ಧೆ ಮಾಡಲು ಹೆಚ್‌ಡಿ ಕುಮಾರಸ್ವಾಮಿ ಒಪ್ಪಿದ್ದಾರೆ. ಆದರೆ ಮಂಡ್ಯದಿಂದ ಕುಮಾರಸ್ವಾಮಿ ಸ್ಪರ್ಧೆ ಮಾಡುವುದಕ್ಕೆ ರಾಮನಗರ ಜಿಲ್ಲೆಯ ಜೆಡಿಎಸ್ ಕಾರ್ಯಕರ್ತರು ಸಾಕಷ್ಟು ವಿರೋಧ ವ್ಯಕ್ತಪಡಿಸುತ್ತಿದ್ದು, ಕುಮಾರಸ್ವಾಮಿ ಚನ್ನಪಟ್ಟಣದಲ್ಲಿಯೇ ಇರಲಿ, ನಿಖಿಲ್ ಮಂಡ್ಯದಿಂದ ಸ್ಪರ್ಧೆ ಮಾಡುವಂತೆ ಒತ್ತಾಯ ಮಾಡುತ್ತಿದ್ದಾರೆ. ಹೀಗಾಗಿ ಹೆಚ್‌ಡಿಕೆ ಅಡ್ಡಕತ್ತರಿಯಲ್ಲಿ ಸಿಲುಕಿದ್ದು, ಇಬ್ಬರಲ್ಲಿ ಯಾರು ಸ್ಪರ್ಧೆ ಮಾಡುತ್ತಾರೆ ಎಂಬುವುದು ಸಾಕಷ್ಟು ಕುತೂಹಲ ಮೂಡಿಸಿದೆ.

**ಮಂಡ್ಯ ಗೆಲ್ಲಲು ಸಂಧಾನ ಸೂತ್ರ:** ಬಿಜೆಪಿ ಹೈಕಮಾಂಡ್ ಮಂಡ್ಯ, ಹಾಸನ, ಕೋಲಾರ ಕ್ಷೇತ್ರಗಳನ್ನು ಜೆಡಿಎಸ್ ಗೆ ಬಿಟ್ಟು ಕೊಟ್ಟಿದೆ. ಜೆಡಿಎಸ್ ಪ್ರಾಬಲ್ಯವಿರುವ ಈ ಮೂರೂ ಕ್ಷೇತ್ರಗಳಲ್ಲಿ ಜೆಡಿಎಸ್ ಅಭ್ಯರ್ಥಿಗಳನ್ನೇ ನಿಲ್ಲಿಸಲು ಹಸಿರು ನಿಶಾನೆ ತೋರಿಸಿದೆ. ವಿಪರ್ಯಾಸವೆಂದರೆ ಈವರೆಗೂ ಬಿಜೆಪಿ ಹೈಕಮಾಂಡ್ ಜೊತೆ ಸಂಪರ್ಕದಲ್ಲಿದ್ದ ಮಂಡ್ಯ ಸಂಸದೆ ಸುಮಲತಾ ಅಂಬರೀಷ್ ಗೆ ಇದರಿಂದಾಗಿ ಬಿಗ್ ಶಾಕ್ ಆಗಿದೆ. ಸಂಸದೆ ಸುಮಲತಾ ಬಿಜೆಪಿ ಟಿಕೆಟ್ ನನಗೇ ಸಿಗುತ್ತದೆ.

ಪುಟ 2

## ಕುಮಾರಸ್ವಾಮಿ ಸುಳ್ಳು ಹೇಳುವುದರಲ್ಲಿ ನಿಸ್ಸೀಮರು



**ಬೆಂಗಳೂರು:** ಕುಮಾರಸ್ವಾಮಿ ಅವರು ಸುಳ್ಳು ಹೇಳುವುದರಲ್ಲಿ ನಿಸ್ಸೀಮರು. ಸುಳ್ಳು ಹೇಳುವುದೇ ಅವರ ಉದ್ಯೋಗ ಎಂದು ಸಂಸದ ಡಿ.ಕೆ.ಸುರೇಶ್ ಟಾಂಗ್ ಕೊಟ್ಟರು.

ಲೋಕಸಭಾ ಚುನಾವಣೆ ಹಿನ್ನೆಲೆ ಮಾಧ್ಯಮದ ಜೊತೆ ಮಾಡಿದ ಅವರು, ಜೆಡಿಎಸ್ ನಾಯಕರ ಮನೆಗೆ ಹೋಗುವುದು, ಪಕ್ಷಕ್ಕೆ ಅವರನ್ನು ಸೆಳೆಯುವುದು, ಬೆದರಿಕೆ ಹಾಕುವ ಅಭ್ಯಾಸ ಡಿ.ಕೆ.ಶಿವಕುಮಾರ್ ಗಾಗಲಿ ಅಥವಾ ಡಿ.ಕೆ.ಸುರೇಶ್‌ಗಾಗಲಿ ಇಲ್ಲ. ಆರೋಪ ಮಾಡುವುದು ರಾಜಕೀಯದ ಹುಟ್ಟು ಗುಣ. ಹೆಚ್.ಡಿ.ಕುಮಾರಸ್ವಾಮಿ ಅವರು ವೈದ್ಯಕೀಯ ಸೇವೆಯಲ್ಲಿದ್ದಾರೆ. ಆರೋಗ್ಯ ಸರಿಯಿಲ್ಲ. ಅವರ ಬಗ್ಗೆ ನಾನು ಹೆಚ್ಚಿಗೆ ಮಾತನಾಡುವುದಿಲ್ಲ. ಅವರು ಆದಷ್ಟು ಬೇಗ ಗುಣಮುಖರಾಗಲಿ ಎಂದು ಭಗವಂತನಲ್ಲಿ ಪ್ರಾರ್ಥಿಸುತ್ತೇನೆ ಎಂದರು.

ಭಯ ಅನ್ನೋದು ಭಗವಂತನ ಸೃಷ್ಟಿ. ಜನ ನನ್ನ ಹಿಂದೆ ಇರೋವರೆಗೂ ಯಾರಿಗೂ ಹೆದರುವ ಪ್ರಶ್ನೆ ಇಲ್ಲ ಎಂದರು. ಕುಕ್ಕರ್, ಸೀರೆ ಹಂಚುವ ಆರೋಪ ಕುರಿತು ಮಾತನಾಡಿ, ಅದನ್ನು ಯಾರು ಹಂಚಿದ್ದಾರೆ ಎಂಬುದನ್ನು ನೀವೇ ಕೇಳಿಕೊಳ್ಳಬೇಕು. ಕೆಲವರು ಹಂಚುತ್ತಿರುತ್ತಾರೆ. ಕೆಲವರು ಒಳಗೊಳಗೆ ಏನೇನೊ ಮಾಡ್ತಿರುತ್ತಾರೆ. ಕುಮಾರಸ್ವಾಮಿ ಅವರು ಸುಳ್ಳು ಹೇಳುವುದರಲ್ಲಿ ನಿಸ್ಸೀಮರು. ಸುಳ್ಳು ಹೇಳುವುದೇ ಅವರ ಉದ್ಯೋಗ ಎಂದು ತಿರುಗೇಟು ನೀಡಿದರು.

ಈಗ ರಂಜಾನ್ ಹಬ್ಬ ಇದೆ. ಷರಿಯತ್ ಗೋಸ್ಕರ ಆ ಕ್ಷೇತ್ರದ ಶಾಸಕರು ಪ್ರತಿ ವರ್ಷ ಉಡುಗೊರೆ ಕೊಡ್ತಾರೆ. ಅದನ್ನು ಬುಕ್ ಮಾಡಿ ತಂದಿಟ್ಟಿದ್ದಾರೆ. ಈ ಸಂದರ್ಭದಲ್ಲೇ ಚುನಾವಣೆ ಬಂದಿದೆ. ಅದರಲ್ಲಿ ಸಿಂಬಲ್ ಏನು ಇಲ್ಲ. ಚುನಾವಣಾ ಆಯೋಗಕ್ಕೆ ಏನು ಸಲ್ಲಿಕೆ ಮಾಡಬೇಕೊ ಅದನ್ನ ಮಾಡ್ತಾರೆ ಎಂದು ಸ್ಪಷ್ಟಪಡಿಸಿದರು.

ಪುಟ 2

## ಸಂಕ್ಷಿಪ್ತ ಸುದ್ದಿ

### ಚೆನ್ನೈ ಆಸ್ಪತ್ರೆಯಿಂದ ಹೆಚ್‌ಡಿಕೆ ಡಿಸ್ಚಾರ್ಜ್



**ಬೆಂಗಳೂರು:** ಮಾಜಿ ಸಿಎಂ ಹೆಚ್‌ಡಿ ಕುಮಾರಸ್ವಾಮಿ ಅವರು ಚೆನ್ನೈ ಆಸ್ಪತ್ರೆಯಿಂದ ಡಿಸ್ಚಾರ್ಜ್ ಆಗಿದ್ದಾರೆ. ಹೃದಯದ ಶಸ್ತ್ರಚಿಕಿತ್ಸೆಗಾಗಿ ಅಪೋಲೋ ಆಸ್ಪತ್ರೆಗೆ ದಾಖಲಾಗಿದ್ದ ಕುಮಾರಸ್ವಾಮಿ ಇಂದು(ಮಾರ್ಚ್ 24) ವಿಶೇಷ ವಿಮಾನದ ಮೂಲಕ ಚೆನ್ನೈನಿಂದ ಬೆಂಗಳೂರಿನ ಹೆಚ್ ಎಎಲ್ ವಿಮಾನ ನಿಲ್ದಾಣಕ್ಕೆ ಬಂದಿಳಿದಿದ್ದಾರೆ. ಈ ವೇಳೆ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿದ ಎಚ್ ಡಿಕೆ, ಇದೊಂದು ಪುನರ್ಜನ್ಮ ಎಂದೇ ಹೇಳಬಹುದು. ನಾಡಿನಾದ್ಯಂತ ಅಭಿಮಾನಿಗಳು ಪ್ರಾರ್ಥನೆಯನ್ನ ಸಲ್ಲಿಸಿದ್ರು. ಅಭಿಮಾನಿಗಳು, ಹಿತೈಷಿಗಳ ಪ್ರಾರ್ಥನೆ ಫಲ ಕೊಟ್ಟಿದೆ. ಸಾಯಿ ಬಾಬಾ ಬಂದು ಆಪರೇಷನ್ ಮಾಡಿದ್ದಾರೆ ಅಂದ್ರು. ಸ್ವತಃ ವೈದ್ಯರೇ ಆ ಮಾತನ್ನು ಹೇಳಿದ್ದಾರೆ. ಇನ್ನು ಮೂರ್ನಾಲ್ಕು ದಿನಗಳ ಕಾಲ ವಿಶ್ರಾಂತಿ ಮಾಡುತ್ತೇನೆ ಎಂದು ಹೇಳಿದರು.

ಪುಟ 2

### ಮಾಸ್ಕೋ ದಾಳಿ 'ಅನಾಗರಿಕ ಭಯೋತ್ಪಾದಕ ಕೃತ್ಯ' ಮಾರ್ಚ್ 24 ರಂದು ಶೋಕಾಚರಣೆ

**ಮಾಸ್ಕೊ:** ರಷ್ಯಾದ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಶನಿವಾರ ಮಾಸ್ಕೋ ಕನ್ಸರ್ಟ್ ಹಾಲ್ ದಾಳಿಯಲ್ಲಿ 143 ಜನರು ಪ್ರಾಣ ಕಳೆದುಕೊಂಡ ಘಟನೆಯನ್ನು 'ಅನಾಗರಿಕ ಭಯೋತ್ಪಾದಕ ಕೃತ್ಯ' ಎಂದು ಹೇಳಿದ್ದಾರೆ. ಮಾರ್ಚ್ 24 ರಂದು ದೇಶದಲ್ಲಿ ಶೋಕಾಚರಣೆ ನಡೆಸಲಾಗುವುದು ಎಂದು ಪುಟಿನ್ ಹೇಳಿದ್ದಾರೆ. ''ರಕ್ತಸಿಕ್ತ, ಬರ್ಬರ ಭಯೋತ್ಪಾದಕ ಕೃತ್ಯಕ್ಕೆ ಸಂಬಂಧಿಸಿದಂತೆ ನಾನು ಇಂದು ನಿಮ್ಮೊಂದಿಗೆ ಮಾತನಾಡುತ್ತಿದ್ದೇನೆ, ಅದರಲ್ಲಿ ಸಾವಿಗೀಡಾದವರು ಡಜನ್ ಗಟ್ಟಲೆ ಮುಗ್ಧ, ಶಾಂತಿಯುತ ಜನರು. ನಾನು ಮಾರ್ಚ್ 24 ಅನ್ನು ರಾಷ್ಟ್ರೀಯ ಶೋಕಾಚರಣೆಯ ದಿನವೆಂದು ಘೋಷಿಸುತ್ತೇನೆ''



ಪುಟ 2

## ಲಕ್ಷ್ಮೀ ಹೆಬ್ಬಾಳ್ಕರ್ ಪುತ್ರನನ್ನು ಗೆಲ್ಲಿಸುವ ಹೊಣೆ ಜಾರಕಿಹೊಳಿಗೆ
## ಪ್ರಿಯಾಂಕಾರನ್ನ ಗೆಲ್ಲಿಸೋದು ಹೆಬ್ಬಾಳ್ಕರ್ !



**ಬೆಳಗಾವಿ:** ಬೆಳಗಾವಿ ರಾಜ್ಯ ರಾಜಕಾರಣದ ಕೇಂದ್ರ ಬಿಂದುವಾಗಿದೆ. ಬೆಳಗಾವಿ ಜಿಲ್ಲೆಯಲ್ಲಿ ಜಾರಕಿಹೊಳಿ ಮತ್ತು ಹೆಬ್ಬಾಳ್ಕರ್ ಕುಟುಂಬ ಮಧ್ಯದ ಸಮರ ಗೌಪ್ಯವಾಗಿಯಂತು ಉಳಿದಿಲ್ಲ. ಬೆಳಗಾವಿ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಮತ್ತು ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ನಡುವೆ ಕಳೆದ ವರ್ಷ ವಾಗ್ಯುದ್ದ ನಡೆದಿದ್ದು, ಕಾಂಗ್ರೆಸ್ ವರಿಷ್ಠರ ಮಧ್ಯ ಪ್ರವೇಶದಿಂದ ಇಬ್ಬರು ತಣ್ಣಗಾಗಿದ್ದಾರೆ. ಪ್ರತಿಷ್ಠೆಯ ಗುದ್ದಾಟದಲ್ಲಿರುವ ಇಬ್ಬರಿಗೆ ಇದೀಗ ಸವಾಲೊಂದು ಎದುರಾಗಿದೆ.

ಲೋಕಸಭೆ ಚುನಾವಣೆಗೆ ಚಿಕ್ಕೋಡಿ ಕ್ಷೇತ್ರದಿಂದ ಕಾಂಗ್ರೆಸ್ ಅಭ್ಯರ್ಥಿಯಾಗಿ ಸತೀಶ್ ಜಾರಕಿಹೊಳಿ ಪುತ್ರಿ ಪ್ರಿಯಾಂಕಾ ಜಾರಕಿಹೊಳು ಸ್ಪರ್ಧಿಸುತ್ತಿದ್ದಾರೆ. ಆದರೆ ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಚುನಾವಣಾ ಉಸ್ತುವಾರಿ ಹೊಣೆಯನ್ನು ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಹೊತ್ತಿದ್ದಾರೆ. ಇನ್ನು ಬೆಳಗಾವಿ ಕ್ಷೇತ್ರದಿಂದ ಕಾಂಗ್ರೆಸ್ ಅಭ್ಯರ್ಥಿಯಾಗಿ ಸಚಿವೆ ಲಕ್ಷ್ಮೀ ಪುತ್ರ ಮೃಣಾಲ್ ಹೆಬ್ಬಾಳ್ಕರ್ ಕಣಕ್ಕೆ ಇಳಿದಿದ್ದಾರೆ. ಬೆಳಗಾವಿ ಲೋಕಸಭಾ ಕ್ಷೇತ್ರದ ಚುನಾವಣಾ ಉಸ್ತುವಾರಿ ಹೊಣೆಯನ್ನು ಸಚಿವ ಸತೀಶ್ ಜಾರಕಿಹೊಳಿ ಹೊತ್ತಿದ್ದಾರೆ.

ಈ ಮೂಲಕ ಸಚಿವ ಸತೀಶ್ ಜಾರಕಿಹೊಳಿ ಪುತ್ರಿ ಪ್ರಿಯಾಂಕಾ ಜಾರಕಿಹೊಳಿಯವರನ್ನು ಗೆಲ್ಲಿಸುವ ಹೊಣೆ ಸಚಿವ ಲಕ್ಷ್ಮೀ ಹೆಬ್ಬಾಳ್ಕರ್ ಗೆ ಇದೆ. ಇನ್ನು ಲಕ್ಷ್ಮೀ ಹೆಬ್ಬಾಳ್ಕರ್ ಪುತ್ರ ಮೃಣಾಲ್ ಹೆಬ್ಬಾಳ್ಕರ್ ಅವರನ್ನು ಗೆಲ್ಲಿಸುವ ಜವಾಬ್ದಾರಿ ಸಚಿವ ಸತೀಶ್ ಜಾರಕಿಹೊಳಿ ಹೆಗಲ ಮೇಲಿದೆ. ಆದರೆ ಸಚಿವರಿಬ್ಬರು ರಾಜಕೀಯವಾಗಿ ಕಿತ್ತಾಡುತ್ತಿದ್ದು, ಮಕ್ಕಳನ್ನು ಗೆಲ್ಲಿಸುತ್ತಾ ಎಂಬುವುದು ಯಕ್ಷ ಪ್ರಶ್ನೆಯಾಗಿದೆ. ಅಲ್ಲದೆ ಇದು ಇದು ರಾಜ್ಯ ಕಾಂಗ್ರೆಸ್ ನಾಯಕರಿಗೆ ತಲೆನೋವಾಗಿ ಪರಿಣಮಿಸಿದೆ.

ಪುಟ 2

### ಬಿಜೆಪಿ ಐದನೇ ಪಟ್ಟಿಯಲ್ಲಿ ವರುಣ್ ಗಾಂಧಿ
## ಕೈ ಬಿಡುವ ಸಾಧ್ಯತೆ



**ಉತ್ತರ ಪ್ರದೇಶ:** ಉತ್ತರ ಪ್ರದೇಶದಲ್ಲಿ 2024ರ ಲೋಕಸಭೆ ಚುನಾವಣೆಯ ಕಾವು ತೀವ್ರಗೊಂಡಿದೆ. ವರುಣ್ ಗಾಂಧಿ ಹಾಗೂ ವಿಕೆ ಸಿಂಗ್ ಹೆಸರು ಕೈಬಿಡಲಾಗಿದೆ ಎನ್ನುವ ಮಾಹಿತಿ ಲಭ್ಯವಾಗಿದೆ. ಕಾಂಗ್ರೆಸ್ ತನ್ನ 9 ಅಭ್ಯರ್ಥಿಗಳ ಹೆಸರನ್ನು ಪ್ರಕಟಿಸಿದೆ. ಭಾರತೀಯ ಜನತಾ ಪಕ್ಷ ಈಗಾಗಲೇ 51 ಅಭ್ಯರ್ಥಿಗಳ ಪಟ್ಟಿಯನ್ನು ಬಿಡುಗಡೆ ಮಾಡಿದೆ. ಇದೀಗ ಬಿಜೆಪಿ ಯುಪಿಯ ಬಾರಾಬಂಕಿ ಸೇರಿದಂತೆ 25 ಸ್ಥಾನಗಳಿಗೆ ಅಭ್ಯರ್ಥಿಗಳ ಹೆಸರನ್ನು ಅಂತಿಮಗೊಳಿಸಿದೆ.

ಶನಿವಾರ ಸಂಜೆ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಚುನಾವಣಾ ಸಮಿತಿ ಸಭೆಯಲ್ಲಿ ಯುಪಿಯ ಉಳಿದ ಲೋಕಸಭಾ ಸ್ಥಾನಗಳಿಗೆ ಅಭ್ಯರ್ಥಿಗಳನ್ನು ನಿರ್ಧರಿಸುವ ಕುರಿತು ಚರ್ಚೆ ನಡೆದಿದೆ. ಇದರಲ್ಲಿ ಪ್ರತಿ ಲೋಕಸಭಾ ಸ್ಥಾನಕ್ಕೆ ಅನುಗುಣವಾಗಿ ಹೆಸರುಗಳನ್ನು ನಿರ್ಧರಿಸಲಾಗಿದೆ. ಭಾನುವಾರ ಅಭ್ಯರ್ಥಿಗಳ ಘೋಷಣೆಯಾಗಬಹುದು ಎಂದು ಹೇಳಲಾಗುತ್ತಿದೆ.

ಯುಪಿಯ ಬಾರಾಬಂಕಿ ಸೇರಿದಂತೆ 25 ಸ್ಥಾನಗಳಿಗೆ ಅಭ್ಯರ್ಥಿಗಳ ಹೆಸರಿಗೆ ಸಂಬಂಧಿಸಿದಂತೆ ಬಿಜೆಪಿ ಶನಿವಾರ ದೆಹಲಿ ಬಿಜೆಪಿಯ ಕೇಂದ್ರ ಕಚೇರಿಯಲ್ಲಿ ಚಿಂತನ ಮಂಥನ ನಡೆಸಿತು. ಸಭೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರಲ್ಲದೆ, ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರೊಂದಿಗೆ ಸಿಎಂ ಯೋಗಿ ಆದಿತ್ಯನಾಥ್,

ಪುಟ 2

### ಲೋಕಸಭಾ ಚುನಾವಣೆ ಬೆನ್ನಲ್ಲೇ ಅಲರ್ಟ್ ಆದ ರೈಲ್ವೆ ಪೊಲೀಸ್
## ಬೋಗಿ, ಬ್ಯಾಗ್, ಲಗೇಜ್ ತಪಾಸಣೆ





**ಬೆಂಗಳೂರು:** ಲೋಕಸಭಾ ಚುನಾವಣೆಗೆ ದಿನಾಂಕ ಫಿಕ್ಸ್ ಆಗಿದೆ. ಬೆಂಗಳೂರು ನಗರದಲ್ಲಿ ಮೂರು ಲೋಕಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಚುನಾವಣೆ ಸಂಬಂಧ ದುಡ್ಡು ಸಾಗಾಣೆ, ಅನಧಿಕೃತ ಚಟುವಟಿಕೆಗಳ ಮೇಲೆ ನಿಗಾ ಇಡಲು ಚುನಾವಣಾ ಆಯೋಗ ಹದ್ದಿನ ಕಣ್ಣಿಡಲು ಚೆಕ್ ಪೋಸ್ಟ್ ನಿರ್ಮಾಣ ಮಾಡಿದೆ. ಹಾಗೂ ಮತ್ತೊಂದೆಡೆ ರೈಲ್ವೇ ಪೊಲೀಸರು ಕೂಡ ಅಲರ್ಟ್ ಆಗಿದ್ದಾರೆ. ರೈಲ್ವೆ ಇಲಾಖೆ ಪೊಲೀಸರಿಗೆ ಮಾರ್ಗಸೂಚಿ ನೀಡಲಾಗಿದೆ. ಆರ್ ಪಿಎಫ್ ಮತ್ತು ರೈಲ್ವೆ ಪೊಲೀಸರು ಚುನಾವಣಾ ಚೆಕ್ ಪೋಸ್ಟ್ ನಿರ್ಮಿಸಿದ್ದು ರಾಜ್ಯಾದ್ಯಂತ ಹೊರ ರಾಜ್ಯದಿಂದ ಬರುವ ರೈಲ್ವೆ ಬೋಗಿಗಳ ತಪಾಸಣೆಗೆ ಪ್ರತ್ಯೇಕ ತಂಡ ರಚನೆ ಮಾಡಲಾಗಿದೆ.

ಕಳೆದ ಮೂರ್ನಾಲ್ಕು ದಿನಗಳಿಂದ ರಾಜ್ಯದ ಎಲ್ಲಾ ಪ್ರಮುಖ ರೈಲ್ವೆ ನಿಲ್ದಾಣಗಳಲ್ಲಿ ಚೆಕ್ ಪೋಸ್ಟ್ ನಿರ್ಮಿಸಿ ಪರಿಶೀಲನೆ ನಡೆಸಲಾಗುತ್ತಿದೆ. ಇದಲ್ಲದೆ ರೈಲ್ವೆ ನಿಲ್ದಾಣಗಳಲ್ಲಿಯೂ ಪ್ರತಿಯೊಬ್ಬರ ಲಗೇಜ್ ಪರಿಶೀಲನೆ ಮಾಡಲಾಗುತ್ತಿದೆ. ರೈಲ್ವೆ ಇಲಾಖೆ ಪೊಲೀಸರು ಮದ್ಯ ಹಾಗು ಹಣ ಸಾಗಾಣೆ ಬಗ್ಗೆ ಕಟ್ಟೆಚ್ಚರ ವಹಿಸಿದ್ದಾರೆ. ಇಪ್ಪತ್ತು ತಂಡಗಳನ್ನಾಗಿ ಮಾಡಿಕೊಂಡಿದ್ದು, ಒಂದೊಂದು ತಂಡದಲ್ಲಿ ಐದು ಮಂದಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಕೇಂದ್ರ ಚುನಾವಣಾ ಆಯೋಗದ ಸೂಚನೆ ಹಿನ್ನಲೆ ಅಲರ್ಟ್ ಆಗಿದ್ದು ಬೋಗಿಗಳಲ್ಲಿ ಬರುವ ಲಗೇಜ್, ಪ್ಯಾಕಿಂಗ್ ಗಳು ಹಾಗೂ ಅನುಮಾನಿತರ ಮೇಲೆ ನಿಗಾ ಇಡಲಾಗುತ್ತಿದೆ. ಆರ್ ಪಿಎಫ್ ತಂಡದ ಜೊತೆ ಶ್ವಾನದಳವೂ ಕಾರ್ಯ ನಿರ್ವಹಿಸುತ್ತಿದೆ.

ಲೋಕಸಭಾ ಚುನಾವಣೆ ಹಿನ್ನಲೆ ನೀತಿ ಸಂಹಿತೆ ಜಾರಿಯಾಗಿದ್ದು, ಬೆಂಗಳೂರು ನಗರ ಪ್ರದೇಶದ ಮೂರು ಲೋಕಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ದುಡ್ಡು ಸಾಗಾಣೆ, ಅನಧಿಕೃತ ಮದ್ಯ ಸೇರಿದಂತೆ ದಾಖಲೆ ಇಲ್ಲದೇ ತಗೆದುಕೊಂಡು ಹೋಗುವ ಯಾವುದೇ ವಸ್ತುಗಳ ಮೇಲೆ ಚೆಕ್ ಪೋಸ್ಟ್‌ಗಳ ಮೂಲಕ ಚುನಾವಣಾ ಆಯೋಗದಿಂದ ಬರುವ ಹೋಗುವ ವಾಹನಗಳ ಮೇಲೆ ಹದ್ದಿನ ಕಣ್ಣಿದ್ದು ಒಟ್ಟು 104 ಚೆಕ್ ಪೋಸ್ಟ್ ನಿರ್ಮಾಣ

ಪುಟ 2

## ಚಂಡಿಕಾಯಾಗದಲ್ಲಿ ಭಾಗಿಯಾದ ಬಿಎಸ್‌ವೈ ಕುಟುಂಬ



**ಚಿಕ್ಕಮಗಳೂರು:** ಲೋಕಸಭಾ ಚುನಾವಣೆ ಹೊತ್ತಲ್ಲಿ ಟೆಂಪಲ್ ರನ್ ಮುಂದುವರಿಸಿರುವ ಮಾಜಿ ಸಿಎಂ ಬಿ.ಎಸ್ ಯಡಿಯೂರಪ್ಪ, ಕುಟುಂಬ ಸಮೇತರಾಗಿ ಹೊರನಾಡು ಅನ್ನಪೂರ್ಣೇಶ್ವರಿ ದೇವಾಲಯಕ್ಕೆ ಭೇಟಿ ನೀಡಿದ್ದಾರೆ. ಇಂದು ಮುಂಜಾನೆಯಿಂದ ದೇವಾಲಯದಲ್ಲಿ ನಡೆಯುತ್ತಿರುವ ಚಂಡಿಕಾಯಾಗದಲ್ಲಿ ಅವರು ಭಾಗಿಯಾಗಿದ್ದಾರೆ. ಯಡಿಯೂರಪ್ಪ, ಪುತ್ರ ವಿಜಯೇಂದ್ರ, ಹಾಗೂ ರಾಘವೇಂದ್ರ ಅವರು ಶನಿವಾರ ರಾತ್ರಿ 9 ಗಂಟೆಗೆ ದೇವಾಲಯಕ್ಕೆ ಆಗಮಿಸಿ, ಅನ್ನಪೂರ್ಣೇಶ್ವರಿಗೆ ವಿಶೇಷ ಪೂಜೆ ಸಲ್ಲಿಸಿದರು. ಬಳಿಕ ದೇವಾಲಯದಲ್ಲೇ ತಂಗಿದ್ದು, ಇಂದು ಬೆಳಗ್ಗೆ 7 ಗಂಟೆಗೆ ಆರಂಭಗೊಂಡ ಯಾಗದಲ್ಲಿ ಭಾಗಿಯಾಗಿದ್ದಾರೆ.

ಪುಟ 2

### 2023ರಲ್ಲಿ ಸಂಭವಿಸಿದ್ದ ರಸ್ತೆ ಅಪಘಾತ
## ಮೃತರಲ್ಲಿ ಪುರುಷರೇ ಅಧಿಕ



ಬೆಂಗಳೂರು: ಕಳೆದ ವರ್ಷ ಬೆಂಗಳೂರಿನಲ್ಲಿ ಸಂಭವಿಸಿದ ರಸ್ತೆ ಅಪಘಾತದಲ್ಲಿ ಮೃತಪಟ್ಟವರಲ್ಲಿ ಪುರುಷರೇ ಅಧಿಕವಾಗಿದ್ದು, ಬಹುತೇಕರು ವಿದ್ಯಾರ್ಥಿಗಳು ಮತ್ತು ಕೆಲಸ ಮಾಡುವ ವಯಸ್ಸಿನವರಾಗಿದ್ದಾರೆ ಎಂದು ಖಾಸಗಿ ಸುದ್ದಿ ಸಂಸ್ಥೆ ಡೆಕ್ಕನ್ ಹೆರಾಲ್ಡ್ ವರದಿ ಮಾಡಿದೆ. ಹೆಲ್ಮೆಟ್ ಧರಿಸದಿರುವುದು ಮತ್ತು ಅತಿವೇಗದ ಚಾಲನೆಯೇ ಅಪಘಾತಕ್ಕೆ ಕಾರಣ ಕಾರಣವೆಂದು ಟ್ರಾಫಿಕ್ ಪೊಲೀಸರು ಹೇಳಿದ್ದಾರೆ. ದಿನದಿಂದ ದಿನಕ್ಕೆ ನಗರದ ಜನಸಂಖ್ಯೆ ಹೆಚ್ಚುತ್ತಿದೆ. ಹಾಗೆ ವಾಹನಗಳ ಸಂಖ್ಯೆಯೂ ಹೆಚ್ಚಾಗಿದೆ. ಇದರಿಂದ ಅಪಘಾತಗಳ ಸಂಖ್ಯೆ ಹೆಚ್ಚಾಗುತ್ತಿದೆ ಎಂದು ತಜ್ಞರು ಹೇಳಿದ್ದಾರೆ.

2023 ರಲ್ಲಿ ಬೆಂಗಳೂರು ನಗರದಲ್ಲಿ ಒಟ್ಟು 883 ಮಾರಣಾಂತಿಕ ಅಪಘಾತಗಳು ಸಂಭವಿಸಿದ್ದು, 913 ಜನರು ಮೃತಪಟ್ಟಿದ್ದಾರೆ. 2022ಕ್ಕಿಂತ 2023ರಲ್ಲಿ ಅಪಘಾತ ಶೇ17 ರಿಂದ 18 ರಷ್ಟು ಹೆಚ್ಚಾಗಿದೆ. 2022ರಲ್ಲಿ ರಸ್ತೆ ಅಪಘಾತದಲ್ಲಿ 770 ಪುರುಷರು ಮೃತಪಟ್ಟಿದ್ದರು. ಇವರಲ್ಲಿ 393 ಜನ 21-40 ನಡುವಿನ ವಯಸ್ಸಿನ ಪುರುಷರು.

ಕಳೆದ ವರ್ಷ 31-40 ವಯಸ್ಸಿನ 165 ಪುರುಷರು (ಶೇ34) ಮೃತಪಟ್ಟಿದ್ದಾರೆ. 2022 ರಲ್ಲಿ ಒಟ್ಟು 123 ಪುರುಷರು ಮೃತಪಟ್ಟಿದ್ದರು.

ಪುಟ 2

### ರಾಜ್ಯಾದ್ಯಂತ ಒಟ್ಟು 15.78 ಕೋಟಿ ಹಣ
## 1.27 ಕೋಟಿ ರೂ. ಮೌಲ್ಯದ ಚಿನ್ನಾಭರಣ ಜಪ್ತಿ



**ಬೆಂಗಳೂರು:** ಲೋಕಸಭೆ ಚುನಾವಣಾ ನೀತಿ ಸಂಹಿತೆ ಜಾರಿ ಹಿನ್ನೆಲೆ ರಾಜ್ಯಾದ್ಯಂತ ಪೊಲೀಸರು ಫುಲ್ ಅಲರ್ಟ್ ಆಗಿದ್ದಾರೆ. ಪ್ರಮುಖ ಸ್ಥಳಗಳಲ್ಲಿ ಚೆಕ್‌ಪೋಸ್ಟ್ ಸ್ಥಾಪಿಸಿ ಅಕ್ರಮ ವಸ್ತುಗಳ ಸಾಗಾಟ ತಡೆಗೆ ಕ್ರಮ ವಹಿಸಿದ್ದಾರೆ. ಈ ವೇಳೆ ರಾಜ್ಯಾದ್ಯಂತ ವಿವಿಧ ಜಿಲ್ಲೆಗಳಲ್ಲಿ ಅಕ್ರಮವಾಗಿ ಸಾಗಿಸುತ್ತಿದ್ದ ಒಟ್ಟು 15.78 ಕೋಟಿ ರೂ. ನಗದು, 1.27 ಕೋಟಿ ರೂ. ಮೌಲ್ಯದ ಚಿನ್ನಾಭರಣಗಳನ್ನ ಜಪ್ತಿ ಮಾಡಲಾಗಿದೆ.

ರಾಜ್ಯದಲ್ಲಿ ಈವರೆಗೆ 15.78 ಕೋಟಿ ರೂ. ನಗದು, 23 ಕೋಟಿ ರೂ. ಮೌಲ್ಯದ ಮದ್ಯ, 65 ಲಕ್ಷ ರೂ. ಮೌಲ್ಯದ ಡ್ರಗ್ಸ್, 1.27 ಕೋಟಿ ರೂ. ಮೌಲ್ಯದ ಚಿನ್ನಾಭರಣ ಜಪ್ತಿಯಾಗಿದೆ.

**ಯಾವ ಜಿಲ್ಲೆಯಲ್ಲಿ ಎಷ್ಟು ಹಣ ಜಪ್ತಿ**

ಧಾರವಾಡ: ನಗರದ ಹೊರವಲಯದ ಹಳಿಯಾಳ್ ಚೆಕಪೋಸ್ಟ್‌ನಲ್ಲಿ ದಾಖಲೆ ಇಲ್ಲದೇ ಸಾಗಿಸುತಿದ್ದ 1.49 ಲಕ್ಷ ರೂ. ನಗದು ಹಣವನ್ನು ಜಪ್ತಿ ಮಾಡಲಾಗಿದೆ. ಈ ಹಣವನ್ನು ಹುಬ್ಬಳ್ಳಿಯಿಂದ ಅಳ್ನಾವರ ಪಟ್ಟಣಕ್ಕೆ ಸಾಗಿಸಲಾಗುತ್ತಿತ್ತು. ಮೊಹ್ಮದ್ ಶಮಶುದ್ದೀನ್ ಎಂಬವರ ಕಾರಿನಲ್ಲಿ ಹಣವನ್ನು ವಶಕ್ಕೆ ಪಡೆದು, ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ.

ಪುಟ 2

## ತೈಮೂರ್, ಬಾಬರ್ ಕಾಲದಲ್ಲಿ ಹಿಂದೂಗಳೇ ಇರಲಿಲ್ಲ



**ಕೋಲ್ಕತ್ತಾ:** ತೈಮೂರ್, ಬಾಬರ್‌ನಂತಹ ರಾಜರು ನಮ್ಮ ದೇಶವನ್ನು ಆಳಯವಾಗ ಇಲ್ಲಿ ಹಿಂದೂಗಳೇ ಇರಲಿಲ್ಲ ಎಂದು ಟಿಎಂಸಿಯ ಹೌರ ಕ್ಷೇತ್ರದ ಅಭ್ಯರ್ಥಿ, ಹಾಲಿ ಸಂಸದ ಪ್ರಸೂನ್ ಬ್ಯಾನರ್ಜಿ ವಿವಾದಾತ್ಮಕ ಹೇಳಿಕೆ ನೀಡಿದ್ದಾರೆ.

ಚುನಾವಣಾ ಪ್ರಚಾರ ಭಾಷಣದಲ್ಲಿ ಮಾತನಾಡಿದ ಅವರು, ಈ ತಥಾಕಥಿತ ಹಿಂದೂಗಳು ಎಂದರೇ ಯಾರು ಮುಸ್ಲಿಮರು 800 ವರ್ಷಗಳ ಹಿಂದೆಯೇ ಬಂದಿದ್ದರು. ಆಗ ಭಾರತದಲ್ಲಿ ಹಿಂದೂಗಳೇ ಇರಲಿಲ್ಲ. ಹಿಂದುತ್ವ ಎನ್ನುವುದು 300-400 ವರ್ಷಗಳ ಹಿಂದೆ ಉಗಮವಾಗಿದೆ ಎಂದು ಹೇಳಿದರು.

ಈ ಹೇಳಿಕೆಗೆ ಬಿಜೆಪಿ ಕಿಡಿಕಾರಿದ್ದು, ಪ್ರಸೂನ್ ಬ್ಯಾನರ್ಜಿ ಸುಳ್ಳು ಸುದ್ದಿ ಹಬ್ಬಿಸುತ್ತಿದ್ದಾರೆ. ಈ ಹೇಳಿಕೆ ಭಾರತದ ಇತಿಹಾಸಕ್ಕೆ ಮಾಡಿದ ಅವಮಾನ. ಎರಡು ಕೋಮುಗಳ ಮಧ್ಯೆ ದ್ವೇಷ ಕಿಡಿ ಹಬ್ಬಿಸುವ ಈ ಹೇಳಿಕೆ ನೀಡಿದ್ದಾರೆ ಎಂದು ಬಿಜೆಪಿ ಕಿಡಿಕಾರಿದೆ.

ಪುಟ 2

# ಪತ್ರಿಕೆಗಳನ್ನು ಓದುವುದನ್ನು ರೂಢಿಸಿಕೊಳ್ಳಿ- ಎ.ಎಸ್.ರಾಹುಲ್

**ಮಂಡ್ಯ:** ವಿದ್ಯಾರ್ಥಿಗಳು ಮೊಬೈಲ್ ಬಳಸುವುದನ್ನು ಕಡಿಮೆ ಮಾಡಿ ದೂರದರ್ಶನ ವಾರ್ತೆ ವೀಕ್ಷಿಸುವುದನ್ನು ಮತ್ತು ಪತ್ರಿಕೆಗಳನ್ನು ಓದುವುದನ್ನು ರೂಢಿಸಿಕೊಳ್ಳಬೇಕು ಎಂದು ಅನಿಕೇತನ ಪದವಿಪೂರ್ವ ಕಾಲೇಜಿನ ಸಹಪ್ರಾಧ್ಯಾಪಕ ಹಾಗೂ ವ್ಯಕ್ತಿತ್ವ ವಿಕಸನ ತರಬೇತುದಾರ ಎ.ಎಸ್.ರಾಹುಲ್ ತಿಳಿಸಿದರು.

ಮಂಡ್ಯ ತಾಲೂಕು ಕಸಾಪ ವತಿಯಿಂದ ನಗರದ ಹೊಳಲು ಸರ್ಕಲ್ ನಲ್ಲಿರುವ ಎಂಬಿಆರ್ ಎಫ್ ನೀಟ್ ಅಕಾಡೆಮಿ ಸಭಾಂಗಣದಲ್ಲಿ ದಿ.ಸಿ.ಕೆ. ರವಿಕುಮಾರ ಚಾಮಲಾಪುರ ಸಂಸ್ಮರಣೆ ಪ್ರಯುಕ್ತ 'ವಿದ್ಯಾರ್ಥಿಗಳಲ್ಲಿ ಸ್ಪರ್ಧಾತ್ಮಕ ಮನೋಭಾವ ವೃದ್ಧಿ ಹಾಗೂ ವ್ಯಕ್ತಿತ್ವ ವಿಕಸನ' ವಿಚಾರ ಸಂಕಿರಣದಲ್ಲಿ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದರು.

ಸಾಮಾಜಿಕ ಜಾಲತಾಣದಲ್ಲಿ ಅನಗತ್ಯವಾಗಿ ಕಾಲ ಕಳೆಯಬೇಡಿ. ಅತಿಯಾದರೆ ಅಮೃತವೂ ವಿಷವಾಗುತ್ತದೆ. ಅದರ ಬದಲು ಪುಸ್ತಕ ಮತ್ತು ಪತ್ರಿಕೆಗಳನ್ನು ಓದುವುದರಿಂದ ನಿಮ್ಮ ಭವಿಷ್ಯಕ್ಕೆ ಅನುಕೂಲವಾಗುತ್ತದೆ ಎಂದರು.



ವಿದ್ಯಾರ್ಥಿಗಳ ಯಶಸ್ವಿಗೆ ಮೂರು ಸೂತ್ರಗಳು ಅತ್ಯವಶ್ಯಕ. ಒಂದು ತಾಳ್ಮೆ, ಎರಡು ಆತ್ಮವಿಶ್ವಾಸ ಮತ್ತು ಮೂರನೆಯದಾಗಿ ಧನಾತ್ಮಕ ಚಿಂತನೆ ಎಂದು ತಿಳಿಸಿ ಹಲವು ಉದಾಹರಣೆಗಳನ್ನು ನೀಡಿ ವಿದ್ಯಾರ್ಥಿಗಳನ್ನು ಪ್ರೇರೇಪಿಸಿದರು. ಜೀವನದಲ್ಲಿ ಧನಾತ್ಮಕ ಚಿಂತನೆ ಪ್ರಮುಖ ಪಾತ್ರ ವಹಿಸುತ್ತದೆ. ವಿಶ್ವಾಸ ಆತ್ಮವಿಶ್ವಾಸ ಎರಡೂ ಇರಲಿ ಆದರೆ ಅತಿಯಾದ ಆತ್ಮವಿಶ್ವಾಸ ಬೇಡ ಎಂದು ಸಲಹೆ ನೀಡಿದರು. ವ್ಯಕ್ತಿತ್ವ ವಿಕಸನ ಕಾರ್ಯಕ್ರಮ ಅತ್ಯಗತ್ಯ–ಕೃಷ್ಣೇಗೌಡ ಸಮಾರಂಭವನ್ನು ಉದ್ಘಾಟಿಸಿದ ಜಿಲ್ಲಾ ಕಸಾಪ ಗೌ||ಕಾರ್ಯದರ್ಶಿ ಡಾ.ಹುಸ್ಕೂರು ಕೃಷ್ಣೇಗೌಡ ಮಾತನಾಡಿ ಇಂದಿನ ಯುಗ ಸ್ಪರ್ಧಾ ಯುಗವಾಗಿದ್ದರೂ, ಯುವಕರು ಸ್ಪರ್ಧಾ ಕಣದಿಂದ ಹಿಂದೆ ಸರಿಯುತ್ತಿದ್ದಾರೆ. ಇಂತಹವರನ್ನು ಉತ್ತೇಜಿಸಲು ವಿದ್ಯಾರ್ಥಿಗಳಿಗೆ ವ್ಯಕ್ತಿತ್ವ ವಿಕಸನದಂತಹ ಕಾರ್ಯಕ್ರಮಗಳು ಮೇಲಿಂದ ಮೇಲೆ ನಡೆಯಬೇಕು.ಈ ನಿಟ್ಟಿನಲ್ಲಿ ಇಂದಿನ ಕಾರ್ಯಕ್ರಮ ಔಚಿತ್ಯಪೂರ್ಣ ಎಂದರು.

ಶಿಕ್ಷಕರು ಎಲ್ಲರಿಗೂ ಒಂದೇ ರೀತಿ ಬೋಧನೆ ಮಾಡುತ್ತಾರೆ.ಆದರೆ ವಿದ್ಯಾರ್ಥಿಗಳು ಬೋಧನೆಯನ್ನು ಹೇಗೆ ಬಳಸಿಕೊಳ್ಳುತ್ತಾರೆ ಎಂಬುದು ಮುಖ್ಯವಾಗುತ್ತದೆ. ವಿದ್ಯಾರ್ಥಿಗಳಿಗೆ ಶಿಸ್ತು ಮತ್ತು ಕೇಳಿಸಿಕೊಳ್ಳುವ ಗುಣ ಕಲಿತರೆ ವಿದ್ಯೆಯಲ್ಲಿ ಯಶಸ್ಸು ಕಾಣಬಹುದು. ಕುವೆಂಪು ಹೇಳಿದಂತೆ ವಿದ್ಯಾರ್ಥಿಗಳು ಗೌರವಾನ್ವಿತ ತಪಸ್ವಿಗಳಾಗಬೇಕು ಎಂದರು.

ವಿದ್ಯಾರ್ಥಿ ಬದುಕಿನಲ್ಲಿ ಹಲವು ಕಷ್ಟ ನೋವುಗಳು ಬರುತ್ತವೆ ಕಷ್ಟಕ್ಕೆ ಹೆದರಿ ಹಿಂಜರಿದರೆ ಮುಂದೆ ಸಿಗುವ ಸುಖದಿಂದ ವಂಚಿತರಾಗುತ್ತೇವೆ. ಮೊಬೈಲ್‌ನಿಂದ ದೂರಾಗಿ ವ್ಯಕ್ತಿತ್ವ ವಿಕಸನಗೊಳಿಸಿಕೊಂಡು ಬದುಕು ಕಟ್ಟಿಕೊಳ್ಳಲು ಮುಂದಾಗಬೇಕು. ಭಾರತೀಯ ಸಂಸ್ಕೃತಿ ಸಂಸ್ಕಾರವನ್ನು ಅಳವಡಿಸಿಕೊಂಡು ಬದುಕು ಕಟ್ಟಿಕೊಳ್ಳಬೇಕು. ಪುಸ್ತಕಗಳನ್ನು ಓದಬೇಕು. ಪುಸ್ತಕಗಳನ್ನು ಯಾರು ಓದುತ್ತಾರೋ, ಗೌರವಿಸುತ್ತಾರೋ ಅವರು ಉನ್ನತ ಸ್ಥಾನ ತಲುಪುವುದರ ಜೊತೆಗೆ ಅವರ ಜೀವನ ಆರೋಗ್ಯಪೂರ್ಣವಾಗಿರುತ್ತದೆ ಎಂದು ನುಡಿದರು.

ಜಿಲ್ಲಾ ಕಸಾಪ ಗೌರವ ಕಾರ್ಯದರ್ಶಿ ಜಿ ಧನಂಜಯ ದರಸಗುಪ್ಪೆ ಮಾತನಾಡಿದರು.

ಕಾರ್ಯಕ್ರಮಕ್ಕೂ ಮೊದಲು ರಾಷ್ಟ್ರಕವಿ ಮಂಜೇಶ್ವರ ಗೋವಿಂದ ಪೈಗಳ ಜನ್ಮದಿನದ ಸ್ಮರಣೆ ಪ್ರಯುಕ್ತ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಪ್ರವಾಸ ಸಲ್ಲಿಸಲಾಯಿತು.

ಮಂಡ್ಯ ತಾಲ್ಲೂಕು ಕಸಾಪ ಅಧ್ಯಕ್ಷ ಚಂದ್ರಲಿಂಗು ಗಾಣದಾಳು ಸಮಾರಂಭದ ಅಧ್ಯಕ್ಷತೆ ವಹಿಸಿದ್ದರು.

ಸಮಾರಂಭದಲ್ಲಿ ನೀಟ್ ಅಕಾಡೆಮಿ ಅಧ್ಯಕ್ಷ ವಿಶ್ವನಾಥ್,ಕಾರ್ಯದರ್ಶಿ ಸೀತಾರಾಮು, ಜಿಲ್ಲಾ ಕಸಾಪ ಕೋಶಾಧ್ಯಕ್ಷ ಬಿ.ಎಂ.ಅಪ್ಪಾಜಪ್ಪ, ಸಂಘ ಸಂಸ್ಥೆ ಪ್ರತಿನಿಧಿ ಹೊಳಲು ಶ್ರೀಧರ್, ನಗರ ಕಸಾಪ ಅಧ್ಯಕ್ಷೆ ಸುಜಾತ ಕೃಷ್ಣ, ತಾಲೂಕು ಕಸಾಪ ಕಾರ್ಯದರ್ಶಿ ಚಿಕ್ಕತಿಮ್ಮಯ್ಯ ಉಪಸ್ಥಿತರಿದ್ದರು.

## ರೇಣುಕಾಚಾರ್ಯರ ಜಯಂತಿ

**ಚಿಕ್ಕಬಳ್ಳಾಪುರ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಶನಿವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆಯೋಜಿಸಿದ್ದ ಶ್ರೀ ರೇಣುಕಾಚಾರ್ಯರ ಜಯಂತಿ ಆಚರಣೆಯನ್ನು ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿರುವ ಹಿನ್ನೆಲೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕಿ ಎನ್.ಮನಿಷಾ ರವರು ಶ್ರೀ ರೇಣುಕಾಚಾರ್ಯರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸುವ ಮೂಲಕ ಸರಳ ಮತ್ತು ಅರ್ಥ ಪೂರ್ಣವಾಗಿ ಆಚರಿಸಿದರು. ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳ ಕಚೇರಿ ಸಹಾಯಕ ಅಧಿಕಾರಿ ಅರುಂಧತಿ, ವೀರಶೈವ ಸೇವಾ ಸಮಾಜದ ಗೌರವಾಧ್ಯಕ್ಷ ಗುಬ್ಬಿ ಶೆಟ್ಟರು, ಉಪಾಧ್ಯಕ್ಷ ಡಿ.ಸಿದ್ದಪ್ಪ, ಕಾರ್ಯದರ್ಶಿ ಪರಶಿವಮೂರ್ತಿ, ಸಮುದಾಯದ ಪದಾಧಿಕಾರಿ ಅಶ್ವಿನ್, ಉಪನ್ಯಾಸಕ ಸೋ.ಸು.ನಾಗೇಂದ್ರ, ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ ಮುಂತಾದವರು ಇದ್ದರು.

## ದಾಖಲೆಯಿಲ್ಲದ 271,600 ಹಣ ವಶ

**ಚಾಮರಾಜನಗರ:** ಜಿಲ್ಲೆಯ ಹನೂರ ತಾಲೂಕಿನ ರಾಮಾಪುರ ಗ್ರಾಮದ ಗೆಜ್ಜಲತ್ತ ನಿವಾಸಿ ಶಿವಮೂರ್ತಿ ಪಿಕ್ ಅಪ್ ವಾಹನದಲ್ಲಿ ತಮಿಳುನಾಡಿನಿಂದ ಬರುತ್ತಿದ್ದಾಗ ದಾಖಲೆಯಿಲ್ಲದ ಬ್ಯಾಗ್ ನಲ್ಲಿ 2,71,600 ಹಣ ತಪಾಸಣೆ ವೇಳೆ ಚುನಾವಣಾ ಅಧಿಕಾರಿಗಳು ವಶಕ್ಕೆ ಪಡೆದು ಮುಂದಿನ ಕ್ರಮ ಕೈಗೊಂಡಿದ್ದಾರೆ ಈ ಸಂದರ್ಭದಲ್ಲಿ ಮಲೆ ಮಾದೇಶ್ವರ ಬೆಟ್ಟ ಠಾಣೆ ಇನ್ಸ್ಪೆಕ್ಟರ್ ಜಗದೀಶ್ ಹಾಗೂ ಚುನಾವಣೆ ಅಧಿಕಾರಿಗಳು ವಾಹನವನ್ನು ತಪಾಸಣೆ ಮಾಡಿದಾಗ ದಾಖಲೆ ಇಲ್ಲದಿರುವ ಬಗ್ಗೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು ಚುನಾವಣೆ ಹಿರಿಯ ಅಧಿಕಾರಿಗಳ ಮಾರ್ಗದರ್ಶನದಲ್ಲಿ ಮುಂದಿನ ಕ್ರಮ ಕೈಗೊಂಡಿದ್ದಾರೆ.



# ಸಾಧು ಸಂತರಿಂದ ಕಾವೇರಿ ನದಿಗೆ ಆರತಿ,ಮಳೆಗಾಗಿ ಪ್ರಾರ್ಥನೆ

**ಶ್ರೀರಂಗಪಟ್ಟಣ:** ಪಟ್ಟಣ ಪುರಸಭೆ ವ್ಯಾಪ್ತಿಯ ಗಂಜಾಂ ನಿಮಿಷಾಂಬ ದೇವಾಲಯದ ಬಳಿ ಸಾಧು ಸಂತರಿಂದ ಕಾವೇರಿ ನದಿಗೆ ಆರತಿ ಬೆಳಗಿ,ಮಳೆಗಾಗಿ ಪ್ರಾರ್ಥನೆ ಸಲ್ಲಿಸಿದರು.

ಗಂಜಾಂನ ಶಂಕರ ಮಠಮಾನಂದ –ಟ್ರಸ್ಟ್ ನ ಆದಿ ಶಂಕರ ಮಠದ ಗಣೇಶ ಸ್ವರೂಪಾನಂದಗಿರಿ ಸ್ವಾಮೀಜಿ ನೇತೃತ್ವದಲ್ಲಿ ಯೋಜಿಸಿದ ಕಾರ್ಯಕ್ರಮದಲ್ಲಿ ನೂರಾರು ಭಕ್ತರು ಭಾಗವಹಿಸಿದರು.



ಕಾರ್ಯಕ್ರಮ ಆಯೋಜಿಸಿದ ಗಣೇಶ ಸ್ವರೂಪಾನಂದಗಿರಿ ಸ್ವಾಮೀಜಿ ಮಾತನಾಡಿ, ಶ್ರೀರಂಗಪಟ್ಟಣದ ಕಾವೇರಿ ಮಾತೆ ಗೆ ದಕ್ಷಿಣದ ಗಂಗೆ ಎಂದು ಹೆಸರಾಗಿರುವ ಈ ನದಿಗೆ ಭರತ ಖಂಡದಲ್ಲಿ ಪವಿತ್ರ ಸ್ಥಾನ ಇದೆ.ಪುರಾಣಗಳಲ್ಲಿ ಕೂಡ ಈ ನದಿಯ ಬಗ್ಗೆ ಪ್ರಸ್ತಾಪವಿದೆ.ಈಚಿನ ದಿನಗಳಲ್ಲಿ ಈ ನದಿ ಕಲುಷಿತವಾಗುತ್ತಿ ರುವುದು ಆತಂಕ ಮೂಡಿಸಿದೆ.ನದಿಗೆ ಮಲಿನ ನೀರು ಸೇರುವುದನ್ನು ತಡೆಯಬೇಕು ಎಂದರು.

ನಂತರ ವೇದಬ್ರಹ್ಮ ಡಾ.ಭಾನು ಪ್ರಕಾಶ್ ಶರ್ಮಾ ಮಾತನಾಡಿ,ಈ ಬಾರಿ ರಾಜ್ಯದಲ್ಲಿ ಮಳೆಯಾಗದೆ ನೀರಿಗಾಗಿ ಬರ ಬಂದಿದೆ ರೈತಾಪಿ ಜನರು ಸಹ ನೀರಿಲ್ಲದೆ ಬೆಳೆಗಳನ್ನು ಬೆಳೆಯಲಾಗುತ್ತಿಲ್ಲ ಮನುಷ್ಯ, ಪ್ರಾಣಿ, ಪಕ್ಷಿಗಳಿಗೆ ನೀರಿನ ಪ್ರಮುಖ ಮೂಲವಾದ ಕಾವೇರಿ ನದಿ ತುಂಬಲು ದೇವೇಂದ್ರ ಮಳೆಯನ್ನು ಕರುಣಿಸಲಿ ಕಾವೇರಿ ಮಾತ ತುಂಬಿ ಹರಿಯಲಿ ಎಂದು ಪ್ರಾರ್ಥಿಸಿ ವಿಶೇಷ ಪೂಜೆ ಸಲ್ಲಿಸಲಾಗಿದೆ ಎಂದರು. ಮೈಸೂರಿನ ತ್ರಿಪುರ ಭೂರವಿ ಮಠದ –ಶ್ರೀಕೃಷ್ಣ ಮೋಹನಾನಂದ ಸ್ವಾಮೀಜಿ,ಕನಕಪುರದ ಕಲ್ಲಹಳ್ಳಿಯ ಶ್ರೀನಿವಾಸ –ದೇವಾಲಯದ ಪ್ರಧಾನ ಅರ್ಚಕ ಯತಿರಾಜ ರಾಮಾನುಜನ್ ,ಮೈಸೂರಿನ ಸೋಮವಂಶ ಕ್ಷತ್ರಿಯ ಆರ್ಯ ಸಮಾಜದ ಅಧ್ಯಕ್ಷೆ ಸವಿತಾ, ಪಟ್ಟಣದ ವಿದ್ಯಾಭಾರತಿ ಶಿಕ್ಷಣ ಸಂಸ್ಥೆಯ –ರಂಗನಾಥ್, ಚಂದ್ರಶೇಖರ್ ಅವರು ಮಂತ್ರಘೋಷಗಳನ್ನು ಪಠಿಸಿ ಕಾವೇರಿ ನದಿಗೆ ಆರತಿ ಬೆಳಗಿದರು. ನೂರಾರು ಭಕ್ತರು ಆಗಮಿಸಿದ್ದು, ಮಹಿಳಾ ಭಕ್ತರಿಂದ ತುಪ್ಪದ ದೀಪ ಹಚ್ಚಿ ಕಾವೇರಿ ನದಿಯಲ್ಲಿ ತೇಲಿ ಬಿಟ್ಟರು.

# ಕಾಂಗ್ರೆಸ್‌ನಲ್ಲಿ ಅಭ್ಯರ್ಥಿಗಳ ಕೊರತೆ

## ಸಚಿವರ ಸಂಬಂಧಿಕರನ್ನೆ ಗುರುತಿಸಿ ಟಿಕೇಟ್:ರಮೇಶ್ ಲೇವಡಿ

**ಶ್ರೀರಂಗಪಟ್ಟಣ:** ಲೋಕಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದಲ್ಲಿ ಹಲವು ಕ್ಷೇತ್ರಗಳಲ್ಲಿ ಅಭ್ಯರ್ಥಿಗಳ ಕೊರತೆಯಿಂದ ಸಚಿವರ ಸಂಬಂಧಿಕರಿಗೆ ಒತ್ತಡ ಮಾಡಿ ಪಕ್ಷದಲ್ಲಿ ಟಿಕೆಟ್ ನೀಡಲಾಗುತ್ತಿದೆ ಎಂದು ತಾಲೂಕು ಬಿಜೆಪಿ ಅಧ್ಯಕ್ಷ ಪೀಹಳ್ಳಿ ರಮೇಶ್ ಹೇಳಿದರು.



ಪಟ್ಟಣದ ಬಿಜೆಪಿ ಕಚೇರಿಯಲ್ಲಿ ಜಿಲ್ಲಾ ಮತ್ತು ತಾಲೂಕು ಮಟ್ಟದ ಪದಾಧಿಕಾರಿಗಳ ಸಭೆ ಕುರಿತು ಅವರು ಮಾತನಾಡಿದರು.ದೇಶದಲ್ಲಿ ನರೇಂದ್ರ ಮೋದಿಜಿ ಅಲೆಯಲ್ಲಿ 400ಕ್ಕೂ ಹೆಚ್ಚು ಮಂದಿ ಬಿಜೆಪಿಯಿಂದ ಗೆಲ್ಲುವ ವಿಶ್ವಾಸವಿದ್ದು, ರಾಜ್ಯದಲ್ಲಿರುವ 28 ಕ್ಷೇತ್ರಗಳಲ್ಲಿ ಕಾಂಗ್ರೆಸ್ ನಿಂದ ಯಾರನ್ನು ನಿಲ್ಲಿಸಬೇಕು ,ಯಾರನ್ನು ನಿಲ್ಲಿಸಿದರೆ ಜಯ ಸಿಗುವುದು ಎಂಬ ಆಲೋಚನೆಗಳು ಹೆಚ್ಚಾಗಿದ್ದು,26 ಕ್ಷೇತ್ರಗಳಿಗೂ ಕಾಂಗ್ರೆಸ್ ನಲ್ಲಿ ಅಭ್ಯರ್ಥಿಗಳಿಲ್ಲದೆ ಆಯಾ ಉಸ್ತುವಾರಿ ಸಚಿವರುಗಳ ಹತ್ತಿರದ ಸಂಬಂಧಿಕರಿಗೆ ಟಿಕೆಟ್‌ನ್ನು ನೀಡಲಾಗುತ್ತಿದೆ.ಸಚಿವರುಗಳಿಗೆ ಹೆಚ್ಚಿನ ಒತ್ತಡ ಹಾಕಿ ಗೆಲ್ಲಿಸಿಕೊಂಡು ಬರಬೇಕು ಎಂದು ಕಡಕ್ ಮಾತುಗಳಿಂದ ದೆಹಲಿ ಮಟ್ಟದ ಕಾಂಗ್ರೆಸ್‌ನವರು ಹೇಳಿರುವುದು ಮಾಧ್ಯಮಗಳಿಂದ ತಿಳಿದು ಬಂದಿದೆ. ಅಂದರೆ ಬಿಜೆಪಿಯಲ್ಲಿ ಇಂತಹ ಪರಿಸ್ಥಿತಿ ಇಲ್ಲ ಪಕ್ಷದ ಕಾರ್ಯ

ಕರ್ತರಿಗೂ ಗುರುತಿಸಿ ಟಿಕೆಟ್ ನೀಡಲಾಗುತ್ತಿದೆ.ನಮ್ಮ ಪಕ್ಷದಲ್ಲಿ ಭಿನ್ನಮತ ಇಲ್ಲ ಯಾರಿಗಾದರೂ ಮೈತ್ರಿ ಪಕ್ಷದಿಂದ ಟಿಕೆಟ್ ಕೊಟ್ಟರೂ ಕಾರ್ಯಕರ್ತರು ದುಡಿದು ಗೆಲ್ಲಿಸುವ ವಿಶ್ವಾಸವಿದೆ. ಅದರಂತೆ ಮಂಡ್ಯದಲ್ಲಿಯೂ ಜೆಡಿಎಸ್ ಬಿಜೆಪಿ –ಮೈತ್ರಿ ಅಭ್ಯರ್ಥಿಯನ್ನು ಜೆಡಿಎಸ್ ಪಕ್ಷಕ್ಕೆ ಬಿಟ್ಟು ಕೊಡಲಾಗಿದ್ದು, ಜೆಡಿಎಸ್ ಪಕ್ಷದ ಚಿಹ್ನೆ ಇದ್ದರೂ ಮೋದಿ ಹೆಸರೇಳಿ ಮೈತ್ರಿ ಕೂಟದ ಜೆಡಿಎಸ್ ಪಕ್ಷದ ಅಭ್ಯರ್ಥಿಯನ್ನು ಗೆಲ್ಲಿಸುವ ಪಣ ತೊಟ್ಟು ಕೆಲಸ ಮಾಡಬೇಕು. ಎಲ್ಲರೂ ಒಗ್ಗಟ್ಟಿನಿಂದ ಮೈತ್ರಿ ಕೂಟದ ಅಭ್ಯರ್ಥಿಯನ್ನು ಗೆಲ್ಲಿಸುವ ವಿಶ್ವಾಸವನ್ನು ಈ ಸಂದರ್ಭದಲ್ಲಿ ಹೆಚ್ಚಿಸಿಕೊಳ್ಳೋಣ. ಪ್ರತಿ ಬೂತ್ ಮಟ್ಟದಲ್ಲೂ ಕಾರ್ಯಕರ್ತರು ಪ್ರತಿ ಮನೆ ಬಾಗಿಲಿಗೆ ಹೋಗಿ ಪ್ರತಿಯೊಬ್ಬ ಮತದಾರರನ್ನು ಭೇಟಿ ಮಾಡಿ ಕೇಂದ್ರ ಸರ್ಕಾರದಲ್ಲಿನ ಜನಪರ ಯೋಜನೆಗಳನ್ನು ಜನರ ಗಮನಕ್ಕೆ ತರಬೇಕು ಎನ್‌ಡಿಎ ಅಭ್ಯರ್ಥಿಯ ಪರ ಮತ ಹಾಕುವಂತೆ ಮನವೊಲಿಸುವ ಕೆಲಸ ಮಾಡಬೇಕು ಎಂದು ಈ ಸಂದರ್ಭದಲ್ಲಿ ಪದಾಧಿಕಾರಿಗಳಿಗೆ ಕರೆ ನೀಡಿದರು.

ಬಿಜೆಪಿ ರಾಜ್ಯರೈತ ಮೋರ್ಚ ಕಾರ್ಯದರ್ಶಿ ಅಶೋಕ್ ಮಾತನಾಡಿ,ಪಕ್ಷಕ್ಕೆ ಬಂದವರಲ್ಲಿ ಹಳಬರು ಹೊಸಬರು ಅಂತ ಹೇಳುವಂತಿಲ್ಲ ಪಕ್ಷಕ್ಕೆ ಸೇರಿಕೊಂಡವರೆಲ್ಲವರು ಬಿಜೆಪಿ ಪಕ್ಷದ ಕಾರ್ಯಕರ್ತರು ಇದರಲ್ಲಿ ಇರಿಸು ಮುರಿಸು ಬೇಡ.

ಎಲ್ಲರೂ ಪಕ್ಷದ ಏಳಿಗೆಗಾಗಿ ದುಡಿಯಬೇಕು ಪಕ್ಷದ ಪರ ನಿಲ್ಲುವ ಅಭ್ಯರ್ಥಿಗಳನ್ನು ಗೆಲ್ಲಿಸಲು ಮುಂದಾಗಬೇಕು ಎಂದು ಪಕ್ಷದ ಕಾರ್ಯಕರ್ತರಿಗೆ ತಿಳಿಹೇಳಿದರು. ಪಕ್ಷದ ಮುಖಂಡರಾದ ಕೆಆರ್ ಎಸ್ ಪ್ರಕಾಶ್,ಮಹೇಶ್,ಸತೀಶ್, ಮಂಜುನಾಥ್, ಸಂತೋಷ್,

ನಂದೀಶ್, ಸಬ್ಬನಕುಪ್ಪೆ ಮಂಜುನಾಥ್ , ಹೇಮಂತ್ ಕುಮಾರ್, ಮಲ್ಲೇಶ್, ಗಂಜಾಂ ಮಂಜುನಾಥ್, ಸುನೀಲ್ ಸೇರಿದಂತೆ ಇತರ ಮಹಿಳಾ ಪದಾಧಿಕಾರಿಗಳು ಉಪಸ್ಥಿತರಿದ್ದು , ಪಕ್ಷದ ವಿವಿಧ ಮೋರ್ಚಾಗಳಲ್ಲಿ ನೂತನವಾಗಿ ನೇಮಕಗೊಂಡ ಪದಾಧಿಕಾರಿಗಳನ್ನು ಅಭಿನಂಧಿಸಲಾಯಿತು.

## ರಂಗಗೀತೆಗಳು ವ್ಯಕ್ತಿಯ ಸಾಧ್ಯತೆಗಳು ಅರಳಲು ಸಾಮರ್ಥ್ಯವನ್ನು ರೂಪಿಸುತ್ತದೆ

**ವಿಜಯಪುರ:** ರಂಗಗೀತೆ ಗಾಯನವು ಜೀವಂತವಾಗಿರಿಸುವಲ್ಲಿ ಎಲ್ಲರ ಪಾತ್ರ ಬಹಳ ಅಮೂಲ್ಯವಾದುದು. ರಂಗಗೀತೆ ಎಂಬುದು ವ್ಯಕ್ತಿಯ ಸಾಧ್ಯತೆಗಳು ಅರಳಲು ಮತ್ತು ತನ್ನ ಸಾಮರ್ಥ್ಯವನ್ನು ರೂಪಿಸಿಕೊಳ್ಳಲು ಸಾಧನೆಯ ಹಾದಿಯಾಗಿದೆ ಎಂದು ಉದಯ್ ಕಲ್ಚರಲ್ ಅಕಾಡಮಿ ಟ್ರಸ್ಟ್ ಅಧ್ಯಕ್ಷ ಹಾಗೂ ವಕೀಲ ಎನ್ ರಾಮಮೂರ್ತಿ ತಿಳಿಸಿದರು. ಇವರು ಪಟ್ಟಣದ ಸರಕಾರಿ ಹಿರಿಯ ಪ್ರಾಥಮಿಕ ಪಾಠ ಶಾಲಾ ಆವರಣದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ಹಾಗೂ ಉದಯ್ ಕಲ್ಚರಲ್ ಅಕಾಡಮಿ ಟ್ರಸ್ಟ್, ಅರ್ಬಲ್ ಅಂಡ್ ರೂರಲ್ ವೆಲ್‌ಫೇರ್ ಟ್ರಸ್ಟ್ ವತಿಯಿಂದ ಆಯೋಜಿಸಿದ್ದ ರಂಗ ಗೀತೆ ಗಾಯನ ಹಾಗೂ ಯಕ್ಷಗಾನ ನೃತ್ಯ ಕಾರ್ಯಕ್ರಮದಲ್ಲಿ ಮಾತನಾಡಿದರು. ರಂಗಭೂಮಿಯು ಸಾಂಸ್ಕೃತಿಕ ಮತ್ತು ಸಾಮಾಜಿಕ ಬದುಕಿಗೆ ಸರಿಯಾಗಿ ಸ್ಪಂದಿಸಿದಾಗ ಕ್ರಿಯಾಶೀಲತೆಯನ್ನು ಪಡೆದು ಕೊಳ್ಳುತ್ತದೆ. ರಂಗಭೂಮಿಯನ್ನು ಜೀವಂತವಾಗಿರಿಸುವಲ್ಲಿ ಎಲ್ಲರ ಪಾತ್ರ ಬಹಳ ಅಮೂಲ್ಯವಾದುದು ಎಂದರು. ಮುಖ್ಯೋಪಾಧ್ಯಾಯರು ಹಾಗೂ ರಂಗಕಲಾ ನಿರ್ದೇಶಕರೂ ಆದ ಎ.ಎಂ.ನಾರಾಯಣಸ್ವಾಮಿ ಮಾತನಾಡಿ, ಗ್ರಾಮೀಣ ಭಾಗದಲ್ಲಿರುವ ಕೆಲ ಕಲೆಗಳು ನಶಿಸಿ ಹೋಗುತ್ತಿರುವ ಸಂದರ್ಭದಲ್ಲಿ ಜೀವನ ಮೌಲ್ಯಗಳು, ಮಾನವೀಯ ಸಂಬಂಧಗಳು, ಪ್ರೀತಿ, ವಿಶ್ವಾಸ, ಶಾಂತಿ, ಸಹಬಾಳ್ವೆಯನ್ನು ರಕ್ಷಿಸಿಕೊಳ್ಳ ಬೇಕಾದಲ್ಲಿ ರಂಗಭೂಮಿ ಒಂದು ಅತ್ಯುತ್ತಮ ವೇದಿಕೆಯಾಗುವುದರಲ್ಲಿ ಸಂದೇಹವಿಲ್ಲ ಎಂದರು. ಈ ಕಾರ್ಯಕ್ರಮದಲ್ಲಿ ರಂಗ ಗೀತೆ ಗಾಯನ ಹಾಗೂ ಯಕ್ಷಗಾನ ನೃತ್ಯದಲ್ಲಿ ಭಾಗವಹಿಸಿದ ಎಲ್ಲಾ ವಿದ್ಯಾರ್ಥಿಗಳಿಗೂ ಬಹುಮಾನದೊಂದಿಗೆ ಪ್ರಶಸ್ತಿ ಪತ್ರಗಳನ್ನು ವಿತರಿಸಲಾಯಿತು. ಸಂಗೀತ ನಿರ್ದೇಶಕ ಎಂ.ವಿ. ನಾಯ್ಡು, ಮುಖ್ಯೋಪಾಧ್ಯಾಯರು ಹಾಗೂ ರಂಗಕಲಾ ನಿರ್ದೇಶಕರೂ ಆದ ಎ.ಎಂ.ನಾರಾಯಣಸ್ವಾಮಿ, ಕಿರುಚಿತ್ರ ನಿರ್ದೇಶಕ ವೆಂಕಟೇಶ್ ರವರುಗಳನ್ನು ಸನ್ಮಾನಿಸಲಾಯಿತು. ಸಂಗೀತ ನಿರ್ದೇಶಕ ಎಂ.ವಿ. ನಾಯ್ಡು, ಎಸ್. ಡಿ. ಎಂ. ಸಿ ಅಧ್ಯಕ್ಷ ಮುನಿವೆಂಕಟಪ್ಪ, ಸಿ.ಆರ್.ಪಿ ದಿನೇಶ್ ಕುಮಾರ್, ಕಿರುಚಿತ್ರ ನಿರ್ದೇಶಕ ವೆಂಕಟೇಶ್, ಶಿಕ್ಷಕರಾದ ಪ್ರಕಾಶ್, ಬೈರೇಗೌಡ, ಗೀತಾ,ಉದಯ್ ಕಲ್ಚರ್ ಅಕಾಡೆಮಿಯ ಕಾರ್ಯದರ್ಶಿ ಪಿ.ಎನ್ ಪುಷ್ಪ ಹಾಜರಿದ್ದರು.

# ಕೊಬ್ಬರಿ ಗುಣಮಟ್ಟ ಹಾಳಾಗುವ ಮೊದಲು ಖರೀದಿಸಿ

**ಹುಳಿಯಾರು:** ಚುನಾವಣೆಗಳು ಬಂದಾಗ ರೈತರ ಪರ ಎಂದು ಬೊಬ್ಬೆ ಹೊಡೆಯುವ ಸರ್ಕಾರ, ಜನಪ್ರತಿನಿಧಿಗಳು ರೈತರು ನಷ್ಟ ಅನುಭವಿಸುತ್ತಿರುವುದು ಕಂಡರೂ ಕಾಣದಂತೆ ಮೌನ ವಹಿಸಿದ್ದಾರೆ ಎಂದು ಕೆಆರ್‌ಎಸ್ ಪಕ್ಷದ ಮುಖಂಡ ಸಬ್ಬೇನಹಳ್ಳಿ ಶ್ರೀನಿವಾಸ್ ಕುಟುಕಿದ್ದಾರೆ. ಕೊಬ್ಬರಿ



ನೋಂದಣಿ ಪ್ರಕ್ರಿಯೆ ಮುಗಿದಿದ್ದರೂ ಕೊಬ್ಬರಿ ಖರೀದಿಗೆ ಸರ್ಕಾರ ಮುಂದಾಗಿಲ್ಲ, ರೈತರು ನೋಂದಣಿ ಮುಗಿದ ನಂತರ ಕೊಬ್ಬರಿ ಸುಲಿದು ಕಾಯುತ್ತಿದ್ದಾರೆ, ಸುಲಿದಿರುವ ಕೊಬ್ಬರಿ ಹೆಚ್ಚು ದಿನ ಇಟ್ಟರೆ ಎಣ್ಣೆಗರೆದು ಗುಣಮಟ್ಟ ಹಾಳಾಗುವ ಆತಂಕದಲ್ಲಿ ರೈತ ಇದ್ದಾನೆ. ಕೊಬ್ಬರಿ ಖರೀದಿ ಮಾಡದಿರುವ ಕಾರಣ ಮತ್ತೆ ರೈತ ಆರ್ಥಿಕ ಸಂಕಷ್ಟಕ್ಕೆ ಒಳಗಾಗಿದ್ದಾನೆ. ಹಬ್ಬ, ಜಾತ್ರೆಯ ಖರ್ಚಿಗೆ, ತೋಟಕ್ಕೆ ಗೊಬ್ಬರ, ಕೂಲಿಕಾರ್ಮಿಕರ ವೆಚ್ಚ, ನೀರಿನ ಸಮಸ್ಯೆಗೆ ಬೋರ್ ಕೊರೆಸಲು ವಿಧಿ ಇಲ್ಲದೆ ಸಾಲ ಮಾಡಬೇಕು ಅಥವಾ ಕಡಿಮೆ ಬೆಲೆಗೆ ವರ್ತಕರಿಗೆ ಕೊಬ್ಬರಿ ಬಿಡುವ ಪರಿಸ್ಥಿತಿ ನಿರ್ಮಾಣವಾಗಿದೆ. ಹಾಗಾಗಿ ಅತಿ ಶೀಘ್ರವಾಗಿ ಕೊಬ್ಬರಿ ಖರೀದಿ ಮಾಡಬೇಕು, ಇಂತಹ ಸಂದರ್ಭದಲ್ಲಿ ಸರ್ಕಾರ ಹಾಗೂ ಅಧಿಕಾರಿಗಳು ರೈತ ಪರವಾಗಿ ಕೆಲಸ ಮಾಡಬೇಕು ಎಂದು ಶ್ರೀನಿವಾಸ್ ತಿಳಿಸಿದ್ದಾರೆ.

## ರಥೋತ್ಸವದಲ್ಲಿ ಜಲ ದಿನದ ಸಂದೇಶ

**ಹುಳಿಯಾರು:** ಹುಳಿಯಾರು ಸಮೀಪದ ಕಾರೇಹಳ್ಳಿ ಶ್ರೀರಂಗನಾಥ ಸ್ವಾಮಿ ಜಾತ್ರೆ ಅಂಗವಾಗಿ ಶುಕ್ರವಾರ ಸಡಗರ ಸಂಭ್ರಮದಿಂದ ಬ್ರಹ್ಮ ರಥೋತ್ಸವ ಜರುಗಿತು. ಈ ಸಂದರ್ಭದಲ್ಲಿ ನೀರನ್ನು ಮಲೀನ ಮಾಡದೆ ಗಂಗಾ ಪೂಜೆಯ ವಿಧಾನವನ್ನು ರಥೋತ್ಸವಕ್ಕೆ ಆಗಮಿಸಿದ್ದ ಮಹಿಳೆಯರಿಗೆ ಪ್ರದರ್ಶಿಸಲಾಯಿತು. ಮಾಲಾ ಗಿರೀಶ್, ಗಾಯತ್ರಿ ದೇವಿ, ಲತಾ, ಹೇಮಲತಾ, ಗಂಗಾ ಪೂಜೆ ನೆರವೇರಿಸಿದರು. ಹಾಸನ ಜಿಲ್ಲೆಯ ಬಾನೀಗೊಂದಿ ಸೀಕೋ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕ ಜಲ ವಿಜ್ಞಾನಿ ಡಾ.ಬಿ.ಕೆ.ಹರೀಶ್, ದೇವಸ್ಥಾನದ ಆಡಳಿತ ಮಂಡಲಿಯ ಪುಟ್ಟರಾಮಯ್ಯ, ಜಿ.ನೀಲಕಂಠಯ್ಯ, ಹೆಚ್.ಆರ್.ನಾಗರಾಜ್, ಮುದ್ದರಂಗಯ್ಯ, ವಿಜ್ಞಾನ ಸಂಘಟನೆಗಳ ರಾಮಕೃಷ್ಣಪ್ಪ, ಯು.ಪಿ.ಉಮಾದೇವಿ, ಎನ್. ಇಂದಿನಮ್ಮ, ಕು. ವಿಸ್ಮಯ ಮತ್ತು ಇತರರು ಹಾಜರಿದ್ದರು.



# ನಾಳೆ ನೇರಲಕೆರೆ ಗ್ರಾಮದಲ್ಲಿ ಪ್ರಥಮ ಬೌದ್ಧ ಸಮ್ಮೇಳನ

**ಮಂಡ್ಯ:** ಬುದ್ಧ ಭಾರತ್ ಫೌಂಡೇಷನ್ ಸಹಯೋಗದಲ್ಲಿ ಮಾ.25 ಸಂಜೆ 6 ಗಂಟೆಗೆ ಶ್ರೀರಂಗಪಟ್ಟಣ ತಾಲ್ಲೂಕಿನ ನೇರಲಕೆರೆ ಗ್ರಾಮದಲ್ಲಿ ಜಿಲ್ಲಾ ಮಟ್ಟದ ಪ್ರಥಮ ಬೌದ್ಧ ಸಮ್ಮೇಳನ ಏರ್ಪಡಿಸಲಾಗಿದೆ ಎಂದು ಸಂಸ್ಥೆಯ ಸಂಸ್ಥಾಪಕ ಜೆ.ರಾಮಯ್ಯ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಕೊಳ್ಳೇಗಾಲದ ಜೇತವನದ ಮುಖ್ಯರಾದ ಮನೋರಕ್ಕಿತ ಬಂತೇ ಅವರು ಬುದ್ಧ ಮತ್ತು ಆತನ ಜೀವನ ಕ್ರಮ ಕುರಿತು ಮಾತನಾಡುವರು. ಗಾಯಕ ಗಾಮನಹಳ್ಳಿ ಸ್ವಾಮಿ ತಂಡದಿಂದ ಸುಗಮ ಸಂಗೀತ ಕಾರ್ಯಕ್ರಮ ನಡೆಯಲಿದೆ ಎಂದು ತಿಳಿಸಿದರು.




ಗೌತಮ ಬುದ್ಧರು ಇಡೀ ಮಾನವ ಕುಲಕ್ಕೆ ಸ್ಪಷ್ಟ ಸಂದೇಶ ನೀಡಿದ್ದು,

ಆ ಸಂದೇಶಗಳು ಜನಮನ್ನಣೆ ಪಡೆದು ಪ್ರಪಂಚದಾದ್ಯಂತ ಹರಡಿಕೊಂಡಿವೆ. ಬುದ್ಧರ ಅಷ್ಟಾಂಗ ಮಾರ್ಗಗಳಾದ ಒಳ್ಳೆಯ ಬುದ್ಧಿ, ನಡವಳಿಕೆ, ನೋಟ, ಚಿಂತನೆ, ಆರೋಗ್ಯ ಉತ್ತಮ ಕೆಲಸ ಮಾಡಿದರೆ ಎಲ್ಲರೂ ಗೌರವ ಹಾಗೂ ಘನತೆಯಿಂದ ಜೀವನ ನಡೆಸಬಹುದು. ಇದನ್ನು ಜಿಲ್ಲೆಯ ಸಾರ್ವಜನಿಕರಿಗೆ ತಿಳಿಸಿ ಅರಿವು ಮೂಡಿಸಲು ಪ್ರಥಮ ಸಮ್ಮೇಳನ ಏರ್ಪಡಿಸಿದ್ದೇವೆ ಎಂದು ವಿವರಿಸಿದರು.

ಗೌತಮ ಬುದ್ಧರ ತತ್ವ ಆದರ್ಶಗಳನ್ನು ಮೈಗೂಡಿಸಿಕೊಂಡು ಜಗತ್ತಿನಲ್ಲಿ ಹೆಸರು ಮಾಡಿರುವ ಆಲ್ಬರ್ಟ್ ಐನ್‌ಸ್ಟೀನ್, ಅಶೋಕ ದ ಗ್ರೇಟ್, ಸ್ವಾಮಿ ವಿವೇಕಾನಂದ, ವಿಶ್ವಮಾನವ ಕುವೆಂಪು, ಪೆರಿಯಾರ್, ರಾಮಸ್ವಾಮಿ ನಾಯರ್, ಡಾ.ಬಿ.ಆರ್.ಅಂಬೇಡ್ಕರ್ ನಾರಾಯಣಗುರು, ಇನ್ನು ಇತರ ದಾರ್ಶನಿಕರು ಗೌತಮ ಬುದ್ಧರ ಚಿಂತನೆ ಹಾಗೂ ಜೀವನ ಕ್ರಮವನ್ನು ಅಳವಡಿಸಿಕೊಂಡು ಪ್ರೇರಣೆ ಪಡೆದು ಮಹಾಮಾನವರಾಗಿದ್ದಾರೆ ಎಂದರು.

ಈ ಹಿನ್ನೆಲೆಯಲ್ಲಿ ಜಿಲ್ಲೆಯ ಪ್ರಗತಿಪರ ಸಂಘಟನೆಗಳ ಮುಖಂಡರು, ರೈತ ಪ್ರತಿನಿಧಿಗಳು, ಪ.ಜಾತಿ, ವರ್ಗದ ಹಿಂದುಳಿದ, ಶೋಷಿತ ದಮನಿತ, ಸಮಾಜದ ಬಂಧು–ಬಳಗ, ಹಿರಿ–ಕಿರಿ ಸಹೋದರ ಸಹೋದರಿಯರು ಕಾರ್ಯಕ್ರಮಕ್ಕೆ ಆಗಮಿಸಬೇಕು ಎಂದು ಮನವಿ ಮಾಡಿದರು. ಮುಖಂಡರಾದ ಶಿವರಾಜ್, ಶಿವಲಿಂಗಯ್ಯ, ಮೋಹನ್, ಅಮ್ಜದ್ ಪಾಷ, ಹನಕೆರೆ ಅಭಿ ಹಾಜರಿದ್ದರು.

# ಮೇಣದ ಬತ್ತಿ ಮೆರವಣಿಗೆ ಮೂಲಕ ಮತದಾನ ಜಾಗೃತಿ



**ಚಾಮರಾಜನಗರ:** ಯಳಂದೂರು ತಾಲ್ಲೂಕು ಪಂಚಾಯಿತಿ ಮತ್ತು ತಾಲ್ಲೂಕು ಸ್ವೀಪ್ ಸಮಿತಿ ವತಿಯಿಂದ ಯಳಂದೂರು ಪಟ್ಟಣದಲ್ಲಿ ಶುಕ್ರವಾರ (ಮಾರ್ಚ್ 22) ರಾತ್ರಿ ಲೋಕಸಭಾ ಚುನಾವಣಾ ಹಿನ್ನಲೆಯಲ್ಲಿ ಚುನಾವಣಾ ಪರ್ವ – ದೇಶದ ಗರ್ವ ಘೋಷ ವಾಕ್ಯ ದೊಂದಿಗೆ ಮತದಾನ ಜಾಗೃತಿ ಸಂಬಂಧ ಮೇಣದ ಬತ್ತಿ ಮೆರವಣಿಗೆ ಹಾಗೂ ಜಾಥಾ ನಡೆಸಲಾಯಿತು. ತಾಲ್ಲೂಕು ಪಂಚಾಯಿತಿ ಕಾರ್ಯ ನಿರ್ವಾಹಕ ಅಧಿಕಾರಿ ಆರ್. ಉಮೇಶ್ ಅವರು ಮೇಣದ ಬತ್ತಿ ಮೆರವಣಿಗೆ ಹಾಗೂ ಜಾಥಾಗೆ ಚಾಲನೆ ನೀಡಿದರು.

ನಗರದ ತಾಲ್ಲೂಕು ಪಂಚಾಯಿತಿ ಕಚೇರಿಯಿಂದ ಹೊರಟ ಮೆರವಣಿಗೆ ಪ್ರಮುಖ ಬೀದಿಗಳಲ್ಲಿ ಸಾಗಿತು. ಮೇಣದಬತ್ತಿ ಹಿಡಿದು ಮತದಾನದ ಅರಿವು ಮೂಡಿಸಲಾಯಿತು. ಬಸ್ ನಿಲ್ದಾಣದಲ್ಲಿ ಮತದಾನದ ಪ್ರತಿಜ್ಞಾ ವಿಧಿ ಬೋಧಿಸಲಾಯಿತು.

ಇದೇ ಸಂದರ್ಭದಲ್ಲಿ ತಾಲ್ಲೂಕು ಪಂಚಾಯಿತಿ ಯೋಜನಾಧಿಕಾರಿ ಗುರು ಮಹದೇವ, ತಾಲ್ಲೂಕು ಪಂಚಾಯಿತಿ ಕಚೇರಿ ವ್ಯವಸ್ಥಾಪಕರಾದ ವೆಂಕಟಾಚಲ, ತಾಲೂಕು ಶಿಶು ಅಭಿವೃದ್ಧಿ ಯೋಜನಾಧಿಕಾರಿ ಸಕಲೇಶ್ವರ್, ವಿವಿಧ ಇಲಾಖೆಗಳ ಅಧಿಕಾರಿಗಳು ತಾಲೂಕುಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

# ಮಹಿಳೆ ಎಲ್ಲಾ ಕ್ಷೇತ್ರದಲ್ಲೂ ಸಾಧನೆ ಮಾಡಿದ್ದಾಳೆ

**ಮಂಡ್ಯ:** ಕರ್ನಾಟಕ ಸಂಘದ ಮಹಿಳಾ ಘಟಕ ಇವರ ಸಂಯುಕ್ತ ಆಶ್ರಯದಲ್ಲಿ ಕೆ.ವಿ.ಶಂಕರಗೌಡ ಶತಮಾನೋತ್ಸವ ಭವನದಲ್ಲಿ ನಡೆದ ಮಹಿಳಾ ದಿನಾಚರಣೆ– 2024ರ ಕಾರ್ಯಕ್ರಮವನ್ನು ಮೈಸೂರಿನ ಚಿಂತಕರಾದ ಸವಿತಾ ಪ.ಮಲ್ಲೇಶ್ ಅವರು ಉದ್ಘಾಟಿಸಿ, ವರ್ತಮಾನದ ಮಹಿಳೆ:ಅವಕಾಶಗಳು ಮತ್ತು ಸವಾಲುಗಳುಎಂಬ ವಿಷಯ ಕುರಿತು ಮಾತನಾಡಿದರು.ನಮಗೆ ಅವಕಾಶಗಳು ಏನಿದೆ? ಸಮ ಸಮಾಜದ ಸೃಷ್ಟಿಯಾಗಬೇಕಾದರೆ ಹೆಣ್ಣು ಎಲ್ಲ ರೀತಿಯಿಂದಲೂ ಸದೃಢ ಆಗಬೇಕು.ಅದು ಹೇಗೆ ಸಾಧ್ಯ? ಹೆಣ್ಣಿಗೆ ಆರ್ಥಿಕ ಸ್ವಾತಂತ್ರ್ಯದ ಅವಶ್ಯಕತೆ ಇದೆ. ದೇಶ ಸ್ವಾತಂತ್ರ್ಯಗೊಂಡ ನಂತರದ ದಿನದಿಂದಲೂ ಹೆಣ್ಣನ್ನು ಬಲಗೊಳಿಸುವುದಕ್ಕೆ ಸರ್ಕಾರಗಳು ಹಲವಾರು ಕಾರ್ಯಕ್ರಮಗಳನ್ನು ರೂಪಿಸಿವೆ. ಈ ಯೋಜನೆಗಳ ಬಗ್ಗೆ ನಮಗೆ ಮೊದಲು ಅರಿವು ಇರಬೇಕು. ಕುಟುಂಬದಲ್ಲಿ ಹೆಣ್ಣಿಗೆ ಯಾವ ರೀತಿಯ ಸಮಾನತೆ ಇದೆ? ಎಂಬುದನ್ನು ನಾವು ತಿಳಿಯಬೇಕು. ಹೆಣ್ಣಿಗೆ ಸಂಕೋಲೆಯನ್ನು ಹಾಕಿದವರು ಯಾರು? ಕೌಟುಂಬಿಕ ಕೆಲಸಗಳಿಗೆ ಮಾತ್ರವೇ ಮಹಿಳೆಯರನ್ನು ತಯಾರಿ ಮಾಡುತ್ತಾರೆ. ಇದನ್ನು ಬದಲಾಯಿಸುವ ಮನಸ್ಸು ನಮ್ಮದಾಗಬೇಕು.ಮನಸು ಬದಲಾವಣೆ ಆಗಲಿಲ್ಲವೆಂದರೆ ನಮ್ಮ ಮಾತು ವ್ಯರ್ಥ.ಪ.ಮಲ್ಲೇಶ್ ನನ್ನ ತಂದೆ,ಯಾವತ್ತು ಹೆಣ್ಣು ಗಂಡು ಎಂಬ ತಾರತಮ್ಯ ಭಾವವನ್ನು ಮಾಡಿಲ್ಲ ಸಮಾನವಾಗಿ ನಮ್ಮನ್ನು ಬೆಳೆಸಿದರು. ಮನೆಯಲ್ಲೇ ತಾರತಮ್ಯವಿರುವಾಗ ಹೆಣ್ಣಿಗೆ ಹೇಗೆ ಗೌರವ ತೋರಿಸುತ್ತಾರೆ? 'ಹೆಣ್ಣು ದೇವತೆ'ಎಂದು ಹೊಗಳುವುದು ಬೇಡ.ಧಾರಾವಾಹಿಗಳು ಕೂಡ ಹೆಣ್ಣು ಬದುಕನ್ನು



ಪುರುಷನಿಗೆ ಅಡಿಯಾಳಾಗಿ ಇರುವುದನ್ನೇ ಬಿಂಬಿಸಿವೆ. ಅವಕಾಶ ಏನಿದೆ ಹೆಣ್ಣಿಗೆ? ಸ್ವಾತಂತ್ರ್ಯ ಪೂರ್ವದಿಂದಲೂ ಹೆಣ್ಣು ಯುದ್ಧಭೂಮಿಯನ್ನು ಬಿಟ್ಟಿಲ್ಲ ಒನಕೆ ಓಬವ್ವ,ರಾಣಿ ಅಬ್ಬಕ್ಕ, ಕಿತ್ತೂರು ರಾಣಿ ಚೆನ್ನಮ್ಮ, ಅಹಲ್ಯಾ ಓಳ್ಕರ್, ಇಂತಹ ಎಷ್ಟು ಜನ ಹೆಣ್ಣು ಮಕ್ಕಳು ಯುದ್ಧ ಭೂಮಿಯಲ್ಲಿ ಹೋರಾಟ ಮಾಡಿದ್ದಾರೆ.ಯುದ್ಧಭೂಮಿಯಿಂದ ಹಿಡಿದು ವಿಮಾನ ನಡೆಸುವವರೆಗೂ ಸಾಧನ ಮೆರೆದಿದ್ದಾರೆ.ಉದ್ಯೋಗ ಮಾಡುವ ಸ್ಥಳಗಳಲ್ಲಿ ಲೈಂಗಿಕ ದೌರ್ಜನ್ಯಕ್ಕೆ ಮಹಿಳೆಯರು ಒಳಗಾಗುತ್ತಿದ್ದಾರೆ.ಹೆಣ್ಣಿನ ಜಾತಿಯನ್ನು ಕೀಳರಿಮೆಯಿಂದ ಮಾತನಾಡುವುದು,ಹೆಣ್ಣು ಮಕ್ಕಳನ್ನು ಸಿನಿಮಾದಲ್ಲಿ ಬಿಂಬಿಸುವ ರೀತಿ ನೋವುಂಟು ಮಾಡುತ್ತದೆ. ಮಣಿಪುರದ ಘಟನೆ ಅತ್ಯಂತ ಸಂಕಟವನ್ನು ತರಿಸುತ್ತದೆ. ದ್ವೇಷ ಸಾಧಿಸಲು ಹೆಣ್ಣಿನ ಮೇಲೆ ಅತ್ಯಾಚಾರ ಹೆಸಗುವುದು ದುರಂತ.ಇವತ್ತು ಮಠಗಳೇ ಹೆಣ್ಣಿನ ಶೋಷಣೆ ಮಾಡಿರುವುದಕ್ಕೆ ಸಾಕಷ್ಟು ಸಾಕ್ಷಿಗಳಿವೆ.ಧರ್ಮದ ಬೇರುಗಳಲ್ಲಿ ಹೆಣ್ಣಿನ ಶೋಷಣೆಯ ಮೂಲ ನೆಲೆಗಳಿವೆ. ಆರ್ಥಿಕ ಸ್ವಾತಂತ್ರ್ಯ ಸಾಧಿಸುತ್ತಿದ್ದರು, ಸಾಮಾಜಿಕ ಸ್ವಾತಂತ್ರ್ಯದ ಅಗತ್ಯವಿದೆ. ಆರ್ಥಿಕವಾಗಿ,ಕೌಟುಂಬಿಕವಾಗಿ, ರಾಜಕೀಯವಾಗಿ, ಸಾಮಾಜಿಕವಾಗಿ ಯಾವಾಗ ಹೆಣ್ಣು ಸಬಲಳಾಗುತ್ತಾಳೋ ಆಗ ಅವಳು ಪೂರ್ಣ ಸ್ವಾತಂತ್ರ್ಯಳ ಆಗುತ್ತಾಳೆ ಎಂದು ಮಾತನಾಡಿದರು.

ಕಾರ್ಯಕ್ರಮದಲ್ಲಿ ಪ್ರೊ. ಜಯಪ್ರಕಾಶ್ ಗೌಡ, ಕರ್ನಾಟಕ ಸಂಘದ ಮಹಿಳಾ ಘಟಕದ ಅಧ್ಯಕ್ಷೆ ನಾಗರೇವಕ್ಕ,ಪ್ರೊ.ಅನಿತಾ ಉಪಸ್ಥಿತರಿದ್ದು ಸಂವಾದದಲ್ಲಿ ಪ್ರೊ,ಶ್ರೀದೇವಿ ,ಪ್ರೊ,ಶ್ರೀಲತಾ, ನಂದಿನಿ ಜಯರಾಮ್, ಮಂಜುಳಾ ಜಯಪ್ರಕಾಶ್, ಪ್ರೊ.ಎಸ್.ಬಿ. ಶಂಕರಗೌಡ, ಸುಜಾತ ಕೃಷ್ಣ ಮುಂತಾದವರು ಭಾಗವಹಿಸಿದ್ದರು.

# 27ಕ್ಕೆ ಚೆಸ್ಕಾಂಗೆ ರೈತರ ಮುತ್ತಿಗೆ

**ಮೈಸೂರು:** ಸಮರ್ಪಕ ವಿದ್ಯುತ್ ಪೂರೈಕೆ ಹಾಗೂ ಅಕ್ರಮ ಸಕ್ರಮ ಯೋಜನೆ ಮರು ಜಾರಿಗೆ ಒತ್ತಾಯಿಸಿ ಇದೇ ಮಾ.26 ರ ಮಂಗಳವಾರ ಬೆಳಿಗ್ಗೆ 11.30ಗಂಟೆಗೆ ರಾಜ್ಯ ರೈತ ಸಂಘಟನೆಗಳ ಒಕ್ಕೂಟ ಹಾಗೂ ಕರ್ನಾಟಕ ರಾಜ್ಯ ಕಬ್ಬು ಬೆಳೆಗಾರರ ಸಂಘದ ಆಶ್ರಯದಲ್ಲಿ ರೈತರು ನಗರದ ಹಿನಕಲ್‌ನಲ್ಲಿರುವ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ವ್ಯವಸ್ಥಾಪಕ ನಿರ್ದೇಶಕರ ಕಚೇರಿಗೆ ಮುತ್ತಿಗೆ ಹಾಕಿ ಬೃಹತ್ ಪ್ರತಿಭಟನೆ ನಡೆಸಲಿದ್ದಾರೆ ಎಂದು ರಾಜ್ಯಾಧ್ಯಕ್ಷ ಹಳ್ಳಿಕೆರೆಹುಂಡಿ ಭಾಗ್ಯರಾಜ್ ತಿಳಿಸಿದರು. ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೃಷಿ ಪಂಪ್ ಸೆಟ್ ಗಳಿಗೆ 10 ಗಂಟೆಗಳ ವಿದ್ಯುತ್ ಪೂರೈಕೆ ಮಾಡಬೇಕೆಂಬುದೂ ಸೇರಿದಂತೆ ಹಗಲು ವೇಳೆ ಸರ್ಕಾರದ ಆದೇಶದಂತೆ ಸಮರ್ಪಕ ವಿದ್ಯುತ್ ನೀಡುವಲ್ಲಿ ವಿಳಂಬ ನೀತಿ ಅನುಸರಿಸಲಾಗುತ್ತಿದೆ. ರೈತರಿಗೆ ಸೋಲಾರ್ ಪಂಪ್ಸೆಟ್ ಅನ್ನು ವೈಯಕ್ತಿಕವಾಗಿ ಅಳವಡಿಸಿಕೊಳ್ಳಲು ಇಲಾಖೆ ಪ್ರೇರೇಪಿಸುತ್ತಿರುವುದು



ಸರಿಯಲ್ಲ. ಕಳೆದ ಸಾಲಿನಲ್ಲಿ ಇದ್ದಂತೆ ಅಕ್ರಮ ಸಕ್ರಮವನ್ನು ಜಾರಿ ಮಾಡಬೇಕು ಎಂದು ಒತ್ತಾಯಿಸಿದರು.

ಹೊಸ ವಿದ್ಯುತ್ ಸಂಪರ್ಕ ಪಡೆಯಲು ರೈತರಿಗೆ ಸಾಧ್ಯವಾಗುತ್ತಿಲ್ಲ ಸರ್ಕಾರದ ಆದೇಶವಿದೆ ಎಂದು ಯಾವುದೇ ನೋಂದಣಿಯನ್ನು ಮಾಡಿಕೊಳ್ಳದೆ ಸ್ವಂತಕ್ಕೆ ಎರಡು ಮೂರು ಲಕ್ಷವನ್ನು ಕಟ್ಟಬೇಕು ಮತ್ತು ಸಂಪರ್ಕ ಪಡೆಯಲು ಹೇಳುತ್ತಿದ್ದಾರೆ. ಇಲಾಖೆ ಕಾಡಂಚಿನ ಪ್ರದೇಶಗಳಿಗೆ ಸಮರ್ಪಕವಾಗಿ ಹಗಲು ವೇಳೆ ವಿದ್ಯುತ್ ಪೂರೈಕೆ ಮಾಡುತ್ತಿಲ್ಲ. ಟಿಸಿಗಳು ಸುಟ್ಟು ಹೋದರೆ 72 ಗಂಟೆಯಲ್ಲಿ ಆಗಬೇಕೆಂಬ ನಿಯಮವಿದರು ಇಲಾಖೆ ಕೆಳ ಹಂತದ ಅಧಿಕಾರಿಗಳು ತೀವ್ರ ವಿಳಂಬ ಮಾಡುತ್ತಿದ್ದಾರೆ. ಹೀಗಾಗಿ ಈ ಎಲ್ಲ ಅವ್ಯವಸ್ಥೆ ವಿರುದ್ಧ ಈ ಪ್ರತಿಭಟನೆ ನಡೆಯುತ್ತಿದೆ. ಒಂದು ವೇಳೆ ಅಧಿಕಾರಿಗಳು ಸ್ಪಂದಿಸಿದ್ದರೆ ಹೋರಾಟ ಮುಂದುವರಿಯಲಿದೆ ಎಂದು ಎಚ್ಚರಿಸಿದರು. ಸುದ್ದಿಗೋಷ್ಠಿಯಲ್ಲಿ ರಾಜ್ಯ ಉಪಾಧ್ಯಕ್ಷ ಅಂಕನಹಳ್ಳಿ ತಿಮ್ಮಪ್ಪ, ಮೈಸೂರು ಜಿಲ್ಲಾ ಗೌರವಾಧ್ಯಕ್ಷ ಶಿವರುದ್ರಪ್ಪ, ಜಿಲ್ಲಾಧ್ಯಕ್ಷ ಹಾಡ್ಯ ರವಿ, ಸಂಘಟನಾ ಕಾರ್ಯದರ್ಶಿ ಕೊಂತಯ್ಯನ ಹುಂಡಿ ಮಹೇಶ, ಚಾಮರಾಜನಗರ ತಾಲೂಕ ಅಧ್ಯಕ್ಷ ಅರಳಿಕಟ್ಟೆ ಕುಮಾರ್, ಟಿ. ನರಸೀಪುರ ತಾಲೂಕು ಅಧ್ಯಕ್ಷ ಸುಜ್ಜಲೂರು ಜಯಸ್ವಾಮಿ ಉಪಸ್ಥಿರಿದ್ದರು.

## ನಾಳೆ ಯೋಗಿನಾರೇಯಣ ಯತೀಂದ್ರರ ಜಯಂತಿ

**ಕೋಲಾರ:** ಯೋಗಿನಾರೇಯಣ ಯತೀಂದ್ರರ ಜಯಂತಿ ಆಚರಣೆಯನ್ನು ಈ ಬಾರಿ ಲೋಕಸಭಾಚುನಾವಣೆಹಿನ್ನಲೆಯಲ್ಲಿ ನೀತಿಸಂಹಿತೆಇರುವ ಕಾರಣ ಸರಳವಾಗಿ ಮಾ.25 ರ ಸೋಮವಾರ ದಂದು ಆಚರಿಸಲಾಗುವುದೆಂದು ಬಲಿಜ ಸಮುದಾಯದ ಮುಖಂಡ ಹಾಗೂ ಯೋಗಿ ನಾರಾಯಣ ಬಲಿಜ ನೌಕರರ ಸಂಘದ ಜಿಲ್ಲಾ ಅಧ್ಯಕ್ಷ ಆರ್.ಪ್ರಸಾದ್ ತಿಳಿಸಿದರು. ನಗರದ ಪತ್ರಕರ್ತರ ಭವನದಲ್ಲಿ ಮಾಧ್ಯಮದವರೊಂದಿಗೆ ಅವರು ಮಾತನಾಡುತ್ತಾ ಜಿಲ್ಲಾ ಆಡಳಿತ ಸರಳವಾಗಿಆಚರಿಸಲು ಅನುಮತಿ ನೀಡಿರುವುದರಿಂದ ಯಾವುದೇ ಮೆರವಣಿಗೆ ವೇದಿಕೆ ಕಾರ್ಯಕ್ರಮಗಳನ್ನು ಅದ್ದೂರಿಯಾಗಿ ಆಚರಣೆ ಮಾಡದೆ ಸರಳವಾಗಿಹಾಗೂಸಾಂಕೇತಿಕವಾಗಿನಡೆಸಲುತೀರ್ಮಾನಿಸಲಾಗಿದೆಯೆಂದು ಹೇಳಿದರು. 25 ರ ಸೋಮವಾರ ಬೆಳಿಗ್ಗೆ 9 ಗಂಟೆಗೆ ನಗರದ ಟೇಕಲ್ ರಸ್ತೆಯಲ್ಲಿರುವ ಯೋಗಿನಾರೇಯಣ ಯತೀಂದ್ರರ ಪುತ್ಥಳಿಗೆ ಪೂಜೆ ಸಲ್ಲಿಸಿ ತದ ನಂತರ ಟಿ.ಚೆನ್ನಯ್ಯ ರಂಗಮಂದಿರದಲ್ಲಿ ಬೆಳಿಗ್ಗೆ 10 ಗಂಟೆಗೆಜಿಲ್ಲಾ ಆಡಳಿತ ಸಾಂಕೇತಿಕವಾಗಿ ನಡೆಸುವ ಶ್ರೀ ಯೋಗಿನಾರೇಯಣ ಯತೀಂದ್ರರ ಜಯಂತಿ ಆಚರಣೆಯನ್ನು ಸಮುದಾಯದಎಲ್ಲಾ ಜನತೆ ಭಾಗವಹಿಸಲಿದ್ದಾರೆಂದು ತಿಳಿಸಿದರು. ಸಮುದಾಯದ ಮುಖಂಡ ಹಾಗೂ ನಿವೃತ್ತ ಪೋಲಿಸ್ ಅಧಿಕಾರಿ ವೆಂಕಟಸ್ವಾಮಿ ಮಾತನಾಡಿ ಸರಳವಾಗಿ ಹಾಗೂ ಭಕ್ತಿ ಪೂರಕವಾಗಿ ನಡೆಯಲಿರುವ ಶ್ರೀ ಯೋಗಿನಾರೇಯಣ ಯತೀಂದ್ರರ ಜಯಂತಿ ಆಚರಣೆಯಲ್ಲಿ ಸಮುದಾಯದ ಎಲ್ಲಾ ಕುಲಭಾಂದವರು ಹಾಗೂ ಎಲ್ಲಾ ವರ್ಗದ ಜನತೆ ಭಾಗವಹಿಸಿ ಜಯಂತಿಯನ್ನು ಯಶಸ್ಸುಗೊಳಿಸುವಂತೆ ಮನವಿ ಮಾಡಿದರು. ಪತ್ರಿಕಾಗೋಷ್ಠಿಯಲ್ಲಿ ಶ್ರೀ ಯೋಗಿನಾರೇಯಣ ಯತೀಂದ್ರರ ಜಯಂತಿ ಆಚರಣಾ ಸಮಿತಿ ಅಧ್ಯಕ್ಷ ಹಾಗೂ ನಗರಸಭೆ ಮಾಜಿ ಸದಸ್ಯ ರಘು ಉರ್ಫ್ ಚಿಟ್ಟಿ,ಸಮುದಾಯದ ಮುಖಂಡರುಗಳಾದ ರಂಗನಾಥ್,ಎಸ್.ಎಸ್.ಶ್ರೀಧರ್,ರಾಜೇಶ್, ಮಹೇಶ್, ಎಂ.ಜಿ.ಮಂಜುನಾಥ್, ಗೋವರ್ಧನ್ ಮುಂತಾದವರು ಉಪಸ್ಥಿತರಿದ್ದರು.

## ರೇಣುಕಾಚಾರ್ಯ ಜಯಂತಿ

**ಮಂಡ್ಯ:** ನಗರದ ಕನ್ನಡ ಮತ್ತು ಸಂಸ್ಕೃತಿ ಇಲಾಖಾ ಕಛೇರಿಯ ಸಭಾಂಗಣದಲ್ಲಿ ಚುನಾವಣೆ ನೀತಿ ಸಮ್ಮಿತೆ ಇರುವುದರಿಂದ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿಯನ್ನು ಅತ್ಯಂತ ಸರಳವಾಗಿ ಆಚರಿಸಲಾಯಿತು. ಶ್ರೀ ಜಗದ್ಗುರು ರೇಣುಕಾಚಾರ್ಯರವರ ಭಾವಚಿತ್ರಕ್ಕೆ ಪುಷ್ಪಾರ್ಚನೆಯನ್ನು ಮಂಡ್ಯ ಜಿಲ್ಲಾ ಬಸವ ಸಮಿತಿಯ ಅಧ್ಯಕ್ಷರಾದ ಎಂ.ಬಿ. ರಾಜಶೇಖರ್, ಜಗದ್ಗುರು ರೇಣುಕಾಚಾರ್ಯ ಸೇವಾ ಟ್ರಸ್ಟ್ನ ಖಜಾಂಚಿಗಳಾದ ರುದ್ರಸ್ವಾಮಿ, ಮಂಡ್ಯ ಜಿಲ್ಲಾ ಬಸವ ಸಮಿತಿಯ ಕಾರ್ಯದರ್ಶಿ ಹೆಚ್.ಕೆ.ಕೆಂಪಯ್ಯ, ಜಿಲ್ಲಾ ವೀರಶೈವ ನೌಕರರ ಸಹಕಾರಿ ಸಂಘದ ಅಧ್ಯಕ್ಷ ರಮೇಶ್, ಮಂಡ್ಯ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಎಂ.ಎಸ್. ಶಿವಪ್ರಕಾಶ್, ಪ್ರಶಾಂತ್ ಹಾಗೂ ಕನ್ನಡ ಸಂಸ್ಕೃತಿ ಇಲಾಖೆಯ ಆನಂದ, ಸುಧಾ, ದೇವರಾಜು, ಸುಧಾ, ಮತ್ತಿತರರು ನೆರವೇರಿಸಿದರು. ಎಲ್ಲಾರಿಗೂ ಶ್ರೀ ಜಗದ್ಗುರು ರೇಣುಕಾಚಾರ್ಯ ಸೇವಾ ಟ್ರಸ್ಟ್ ವತಿಯಿಂದ ಸಿಹಿ ಹಂಚಲಾಯಿತು.



## ಭಾರತೀಯ ಜನತಾ ಪಾರ್ಟಿಗೆ ನೇಮಕ



**ಬೆಂಗಳೂರು:** ಭಾರತೀಯ ಜನತಾ ಪಾರ್ಟಿ ಮೈಸೂರು ಗ್ರಾಮಾಂತರ ಜಿಲ್ಲಾ ರೈತ ಮೋರ್ಚ ಕಾರ್ಯದರ್ಶಿಯನ್ನಾಗಿ. ಕಿರಂಗೂರು ಮೋಹನ್ ರವರನ್ನು ಗ್ರಾಮಾಂತರ ಅಧ್ಯಕ್ಷರಾದ ಎಲ್. ಆರ್ ಮಹಾದೇವಸ್ವಾಮಿ ಆದೇಶದ ಮೇರೆಗೆ ಜಿಲ್ಲಾ ರೈತ ಮೋರ್ಚ ಅಧ್ಯಕ್ಷರಾದ ಮಿರ್ಲೆ ಶ್ರೀನಿವಾಸ್ ಗೌಡ ಆದೇಶ ಹೊರಡಿಸಿದ್ದಾರೆ

# ಎಸ್‌ಎಸ್‌ಎಲ್‌ಸಿ ಹೆಚ್ಚಳಕ್ಕೆ ಕ್ರಮ: ಡಿಡಿಪಿಐ ಪಾಂಡು

**ಮೈಸೂರು:** ಜಿಲ್ಲೆಯಲ್ಲಿ ಈ ಬಾರಿಯ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಸುಗಮವಾಗಿ ನಡೆದು, ಜಿಲ್ಲೆಯ ಫಲಿತಾಂಶ ಮಟ್ಟವನ್ನು ಮೇಲು ಹಂತಕ್ಕೆ ಕೊಂಡೊಯ್ಯುವ ನಿಟ್ಟಿನಲ್ಲಿ ಜಿಲ್ಲಾ ಶಾಲಾ ಶಿಕ್ಷಣ ಇಲಾಖೆ ಎಲ್ಲ ಕ್ರಮ ಕೈಗೊಂಡಿದೆ ಎಂದು ಪ್ರೌಢಶಾಲಾ ಶಿಕ್ಷಣ ಇಲಾಖೆ ಉಪ ನಿರ್ದೇಶಕರಾದ ಎಚ್.ಕೆ.ಪಾಂಡು ತಿಳಿಸಿದರು.

ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ವಿದ್ಯಾರ್ಥಿಗಳಲ್ಲಿನ ಪರೀಕ್ಷಾ ಭಯ ಹೋಗಲಾಡಿಸಲು ಎಲ್ಲ ಕ್ರಮ ಇಲಾಖೆ ಕೈಗೊಂಡಿದೆ. ಹೀಗಾಗಿ ಮೊದಲನೇ ದಿನ ಬೆಳಗ್ಗೆ ಒಂಭತ್ತಕ್ಕೆಲ್ಲ ಪರೀಕ್ಷಾ ಕೊಠಡಿಗೆ ಹಾಜರಾಗಿ ಆತಂಕ ದೂರ ಮಾಡಿಕೊಳ್ಳಲು ತಿಳಿಸಲಾಗಿದೆ. ಇನ್ನು, ವಿದ್ಯಾರ್ಥಿಗಳನ್ನು ಸುಲಭವಾಗಿ ಗುರುತಿಸಲು ಸಾಧ್ಯವಾಗುವ ನಿಟ್ಟಿನಲ್ಲಿ ಎಲ್ಲರೂ ಶಾಲಾ ಸಮವಸ್ತ್ರ ಧರಿಸಿರಬೇಕು. ಮೊಬೈಲ್, ಸ್ಮಾರ್ಟ್‌ವಾಚ್ ಮೊದಲಾದವನ್ನು ನಿರ್ಬಂಧಿಸಲಾಗಿದೆ ಎಂದು ವಿವರಿಸಿದರು.



ಬಳಿಕ, ನಗರದಲ್ಲಿ 35, ಗ್ರಾಮೀಣ ಪ್ರದೇಶದಲ್ಲಿ 97 ಸೇರಿದಂತೆ ಜಿಲ್ಲೆಯಲ್ಲಿ ಒಟ್ಟು 132 ಪರೀಕ್ಷಾ ಕೇಂದ್ರಗಳಿವೆ. ಇವುಗಳಲ್ಲಿ ಎಲ್ಲ ರೀತಿಯ ವಿದ್ಯಾರ್ಥಿಗಳು ಸೇರಿದಂತೆ 40,333 ಮಂದಿ ಪರೀಕ್ಷೆ ಬರೆಯಲಿದ್ದಾರೆ. ಇವರಲ್ಲಿ 20,046 ಮಂದಿ ಪುರುಷರು, 20,287 ಮಹಿಳೆಯರು, ಮಕ್ಕಳು ಸೇರಿದ್ದಾರೆಂದರು.

ಇನ್ನು, ಮಾ. 25 ರ ಸೋಮವಾರ ಬೆಳಗ್ಗೆ 10.15 ರಿಂದ ಮಧ್ಯಾಹ್ನ 1.30 ರವರೆಗೆ ಪ್ರಥಮ ಭಾಷೆ, 27 ರ ಬುಧವಾರ ಬೆಳಗ್ಗೆ 10.15 ರಿಂದ ಮಧ್ಯಾಹ್ನ 1.30 ರವರೆಗೆ ಸಮಾಜ ವಿಜ್ಞಾನ, 30 ರ ಶನಿವಾರ ಬೆಳಗ್ಗೆ 10.15 ರಿಂದ ಮಧ್ಯಾಹ್ನ 1.30 ರವರೆಗೆ ವಿಜ್ಞಾನ, ಏಪ್ರಿಲ್ ಎರಡರ ಮಂಗಳವಾರ ಬೆಳಗ್ಗೆ 10.15 ರಿಂದ ಮಧ್ಯಾಹ್ನ 1.30 ರವರೆಗೆ ಗಣಿತ, ಏಪ್ರಿಲ್ ಮೂರರ ಬುಧವಾರ ಬೆಳಗ್ಗೆ 10.15 ರಿಂದ ಮಧ್ಯಾಹ್ನ 1.30 ರವರೆಗೆ ಆಯ್ದ ಕೇಂದ್ರಗಳಲ್ಲಿ ಪರ್ಯಾಯ ವಿಷಯ, ಏ. ನಾಲ್ಕರ ಬೆಳಗ್ಗೆ 10.15 ರಿಂದ ಮಧ್ಯಾಹ್ನ 1.15 ರವರೆಗೆ ತೃತೀಯ ಭಾಷೆ, ಏಪ್ರಿಲ್ ಆರರ ಶನಿವಾರ ಬೆಳಗ್ಗೆ 10.15 ರಿಂದ ಮಧ್ಯಾಹ್ನ 1.15 ರವರೆಗೆ ದ್ವಿತೀಯ ಭಾಷೆ ಪರೀಕ್ಷೆಗಳು ನಡೆಯಲಿವೆ ಎಂದು ಮಾಹಿತಿ ನೀಡಿದರು.

ಅಲ್ಲದೆ, ಪರೀಕ್ಷೆ ಸುಗಮವಾಗಿ ನಡೆಯುವಂತೆ, ಪರೀಕ್ಷಾ ಅಕ್ರಮ ತಡೆಗಟ್ಟುವ ನಿಟ್ಟಿನಲ್ಲಿ ಜಿಲ್ಲಾಡಳಿತದ ಅಡಿಯಲ್ಲಿ ಎಲ್ಲ ಕ್ರಮ ಕೈಗೊಳ್ಳಲಾಗಿದೆ. ಹೀಗಾಗಿ ವಿದ್ಯಾರ್ಥಿಗಳು ಸಹಾ ಯಾವುದೇ ಭಯ, ಇಲ್ಲದೇ ನಿರ್ಭೀತಿಯಿಂದ, ಸಂತಸ, ಉತ್ಸಾಹರಿಂದ ಪರೀಕ್ಷೆ ಬರೆಯುವಂತೆ ಸಲಹೆ ನೀಡಿದರು. ಇಲಾಖೆ ಅಧಿಕಾರಿಗಳಾದ ವಿರೂಪಾಕ್ಷಿ, ಶಿವಮೂರ್ತಿ, ದೇವರಾಜು, ಕೆಂಪರಾಜು, ಪುಷ್ಪ ಹಾಗೂ ಇನ್ನಿತರರು ಹಾಜರಿದ್ದರು.

### ಸಂವಿಧಾನದ ಆಶಯ ಎತ್ತಿಹಿಡಿಯುವಲ್ಲಿ

# ನ್ಯಾಯಾಂಗದ ಪಾತ್ರ ದೊಡ್ಡದು

**ಬೆಂಗಳೂರು:** ಭಾರತದ ನ್ಯಾಯಾಂಗವು ಸಂವಿಧಾನದ ಆಶಯಗಳನ್ನು ಎತ್ತಿ ಹಿಡಿಯುವಲ್ಲಿ ಪ್ರಮುಖ ಪಾತ್ರ ವಹಿಸುತ್ತಾ ಬಂದಿದೆ. ಮೂಲಭೂತ ಹಕ್ಕುಗಳಿಗೆ ಸಂಬಂಧಿಸಿದಂತೆ ಮಹತ್ತರವಾದ ತೀರ್ಪುಗಳನ್ನು ನೀಡುವ ಮೂಲಕ ನ್ಯಾಯಾಂಗ ತನ್ನ ಹಿರಿಮೆಯನ್ನು ಹೆಚ್ಚಿಸಿಕೊಂಡಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.



ಅವರು ಇಂದು ಜಿ.ಕೆ.ವಿ.ಕೆಯ ಡಾ: ಬಾಬು ರಾಜೇಂದ್ರ ಪ್ರಸಾದ್ ಅಂತಾರಾಷ್ಟ್ರೀಯ ಸಮಾವೇಶ ಕೇಂದ್ರದಲ್ಲಿ ಕರ್ನಾಟಕ ರಾಜ್ಯ ನ್ಯಾಯಾಂಗ ಅಧಿಕಾರಿಗಳ ಸಂಘದ ವತಿಯಿಂದ ಹಮ್ಮಿಕೊಳ್ಳಲಾದ ''ಭವಿಷ್ಯದ ನ್ಯಾಯಾಂಗ ವ್ಯವಸ್ಥೆಯಲ್ಲಿ ನ್ಯಾಯ ಮತ್ತು ಉತ್ಕೃಷ್ಣತೆ'' ವಿಷಯದ ಕುರಿತ 2 ದಿನಗಳ ರಾಜ್ಯಮಟ್ಟದ ನ್ಯಾಯಾಂಗ ಅಧಿಕಾರಿಗಳ 21ನೇ ದ್ವೈವಾರ್ಷಿಕ ಸಮಾವೇಶದಲ್ಲಿ ಭಾಗವಹಿಸಿ ಮಾತನಾಡಿದರು. ಡಾ: ಬಾಬಾ ಸಾಹೇಬ್ ಅಂಬೇಡ್ಕರ್‌ರವರು ಸಂವಿಧಾನದ 32ನೇ ವಿಧಿಯನ್ನು 'ಸಂವಿಧಾನದ ಆತ್ಮ' ಎಂದು ಕರೆದಿದ್ದರು. ಅವರ ಆಶಯದಂತೆ ಸರ್ವೋಚ್ಚ ನ್ಯಾಯಾಲಯ ತನ್ನ ತೀರ್ಪುಗಳ ಮೂಲಕ ಸಮಾನತೆ, ಸ್ವಾತಂತ್ರ್ಯ ಮತ್ತು ಸಾಮಾಜಿಕ ನ್ಯಾಯವನ್ನು ಜನರಿಗೆ ಒದಗಿಸಿದೆ ಎಂದರು. ನ್ಯಾಯ ಉಳ್ಳವರಿಗೆ ಮಾತ್ರವಲ್ಲದೆ ದುರ್ಬಲರಿಗೂ ದೊರೆಯುವಂತಾಗಬೇಕು. ನ್ಯಾಯದಾನ ದುಬಾರಿಯಾಗದೇ ಎಲ್ಲ ವರ್ಗದ ಜನರಿಗೂ ಕೈಗೆಟುವಂತಾಗಬೇಕು. ಸಮಾಜದಲ್ಲಿನ ಕಟ್ಟ ಕಡೆಯ ವ್ಯಕ್ತಿಗೂ ನ್ಯಾಯ ದೊರಕುವಂತಾಗಬೇಕು. ನ್ಯಾಯ ಪಡೆಯುವಿಕೆ ಸೇವೆ/ಸವಲತ್ತಾಗದೇ ಅದೊಂದು ಹಕ್ಕಾಗಬೇಕು ಎಂದರು.

ದಿನೇ ದಿನೇ ಹೆಚ್ಚುತ್ತಿರುವ ಪ್ರಕರಣಗಳ ಸಂಖ್ಯೆಯಿಂದಾಗಿ ನ್ಯಾಯಾಲಯಗಳ ಮೇಲೆ ಒತ್ತಡ ಜಾಸ್ತಿಯಾಗುತ್ತಿದ್ದು, ಡಿಜಿಟಲೀಕರಣ, ಇ-ಕೋರ್ಟ್, ವರ್ಚುವಲ್ ಕೋರ್ಟ್‌ಗಳಂತಹ ಹೊಸ ಹೊಸ ಪರಿಹಾರಗಳನ್ನು ಬಳಸಿಕೊಳ್ಳುವಂತಾದಲ್ಲಿ, ಸಮಯ ಉಳಿತಾಯದ ಜೊತೆಗೆ ತ್ವರಿತವಾಗಿ ಪ್ರಕರಣಗಳನ್ನು ಇತ್ಯರ್ಥಪಡಿಸಬಹುದಾಗಿದೆ ಎಂದರು.

ನ್ಯಾಯಾಲಯಗಳಲ್ಲಿ ಸ್ಥಳೀಯ ಭಾಷೆಗಳಿಗೆ ಹೆಚ್ಚು ಪ್ರಾಶಸ್ತ್ಯ ಕೊಟ್ಟಲ್ಲಿ, ಹೆಚ್ಚು ಜನ ಒಳಗೊಳ್ಳುವುದರ ಜೊತೆಗೆ, ನ್ಯಾಯಾಂಗ ವ್ಯವಸ್ಥೆಯ ವಿಶ್ವಾಸಾರ್ಹತೆ ಇನ್ನಷ್ಟು ಹೆಚ್ಚಾಗುತ್ತದೆ. ಈ ನಿಟ್ಟಿನಲ್ಲಿ ಕೃತಕ ಬುದ್ದಿಮತ್ತೆಯ ಬಳಕೆ ಹೆಚ್ಚಾಗಬೇಕು ಎಂದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಭಾರತದ ಸರ್ವೋಚ್ಚ ನ್ಯಾಯಾಲಯದ ಮುಖ್ಯ ನ್ಯಾಯಮೂರ್ತಿಗಳಾದ ಧನಂಜಯ ವೈ. ಚಂದ್ರಚೂಡ್, ಜಿಲ್ಲಾ ನ್ಯಾಯಾಲಯಗಳು ಜನರ ಸಂಪರ್ಕದ ಮೊದಲ ಸೇತುವೆಯಾಗಿದೆ. ಇವುಗಳನ್ನು ಬಲವರ್ಧನೆ ಮಾಡುವಲ್ಲಿ ನಾವು ಕೈ ಜೋಡಿಸಬೇಕು. ಗುಜರಾತ್‌ನ ಕಚ್‌ನಲ್ಲಿ ಜಿಲ್ಲಾ ನ್ಯಾಯಾಧೀಶರ ಸಮ್ಮೇಳನ ನಡೆದು ಯಶಸ್ವಿಯಾಯಿತು. ಹಾಗೆಯೇ ನವದೆಹಲಿಯಲ್ಲಿ ಸಹ ಇದೇ ರೀತಿ ಸಮ್ಮೇಳನ ಹಮ್ಮಿಕೊಳ್ಳಲಾಗುವುದು. ಇಂದು ನ್ಯಾಯಾಂಗ ವ್ಯವಸ್ಥೆಯು ಬದಲಾದ ಕಾಲಘಟ್ಟದಲ್ಲಿ ಹಲವಾರು ಸವಾಲುಗಳನ್ನು ಎದುರಿಸುತ್ತಿದೆ. ನ್ಯಾಯಾಂಗ ವೃತ್ತಿಯಲ್ಲಿ ಉತ್ಕೃಷ್ಣತೆ, ಕಾರ್ಯಕ್ಷಮತೆ, ಪಾರದರ್ಶಕತೆಯನ್ನು ನ್ಯಾಯಾಧೀಶರು ಅಳವಡಿಸಿಕೊಳ್ಳಬೇಕಾಗುತ್ತದೆ. ಇದರಿಂದ ಸಾಮಾಜಿಕ ರೂಪಾಂತರ ಬರೀ ದೇಶದಲ್ಲಷ್ಟೇ ಅಲ್ಲದೆ, ವಿಶ್ವದಾದ್ಯಂತ ಆಗುತ್ತದೆ. ನ್ಯಾಯಾಲಯದಲ್ಲಿನ ಪ್ರಕರಣಗಳ ವಿಲೇವಾರಿಯಲ್ಲೂ ಸಹ ಕರ್ನಾಟಕ ಮುಂಚೂಣಿಯಲಿದ್ದು, ಲೋಕ್ ಅದಾಲತ್ ಮೂಲಕ ಸಹ ತ್ವರಿತವಾಗಿ ಪ್ರಕರಣಗಳು ಇತ್ಯರ್ಥಗೊಳ್ಳುತ್ತಿವೆ ಎಂದರು.

ಕರ್ನಾಟಕ ಸರ್ಕಾರ ಇ-ಸೇವಾ ಕೇಂದ್ರ ಸ್ಥಾಪನೆಗೆ 10 ಕೋಟಿ ರೂ. ಗಳನ್ನು ಮಂಜೂರು ಮಾಡಿದೆ. ಇದರಿಂದ ಬಹಳಷ್ಟು ಜನರಿಗೆ ಪ್ರಯೋಜನವಾಗಿದೆ. ಮಹಿಳೆಯರು ನ್ಯಾಯಾಂಗದಲ್ಲಿ ವಿವಿಧ ಉನ್ನತ ಹುದ್ದೆಗಳನ್ನು ಅಲಂಕರಿಸಿದ್ದಾರೆ. ದೇಶದಲ್ಲಿ ಶೇ 37 ರಷ್ಟು ಮಹಿಳೆಯರು ಹಾಗೂ ಕರ್ನಾಟಕದಲ್ಲಿ ಶೇ 44 ರಷ್ಟು ಮಹಿಳೆಯರು ನ್ಯಾಯಾಂಗದಲ್ಲಿ ಕೆಲಸ ನಿರ್ವಹಿಸುತ್ತಿದ್ದಾರೆ. ಮಹಿಳೆಯರಿಗೆ ಸಮಾನ ಅವಕಾಶಗಳು ಸಿಕ್ಕರೆ ಅವರು ಉತ್ತಮವಾಗಿ ಕೆಲಸ ನಿರ್ವಹಿಸಬಲ್ಲರು. ಅವರಿಗೆ ಮೂಲಭೂತ ಸೌಕರ್ಯ ಕಲ್ಪಿಸಿಕೊಡಬೇಕಾಗಿದೆ. ನ್ಯಾಯಾಂಗ ಅಧಿಕಾರಿ, ನೌಕರರಿಗೆ ವೇತನ, ನಗದು ರಹಿತ ಚಿಕಿತ್ಸೆ ಮುಂತಾದವುಗಳನ್ನು ಕಲ್ಪಿಸುವುದು ಸಹ ಮುಖ್ಯ ಎಂದರು.

ನ್ಯಾಯಾಧೀಶರು ಯಾವುದಕ್ಕೂ ಭಯಪಡದೆ ಒತ್ತಡಕ್ಕೆ ಒಳಗಾಗದೆ ನಿರ್ಭೀತಿಯಿಂದ ಕೆಲಸ ನಿರ್ವಹಿಸಬೇಕು. ಕಾರ್ಯಭಾರದ ಒತ್ತಡವಿದ್ದಾಗಿಯೂ ಜನರಿಗೆ ನ್ಯಾಯ ಒದಗಿಸುವ ಮೂಲಕ ಸಮಾಜದ ಒಳಿತಿಗೆ ಶ್ರಮಿಸಬೇಕೆಂದರು. ಸರ್ವೋಚ್ಚ ನ್ಯಾಯಾಲಯದ ನ್ಯಾಯಾಧೀಶರಾದ ಅರವಿಂದ್ ಕುಮಾರ್ ಮಾತನಾಡಿ ಕರ್ನಾಟಕದಲ್ಲಿ ಆಸ್ತಿ ಹಕ್ಕಿಗೆ (ಕೌಟುಂಬಿಕ) ಸಂಬಂಧಿಸಿದಂತೆ, 2021 ರಲ್ಲಿ ಶೇ 92, 2022 ರಲ್ಲಿ ಶೇ 97, 2023 ರಲ್ಲಿ ಶೇ 91.78 ರಷ್ಟು ಪ್ರಕರಣಗಳು ಇತ್ಯರ್ಥಗೊಂಡಿದೆ. ಇದರಲ್ಲಿ ದೇಶದಲ್ಲಿಯೇ ಕರ್ನಾಟಕ ಪ್ರಥಮ ಸ್ಥಾನ ಗಳಿಸಿದೆ. ಲೋಕ್ ಅದಾಲತ್ ಮೂಲಕ ಸಹ ಜನರ ವ್ಯಾಜ್ಯಗಳನ್ನು ತ್ವರಿತಗತಿಯಲ್ಲಿ ವಿಲೇವಾರಿ ಮಾಡಲಾಗುತ್ತಿದೆ. ನ್ಯಾಯಾಂಗ ಅಧಿಕಾರಿಗಳು ತಮ್ಮ ಸಹದ್ಯೋಗಿಗಳೊಂದಿಗೆ ಉತ್ತಮ ಬಾಂಧವ್ಯ ಹೊಂದಿ ಪ್ರಕರಣಗಳ ಬಗ್ಗೆ ಚರ್ಚೆ ನಡೆಸುವುದು ಒಳಿತು. ನ್ಯಾಯಾಂಗ ಅಕಾಡೆಮಿ, 'ಹೆಲ್ಪ್ ಡೆಸ್ಕ್' ಸ್ಥಾಪಿಸುವುದು ಮುಖ್ಯ. ಸತತ ಅಧ್ಯಯನ ಮೂಲಕ ನ್ಯಾಯಾಧೀಶರು ನ್ಯಾಯಾಲಯದಲ್ಲಿ ಉತ್ತಮ ತೀರ್ಪುಗಳನ್ನು ನೀಡಬಹುದು ಎಂದು ಅಭಿಪ್ರಾಯಪಟ್ಟರು. ಸರ್ವೋಚ್ಚ ನ್ಯಾಯಾಲಯದ ನ್ಯಾಯಾಧೀಶರಾದ ಬಿ.ವಿ. ನಾಗರತ್ನ, ನ್ಯಾಯಮೂರ್ತಿ ಸೋಮಯ್ಯ ಬೋಪಣ್ಣ, ಕರ್ನಾಟಕ ಉಚ್ಚ ನ್ಯಾಯಾಲಯದ ಮುಖ್ಯ ನ್ಯಾಯಾಧೀಶರಾದ ಎನ್.ವಿ. ಅಂಜಾರಿಯಾ, ಕರ್ನಾಟಕ ರಾಜ್ಯ ನ್ಯಾಯಾಂಗ ಅಧಿಕಾರಿಗಳ ಸಂಘದ ಅಧ್ಯಕ್ಷರಾದ ಹರೀಶ್ ಎ, ಪ್ರಧಾನ ಕಾರ್ಯದರ್ಶಿಗಳಾದ ಹೆಚ್.ಕೆ. ನವೀನ್ ಉಪಸ್ಥಿತರಿದ್ದರು.

# ಕೋಟೆ ಎಂ.ಶಿವಣ್ಣಗೆ ಬಿಜೆಪಿ ಟಿಕೆಟ್ ಕಡೆಗಣನೆ

**ಚಾಮರಾಜನಗರ:** ಸಮುದಾಯದ ಮುಖಂಡರ ನಿರ್ಧಾರಕ್ಕೆ ಬದ್ಧನಾಗಿರುತ್ತೇನೆ, ಸಮುದಾಯದ ಹಿತದೃಷ್ಠಿಯಿಂದ ಎರಡು ದಿನದಲ್ಲಿ ತಮ್ಮ ನಿರ್ಧಾರ ಘೋಷಿಸುವುದಾಗಿ ಮಾಜಿ ಸಚಿವ ಕೋಟೆ ಎಂ.ಶಿವಣ್ಣ ಹೇಳಿದರು.

ನಗರದ ಖಾಸಗಿ ಹೋಟಲ್ ಸಭಾಂಗಣದಲ್ಲಿ ಮಾದಿಗ ಸಮುದಾಯದ ಬಿಜೆಪಿ ಮುಖಂಡರ ಸಭೆಯಲ್ಲಿ ಮುಖಂಡರ ಸಲಹೆ, ಸೂಚನೆಗಳನ್ನು ಸ್ವೀಕರಿಸಿ ಮಾತನಾಡಿದ ಅವರು, ಸಭೆಯಲ್ಲಿ ಸಮುದಾಯದ ಮುಖಂಡರು ಬಿಜೆಪಿಯಲ್ಲಿ ಸಮುದಾಯಕ್ಕೆ ಪದೇಪದೇ ಅನ್ಯಾಯ ಮಾಡುತ್ತಿದೆ. ಅನ್ಯಾಯವನ್ನು ಸಹಿಸಿಕೊಳ್ಳಲು ಆಗುವುದಿಲ್ಲ. ಕಳೆದ ವಿಧಾನಸಭಾ ಚುನಾವಣೆಯಲ್ಲಿ ಈ ಭಾಗದಲ್ಲಿ ಎಡಗೈ ಸಮುದಾಯಕ್ಕೆ ಟಿಕೆಟ್ ಕೊಡಲಿಲ್ಲ. ಈ ಬಾರಿ ಲೋಕಸಭಾ ಚುನಾವಣೆಯಲ್ಲಿ ಕೋಟೆ ಶಿವಣ್ಣ ಅವರಿಗೆ ಸಿಗುವ ನಿರಾಶೆಯಿಟ್ಟುಕೊಂಡಿದ್ದೇವು ಆದರೆ ಸಮುದಾಯಕ್ಕೆ ಟಿಕೆಟ್ ವಂಚಿತವಾಗಿದೆ. ತಾವು ಬಂಡಾಯವಾಗಿ ಸ್ಪರ್ಧೆ ಮಾಡುವಂತೆ ಒತ್ತಾಯವನ್ನು ಸಮುದಾಯದ ಮುಖಂಡರು ತಮಗೆ ಹೇರಿದ್ದಾರೆ. ಸಮುದಾಯದ ಎಲ್ಲರ ಮುಖಂಡರ ಅಭಿಪ್ರಾಯ ಪಡೆದು ಎರಡು ದಿನಗೊಳಗೆ ನನ್ನ ನಿರ್ಧಾರ ತಿಳಿಸುವುದಾಗಿ ಹೇಳಿದರು.

ಮತ ಕೊಡದ ಸಮುದಾಯಕ್ಕೆ ಮಣೆ ಹಾಕಿದ್ದೆ : ಮಾದಿಗ ಸಮುದಾಯ ಪ್ರತಿ ಸಾರಿ ಬಿಜೆಪಿಗೆ ಮತ ಹಾಕುತ್ತಾ ಬಂದರು ಕೂಡ ಸಮುದಾಯವನ್ನು ಕಡೆಗಣಿಸುತ್ತಿರುವುದು ಸಮುದಾಯಕ್ಕೆ ಬಹಳ ನೋವು ಉಂಟು ಮಾಡಿದೆ. ಯಾವ ಸಮುದಾಯಕ್ಕೆ ಮಾನ್ಯತೆ ಕೊಡಬೇಕಿತು ಅಂತಹ ಸಮುದಾಯಕ್ಕೆ ಮಾನ್ಯತೆ. ಕೊಡುತ್ತಿಲ್ಲ. ಮತ ಕೊಡದ ಸಮುದಾಯಕ್ಕೆ ಮಣೆ ಹಾಕುತಿದೆ ಎಂದು ದೂರಿದರು.

ಬಿಜೆಪಿ ಮುಖಂಡ ಬಸವನಪುರ ರಾಜಶೇಖರ ಮಾತನಾಡಿ, ಮಾದಿಗ ಸಮುದಾಯ ಪ್ರತಿ ಚುನಾವಣೆಯಲ್ಲಿ ಬಿಜೆಪಿಗೆ ಹೆಚ್ಚಿನ ಮತ ಹಾಕುವ ಮೂಲಕ ಬೆಂಬಲಿಸಿಕೊಂಡು ಬಂದಿದ್ದೇವೆ. ಚಾಮರಾಜನಗರ ಲೋಕಸಭಾ ಕ್ಷೇತ್ರದಲ್ಲಿ ಮಾದಿಗ ಸಮುದಾಯ 1.45 ಲಕ್ಷ ಮತಗಳಿದ್ದರು ಕೂಡ ಬಿಜೆಪಿ ಸಮುದಾಯವನ್ನು ಕಡೆಗಣಿಸಿದ್ದು ಅಲ್ಲದೆ ಸಮುದಾಯದ ಮಾಜಿ ಸಚಿವರಾದ ಕೋಟೆ ಎಂ.ಶಿವಣ್ಣ ಅವರಿಗೆ ಟಿಕೆಟ್ ನೀಡದೆ ಕಡೆಗಣಿಸಿದೆ. ಈ ಚುನಾವಣೆಯಲ್ಲಿ... ಅವರಿಗೆ ಒಂದು ಉತ್ತಮ ಸ್ಥಾನಮಾನ ನೀಡಿ ಗೌರಯುತವಾಗಿ ನಡೆಸಿಕೊಳ್ಳಬೇಕು, ಇಲ್ಲದಿದ್ದರೆ ಅವರನ್ನು ಬಂಡಾಯ ಅಭ್ಯರ್ಥಿಯಾಗಿ ಕಣಕ್ಕಿಳಿಸಲು ಸಮುದಾಯ ಮುಖಂಡರು ತೀರ್ಮಾನಕ್ಕೆಗೊಳ್ಳುವುದಾಗಿ ಹೇಳಿದರು.

ಸಭೆಯಲ್ಲಿ ವಕೀಲ ಸಿದ್ದೇಶ್, ಮೂಗೂರು ಸಿದ್ದರಾಜು, ನಾಗರಾಜು, ಶಿವಕುಮಾರ್, ಮಹದೇವಸ್ವಾಮಿ, ಡ್ಯಾನ್ಸ್ ಬಸವರಾಜು, ಪುಟ್ಟಲಿಂಗಯ್ಯ, ಲಿಂಗರಾಜು, ಬಿಳಿಯಪ್ಪ, ಮರಪ್ಪ, ಕಾಮಗೆರೆ ಮಹದೇವ,, ಗ್ರಾ.ಪಂ.ಅಧ್ಯಕ್ಷ ಬೂದಿತಿಟ್ಟು ನಾರಾಯಣ್, ಸದಸ್ಯ ಚಿಕ್ಕಸ್ವಾಮಿ, ಸುಂದರ್, ಸಿದ್ದಯ್ಯ, ಗುರುಲಿಂಗಯ್ಯ,ಶಿವಣ್ಣ ಇತರರು ಭಾಗವಹಿಸಿದ್ದರು.



# ಮೆಟ್ರೋ ಮಹಿಳಾ ಭದ್ರತಾ ಸಿಬ್ಬಂದಿಗೆ ಲೈಂಗಿಕ ಕಿರುಕುಳ

**ಬೆಂಗಳೂರು:** ಬೆಂಗಳೂರು ಮೆಟ್ರೋದಲ್ಲಿ ಮತ್ತೊಂದು ಲೈಂಗಿಕ ಕಿರುಕುಳ ಪ್ರಕರಣ ದಾಖಲಾಗಿದ್ದು, ಈ ಬಾರಿ ಮಹಿಳಾ ಭದ್ರತಾ ಸಿಬ್ಬಂದಿಯೇ ತಮ್ಮ ಹಿರಿಯ ಅಧಿಕಾರಿ ವಿರುದ್ಧ ಲೈಂಗಿಕ ಕಿರುಕುಳ ಪ್ರಕರಣ ಸಂಬಂಧ ಎಫ್ ಐಆರ್ ದಾಖಲಿಸಿದ್ದಾರೆ.

ಹೌದು.. ಬೆಂಗಳೂರು ಮೆಟ್ರೋದಲ್ಲಿ ಖಾಸಗಿ ಭದ್ರತಾ ಏಜೆನ್ಸಿಯೊಂದರಲ್ಲಿ ಉದ್ಯೋಗಿಯಾಗಿರುವ ಮಹಿಳಾ ಭದ್ರತಾ ಸಿಬ್ಬಂದಿಯೊಬ್ಬರು ಇತ್ತೀಚೆಗೆ ಬೆಂಗಳೂರು ಮೆಟ್ರೋ ರೈಲು ನಿಗಮದ (ಬಿಎಂಆರ್‌ಸಿಎಲ್) ಹಿರಿಯ ಭದ್ರತಾ ಅಧಿಕಾರಿಯೊಬ್ಬರ ವಿರುದ್ಧ ಪ್ರಕರಣ ದಾಖಲಿಸಿದ್ದಾರೆ. ಈ ಸಂಬಂಧ ಸುಬ್ರಹ್ಮಣ್ಯ ನಗರ ಪೊಲೀಸ್ ಠಾಣೆಯಲ್ಲಿ ಲೈಂಗಿಕ ಕಿರುಕುಳ ಪ್ರಕರಣ ದಾಖಲಿಸಿದೆ.

ಮಾತ್ರವಲ್ಲದೇ ಅಂತಹ ದುರ್ವರ್ತನೆಯನ್ನು ಸಹಿಸಿಕೊಳ್ಳುವಂತೆ ಮತ್ತು ಸಹಕರಿಸುವಂತೆ ಆಕೆಗೆ ಸೂಚಿಸಿದ್ದಕ್ಕಾಗಿ ಎಫ್‌ಐಆರ್ ನಲ್ಲಿ ತನ್ನ ಏಜೆನ್ಸಿಯ ಮಾಲೀಕರನ್ನೂ ಮಹಿಳೆ ಎರಡನೇ ಆರೋಪಿಯಾಗಿ ಮಾಡಿದ್ದಾರೆ ಎಂದು ತಿಳಿದುಬಂದಿದೆ. ಮೂಲಗಳ ಪ್ರಕಾರ ದಾಸರಹಳ್ಳಿಯ ನಿವಾಸಿಯಾಗಿರುವ 34 ವರ್ಷದ ಮಹಿಳೆ ವಿಸ್ಡಮ್ ಏಜೆನ್ಸಿಯ ಮಾಜಿ ಉದ್ಯೋಗಿಯಾಗಿದ್ದು, ಇದು ಪರ್ಪಲ್ ಲೈನ್‌ನಲ್ಲಿರುವ ಮೆಟ್ರೋ ನಿಲ್ದಾಣಗಳ ಭದ್ರತಾ ಅಂಶಗಳನ್ನು ನೋಡಿಕೊಳ್ಳುವ ಏಜೆನ್ಸಿಗಳಲ್ಲಿ ಒಂದಾಗಿದೆ. ಮಾರ್ಚ್ 15 ರಂದು ಎಫ್‌ಐಆರ್ ಅನ್ನು ಸೆಕ್ಷನ್ 3540 (ದೈಹಿಕ ಸಂಪರ್ಕವನ್ನು ಒಳಗೊಂಡ ಲೈಂಗಿಕ ಕಿರುಕುಳ, ಲೈಂಗಿಕವಾಗಿ ಬಣ್ಣದ ಟೀಕೆಗಳನ್ನು ಮಾಡುವುದು ಇತ್ಯಾದಿ) ಮತ್ತು 504 (ಉದ್ದೇಶಪೂರ್ವಕವಾಗಿ ಇನ್ನೊಬ್ಬ ವ್ಯಕ್ತಿಯನ್ನು ಅವಮಾನಿಸುವುದು), 506 (ಅಪರಾಧದ ಬೆದರಿಕೆ) 509 (ಪದ ಸನ್ನೆ ಅಥವಾ ನಡತೆಯನ್ನು ಅವಮಾನಿಸುವ ಉದ್ದೇಶದಿಂದ ಮಾಡಿದ ಕ್ರಿಯೆ), ಐಪಿಸಿ ಯ 34ರ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ. 2023ರ ಆಗಸ್ಟ್ 1 ರಿಂದ ಅಕ್ಟೋಬರ್ 31 ರ ನಡುವೆ ಸಂತ್ರಸ್ಥ ಮಹಿಳಾ ಸಿಬ್ಬಂದಿಯೊಂದಿಗೆ ಅನುಚಿತ ವರ್ತನೆ ನಡೆದಿದೆ ಎಂದು ಹೇಳಲಾಗುತ್ತದೆ. ಘಟನೆಯ ಪ್ರತ್ಯಕ್ಷದರ್ಶಿಯಾಗಿ ಮತ್ತೊಬ್ಬ ಮಹಿಳಾ ಭದ್ರತಾ ಸಿಬ್ಬಂದಿಯನ್ನು ಎಫ್‌ಐಆರ್ ನಲ್ಲಿ ಉಲ್ಲೇಖಿಸಲಾಗಿದೆ. ಬಿಎಂಆರ್‌ಸಿಎಲ್ ಸಹಾಯಕ ಭದ್ರತಾ ಅಧಿಕಾರಿ ರಾಜಾಜಿ ನಗರ ಮೆಟ್ರೋ ನಿಲ್ದಾಣದಲ್ಲಿ ತನ್ನನ್ನು ನಿಯೋಜಿಸಿದ್ದಾಗ ಆಕೆಗೆ ಅತ್ಯಂತ ಅವಹೇಳನಕಾರಿ ಪದಗಳು ಮತ್ತು ಲೈಂಗಿಕ ಟೀಕೆಗಳನ್ನು ಮಾಡಲಾಗಿತ್ತು ಎಂದು ದೂರಿನಲ್ಲಿ ಹೇಳಲಾಗಿದೆ. ಅಂತೆಯೇ ಅಧಿಕಾರಿಯು ಆಗಾಗ್ಗೆ ಸಂತ್ರಸ್ಥೆಯ ದೇಹವನ್ನು ಸಾರ್ವಜನಿಕವಾಗಿ ವಿವರಿಸುವ ಮತ್ತು ಅವಳನ್ನು ಅನುಚಿತವಾಗಿ ಸ್ಪರ್ಶಿಸುವ ಬಗ್ಗೆಯೂ ಎಫ್ ಐಆರ್ ನಲ್ಲಿ ಉಲ್ಲೇಖವಾಗಿದೆ. ಪ್ರಕರಣ ಸಂಬಂಧ ಸಂತ್ರಸ್ಥೆ ಆರಂಭದಲ್ಲಿ ತನ್ನ ಏಜೆನ್ಸಿ ಮಾಲೀಕರಿಗೆ ದೂರು ನೀಡಿದ್ದು, ಈ ಬಗ್ಗೆ ಸಂಸ್ಥೆ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಆರೋಪಿಸಿದ್ದಾರೆ. ಅಲ್ಲದೆ ಅಂತಹ ನಡವಳಿಕೆಯೊಂದಿಗೆ ಸಹಕರಿಸಲು ಮತ್ತು ಸಹಿಸಿಕೊಳ್ಳುವಂತೆ ಸಲಹೆ ನೀಡಲಾಯಿತು ಎಂದು ಆರೋಪಿಸಿದ್ದಾರೆ.

# ಹಂಸಲೇಖ ಸೇರಿ ಆರು ಸಂಸ್ಥೆಗಳೊಂದಿಗೆ ಸಂಗೀತ ವಿವಿ ಒಪ್ಪಂದ

**ಮೈಸೂರು:** ಹಲವು ಅಭಿವೃದ್ಧಿ ಕಾರ್ಯಗಳನ್ನು ಹಮ್ಮಿಕೊಂಡಿರುವ ಮೈಸೂರಿನ ಕರ್ನಾಟಕ ರಾಜ್ಯ ಡಾ.ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯವು ತನ್ನ ಶಿಕ್ಷಣವನ್ನು ಮತ್ತಷ್ಟು ವಿಸ್ತರಿಸಿ ಜನರಿಗೆ ತಲುಪುವ ಉದ್ದೇಶದಿಂದ ಆರು ಸಂಸ್ಥೆಗಳೊಂದಿಗೆ ಮಾನ್ಯಕುಲಪತಿಗಳ ಅಧ್ಯಕ್ಷತೆಯಲ್ಲಿ ಒಡಂಬಡಿಕೆ ಮಾಡಿಕೊಂಡಿದೆ.

ಸಂಗೀತ ಮತ್ತು ಪ್ರದರ್ಶಕ ಕಲೆಗಳ ಹಲವು ಪ್ರಕಾರಗಳಲ್ಲಿ ಶಿಕ್ಷಣವನ್ನು ನೀಡುವ ಧ್ಯೇಯದೊಂದಿಗೆ ಇಂತಹದೊಂದು ಹೆಜ್ಜೆಯನ್ನಿಟಿದೆ. ವಿಶೇಷವಾಗಿ ಸಂಗೀತ ನಿರ್ದೇಶಕ ಹಂಸಲೇಖ ಅವರ ದೇಸಿ ವಿದ್ಯಾಸಂಸ್ಥೆಯು ಜಾನಪದ ಐಧನಿ, ಕರ್ನಾಟಕ ಸಂಗೀತ, ಹಿಂದೂಸ್ಥಾನಿ ಸಂಗೀತ, ಚಲನಚಿತ್ರ ಸುಗಮ ಸಂಗೀತ ಸರ್ಟಿಫಿಕೇಟ್ ಕೋರ್ಸ್ಗಳಿಗೆ ಇಂದು ಹಂಸಲೇಖರವರೊಂದಿಗೆ ಒಡಂಬಡಿಕೆ ಮಾಡಿಕೊಂಡಿತು.

ಇವರೊಂದಿಗೆ ಶ್ರೀ ದಕ್ಷ ಅಕಾಡೆಮಿ ಬೆಂಗಳೂರು, ಕೈಲಾಸ ಕಲಾಧರ ಬೆಂಗಳೂರು, ನಟನಂ ಬಾಲ ನಾಟ್ಯ ಕೇಂದ್ರ ಶಿವಮೊಗ್ಗ, ನಾಟ್ಯ ತರಂಗ ಟ್ರಸ್ಟ್ ಸಾಗರ, ಠಾಗೂರ್ ಕಲ್ಚರಲ್ ಅಕಾಡೆಮಿ ಬೆಂಗಳೂರು ಈ ಆರು ಸಂಸ್ಥೆಗಳು ಒಡಂಬಡಿಕೆ ಮಾಡಿಕೊಂಡವು. ಈಗಾಗಲೇ ಮುವತ್ತ ಮೂರು (33) ಸಂಸ್ಥೆಗಳ ಒಡಂಬಡಿಕೆ ಪೂರ್ಣಗೊಂಡದೆ. 2023-24 ನೇ ಶೈಕ್ಷಣಿಕ ಸಾಲಿನಲ್ಲಿ ಒಟ್ಟು 39 ಸಂಸ್ಥೆಗಳು ವಿಶ್ವವಿದ್ಯಾಲಯದೊಂದಿಗೆ ಒಡಂಬಡಿಕೆ ಮಾಡಿಕೊಂಡಿರುತ್ತಾರೆ. ಇದರಿಂದಾಗಿ ವಿಶ್ವವಿದ್ಯಾಲಯವು ರಾಜ್ಯಾದ್ಯಂತ ತನ್ನ ಕೇಂದ್ರಗಳನ್ನು ಸ್ಥಾಪಿಸಿ ಸಂಗೀತಾಧಿ ಪ್ರದರ್ಶನ ಕಲೆಗಳ ಶಿಕ್ಷಣ ನೀಡುವ ಮಹತ್ತರವಾದ ಹೆಜ್ಜೆ ಇಟ್ಟಂತಾಗಿದೆ ಎಂಬುದು ಕುಲಪತಿಗಳ ಮಾತಾಗಿದೆ.



# ಜಲ ಮಂಡಳಿ ವಿಧಿಸಿದ ನಿಯಮ ಗಾಳಿಗೆ ತೂರಿದ ಬಿಬಿಎಂಪಿ

**ಬೆಂಗಳೂರು:** ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ವಿಧಿಸಿದ ನಿಯಮಗಳನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಅಧಿಕಾರಿಗಳು ಮುರಿದ್ದಾರೆ. ಈ ಮೂಲಕ ಬಿಬಿಎಂಪಿ ಒಂದು ನಿಯಮ, ಜನ ಸಾಮಾನ್ಯರಿಗೆ ಒಂದು ನಿಯಮಾನೇ ಎಂದು ಸಾರ್ವಜನಿಕರು ಪ್ರಶ್ನಿಸಿದ್ದಾರೆ. ಹೌದು ವಾಹನಗಳನ್ನು ತೊಳೆಯಲು, ಗಾರ್ಡನ್ ಅಥವಾ ಶೌಚಾಲಯ ಸ್ವಚ್ಛಗೊಳಿಸಲು ಮತ್ತು ಈಜು ಕೊಳಗಳಿಗೆ ಕಾವೇರಿ ನೀರು, ಬೋರ್‌ವೆಲ್ ನೀರು ನೀರು ಬಳಕೆ ಮಾಡದಂತೆ ಜಲಮಂಡಳಿ ಆದೇಶ ಹೊರಡಿಸಿತ್ತು. ಆದರೆ ಬಿಬಿಎಂಪಿ ಅಧಿಕಾರಿಗಳ ವಾಹನಗಳನ್ನು ತೊಳೆಯಲು ಬೋರ್‌ವೆಲ್ ನೀರು ಬಳಸಲಾಗಿದೆ.

ಅಧಿಕಾರಿಗಳ ವಾಹನ ತೊಳೆಯುತ್ತಿದ್ದ ಗಾರ್ಡನ್ ಕೆಲಸ ಮಾಡುವ ಸಿಬ್ಬಂದಿಯನ್ನು, ವಾಹನ ತೊಳೆಯಲು ಯಾವ ನೀರು ಬಳಕೆ ಮಾಡುತ್ತಿದ್ದೀರಿ ಎಂದು ನಮ್ಮ ಟಿವಿ9 ಪ್ರತಿನಿಧಿ ಪ್ರಶ್ನಿಸಿದಾಗ ''ಬೋರ್‌ವೆಲ್ ನೀರಿನಿಂದ ಅಧಿಕಾರಿಗಳ ಕಾರು ತೊಳೆಯುತ್ತಿದ್ದೇನೆ'' ಎಂದಿದ್ದಾರೆ. ಈ ಮೂಲಕ ಮಹಾನಗರ ಪಾಲಿಕೆ ಜಲ ಮಂಡಳಿ ವಿಧಿಸಿದ ನಿಯಮವನ್ನು ಗಾಳಿಗೆ ತೂರಿದೆ.

ಜಲ ಮಂಡಳಿ ವಿಧಿಸಿರುವ ನಿಯಮವೇನು?

ರಾಜ್ಯ ರಾಜಧಾನಿ ಬೆಂಗಳೂರಿನಲ್ಲಿ ಜಲಕ್ಷಾಮ ಆವರಿಸಿದೆ. ಹನಿ ಹನಿ ನೀರು ಅಮೂಲ್ಯವಾಗಿದೆ. ಕುಡಿಯುವ ನೀರಿಗಾಗಿ ಪರದಾಡುವಂತಾಗಿದೆ. ಹೀಗಾಗಿ ಸಾರ್ವಜನಿಕ ಹಿತದೃಷ್ಟಿಯಿಂದ ಈಜು ಕೊಳಕ್ಕೆ, ವಾಹನ ತೊಳೆಯಲು, ತೋಟಗಾರಿಕೆ, ನಿರ್ಮಾಣ ಮತ್ತು ನೀರಿನ ಕಾರಂಜಿಗಳಂತಹ ಮನರಂಜನಾ ಉದ್ದೇಶಗಳಿಗಾಗಿ ಕಾವೇರಿ ಮತ್ತು ಬೋರ್‌ವೆಲ್ ನೀರನ್ನು ಬಳಸುವುದನ್ನು ನಿಷೇಧಿಸಿ ಜಲಮಂಡಳಿ ಆದೇಶಿಸಿದೆ. ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ



ಕಾಯ್ದೆ-1964ರ ಕಲಂ 33 ಮತ್ತು 34 ರ ಅನುಸಾರ ನಿಷೇಧಿಸಲಾಗಿದ್ದು, ಆದೇಶವನ್ನು ಉಲ್ಲಂಘನೆ ಮಾಡಿದಲ್ಲಿ ದಂಡ ವಿಧಿಸುವುದರ ಜೊತೆಹೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗುತ್ತದೆ ಎಂದು ಹೇಳಿದೆ.

ಆದೇಶವನ್ನು ಯಾರಾದರು ಉಲ್ಲಂಘನೆ ಮಾಡುವುದು ಕಂಡುಬಂದಲ್ಲಿ ಕೂಡಲೇ ಮಂಡಳಿಯ ಕಾಲ್ ಸೆಂಟರ್ ಸಂಖ್ಯೆ 1916 ಗೆ ತಿಳಿಸುವಂತೆ ಮನವಿ ಮಾಡಲಾಗಿದೆ. ತಪ್ಪಿತಸ್ಥರಿಗೆ 1964 ರ ಕಾಯ್ದೆ ಕಲಂ 109 ರಂತೆ 5000 ರೂಪಾಯಿ ದಂಡ ವಿಧಿಸಲಾಗುತ್ತದೆ. ಆದೇಶ ಉಲ್ಲಂಘನೆ ಮರುಕಳಿಸಿದಲ್ಲಿ ದಂಡ ಮೊತ್ತ ಐದು ಸಾವಿರದ ಜೊತೆಗೆ ಹೆಚ್ಚುವರಿಯಾಗಿ 500 ರೂಪಾಯಿ (ಪ್ರತಿ ದಿನಕ್ಕೆ) ಪಾವತಿಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದೆ.

# ದುರ್ಬಲ ಮುಖ್ಯಮಂತ್ರಿ ಹೇಳಿಕೆ ಮುಂದುವರೆದರೆ ಪ್ರತಿಭಟನೆ ಎಚ್ಚರಿಕೆ

**ಮೈಸೂರು:** ವಿರೋಧ ಪಕ್ಷದ ನಾಯಕ ಅಶೋಕ್ ಹಾಗೂ ಮಾಜಿ ಸಚಿವ ಅಶ್ವತ್ಥ ನಾರಾಯಣ್ ಅವರು ಪದೇ ಪದೇ ಸಿಎಂ ಸಿದ್ದರಾಮಯ್ಯ ಅವರು ದುರ್ಬಲ ಮುಖ್ಯಮಂತ್ರಿ ಎಂದು ಟೀಕಿಸುತ್ತಿದ್ದಾರೆ. ಇದನ್ನು ಮುಂದುವರಿಸಿದಲ್ಲಿ ಈ ಇಬ್ಬರು ನಗರಕ್ಕೆ ಭೇಟಿ ನೀಡಿದ ವೇಳೆ ಪ್ರತಿಭಟನೆ ನಡೆಸಬೇಕಾಗುತ್ತದೆ ಎಂದು ಮಾಜಿ ಶಾಸಕ ಎಂ.ಕೆ. ಸೋಮಶೇಖರ್ ಎಚ್ಚರಿಸಿದರು.

ನಗರದ ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಸಿದ್ದರಾಮಯ್ಯ ಅವರು ಪ್ರಬಲ ರಾಜಕೀಯ ನಾಯಕರಾಗಿದ್ದಾರೆ. ಈ ರೀತಿ ಇಲ್ಲದೇ ಹೋಗಿದ್ದಲ್ಲಿ ಕಳೆದ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ 136 ಸ್ಥಾನ ದೊರಕಿಸಿಕೊಡಲು ಸಾಧ್ಯವಾಗುತ್ತಿತ್ತೆ ಎಂದು ಪ್ರಶ್ನಿಸಿದರು.

ಜೊತೆಗೆ, ಚುನಾವಣೆಗೂ ಮೊದಲು ಕಾಂಗ್ರೆಸ್ ಪಕ್ಷ ನೀಡಿದ್ದ ಗ್ಯಾರಂಟಿ ಜಾರಿ ಭರವಸೆಯನ್ನು ಬಿಜೆಪಿ ಹಾಗೂ ಅದರ ಮುಖಂಡರು ಟೀಕಿಸಿದ್ದರು. ಇದರ ಜಾರಿ ಸಾಧ್ಯವಿಲ್ಲ ಎಂದಿದ್ದರು. ಆದರೆ ಅಧಿಕಾರಕ್ಕೆ ಬಂದ ಕೂಡಲೇ ಸಿದ್ದರಾಮಯ್ಯ ಅವರು ಅವನ್ನು ಜಾರಿಗೊಳಿಸಿದ್ದಾರೆ.



ಗ್ಯಾರಂಟಿಗಳಿಂದಾಗಿ ರಾಜ್ಯ ದಿವಾಳಿಯಾಗುತ್ತದೆ ಎಂಬ ಟೀಕೆಗೆ ಪ್ರತಿಯಾಗಿ ಈ ಬಾರಿ ಇಡೀ ದೇಶವೇ ಮೆಚ್ಚುವಂತಹ ಬಜೆಟ್ ಮಂಡಿಸಿದ್ದಾರೆ ಎಂದು ಶ್ಲಾಘಿಸಿದರು.

ಬಳಿಕ, ಕೆಪಿಸಿಸಿ ವಕ್ತಾರ ಎಚ್.ಎ. ವೆಂಕಟೇಶ್ ಮಾತನಾಡಿ, ಸಿದ್ದರಾಮಯ್ಯ ಅವರು ಬಲಿಷ್ಠರಾಗಿರುವ ಕಾರಣದಿಂದಲೇ ಕಳೆದ ಚುನಾವಣೆಯಲ್ಲಿ ಬಿಜೆಪಿಯನ್ನು ಸೋಲಿಸಿದ್ದಾರೆ. ಕೇವಲ ಭ್ರಮೆ ಸೃಷ್ಟಿಸಲೆಂದಷ್ಟೇ ಬಿಜೆಪಿಯವರು ನಾಲ್ಕು ಜನರನ್ನು ನಿಲ್ಲಿಸಿ ಮೋದಿ ಮೋದಿ ಎಂದು ಕೂಗಿಸುತ್ತಿದ್ದಾರೆಂದು ಲೇವಡಿ ಮಾಡಿದರು.

ಶ್ರೀಧರ್, ಜಿ. ಸೋಮಶೇಖರ್ ಹಾಗೂ ಇನ್ನಿತರರು ಇದ್ದರು.

# ಕ್ಷಯರೋಗ ನಿರ್ಮೂಲನಾ ಧ್ಯೇಯ ಸಾಕಾರಕ್ಕೆ ಮನವಿ

**ಚಾಮರಾಜನಗರ:** ವಿಶ್ವ ಕ್ಷಯರೋಗ ದಿನವನ್ನು ಮಾರ್ಚ್ 24ರಂದು ಆಚರಿಸಲಾಗುತ್ತಾ ಬರಲಾಗುತ್ತಿದ್ದು, 2024ರ ಘೋಷವಾಕ್ಯ 'ಹೌದು ! ನಾವು ಕ್ಷಯರೋಗವನ್ನು ಕೊನೆಗೊಳಿಸಬಹುದು' ಎಂಬುದಾಗಿದೆ.

ಕ್ಷಯರೋಗ ಅಥವಾ ಟಿಬಿ ಒಂದು ಸಾಂಕ್ರಾಮಿಕ ಕಾಯಿಲೆ. ಮುಖ್ಯವಾಗಿ ಕ್ಷಯರೋಗ ಶ್ವಾಸಕೋಶಗಳಿಗೆ ಆವರಿಸುವುದರಿಂದ ಕೆಮ್ಮು, ಜ್ವರ, ನಿಶಕ್ತಿ ಉಂಟಾಗಿ ಹಸಿವು ಹಾಗೂ ತೂಕ ಕಡಿಮೆಯಾಗುತ್ತದೆ. ಕಫದಲ್ಲಿ ರಕ್ತ ಕಾಣಿಸಿಕೊಳ್ಳುವುದು, ಎದೆ ನೋವು, ರಾತ್ರಿ ಬೆವರುವುದು ರೋಗದ ಸಾಮಾನ್ಯ ಲಕ್ಷಣವಾಗಿದೆ. ಎರಡು ವಾರಗಳ ಕಾಲ ಈ ಲಕ್ಷಣಗಳಿರುವವರು ವೈದ್ಯರಿಂದ ತಪಾಸಣೆಗೆ ಒಳಪಟ್ಟು ವರ ಸಲಹೆಯಂತೆ ಕಫ, ಎಕ್ಸ್‌ರೇ ಪರೀಕ್ಷೆ ಮಾಡಿಸಬೇಕಾಗುತ್ತದೆ. ಕ್ಷಯರೋಗವು ದೇಹದ ಇತರ ಭಾಗಗಳಲ್ಲಿಯೂ ಕಾಣಿಸಿಕೊಳ್ಳಬಹುದು. ಕ್ಷಯರೋಗವನ್ನು ಶೀಘ್ರ ಪತ್ತೆ ಮಾಡುವುದರಿಂದ ಮತ್ತು ಸಂಪೂರ್ಣ ಚಿಕಿತ್ಸೆಯನ್ನು ಪಡೆಯುವುದರಿಂದ ಪೂರ್ಣವಾಗಿ ಗುಣ ಪಡಿಸಿಕೊಳ್ಳಬಹುದು.

ಆರೋಗ್ಯ ಇಲಾಖೆಯ ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಕ್ಷಯರೋಗಕ್ಕೆ ಪರೀಕ್ಷೆ ಮತ್ತು ಚಿಕಿತ್ಸೆ ಉಚಿತವಾಗಿ ಲಭ್ಯವಿದೆ. ಖಾಸಗಿ ಆಸ್ಪತ್ರೆಗಳಲ್ಲಿಯೂ ಕ್ಷಯರೋಗ ಪತ್ತೆಯಾದರು ಸಹ ಉಚಿತವಾಗಿ ಎಲ್ಲಾ ಸೌಲಭ್ಯಗಳು ದೊರೆಯಲಿವೆ. ಚಾಮರಾಜನಗರ ಜಿಲ್ಲೆಯ ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರ, ಸಮುದಾಯ ಆರೋಗ್ಯ ಕೇಂದ್ರ, ಸಾರ್ವಜನಿಕ ಆಸ್ಪತ್ರೆ, ಜಿಲ್ಲಾ ಆಸ್ಪತ್ರೆಗಳಲ್ಲಿ ಸೂಕ್ಷ್ಮದರ್ಶಕ ಯಂತ್ರ, ಇನ್ನಿತರ ಅತ್ಯಾಧುನಿಕ ಯಂತ್ರಗಳ ಮೂಲಕ ಉಚಿತವಾಗಿ ಕಫ ಪರೀಕ್ಷೆ ಮಾಡಲಾಗುತ್ತಿದೆ. ಕ್ಷಯರೋಗಿಗಳು ಅವರು ವಾಸವಾಗಿರುವ ಸ್ಥಳದಲ್ಲೇ ಕಮ್ಯೂನಿಟಿ ವಾಲಂಟಿಯರ್ಸ್ ಮುಖಾಂತರ ಉಚಿತವಾಗಿ ಚಿಕಿತ್ಸೆಯನ್ನು ಚಿಕಿತ್ಸೆ ನೀಡಲಾಗುತ್ತಿದೆ. ಪ್ರತಿ ವರ್ಷ ವಿಶ್ವದಲ್ಲಿ ಪತ್ತೆಯಾಗುವ ಕ್ಷಯರೋಗಿಗಳಲ್ಲಿ ಶೇ. 27ರಷ್ಟು ಮಾತ್ರ ನಮ್ಮ ದೇಶದಲ್ಲಿ ಕಂಡುಬರುತ್ತಿದೆ. ರಾಷ್ಟ್ರೀಯ ಕ್ಷಯರೋಗ ನಿರ್ಮೂಲನಾ ಕಾರ್ಯಕ್ರಮ (ಓಚಿಣಂಟಿಚಿಟ ಖಿಃ ಇಟಟಟಿಚಿಣಂಟಿ ಕಡಿಂರಡಿಚಿಟ) ಅಡಿಯಲ್ಲಿ ದೇಶದಲ್ಲಿ ಪ್ರತಿ ವರ್ಷ ಅಂದಾಜು 28 ಲಕ್ಷ ಮಂದಿ ಟಿಬಿ ಕಾಯಿಲೆಗೆ ಒಳಗಾದವರನ್ನು ಪತ್ತೆ ಹಚ್ಚಲಾಗುತ್ತದೆ. ಸುಮಾರು 3.4 ಲಕ್ಷ ಮಂದಿ ಕ್ಷಯರೋಗದಿಂದ ಮರಣ ಹೊಂದುತ್ತಿರುವ ಬಗ್ಗೆ ವರದಿಯಾಗಿದೆ.

ಕರ್ನಾಟಕದಲ್ಲಿ 2023ರಲ್ಲಿ 81.732 ಕ್ಷಯ ರೋಗಿಗಳು ಪತ್ತೆಯಾಗಿದ್ದು, ಚಾಮರಾಜನಗರ ಜಿಲ್ಲೆಯಲ್ಲಿ 2023ರಲ್ಲಿ 1.289 ಕ್ಷಯ ರೋಗವುಳ್ಳವರು ಪತ್ತೆಯಾಗಿದ್ದಾರೆ. ಇವರಲ್ಲಿ 58 ಮಂದಿಗೆ ಔಷಧ ನಿರೋಧಕ ಕ್ಷಯ (ಡಿಆರ್‌ಟಿಬಿ) ವಾಗಿದ್ದು, ಈ ಎಲ್ಲರಿರೂ ಉಚಿತ ಚಿಕಿತ್ಸೆ, ಅನುಸರಣೆ, ಆಪ್ತ ಸಮಾಲೋಚನೆ, ಸಲಹೆ, ಬೆಂಬಲವನ್ನು ಆರೋಗ್ಯ ಇಲಾಖೆ ವತಿಯಿಂದ ನೀಡಲಾಗುತ್ತಿದೆ.

ಕ್ಷಯರೋಗ ನಿರ್ಮೂಲನೆಯಲ್ಲಿ ಸಮಾಜದ ಎಲ್ಲರು ಕೈಜೋಡಿಸಬೇಕಿದೆ. ಈ ನಿಟ್ಟಿಯಲ್ಲಿ ಜಿಲ್ಲೆಯ ಟಿ.ಬಿ. ಫೋರಮ್ ರಚಿಸಲಾಗಿದ್ದು, ಜಿಲ್ಲಾಧಿಕಾರಿಗಳು ಇದರ ಅಧ್ಯಕ್ಷರಾಗಿದ್ದಾರೆ. ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಸಹ-ಅಧ್ಯಕ್ಷರಾಗಿರುತ್ತಾರೆ. ಪ್ರತಿ ಮೂರು ತಿಂಗಳಿಗೊಮ್ಮೆ ಟಿ.ಬಿ. ಫೋರಮ್ ಸಭೆ ನಡೆಸಲಾಗುತ್ತದೆ.

ಟಿ.ಬಿ. ಫೋರಮ್ ಸಭೆಯಲ್ಲಿ ಜಿಲ್ಲಾ ಆರೋಗ್ಯಾಧಿಕಾರಿ, ಜಿಲ್ಲಾ ಕ್ಷಯರೋಗ ನಿರ್ಮೂಲನಾ ಅಧಿಕಾರಿಗಳನ್ನು ಒಳಗೊಂಡಂತೆ ಆರೋಗ್ಯ ಇಲಾಖೆಯ ಅಧಿಕಾರಿಗಳು, ಸಿಮ್ಸ್‌ನ ಡೀನ್, ಜಿಲ್ಲಾ ಸರ್ಜನ್, ಮೆಡಿಕಲ್ ಕಾಲೇಜಿನ ತಜ್ಞವೈದ್ಯರು, ಎನ್.ಟಿ.ಇ.ಪಿ ಸಿಬ್ಬಂದಿ, ಜಿಲ್ಲೆಯ ಇತರ ಇಲಾಖೆಯ ಅಧಿಕಾರಿಗಳು, ಖಾಸಗಿ ಆಸ್ಪತ್ರೆಯ ವೈದ್ಯರು, ಎನ್‌ಜಿಒಗಳು, ಎಲ್ಲರೂ ಭಾಗವಹಿಸಿ ಕ್ಷಯರೋಗ ನಿರ್ಮೂಲನಾ ಕಾರ್ಯಕ್ರಮದ ಬಗ್ಗೆ ಚರ್ಚಿಸಿ ರೋಗದ ನಿರ್ಮೂಲನೆಗೆ ಕ್ರಮ ವಹಿಸಲಾಗುತ್ತದೆ.

ಸೆಂಟ್ರಲ್ ಟಿ.ಬಿ. ಡಿವಿಜನ್ ವತಿಯಿಂದ 2023 ರಿಂದ ಪ್ರತಿ ಗ್ರಾಮ ಪಂಚಾಯತಿಗಳಲ್ಲಿ ಕ್ಷಯರೋಗಿಗಳ ಅಂಕಿಅಂಶ ಹಾಗೂ ಚಿಕಿತ್ಸೆ ಪೂರ್ಣಗೊಂಡಿರುವುದು ಮತ್ತು ಸಮುದಾಯದ ಬೆಂಬಲಗಳನ್ನು ಆಧರಿಸಿ 'ಕ್ಷಯ ಮುಕ್ತ ಗ್ರಾಮ ಪಂಚಾಯಿತಿ'ಗಳೆಂದು ಘೋಷಿಸುವ ಪ್ರಕ್ರಿಯೆಯನ್ನು ನಡೆಸಲಾಗುತ್ತಿದೆ.

ಈ ಪ್ರಕ್ರಿಯೆಗೆ ನಮ್ಮ ಜಿಲ್ಲೆಯಲ್ಲಿ 130 ಗ್ರಾಮಪಂಚಾಯಿತಿಗಳನ್ನು ಪರಿಶೀಲಿಸಿದ್ದು, 2023ರ ವಾರ್ಷಿಕಕ್ಕೆ 13 ಗ್ರಾಮ ಪಂಚಾಯಿತಿಗಳನ್ನು ಕ್ಷಯಮುಕ್ತ ಗ್ರಾಮ ಪಂಚಾಯಿತಿಗಳೆಂದು ಘೋಷಿಸಲು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ತೀರ್ಮಾನಿಸಲಾಗಿದೆ. ಸಮುದಾಯ ಬೆಂಬಲದ ಅಡಿಯಲ್ಲಿ ಯಾವುದೇ ಸಂಸ್ಥೆ ಅಥವಾ ವ್ಯಕ್ತಿಗಳು ನಿ-ಕ್ಷಯ್ ಮಿತ್ರ ಎಂದು ನೊಂದಣಿಸಿಕೊಂಡು ಕ್ಷಯರೋಗಿಗಳಿಗೆ ಪೌಷ್ಠಿಕ ಆಹಾರದ ಬೆಂಬಲವನ್ನು ನೀಡಲು ಅವಕಾಶವಿದೆ.

ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯ ಜಿಲ್ಲಾ ಖನಿಜ ಪ್ರತಿಷ್ಠಾನ ನಿಧಿ ವತಿಯಿಂದ ಎನ್.ಟಿ.ಇ.ಪಿ ಕಾರ್ಯಕ್ರಮದಲ್ಲಿ ಕ್ಷಯರೋಗ ಪತ್ತೆ ಹಚ್ಚಲು ಹೆಚ್ಚಿನ ಅನುಕೂಲವಾಗುವಂತೆ ಚಾಮರಾಜನಗರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗೆ ಸಿಬಿಎನ್ ಎಎಟಿ ಯಂತ್ರ ಹಾಗೂ ಯಳಂದೂರು ತಾಲ್ಲೂಕು ಆಸ್ಪತ್ರೆಗೆ ಟ್ರೂನಾಟ್ ಯಂತ್ರ ಮತ್ತು ಜಿಲ್ಲಾ ಕ್ಷಯರೋಗ ಕೇಂದ್ರಕ್ಕೆ ಹ್ಯಾಂಡ್ ಹೆಲ್ಡ್ ಎಕ್ಸರೇ ಯಂತ್ರವನ್ನು ಒದಗಿಸಲಾಗಿದೆ.

ಈ ವರ್ಷದ ಕ್ಷಯರೋಗ ದಿನಾಚರಣೆಯ ಘೋಷವಾಕ್ಯವಾದ 'ಹೌದು ! ನಾವು ಕ್ಷಯರೋಗವನ್ನು ಕೊನೆಗೊಳಿಸಬಹುದು' ಎಂಬ ಧ್ಯೇಯವನ್ನು ಸಾಕಾರಗೊಳಿಸಬೇಕಿದೆ. ಕ್ಷಯರೋಗದ ಬಗ್ಗೆ ಇರುವ ಭಯ, ತಪ್ಪು ತಿಳಿವಳಿಕೆ, ಗೊಂದಲ, ಕಳಂಕ, ತಾರತಮ್ಯ ಹೋಗಲಾಡಿಸಿ ಜಿಲ್ಲೆಯನ್ನು ಕ್ಷಯ ಮುಕ್ತಗೊಳಿಸುವ ದಿಸೆಯಲ್ಲಿ ಮುಂದಾಗಬೇಕಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್. ಚಿದಂಬರ ಹಾಗೂ ಜಿಲ್ಲಾ ಕ್ಷಯರೋಗ ನಿರ್ಮೂಲನಾ ಅಧಿಕಾರಿ ಡಾ. ಎಂ.ಎಸ್. ರವಿಕುಮಾರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಹದೇವಯ್ಯ ಚಾ.ನಗರದ ಬಿಎಸ್ಪಿ ಅಭ್ಯರ್ಥಿ

**ಮೈಸೂರು:** ಚಾಮರಾಜನಗರ ಲೋಕಸಭಾ ಕ್ಷೇತ್ರದಲ್ಲಿ ಬಹುಜನ ಸಮಾಜ ಪಕ್ಷದಿಂದ ನಿವೃತ್ತ ಕೆಎಎಸ್ ಅಧಿಕಾರಿ ಸಿ.ಮಹದೇವಯ್ಯ ಅವರನ್ನು ಕಣಕ್ಕಿಳಿಸಲಿದೆ ಎಂದು ಪಕ್ಷದ ಜಿಲ್ಲಾಧ್ಯಕ್ಷರಾದ ಪುಟ್ಟಸ್ವಾಮಿ ತಿಳಿಸಿದರು. ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಹದೇವಯ್ಯ ಅವರು ಸರ್ಕಾರಿ ಸೇವೆಯಲ್ಲಿದ್ದ ವೇಳೆ ಉತ್ತಮ ಕೆಲಸ ಮಾಡಿದ್ದಾರೆ. ಜೊತೆಗೆ ಜನಾನುರಾಗಿಯೂ ಆಗಿರುವ ಕಾರಣ ಪಕ್ಷ ಅವರನ್ನು ಅಭ್ಯರ್ಥಿಯನ್ನಾಗಿ ಆಯ್ಕೆ ಮಾಡಿದೆ. ಮಾ.27 ರಂದು ಬೆಳಗ್ಗೆ 11ಗಂಟೆಗೆ ಚಾಮರಾಜನಗರದ ವರ್ತಕರ ಭವನದಲ್ಲಿ ಈ ಭಾಗದ ಕಾರ್ಯಕರ್ತರು, ಮುಖಂಡರ ಸಮಾವೇಶ ಆಯೋಜಿಸಿದೆ. ಇದರಲ್ಲಿ ಪಕ್ಷದ ರಾಜ್ಯ ಸಂಯೋಜಕರು ಸಹಾ ಪಾಲ್ಗೊಳ್ಳಲಿದ್ದಾರೆ ಎಂದರು. ನಂತರ ಅಭ್ಯರ್ಥಿ ಸಿ.ಮಹದೇವಯ್ಯ ಮಾತನಾಡಿ, ಬಿಎಸ್‌ಪಿ ಪಕ್ಷವು ಸಂವಿಧಾನ ರಕ್ಷಣೆ ವಿಷಯದಲ್ಲಿ ಸಾಕಷ್ಟು ಹೋರಾಟ ಮಾಡಿದೆ. ಕೆಲವರು ಮನುವಾದಕ್ಕೆ ಒಪ್ಪಿ ಇತರೆ ಪಕ್ಷಕ್ಕೆ ಹೋದರೂ ತಮ್ಮ ಪಕ್ಷಕ್ಕೆ ಹಿನ್ನಡೆಯಾಗಿಲ್ಲ. ಚಾಮರಾಜನಗರ ಜನ ಈ ಬಾರಿ ಚುನಾವಣೆಯಲ್ಲಿ ಅಭಿವೃದ್ಧಿ ಕಾರ್ಯ ಮಾಡಲು ಅವಕಾಶ ಕಲ್ಪಸಿಕೊಡುವಂತೆ ಮನವಿ ಮಾಡಿದರು. ಸುದ್ದಿಗೋಷ್ಠಿಯಲ್ಲಿ ಬಸವಣ್ಣ, ಬಿ.ಚಂದ್ರಶೇಖರ್, ಬಿ.ಮಹದೇವಸ್ವಾಮಿ, ಪುಟ್ಟರಾಜು ಉಪಸ್ಥಿತರಿದ್ದರು.

## ಬಿಜೆಪಿ ಬಿಟ್ಟು ಕಾಂಗ್ರೆಸ್ ಸೇರುವ ಪ್ರಶ್ನೆಯೇ ಇಲ್ಲ: ಎಂ.ರಾಮಚಂದ್ರ ಸ್ಪಷ್ಟನೆ

**ಚಾಮರಾಜನಗರ:** ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಯ ನಾಯಕ ಜನಾಂಗದ ಬಿಜೆಪಿಯ ಕೆಲವು ಮುಖಂಡರು ಕಾಂಗ್ರೆಸ್ ಸೇರಲಿದ್ದಾರೆ ಎಂದು ಕೆಲ್ಲಂ ಸೋಮನಾಯಕ ಮಾಡಿರುವ ಆರೋಪದಲ್ಲಿ ಯಾವುದೇ ಸತ್ಯಾಂಶ ಇಲ್ಲ. ನಾವು ಬಿಜೆಪಿ ಬಿಟ್ಟು ಕಾಂಗ್ರೆಸ್‌ಗೆ ಹೋಗುವ ಪ್ರಶ್ನೆಯೇ ಇಲ್ಲ ಎಂದು ಕೇಂದ್ರ ಪರಿಹಾರ ಸಮಿತಿ ಮಾಜಿ ಅಧ್ಯಕ್ಷ ಎಂ.ರಾಮಚಂದ್ರ ಸ್ಪಷ್ಟಪಡಿಸಿದರು. ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿ, ನಾವಾಗಲಿ ಅಥವಾ ಮಲ್ಲೇಶ್, ಮೈಸೂರಿನ ಮಾಜಿ ವಿಧಾನ ಪರಿಷತ್ ಸದಸ್ಯ ಸಿದ್ದರಾಜು, ಮಾಜಿ ಮೇಯರ್ ಶಿವಕುಮಾರ್, ಅಪ್ಪಣ್ಣ ಎಲ್ಲೂ ಸಭೆ ನಡೆಸಿ ಕಾಂಗ್ರೆಸ್ ಸೇರುವುದಾಗಿ ಹೇಳಿಲ್ಲ ಕೆಲ್ಲಂಬಳ್ಳಿಸೋಮನಾಯಕರು ತಮ್ಮಗಳ ವಿರುದ್ಧ ಸುಳ್ಳು ಆರೋಪ ಮಾಡುವ ಮೂಲಕ ಸಮುದಾಯವನ್ನು ದಿಕ್ಕು ತಪ್ಪಿಸುವ ಕೆಲಸ ಮಾಡಿದ್ದಾರೆ. ತಮಗಳ ವಿರುದ್ಧ ಸುಳ್ಳು ಆರೋಪ ಮಾಡಿದರೆ ಅವರಿಗೆ ಲಾಭವಾಗುತ್ತೆ ಎಂದರೆ ಮಾಡಿಕೊಳ್ಳಲಿ. ಅವರು ನಾಯಕ ಜನಾಂಗ ಮತ್ತು ಬಿಜೆಪಿ ಪಕ್ಷವನ್ನು ಗುತ್ತಿಗೆ ಪಡೆದುಕೊಂಡಿಲ್ಲ ಎಂದರು. ನನಗೆ ಬಿಜೆಪಿ ಅನೇಕ ಹುದ್ದೆಗಳನ್ನು ನೀಡಿದೆ. ಕೇಂದ್ರ ಪರಿಹಾರ ಸಮಿತಿ ಅಧ್ಯಕ್ಷರಾಗಿ ನೇಮಕ ಮಾಡಿತು. ಸಮುದಾಯಕ್ಕೂ ಅನೇಕ ಕೊಡುಗೆಗಳನ್ನು ನೀಡಿದೆ ಬಿಜೆಪಿಯ ಉಪ್ಪಿನ ಋಣ ಸಮುದಾಯದ ಮೇಲಿದೆ.ಯಾವುದೇ ಕಾರಣಕ್ಕೂ ಬಿಜೆಪಿ ಬಿಟ್ಟು ಕಾಂಗ್ರೆಸ್ ಸೇರುವ ಪ್ರಶ್ನೆಯೇ ಇಲ್ಲ ಎಂದರು. ಗುಂಡ್ಲುಪೇಟೆ ಮಲ್ಲೇಶ್ ಮಾತನಾಡಿದರು. ಪತ್ರಿಕಾಗೋಷ್ಠಿಯಲ್ಲಿ ನಗರಸಭಾ ಸದಸ್ಯ, ರಾಮಸಮುದ್ರ, ಕಪಿನಿನಾಯಕ ಹಾಜರಿದ್ದರು.



## ಕೊಟ್ಟಿಗೆಗೆ ನುಗ್ಗಿ ಕರುವನ್ನು ಕೊಂದ ಚಿರತೆ

**ಧಾರವಾಡ:** ತಾಲ್ಲೂಕಿನ ಮನಸೂರಿನ ಕರಿಯಮ್ಮ ಗುಡಿ ಸಮೀಪದ ಕೊಟ್ಟಿಗೆಗೆ ಚಿರತೆ ನುಗ್ಗಿ ಹಸು?ವಿನ ಕರುವನ್ನು ಕೊಂದಿದೆ. ಇದು ಗ್ರಾಮಸ್ಥರಲ್ಲಿ ಆತಂಕ ಮೂಡಿದೆ. ಬುಧವಾರ ಕರ್ನಾಟಕ ವಿಶ್ವವಿದ್ಯಾಲಯ ಪಕ್ಕದ ಶಾಂಭವಿ ನಗರದಲ್ಲಿ ಸ್ಥಳೀಯರೊಬ್ಬರಿಗೆ ಬುಧವಾರ ಬೆಳಿಗ್ಗೆ ಚಿರತೆ ಕಾಣಿಸಿಕೊಂಡಿದ್ದು, ಹಾಸ್ಟೆಲ್ ನಲ್ಲಿ ವಾಸಿಸುವ ವಿದ್ಯಾರ್ಥಿಗಳು ಭಯದ ಆತಂಕದಲ್ಲಿ ಕಾಲ ಕಳೆಯುವಂತಾಗಿದೆ. ವಿಶ್ವವಿದ್ಯಾನಿಲಯದ ಪಕ್ಕದ ಪ್ರದೇಶದಲ್ಲಿ ಚಿರತೆ ಕಾಣಿಸಿಕೊಂಡಿದೆ ಎಂಬ ದೂರು ಕೇಳಿ ಬಂದ ಹಿನ್ನೆಲೆಯಲ್ಲಿ ಅರಣ್ಯಾಧಿಕಾರಿಗಳು ಸ್ಥಳಕ್ಕಾಗಮಿಸಿ ಪರಿಶೀಲನೆ ನಡೆಸಿದರು. ಆದರೆ ಅವರಿಗೆ ಚಿರತೆ ಚಲನವಲನ ಕಂಡಿಲ್ಲ.

## ವೃತ್ತಿಯಲ್ಲಿ ದಕ್ಷತೆ ತೋರುವ ನೌಕರರು ಕಡಿಮೆಯಾಗುತ್ತಿದ್ದಾರೆ

**ಮೈಸೂರು:** ಪ್ರಸ್ತುತ ವೃತ್ತಿಯಲ್ಲಿ ದಕ್ಷತೆ ತೋರುವ ನೌಕರರು ಕಡಿಮೆಯಾಗುತ್ತಿದ್ದಾರೆ ಎಂದು ರ್ನಾಟಕ ವಸತಿ ಶಿಕ್ಷಣ ಶಾಲೆಗಳ ಸಂಘದ ಸಲಹೆಗಾರ, ಪ್ರಗತಿಪರ ಚಿಂತಕ ಡಾ.ಎಸ್. ತುಕಾರಾಂ ವಿಷಾದಿಸಿದರು.

ಕಲ್ಪತರು ಚಾರಿಟಬಲ್ ಟ್ರಸ್ಟ್ ವತಿಯಿಂದ ಕೃಷ್ಣಮೂರ್ತಿಪುರಂನ ಹೋಟೆಲ್ ಮಾಲೀಕರ ಸಂಘದ ಸಭಾಭವನದಲ್ಲಿ ಶನಿವಾರ ಏರ್ಪಡಿಸಿದ್ದ ಮೈಸೂರು ವಿಶ್ವವಿದ್ಯಾನಿಲಯ ಮುದ್ರಣಾಲಯ ಮೇಲ್ವಿಚಾರಕ ಪುರುಷೋತ್ತಮ ಅವರ ಬೀಳ್ಕೊಡುಗೆ ಸಮಾರಂಭದಲ್ಲಿ ಅವರು ಆಶಯ ಭಾಷಣ ಮಾಡಿದರು. ಆದರೆ ಪುರುಷೋತ್ತಮ ಅವರು ಇದಕ್ಕೆ ಅಪವಾದ. ವೃತ್ತಿ ಜೀವನದಲ್ಲಿ ಪರಿಪರ್ಣತೆ ಇರುವ ವ್ಯಕ್ತಿತ್ವ ಅವರದು. ಸಂಯಮ. ಶಿಸ್ತು, ಸಂಬಂಧ ಇಟ್ಟುಕೊಂಡು ಕೆಲಸ ಮಾಡಿದ್ದಾರೆ. ಇಂಥವರಿಂದ ಅವರು ಕೆಲಸ ಮಾಡುವ ಸಂಸ್ಥೆಗೂ ಗೌರವ, ವ್ಯಕ್ತಿಗೂ ಗೌರವ ಎಂದು ಅವರು ಹೇಳಿದರು.

ಪುರುಷೋತ್ತಮ ಅವರು ಕರಡಚ್ಚು ತಿದ್ದುವವರಾಗಿ ನೂರಾರು ಪುಸ್ತಕಗಳು ರೂಪುಗೊಳ್ಳುವಲ್ಲಿ ನೆರವಾಗಿದ್ದಾರೆ. ಇದರಿಂದಾಗಿ ಅವರಿಗೆ ಸಾಹಿತಿಗಳು, ವಿದ್ವಾಂಸರ ಒಡನಾಟ ಬೆಳೆದಿದೆ ಎಂದರು.

ಕರ‍್ಯಕ್ರಮ ಉದ್ಘಾಟಿಸಿದ ಖ್ಯಾತ ಹೃದ್ರೋಗ ತಜ್ಞ ಡಾ.ವಿ. ಲಕ್ಷ್ಮೀನಾರಾಯಣ ಮಾತನಾಡಿ, ಪುರುಷೋತ್ತಮ ಮತ್ತು ಗೆಳೆಯರು ಕಲ್ಪತರು ಟ್ರಸ್ಟ್ ಮೂಲಕ ಆದಿವಾಸಿಗಳ ಸೇವೆಗೆ ಮುಂದಾಗಿದ್ದಾರೆ. ಆದು ಆರ್ಥವಾದುದು ಎಂದು ಮೆಚ್ಚುಗೆ ಸೂಚಿಸಿದರು.

ಪುರುಷೋತ್ತಮ ಅವರು ಮೈಸೂರು ವಿವಿ ಮುದ್ರಣಾಲಯದಲ್ಲಿ ಕರಡು ತಿದ್ದುವವರಾಗಿ ಮುದ್ರಾರಾಕ್ಷಸನನ್ನು ಗೆದ್ದಿದ್ದಾರೆ. ವಿಶಿಷ್ಟವಾಗಿ ಸರಸ್ವತಿಯ ಸೇವೆ ಮಾಡಿ, ಕನ್ನಡ ಸಾರಸ್ವತ ಲೋಕಕ್ಕೆ ಸರ್ಥಕ ಸೇವೆ ಸಲ್ಲಿಸಿದ್ದಾರೆ ಎಂದು ಶ್ಲಾಘಿಸಿದರು.

ಹಿರಿಯ ಸಾಹಿತಿ ಪ್ರೊ.ಸಿ. ನಾಗಣ್ಣ ಮಾತನಾಡಿ, ಗುರು- ಶಿಷ್ಯರ ಸಂಬಂಧಕ್ಕೆ ಪುರುಷೋತ್ತಮ ಅತ್ಯುತ್ತಮ ಉದಾಹರಣೆ. ಕರಡು ತಿದ್ದುವ ವಿಷಯದಲ್ಲಿ ಅವರು ತಮ್ಮದೇ ಆದ ಛಾಪು ಮೂಡಿಸಿದ್ದಾರೆ ಎಂದರು.

ಹಂಪಿ ಕನ್ನಡ ವಿವಿಯ ಪ್ರಾಧ್ಯಾಪಕ ಡಾ. ಚಿನ್ನಸ್ವಾಮಿ ಸೋಸಲೆ ಮಾತನಾಡಿ, ಅಶೋಕಪುರಂ ಒಂದು ರೀತಿ ಜ್ಞಾನದೇಗುಲವಿದ್ದಂತೆ. ನಾನು ಮತ್ತು ಪುರುಷೋತ್ತಮ ಅವರು ಸಿದ್ದರ‍್ಥ ಪ್ರೌಢಶಾಲೆಯಲ್ಲಿ ಚಡ್ಡಿ ದೋಸ್ತ್ ಆಗಿದ್ದವು. ಪ್ರಸ್ತುತ ಈ ಶಾಲೆಯ ಪರಿಸ್ಥಿತಿ ನೋಡಿ ಬೇಸರವಾಗಿದೆ. ಇದು ಮತ್ತೆ ಕಟ್ಟುವ ದಿಸೆಯಲ್ಲಿ ಏನಾದರೂ ಪ್ರಯತ್ನ ಮಾಡುತ್ತೇವೆ ಎಂದರು. ಕುವೆಂಪು ಕನ್ನಡ ಅಧ್ಯಯನ ಸಂಸ್ಥೆಯ ನಿವೃತ್ತ ನರ‍್ದೇಶಕ ಡಾ.ಡಿ.ಕೆ. ರಾಜೇಂದ್ರ ಮಾತನಾಡಿ, ಶ್ರದ್ಧೆ ಮತ್ತು ಬದ್ಧತೆ ಪುರುಷೋತ್ತಮ ಅವರನ್ನು ಎತ್ತರಕ್ಕೆ ಬೆಳೆಸಿದೆ ಎಂದರು.

ಮೈಸೂರು ವಿವಿ ಮುದ್ರಣಾಲಯ ನರ‍್ದೇಶಕ ಎಸ್. ಸತೀಶ್, ಹಿರಿಯ ಪತ್ರರ‍್ತ ಅಂಶಿ ಪ್ರಸನ್ನಕುಮಾರ್, ಶಾಸ್ತ್ರೀಯ ಭಾಷಾ ಅತ್ಯುನ್ನತ ಅಧ್ಯಯನ ಕೇಂದ್ರದ ನರ‍್ದೇಶಕ ಡಾ.ನೀಲಗಿರಿ ಎಂ. ತಳವಾರ್, ನರಸಿಂಗ ದೇಸಾಯಿ, ಪ್ರಗತಿ, ಮಾತನಾಡಿದರು. ಕಲ್ಪತರು ಚಾರಿಟಬಲ್ ಟ್ರಸ್ಟ್ ಅಧ್ಯಕ್ಷ ಡಾ.ಸುರೇಶ್ ಅಮ್ಮಸಂದ್ರ ಅಧ್ಯಕ್ಷತೆ ವಹಿಸಿದ್ದರು.

ಖ್ಯಾತ ಜಾನಪದ ಗಾಯಕ ಅಮ್ಮ ರಾಮಚಂದ್ರ ಅವರು ವಿವಿ ಶತಮಾನೋತ್ಸವದ ಧ್ಯೇಯಗೀತೆ ಹಾಡಿದರು.ಡಾ. ಉಮೇಶ್ ಕರ‍್ಯಕ್ರಮ ನಿರೂಪಿಸಿದರು. ಜಗದೀಶ್ ಆರ್. ತುಂಗಾ ಸ್ವಾಗತಿಸಿದರು. ಪಿ. ಕುಮಾರ್ ವಂದಿಸಿದರು. ರಾಜ್ಯ ಹಿಂದುಳಿದ ರ‍್ಗಗಳ ಜಾಗೃತ ವೇದಿಕೆ ಅಧ್ಯಕ್ಷ ಕೆ.ಎಸ್. ಶಿವರಾಂ, ಟ್ರಸ್ಟಿನ ಪದಾಧಿಕಾರಿಗಳಾದ ಕೆಂಡಗಣ್ಣಯ್ಯ, ಮಹಿಮಾ ಶ್ರೀನಿವಾಸ್, ನವೀನ್, ಲಕ್ಷ್ಮೀಕಾಂತ್ , ನಿವೃತ್ತ ನೌಕರರಾದ ಶೇಖರ್, ಮುಖಂಡರಾದ ಎಂ.ಸಿ. ಮಹಾಲಿಂಗು, ಶಿವಸ್ವಾಮಿ, ಎಸ್. ಶಿವಪ್ಪ, ಚಿಕ್ಕಂದಾನಿ ಮೊದಲಾದವರು ಇದ್ದರು.



### ಶ್ರೀ ರಂಭಾಪುರಿ ಜಗದ್ಗುರುಗಳ ಹೇಳಿಕೆ

# ಧರ್ಮ ರಾಷ್ಟ್ರ ಪ್ರಜ್ಞೆ ಜಾಗೃತಗೊಳ್ಳಲಿ



**ರಂಭಾಪುರಿ ಪೀಠ(ಬಾಳೆಹೊನ್ನೂರು) :** ಬೆಳೆಯುತ್ತಿರುವ ಯುವ ಜನಾಂಗ ಈ ದೇಶದ ಅಮೂಲ್ಯ ಆಸ್ತಿ. ಅವರಿಗೆ ಯೋಗ್ಯ ಸಂಸ್ಕಾರ ಮತ್ತು ಆದರ್ಶಗಳನ್ನು ಕಲಿಸಿಕೊಡುವ ಅಗತ್ಯವಿದೆ. ಯುವ ಜನಾಂಗದಲ್ಲಿ ಧರ್ಮ ಪ್ರಜ್ಞೆ ಮತ್ತು ರಾಷ್ಟ್ರ ಪ್ರಜ್ಞೆ ಜಾಗೃತಗೊಳ್ಳಬೇಕೆಂದು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಹಾಗೂ ಕ್ಷೇತ್ರನಾಥ ವೀರಭದ್ರಸ್ವಾಮಿ ಮಹಾರಥೋತ್ಸವದ ಅಂಗವಾಗಿ ಶನಿವಾರ ಜರುಗಿದ ಯುವ ಜನಾಂಗದಲ್ಲಿ ಧರ್ಮ ಪ್ರಜ್ಞೆ-ರಾಷ್ಟ್ರ ಪ್ರಜ್ಞೆ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ದೊಡ್ಡ ದೊಡ್ಡ ಮಾತುಗಳನ್ನು ಆಡುವುದರಿಂದ ಮನುಷ್ಯ ದೊಡ್ಡವನೆಂದೆನಿಸಿಕೊಳ್ಳಲಾರ. ದೊಡ್ಡ ಮನಸ್ಸು ಗುಣಗಳಿಂದ ದೊಡ್ಡವರಾಗಲು ಸಾಧ್ಯವಿದೆ. ದೇಶ ನಮಗೆ ಏನು ಕೊಟ್ಟಿದೆ ಅನ್ನುವುದಕ್ಕಿಂತ ದೇಶಕ್ಕಾಗಿ ನಾವೇನು ಕೊಟ್ಟಿದ್ದೇವೆ ಎಂಬುದು ಮುಖ್ಯ. ಯುವ ಜನಾಂಗ ಆಲಸ್ಯ ಮತ್ತು ದುರ್ವ್ಯಸನಗಳಿಂದ ದೂರವಾಗಿ ಸದೃಢ ಸೂಕ್ತ ರಾಷ್ಟ್ರ ನಿರ್ಮಾಣದಲ್ಲಿ ತೊಡಗಿಸಿಕೊಂಡರೆ ಅದ್ಭುತ ಸಾಧನೆ ಮಾಡಲು ಸಾಧ್ಯ. ಬದುಕಿನ ಯಾವ ದಿನವೂ ವ್ಯರ್ಥವಲ್ಲ. ಒಳ್ಳೆಯ ದಿನಗಳಿಂದ ಸಂತೋಷ ಸಿಗುತ್ತದೆ. ಕೆಟ್ಟ ದಿನಗಳಿಂದ ಅನುಭವ ಸಿಗುತ್ತದೆ. ವಿದ್ಯೆ ಕಲಿತ ನಂತರ ಗುರು ಸಂಪತ್ತು ಬಂದಾಗ ಸ್ನೇಹ ಹೆಂಡತಿ ಬಂದಾಗ ಹೆತ್ತವರನ್ನು ಎಂದಿಗೂ ಮರೆಯಬಾರದು. ಸಮಾಜದಲ್ಲಿ ಗೌರವ ಘನತೆ ಪ್ರಾಪ್ತವಾದ ದಿನಗಳಲ್ಲಿ ನಡೆದು ಬಂದ ದಾರಿಯನ್ನು ಮರೆಯಬಾರದು. ಕಾಲಿಗೆ ಆದ ಗಾಯ ಹೇಗೆ ಬದುಕಬೇಕೆಂಬುದನ್ನು ಕಲಿಸುತ್ತದೆ. ಶ್ವಾಸ ಇದ್ದರೆ ಬದುಕು. ಶ್ವಾಸ ಇಲ್ಲದಿದ್ದರೆ ಜೀವನ ಮುಗಿಯುತ್ತದೆ. ವಿಶ್ವಾಸವಿದ್ದರೆ ಸಂಬಂಧ. ಇಲ್ಲದಿದ್ದರೆ ಸಂಬಂಧಗಳು ನಾಶಗೊಳ್ಳುತ್ತವೆ. ಆದ್ದರಿಂದ ಯುವ ಜನಾಂಗ ಜಾಗೃತಗೊಂಡು ಧರ್ಮ ಸಂಸ್ಕೃತಿ ಪರಂಪರೆ ದೇಶಭಕ್ತಿ ಮೈಗೂಡಿಸಿಕೊಂಡು ಬಾಳಬೇಕೆಂದರು. ಮಾಜಿ ಮುಖ್ಯ ಮಂತ್ರಿ ಬಸವರಾಜ ಬೊಮ್ಮಾಯಿಯವರು ಮಾತನಾಡಿ ಭಯೋತ್ಪಾದನೆ ನಿಗ್ರಹಹ ಸಾಧ್ಯವಾಗುತ್ತಿಲ್ಲ. ಮನ: ಪರಿವರ್ತನೆಯಿಂದ ಮಾತ್ರ ಸಾಧ್ಯ. ಧರ್ಮದ ಹೆಸರಿನಲ್ಲಿ ಭಯೋತ್ಪಾದನೆ ನಡೆದಿರುವುದು ದುರ್ದೈವ. ಶ್ರೀ ಜಗದ್ಗುರು ರೇಣುಕಾಚಾರ್ಯರು ಸಾರಿದ ಮಾನವ ಧರ್ಮಕ್ಕೆ ಜಯವಾಗಲಿ, ಧರ್ಮದಿಂದಲೇ ವಿಶ್ವಕ್ಕೆ ಶಾಂತಿ ಇಂದಿಗೂ ಪ್ರಸ್ತುತವಾಗಿದೆ. ಅವರು ಸಿದ್ದಾಂತ ಶಿಖಾಮಣಿ ಮೂಲಕ ಅಮೂಲ್ಯ ಸಂದೇಶ ನೀಡಿದ್ದಾರೆ. ಸಮಾಜದಲ್ಲಿ ಶ್ರದ್ಧೆ ಶಾಂತಿ ಇದೆ ಸಮಾನತೆ ಇದೆ.

ವೀರಶೈವರೆಂದರೆ ಭಕ್ತಿಯಲ್ಲಿಯೂ ವೀರರು. ಬದುಕಿನಲ್ಲಿಯೂ ವೀರರು. ಸರಳ ಬದುಕನ್ನು ನಾವಿಂದು ಕ್ಲಿಷ್ಟ ಮಾಡಿಕೊಂಡಿದ್ದೇವೆ. ಜೀವನದಲ್ಲಿ ಮುಗ್ಧತೆಯನ್ನು ಕಾಪಾಡಿಕೊಂಡು ಬರುವುದು ಆತ್ಮಸಾಕ್ಷಿಯಂತೆ ನಡೆದುಕೊಳ್ಳುವುದ ಬಲು ಕಷ್ಟದ ಕೆಲಸ. ತಮ್ಮ ಅಧಿಕಾರಾವಧಿಯಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿಯನ್ನು ಸರ್ಕಾರದಿಂದ ನಡೆಸುವಂತೆ ಆದೇಶ ಮಾಡಿದ್ದನ್ನು ನೆನಪಿಸಿಕೊಂಡರು. ಶ್ರೀ ಜಗದ್ಗುರು ರೇಣುಕಾಚಾರ್ಯರ ಮೌಲ್ಯಾಧಾರಿತ ಧಾರ್ಮಿಕ ಚಿಂತನಗಳು ನಮ್ಮೆಲ್ಲರ ಬಾಳಿಗೆ ಆಶಾಕಿರಣವೆಂದರು.

ಧರ್ಮ ಸಮಾರಂಭದಲ್ಲಿ ಪಾಲ್ಗೊಂಡ ಮೈಸೂರು ವಿಜಯವಾಣಿಯ ಎ.ಆರ್.ರಘುರಾಮ ಮಾತನಾಡಿ ಬೆಳಕಿಗೆ ಮಹತ್ವ ಬಂದಿದ್ದೆ ಕತ್ತಲೆಯಿಂದ. ಸುಖಕ್ಕೊಂದು ಅರ್ಥ ಬರುವುದೇ ಕಷ್ಟದಿಂದ ಎಂಬುದನ್ನು ಮರೆಯಬಾರದು. ಧರ್ಮ ಪೀಠದ ನಿರಂತರವಾದ ಪರಿಶ್ರಮ ಮತ್ತು ಬೋಧನೆಯಿಂದಾಗಿ ನಮ್ಮೆಲ್ಲರ ಬಾಳು ಸುಖಮಯವಾಗಿ ಸಾಗುತ್ತಲಿದೆ. ಹೊರಗೆ ಬಡವನವಿದ್ದು ಒಳಗೆ ಸಿರಿತನ ಇದ್ದರೆ ಬದುಕು ಸಾಗೀತು. ಹೊರಗೆ ಸಿರಿತನವಿದ್ದು ಒಳಗೆ ಬಡತನವಿದ್ದರೆ ಬಾಳುವುದು ಬಲು ಕಷ್ಟ. ನೇತೃತ್ವವಹಿಸಿದ ಸೂಡಿ ಜುಕ್ತಿ ಹಿರೇಮಠದ ಡಾ|| ಕೊಟ್ಟೂರು ಬಸವೇಶ್ವರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ ನಾಗರೀಕ ಸಮಾಜದಲ್ಲಿ ಕೆಲವು ಅನಾಗರಿಕ ವರ್ತನೆಗಳು ನಡೆಯುತ್ತಿರುವುದು ಒಳ್ಳೆಯದಲ್ಲ. ಬೆಳೆಯುವ ಜನಾಂಗದಲ್ಲಿ ಸಂಸ್ಕಾರ ಸಂಸ್ಕೃತಿ ದೇಶ ಧರ್ಮ ಇವುಗಳ ಬಗ್ಗೆ ಸ್ವಾಭಿಮಾನ ಬೆಳೆದುಕೊಂಡು ಬರುವ ಅವಶ್ಯಕತೆ ಇದೆಯೆಂದರು.

ಹರಪನಹಳ್ಳಿ ತೆಗ್ಗಿನಮಠ ಸಂಸ್ಥಾನದ ವರಸದ್ಯೋಜಾತ ಶಿವಾಚಾರ್ಯ ಸ್ವಾಮಿಗಳು ಪ್ರಾಸ್ತಾವಿಕ ನುಡಿದರು.

ದುಗ್ಲಿ-ಕಡೇನಂದಿಹಳ್ಳಿ ಕ್ಷೇತ್ರದ ರೇವಣಸಿದ್ದೇಶ್ವರ ಶಿವಾಚಾರ್ಯ ಸ್ವಾಮಿಗಳು, ಕಾರ್ಜುವಳ್ಳಿ ಸದಾಶಿವ ಶಿವಾಚಾರ್ಯ ಸ್ವಾಮಿಗಳು, ಹುಬ್ಬಳ್ಳಿಯ ಬಸಯ್ಯ ಕಾಡಯ್ಯ ಹಿರೇಮಠ, ಸಿದ್ದಾಪುರದ ಬಸನಗೌಡ ಮಾಲಿ ಪಾಟೀಲ, ಬೆಂಗಳೂರಿನ ಬಾಳಯ್ಯ ಇಂಡಿಮಠ ಇವರಿಗೆ ರಂಭಾಪುರಿ ಜಗದ್ಗುರುಗಳು ಗುರುರಕ್ಷೆ ನೀಡಿ ಆಶೀರ್ವದಿಸಿದರು.

ಚಿಕ್ಕಮಗಳೂರಿನ ಡಾ|| ಕೆ.ಆರ್.ಭೂಮಿಕಾ ಭರತ ನಾಟ್ಯ ಪ್ರದರ್ಶಿಸಿದರು. ಕೊಡ್ಲಿಪೇಟೆ ರಾಜೇಶ್ವರಿ ನಾಗರಾಜ್ ಸ್ವಾಗತಿಸಿದರು. ಚಿಕ್ಕಮಗಳೂರಿನ ಪಾರ್ವತಿ ಮಹಿಳಾ ಬಳಗದವರಿಂದ ಸಂಗೀತ ಜರುಗಿತು. ಸವಣೂರಿನ ಡಾ. ಗುರುಪಾದಯ್ಯ ಸಾಲಿಮಠ ನಿರೂಪಿಸಿದರು.

# ಬಿಜೆಪಿ ಎಸ್‌ಸಿ ಮೋರ್ಚಾದ ಪದಗ್ರಹಣ ಸಮಾರಂಭ

**ಚಾಮರಾಜನಗರ:** ಇಡೀ ವಿಶ್ವದಲ್ಲೇ ಭಾರತ ನಂಬರ್‌ಒನ್ ದೇಶ ಆಗಬೇಕಾದರೆ ಮೋದಿಯವರು 3ನೇ ಬಾರಿಗೆ ಪ್ರಧಾನಿಯಾಗಬೇಕು ಎಂದು ಕೇಂದ್ರ ಪರಿಹಾರ ಸಮಿತಿ ಮಾಜಿ ಅಧ್ಯಕ್ಷ ಎಂ.ರಾಮಚಂದ್ರ ಹೇಳಿದರು.

ನಗರದ ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ನಡೆದ ಎಸ್‌ಸಿ ಮೋರ್ಚಾದ ಪದಗ್ರಹಣ ಕಾರ್ಯಕ್ರಮದಲ್ಲಿ ನೇಮಕಾತಿ ಆದೇಶಪತ್ರ ವಿತರಿಸಿ ಮಾತನಾಡಿದ ಅವರು,ದೇಶ ಬಲಿಷ್ಠವಾಗಬೇಕಾದರೆ, ದೇಶ ವಿಶ್ವದಲ್ಲಿ ನಂಬರ್‌ಒನ್ ಆಗಬೇಕಾದರೆ ನರೇಂದ್ರಮೋದಿಯವರು ಮತ್ತೆ ದೇಶದ ಪ್ರಧಾನಿಯಾಗಬೇಕು ಎಂದರು.ವಿರೋಧಪಕ್ಷದವರು ಬಿಜೆಪಿ ಸಂವಿಧಾನ ವಿರೋಧಿ ಎಂದು ಆರೋಪ ಮಾಡಿಕೊಂಡು ಬರುತ್ತಿದ್ದಾರೆ. ನಿಜವಾದ ಅಂಬೇಡ್ಕರ್..ವಿರೋಧಿ ಕಾಂಗ್ರೆಸ್. ಅವರನ್ನು ಚುನಾವಣೆಯಲ್ಲಿ ಸೋಲಿಸಿತು. ಅವರ ಅಂತ್ಯಸಂಸ್ಕಾರಕ್ಕೆ ಜಾಗ ನೀಡಲಿಲ್ಲ ಆದರೆ ನರೇಂದ್ರಮೋದಿಯವರು ಪ್ರಧಾನಿಯಾದ ಮೇಲೆ ಡಾ.ಬಿ.ಆರ್ ಅಂಬೇಡ್ಕರ್ ಅವರ ಗೌರವಾರ್ಥ ಐದು ಸ್ಥಳಗಳನ್ನು ಪಂಚತೀರ್ಥವಾಗಿ ಅಭಿವೃದ್ಧಿಪಡಿಸಿದೆ. ಇದು ಹಾಗೂ ಕೇಂದ್ರ ಸರ್ಕಾರದ ಜನಪರ ಯೋಜನೆಗಳನ್ನು ಪಕ್ಷದ ಎಲ್ಲ ಮೋರ್ಚಾದ ಪದಾಧಿಕಾರಿಗಳು, ಸದಸ್ಯರು ಮನೆಮನೆಗೆ ತಿಳಿಸಿಕೊಡುವ ಮೂಲಕ ಪಕ್ಷದ ಅಭ್ಯರ್ಥಿ ಎಸ್.ಬಾಲರಾಜು ಅವರನ್ನು ಅತ್ಯಧಿಕ ಮತಗಳಿಂದ ಗೆಲ್ಲಿಸುವ ಮೂಲಕ ನರೇಂದ್ರಮೋದಿಯವರು ಮತ್ತೆ ಪ್ರಧಾನಿಯಾಗಿಸಲು ಕೊಡುಗೆ ನೀಡಬೇಕು ಎಂದರು.

ಅಧ್ಯಕ್ಷತೆ ವಹಿಸಿದ್ದ ಮೂಡಹಳ್ಳಿ ಮೂರ್ತಿ ಮಾತನಾಡಿ, ಜಿಲ್ಲೆಯಲ್ಲಿ ಮೋರ್ಚಾವನ್ನು ತಳಮಟ್ಟದಲ್ಲಿ ಸಂಘಟಿಸಲು. ಒತ್ತು ನೀಡಲಾಗಿದ್ದು, ಎ. 26 ರಂದು ನಡೆಯುವ ಲೋಕಸಭಾ ಚುನಾವಣೆಯಲ್ಲಿ ಪಕ್ಷದ ಅಭ್ಯರ್ಥಿ ಎಸ್ .ಬಾಲರಾಜು ಅವರ ಗೆಲುವಿಗೆ ಶ್ರಮಿಸಲಾಗುವುದು... ಎಂದರು.

ಅಧಿಕಾರ ಹಸ್ತಾಂತರ : ನಿಕಟಪೂರ್ವ ಜಿಲ್ಲಾಧ್ಯಕ್ಷ ಮೂಡ್ನಾಕೂಡು ಪ್ರಕಾಶ್ ನೂತನ ಅಧ್ಯಕ್ಷರಾದ ಮೂಡಳ್ಳಿಮೂರ್ತಿ ಅವರಿಗೆ ಪಕ್ಷದ ಧ್ವಜ ಕೊಡುವ ಮೂಲಕ ಅಧಿಕಾರ ಹಸ್ತಾಂತರ ಮಾಡಿದರು. ಚಾಮುಲ್ ಅಧ್ಯಕ್ಷ ವೈ.ವಿ.ನಾಗೇಂದ್ರ, ಪ್ರಧಾನ. ಕಾರ್ಯದರ್ಶಿ ಮೂಡ್ನಾಕೂಡುಪ್ರಕಾಶ್, ಬಿಜೆಪಿ ಎಸ್‌ಸಿ ಮೋರ್ಚಾದ ಉಸ್ತುವಾರಿ ಮಲ್ಲೇಶ್, ಚುನಾವಣಾ ಸಂಚಾಲಕ ಸುಂದ್ರಪ್ಪ, ಓಬಿ ಮೋರ್ಚಾದ ರಾಜ್ಯ ಕಾರಿಣಿ ಸದಸ್ಯ ನೂರೊಂದುಶೆಟ್ಟಿ, ಜಿಲ್ಲಾ ಉಪಾಧ್ಯಕ್ಷ ಅರಕಲವಾಡಿ ನಾಗೇಂದ್ರ, ಮಾಜಿ ಅಧ್ಯಕ್ಷ ಆರ್.ಸುಂದರ್, ಮುಖಂಡ ಕಪಿನಿನಾಯಕ, ಉಪಾಧ್ಯಕ್ಷರಾದ ಬೂದಿತಿಟ್ಟು ರಾಜೇಂದ್ರ, ಮುತ್ತಿಗೆಮೂರ್ತಿ ರಾಜಣ್ಣ ಇತರರು ಭಾಗವಹಿಸಿದ್ದರು.



# ಮಾಧುಸ್ವಾಮಿ ಪಡೆಗೆ ಪರ್ಯಾಯ ಪಡೆ ಕಟ್ಟುತ್ತಿರುವ ಬಸವರಾಜು

**ಎಚ್.ಬಿ.ಕಿರಣ್ ಕುಮಾರ್**

ಹುಳಿಯಾರು : ಬಿಜೆಪಿ ಅಭ್ಯರ್ಥಿ ವಿ.ಸೋಮಣ್ಣ ವಿರುದ್ಧ ಸಿಡಿದೆದ್ದಿರುವ ಮಾಜಿ ಸಚಿವ ಜೆ.ಸಿ.ಮಾಧುಸ್ವಾಮಿ ಅವರೊಂದಿಗೆ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರು ಸಂದಾನ ಸಭೆ ನಡೆಸಿದ್ದರು. ಆದರೆ ಮಾಧುಸ್ವಾಮಿ ಬಿಜೆಪಿ ಬಿಡುವ ತೀರ್ಮಾನದಿಂದ ಹಿಂದೆ ಸರಿಯುವಂತೆ ಮಾಡುವಲ್ಲಿ ಸಫಲರಾಗಿದ್ದು ಬಿಟ್ಟರೆ ಸೋಮಣ್ಣ ಪರ ಪ್ರಚಾರ ಮಾಡಲು ಒಪ್ಪಿಸಲಾಗಲಿಲ್ಲ. ಹೀಗಾಗಿ ತನ್ನ ಅಭ್ಯರ್ಥಿ ವಿ.ಸೋಮಣ್ಣ ಅವರನ್ನು ಗೆಲ್ಲಿಸಿಯೇ ತೀರಬೇಕೆಂದು ಹಠಕ್ಕೆ ಬಿದ್ದಿರುವ ಸಂಸದ ಜಿ.ಎಸ್.ಬಸವರಾಜು ಚಿಕ್ಕನಾಯಕನಹಳ್ಳಿ ಜೆ.ಸಿ.ಮಾಧುಸ್ವಾಮಿ ಕೋಟೆಯಲ್ಲಿಯೇ ಪರ್ಯಾಯ ಪಡೆ ಕಟ್ಟಲು ಹೊರಟಿದ್ದಾರೆ.



ಜಿ.ಎಸ್.ಬಸವರಾಜು ಅವರು ತುಮಕೂರು ಲೋಕಸಭಾ ಕ್ಷೇತ್ರದಿಂದ 5 ಬಾರಿ ಸಂಸದರಾಗಿ ಆಯ್ಕೆಯಾಗಿದ್ದು ಜಿಲ್ಲೆಯ ಪ್ರತಿ ತಾಲೂಕಿನಲ್ಲೂ ತಮ್ಮದೇ ಆದ ಬೆಂಬಲಿಗರ ಪಡೆ ಹೊಂದಿದ್ದಾರೆ. ಅದರಲ್ಲಿ ಚಿಕ್ಕನಾಯಕನಹಳ್ಳಿಯ ಮಾಜಿ ಜಿಪಂ ಸದಸ್ಯ ಬುಳ್ಳೇನಹಳ್ಳಿ ಶಿವಪ್ರಕಾಶ್ ಮಾನಸ ಪುತ್ರನಂತಿದ್ದಾರೆ. ಜಿ.ಎಸ್.ಬಸವರಾಜು ಅವರು ಹಾಕಿದ ಗೆರೆ ದಾಟದಷ್ಟು ನಿಷ್ಠರಾಗಿದ್ದಾರೆ. ಈಗ ಇವರನ್ನೇ ಬಳಸಿಕೊಂಡು ಜಿ.ಎಸ್.ಬಸವರಾಜು ಅವರು ಚಿಕ್ಕನಾಯಕನಹಳ್ಳಿ ಕ್ಷೇತ್ರದಲ್ಲಿ ಮಾಧುಸ್ವಾಮಿ ಪಡೆಗೆ ಪರ್ಯಾಯ ಪಡೆ ಕಟ್ಟುತ್ತಿದ್ದಾರೆ. ಇದಕ್ಕೆ ಇಂಬು ಕೊಡುವಂತೆ ಇತ್ತೀಚೆಗಷ್ಟೆ ಶಿವಪ್ರಕಾಶ್ ಮನೆಗೆ ಬಸವರಾಜು ಭೇಟಿ ನೀಡಿ ಮಾತುಕತೆ ನಡೆಸಿದ್ದು, ಕಾಂಗ್ರೆಸ್ ಸಭೆಗೆ ಶಿವಪ್ರಕಾಶ್ ಗೈರಾಗಿರುವ ಘಟನೆಗಳು ನಡೆದಿವೆ.

ಶಿವಪ್ರಕಾಶ್ ಬಿಜೆಪಿಯಲ್ಲಿದ್ದಾಗಲೇ ಜೆ.ಸಿ.ಮಾಧುಸ್ವಾಮಿ ಅವರಿಂದ ಕಡೆಗಣನೆಗೆ ಒಳಗಾಗಿದ್ದ ಮುಖಂಡರನ್ನು ಸಂಘಟಿಸಿ ಮಾಧುಸ್ವಾಮಿ ವಿರುದ್ಧವೆ ತೊಡೆ ತಟ್ಟಿದ್ದರು.

ಚುನಾವಣಾ ರಾಜಕೀಯದಿಂದ ಹಿಂದೆ ಸರಿದಿದ್ದ ಮಾಜಿ ಶಾಸಕ ಕೆ.ಎಸ್,ಕಿರಣ್‌ಕುಮಾರ್ ಅವರಿಗೆ ಬಿಜೆಪಿ ಟಿಕೆಟ್ ಕೊಡಬೇಕೆಂದು ಪಟ್ಟು ಹಿಡಿದಿದ್ದರು. ಇದು ವಿಫಲವಾದಾಗ ಕೆ.ಎಸ್.ಕಿರಣ್‌ಕುಮಾರ್ ಕಾಂಗ್ರೆಸ್‌ಗೆ ಸೇರಿ ಟಿಕೆಟ್ ತಂದಾಗ ಬಿಜೆಪಿಯ ದೊಡ್ಡ ಸೈನ್ಯದೊಂದಿಗೆ ಕಿರಣ್ ಪರ ನಿಂತು ಮಾಧುಸ್ವಾಮಿಗೆ ಟಕ್ಕರ್ ಕೊಟ್ಟಿದ್ದರು. ತಾಲೂಕಿನ ರಾಜಕೀಯ ಬೆಳವಣಿಗೆಗಳನ್ನು ಗಮನಿಸುತ್ತಲೇ ಬಂದಿದ್ದ ಬಸವರಾಜು ಮಾಧುಸ್ವಾಮಿಗೆ ಪರ್ಯಾಯವಾಗಿ ಸೋಮಣ್ಣಗೆ ಮತ ಹಾಕಿಸಲು ಶಿವಪ್ರಕಾಶ್ ಎಂಬ ಯುವ ಲಿಂಗಾಯಿತ ಅಸ್ತ್ರ ಬಳಕೆಗೆ ಮುಂದಾಗಿದ್ದಾರೆ ಎನ್ನಲಾಗಿದೆ. ಆದರೆ ಇದನ್ನು ಶಿವಪ್ರಕಾಶ್ ಸ್ವೀಕರಿಸುತ್ತಾರೋ ಇಲ್ಲವೋ ಕಾದು ನೋಡಬೇಕಿದೆ.

### ಬಿಜೆಪಿಯಲ್ಲಿದ್ದು ಕಾಂಗ್ರೆಸ್‌ಗೆ ಗೆಲ್ಲಿಸಿದರೆ ನಮಗೇನು ಲಾಭ



ಬಿಜೆಪಿ ಅಭ್ಯರ್ಥಿ ಸೋಮಣ್ಣ ಅವರ ಬಗ್ಗೆ ಮಾಧುಸ್ವಾಮಿ ತೆಗೆದುಕೊಂಡಿರುವ ನಿಲುವಿನಿಂದ ಬಿಜೆಪಿಯ ಮುಖಂಡರು ಗೊಂದಲಕ್ಕೆ ಬಿದ್ದಿದ್ದಾರೆ. ತೆರೆ ಮರೆಯಲ್ಲಿ ಕಾಂಗ್ರೆಸ್ ಗೆಲ್ಲಿಸಿದರೆ ನಮಗೇನು ಲಾಭ. ನಾವು ಓಟ್ ಹಾಕಿಸಿ ಕಾಂಗ್ರೆಸ್ ಗೆಲ್ಲಿಸಿದರೆ ಮುಂದಿನ ಜಿಪಂ, ತಾಪಂ ಚುನಾವಣೆಗೆ ತೊಡಕಾಗುವುದಿಲ್ಲವೇ? ಅದರ ಬದಲು ನೇರವಾಗಿ ಕಾಂಗ್ರೆಸ್ ಸೇರಿ ಚುನಾವಣೆ ಮಾಡಿದರೆ ಗೆದ್ದ ನಂತರ ಫಲ ಉಣ್ಣಬಹುದಲ್ಲವೇ ಎಂಬ ಚಿಂತನೆ ಮಾಡುತ್ತಿದ್ದರೂ ಮಾಧುಸ್ವಾಮಿ ಬಳಿ ಹೇಳಲಾಗದೆ ತಮ್ಮತಮ್ಮೊಳಗೆ ಸಾಧಕಬಾಧಕಗಳ ಚರ್ಚೆ ಮಾಡಿಕೊಳ್ಳುತ್ತಿದ್ದಾರೆ. ಈ ಚುನಾವಣೆಯಲ್ಲಿ ಸೋಮಣ್ಣ ಸೋತರೆ ಪರ್ವಾಗಿಲ್ಲ. ಅಕಸ್ಮಾತ್ ಗೆದ್ದರೆ ಚಿಕ್ಕನಾಯಕನಹಳ್ಳಿ ಕ್ಷೇತ್ರದ ಬಿಜೆಪಿ ಹಿಡಿತವನ್ನು ತನ್ನ ತೆಕ್ಕೆಗೆ ತೆಗೆದುಕೊಳ್ಳದೆ ಬಿಡಲಾರರು. ಆಗ ತಮಗೆ ದುಡಿದವರ ಪರ ನಿಲ್ಲುವ ಜೊತೆಗೆ ದುಡಿಯದವರ ರಾಜಕೀಯ ಭವಿಷ್ಯವನ್ನು ಮಂಕಾಗಿಸುತ್ತಾರೆ. ಹಾಗಾಗಿ ಸೋಮಣ್ಣ ಅವರೊಂದಿಗೆ ಅಡ್ಜೆಸ್ಟ್ ಮಾಡಿಕೊಂಡು ಚುನಾವಣೆ ಮಾಡೋಣ ಎನ್ನುವ ಚಿಂತನೆಯನ್ನೂ ಸಹ ಮಾಡುತ್ತಿದ್ದಾರೆ. ಇನ್ನೂ ಕೆಲಸವರು ದೊಡ್ಡವರ ರಾಜಕೀಯ ಸಂಘರ್ಷಕ್ಕೆ ನಾವೇಕೆ ಬಲಿಯಾಗಬೇಕು. ಈ ಚುನಾವಣೆಯಲ್ಲಿ ಯಾರಿಗೂ ಕೆಲಸ ಮಾಡದೆ ತಮ್ಮ ಪಾಡಿಗೆ ತಾವಿದ್ದು ಇರುವ ಒಂದು ಮತವನ್ನು ಯಾರಿಗಾದರೂಬ್ಬರಿಗೆ ಹಾಕಿ ಸುಮ್ಮನಾದರಾಯಿತು ಎನ್ನುತ್ತಿದ್ದಾರೆ.

### ಮೈತ್ರಿ ಧರ್ಮ ಪಾಲನೆಗೆ ಸುರೇಶ್ ಬಾಬು ನಿಂತಿದ್ದರೂ...

**ಈ ಚುನಾವಣೆಯಲ್ಲಿ ಬಿಜೆಪಿ, ಜೆಡಿಎಸ್ ಮೈತ್ರಿ ಧರ್ಮ ಪಾಲನೆಗೆ ಶಾಸಕ ಸಿ.ಬಿ.ಸುರೇಶ್‌ಬಾಬು ನಿಂತಿದ್ದಾರೆ. ತಾವು ಹೋಗುವ ಊರುಗಳಲ್ಲಿ, ಸಭೆಗಳಲ್ಲಿ ಸೋಮಣ್ಣ ಪರ ಕೆಲಸ ಮಾಡುವಂತೆ ಹೇಳುತ್ತಿದ್ದಾರೆ. ಆದರೆ ತಮ್ಮ ಗೆಲುವಿಗೆ ಕಾರಣವಾದ ಅಹಿಂದ ಮತಗಳನ್ನು ಬಿಜೆಪಿಗೆ ಹಾಕಿಸುವಲ್ಲಿ ಸಫಲರಾಗುವುದು ಕಷ್ಟ ಎನ್ನಲಾಗುತ್ತಿದೆ. ಮುದ್ದಹನುಮೇಗೌಡರ ಸ್ಪರ್ಧಿಸಿರುವಾಗ ಜೆಡಿಎಸ್‌ನ ಒಕ್ಕಲಿಗರು ಬೇರೆ ಜಾತಿಯವರಿಗೆ ಓಟ್ ಹಾಕುತ್ತಾರೆಯೇ? ಮುಸ್ಲಿಂ ಕಾರ್ಯಕರ್ತರು ಬಿಜೆಪಿ ಅಭ್ಯರ್ಥಿ ಕೈ ಹಿಡಿಯುವರೇ? ಹೀಗೆ ಅನೇಕ ಪ್ರಶ್ನೆಗಳು ರಾಜಕೀಯ ವಲಯದಲ್ಲಿ ಹುಟ್ಟಿಕೊಂಡಿವೆ. ಹಾಗಾಗಿ ಮೈತ್ರಿ ಧರ್ಮ ಪಾಲನೆಯ ಸಂದೇಶವನ್ನು ಮತಗಳ ಮೂಲಕ ತೋರಿಸಲು ಸುರೇಶ್‌ಬಾಬು ಅವರಿಗೆ ಸವಾಲಾಗಿ ಪರಿಣಮಿಸಿದೆ.**



ವಿಜಯಪುರ ಪಟ್ಟಣದ ಇತಿಹಾಸ ಪ್ರಸಿದ್ಧ ಅರ್ಜುನ ಪ್ರತಿಷ್ಠಾಪಿತ ಶ್ರೀ ಸೌಮ್ಯನಾಯಕಿ ಸಮೇತ ಶ್ರೀ ಚನ್ನಕೇಶವಸ್ವಾಮಿಯವರ ಬ್ರಹ್ಮರಥೋತ್ಸವದ ಅಂಗವಾಗಿ ಶನಿವಾರದಂದು ಶ್ರೀ ನಗರೇಶ್ವರ ಸ್ವಾಮಿ ದೇವಾಲಯದ ಆವರಣದಲ್ಲಿ ಸ್ವಾಮಿಯವರಿಗೆ ಮಂಟಪಪಡಿ ಸೇವೆಯನ್ನು ವಿಜಯಪುರ ಲಿಂ. ಬಾಗಲೂರು ಚಿಕ್ಕಣ್ಣ ನವರು, ಬೆಂಗಳೂರು ಲಿಂ. ಸಿ. ಪುಟ್ಟಣ್ಣ ನವರು ಹಾಗೂ ಬೆಂಗಳೂರು ಚಂದ್ರ ಲೇಔಟ್ ನ ಶ್ರೀಮತಿ ಚಂದ್ರಕಲಾ ಶಿವರುದ್ರಪ್ಪ ನವರ ಕುಟುಂಬದವರು ನೆರವೇರಿಸಿದರು. ಈ ಸಂದರ್ಭದಲ್ಲಿ ಅರ್ಚಕರಾದ ಮುರಳೀಧರ್ ಭಟ್ಟಾಚಾರ್ಯರು, ಪುರಸಭಾ ಮಾಜಿ ಅಧ್ಯಕ್ಷರುಗಳಾದ ಎಂ. ಸತೀಶ್ ಕುಮಾರ್, ರಾಜೇಶ್ವರಿ ಎಸ್. ಬಾಸ್ಕರ್, ಎಂ. ಶಂಕರ್, ಎಸ್. ಬಸವರಾಜ್, ಎಸ್, ಪ್ರಕಾಶ್, ಎಂ. ಚಂದ್ರಕಾಂತಕುಮಾರ್, ವಿ. ವಿಶ್ವನಾಥ್ ಮಾಮು, ಚನ್ನಪ್ಪ, ಕೇಶವಮೂರ್ತಿ, ರವಿ, ಉಪಸ್ಥಿತರಿದ್ದರು.

# ಸಂಜೆ ಟಿಪ್ಸ್

## ಎರಡನೇ ಫ್ರಾಂಚೈಸ್ ಮಳಿಗೆ ಉದ್ಘಾಟಿಸಿದ ಫ್ಲೈರೋಬ್

ಭಾರತದ ಪ್ರಮುಖ ಫ್ಯಾಷನ್ ಬಾಡಿಗೆ ವೇದಿಕೆಯಾದ ಫ್ಲೈರೋಬ್, ತನ್ನ ಎರಡನೇ ಫ್ರ್ಯಾಂಚೈಸ್ ಸ್ಟೋರ್ ಅನ್ನು ಅದ್ಧೂರಿಯಾಗಿ ಉದ್ಘಾಟಿಸಿದೆ. ಮಲ್ಲೇಶ್ವರಂನಲ್ಲಿರುವ ಈ ಹೊಸ ಮಳಿಗೆಯು ಫ್ಯಾಶನ್ ಬಳಕೆ ಮತ್ತು ಲಭ್ಯತೆಯನ್ನು ಹೆಚ್ಚಿಸುವ ಫ್ಲೈರೋಬ್ನ ಉದ್ದೇಶದ ಮತ್ತೊಂದು ಮೈಲಿಗಲ್ಲು ಸಾಧನೆ ಆಗಿದೆ.

ಇಂದು ನಡೆದ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಫ್ಲೈರೋಬ್ನ ಸಿಇಓ ಆಂಚಲ್ ಸೈನಿ, ಬೆಂಗಳೂರಿನ ಯುವಕರು ಬಾಡಿಗೆಗೆ ಫ್ಯಾಷನ್ ದಿರಿಸು ಪಡೆಯುವ ಕ್ರಮವನ್ನು ಮಿಂಚಿನ ವೇಗದಲ್ಲಿ ಸ್ವೀಕರಿಸಿದ್ದಾರೆ. ಈ ವರ್ಗದಲ್ಲಿರುವ ಬಲವಾದ ಬೇಡಿಕೆಯನ್ನು ಗಮನಿಸಿದ ಬಳಿಕ ನಾವು ನಮ್ಮ ಎರಡನೇ ಮಳಿಗೆಯನ್ನು ತೆರೆಯಲು ಸಂತೋಷಪಡುತ್ತೇವೆ. ಇದು ನಮ್ಮ ಬೆಳವಣಿಗೆಯ ಪಯಣದಲ್ಲಿ ಮಹತ್ವದ ಮೈಲಿಗಲ್ಲು ಎಂದೇ ಭಾವಿಸುತ್ತೇವೆ. ಈ ನಗರದ ಉತ್ಸಾಹವು ನಮ್ಮ ಸೇವೆಗೆ ಪೂರಕವಾಗಿದೆ ಮತ್ತು ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚಿನ ಮಳಿಗೆಗಳನ್ನು ಆರಂಭಿಸಲು ಎದುರು ನೋಡುತ್ತಿದ್ದೇವೆ. ಈ ಸಾಹಸದಲ್ಲಿ ಅಶ್ವಿನಿ ಅವರ ಜೊತೆಗೆ ಮಾಡಿಕೊಂಡಿದ್ದು, ನಮ್ಮ ಉತ್ಸಾಹವನ್ನು ಹೆಚ್ಚಿಸಿದೆ. ಬೆಂಗಳೂರಿನ ಹೆಸರಾಂತ ವಿನ್ಯಾಸಕಿಯಾಗಿರುವ ಅವರ ದಶಕದ ಕಾಲದ ಪರಿಣತಿಯು ನಮ್ಮ ಸಹಯೋಗಕ್ಕೆ ಅಮೂಲ್ಯವಾದ ಒಳನೋಟವನ್ನು ಒದಗಿಸಲಿದೆ ಎಂದು ಹೇಳಿದರು. ಬೆಂಗಳೂರಿನ ಫ್ಲೈರೋಬ್ ಮಲ್ಲೇಶ್ವರಂನ ಮಾಲೀಕರಾದ ಅಶ್ವಿನಿ ಗುರುಚರಣ್ ಮಾತನಾಡಿ, ಫ್ಲೈರೋಬ್ನ ಫ್ಯಾಶನ್ನ ನವೀನ ವಿಧಾನದ ಬಹುಕಾಲದ ಅಭಿಮಾನಿಯಾಗಿ, ಫ್ರ್ಯಾಂಚೈಸ್ ಮಾಲೀಕಳಾಗಿ ಈ ಪ್ರಯಾಣದ ಭಾಗವಾಗಲು ನನಗೆ ಹೆಮ್ಮೆ ಇದೆ. ಫ್ಯಾಷನ್ ಉದ್ಯಮದಿಂದ ಬಂದ ನಾನು ಈ ಮಾರುಕಟ್ಟೆಯನ್ನು ಅರ್ಥಮಾಡಿಕೊಂಡಿದ್ದೇನೆ ಮತ್ತು ಈ ಮಾರುಕಟ್ಟೆಗೆ ಬೆಂಗಳೂರಿನಲ್ಲಿ ಬೆಳವಣಿಗೆಯ ಸಾಮರ್ಥ್ಯ ಅದ್ಭುತವಾಗಿದೆ. ಜನ ಸಮುದಾಯ ಧನಾತ್ಮಕವಾಗಿ ಪ್ರತಿಕ್ರಿಯಿಸಿದೆ ಮತ್ತು ನಮ್ಮ ಹೊಸ ಸ್ಟೋರ್ ನಮ್ಮ ಗ್ರಾಹಕರಿಗೆ ಉತ್ತಮವಾದ ಮತ್ತು ಸಂತೋಷಕರ ಅನುಭವವನ್ನು ನೀಡಲಿದೆ ಎಂಬುದರ ನನಗೆ ವಿಶ್ವಾಸವಿದೆ ಎಂದು ಹೇಳಿದರು.



## ಚಿಕನ್ ನೂಡಲ್ ಸೂಪ್

### ಪಾಕ ಶಾಲೆ



### ಮಾಡುವ ವಿಧಾನ

● ಮೊದಲಿಗೆ ಬಾಣಲೆಯಲ್ಲಿ ಚಿಕನ್ ಅಥವಾ ತರಕಾರಿ ಸ್ಟಾಕ್ ಅನ್ನು ಹಾಕಿ, ಕುದಿಸಿ.

● ಚಿಕನ್ ಬ್ರೆಸ್ಟ್ ಅನ್ನು ಬಾಣಲೆಗೆ ಹಾಕಿ, ರುಚಿಗೆ ತಕ್ಕಷ್ಟು ಉಪ್ಪು ಸೇರಿಸಿ.

● ಶುಂಠಿ ಹಾಗೂ ಬೆಳ್ಳುಳ್ಳಿಯನ್ನು ಸೇರಿಸಿ, ಚಿಕನ್ ಚೆನ್ನಾಗಿ ಬೇಯುವವರೆಗೆ 20 ನಿಮಿಷಗಳ ಕಾಲ ಕುದಿಸಿ.

● ಈಗ ಬೆಂದ ಚಿಕನ್ ಬ್ರೆಸ್ಟ್ ಅನ್ನು ತೆಗೆದು, ಸಣ್ಣಗೆ ಹಾಗೂ ಉದ್ದಕ್ಕೆ ಚೂರುಗಳನ್ನಾಗಿ ಮಾಡಿ. ★ ಈಗ ಚೂರು ಮಾಡಿದ ಚಿಕನ್, ನೂಡಲ್ಸ್, ಸ್ವೀಟ್ ಕಾರ್ನ್, ಮಶ್ರೂಮ್, ಸ್ಪ್ರಿಂಗ್ ಆನಿಯನ್ ಹಾಗೂ ಸೋಯಾ ಸಾಸ್ ಅನ್ನು ಸ್ಟಾಕ್ಗೆ ಹಾಕಿ 3-4 ನಿಮಿಷಗಳ ವರೆಗೆ ಕುದಿಸಿ. ● ಇದೀಗ ಚಿಕನ್ ನೂಡಲ್ ಸೂಪ್ ತಯಾರಾಗಿದ್ದು, ಪುದೀನ ಎಲೆಗಳನ್ನು ಹಾಕಿ, ಬೌಲ್ಗಳಿಗೆ ಸರ್ವ್ ಮಾಡಿ

### ಬೇಕಾಗಿರುವ ಪದಾರ್ಥ

ಚಿಕನ್ ಅಥವಾ ತರಕಾರಿ ಸ್ಟಾಕ್ - 900 ಎಂಎಲ್, ಚಿಕನ್ ಬ್ರೆಸ್ಟ್ - 200 ಗ್ರಾಂ, ಸಣ್ಣಗೆ ಹೆಚ್ಚಿದ ಶುಂಠಿ - 1 ಟೀಸ್ಪೂನ್, ಸಣ್ಣಗೆ ಹೆಚ್ಚಿದ ಬೆಳ್ಳುಳ್ಳಿ - 1, ಅಕ್ಕಿ ಅಥವಾ ಗೋಧಿ ನೂಡಲ್ಸ್ - 50 ಗ್ರಾಂ, ಸ್ವೀಟ್ ಕಾರ್ನ್ - 2 ಟೀಸ್ಪೂನ್, ಸಣ್ಣಗೆ ಕತ್ತರಿಸಿದ ಮಶ್ರೂಮ್ - 2-3, ಸ್ಪ್ರಿಂಗ್ ಆನಿಯನ್ - 2, ಸೋಯಾ ಸಾಸ್ - 2 ಟೀಸ್ಪೂನ್, ಸಣ್ಣಗೆ ಹೆಚ್ಚಿದ ಪುದೀನ - 2 ಟೀಸ್ಪೂನ್

## ಹಲ್ಲುನೋವಿಗೆ ಇಲ್ಲಿದೆ ಮನೆಮದ್ದು!

### ಹೆಲ್ತ್ ಟಿಪ್ಸ್

ಹಲ್ಲುನೋವುವಿನಿಂದ ಬಳಲುತ್ತಿರುವವರು ಈ ಕೆಳಗೆ ನೀಡಿರುವ ಮನೆಮದ್ದುಗಳನ್ನು ಪ್ರಯತ್ನಿಸಿ ನೋಡಿ, ಫಲಿತಾಂಶ ನಿಮಗೇ ತಿಳಿಯುವುದು. ನಾಲ್ಕು ಬಟ್ಟಲು ನೀರಿಗೆ 5-6 ವೀಳ್ಯೇದೆಲೆಗಳನ್ನು ಹಾಕಿ ಚೆನ್ನಾಗಿ ಕುದಿಸಿ, ನಂತರ ಅದನ್ನು ಶೋಧಿಸಿ, ಆ ಕಷಾಯದಿಂದ ದಿನಕ್ಕೆ ಮೂರು ಬಾರಿ ಎರಡು ದಿನಗಳ ಕಾಲ ಬಾಯಿ ಮುಕ್ಕಳಿಸಿ ಹಲ್ಲುನೋವಿನಲ್ಲಿ ಗುಣ ಕಂಡುಬರುತ್ತದೆ.

ವಸಡಿಗೆ ನಿಂಬೆರಸ ಹಚ್ಚುವುದರಿಂದ ಹಲ್ಲುನೋವು ಉಪಶಮನವಾಗುವುದು. ಕಾಳುಮೆಣಸನ್ನು ನುಣ್ಣಗೆ ಅರೆದು ವಸಡಿಗೆ ಹಚ್ಚುವುದರಿಂದ ಕೆಟ್ಟ ನೀರೆಲ್ಲ ಸುರಿದುಹೋಗಿ ನೋವು ಕಡಿಮೆಯಾಗುತ್ತದೆ. ವಸಡಿಗೆ ಜೇನುತುಪ್ಪವನ್ನು ಹಚ್ಚಿ, ಜೇನಿನಲ್ಲಿ ಅದ್ದಿದ ಹತ್ತಿಯನ್ನು ದವಡೆಯಲ್ಲಿ ಇಟ್ಟುಕೊಂಡರೆ ಹಲ್ಲು ಮತ್ತು ವಸಡಿನ ನೋವು ನಿವಾರಣೆ ಆಗುವುದು.

ಒಂದು ಟೀ ಚಮಚ ಉಪ್ಪನ್ನು ಒಂದು ಬಟ್ಟಲು ಬಿಸಿ ನೀರಿನಲ್ಲಿ ಕರಗಿಸಿ, ಬಾಯಿ ಮುಕ್ಕಳಿಸುವುದರಿಂದ ಹಲ್ಲುನೋವು ಕಡಿಮೆಯಾಗುವುದು.

ವಸಡಿನಲ್ಲಿ ಊತ ಕಾಣಿಸಿಕೊಂಡಿದ್ದರೆ, ಈರುಳ್ಳಿ, ಬೆಳ್ಳುಳ್ಳಿ ಮತ್ತು ಹೆಸರುಕಾಳನ್ನು ಸಮ ಪ್ರಮಾಣದಲ್ಲಿ ತೆಗೆದುಕೊಂಡು ಸ್ವಲ್ಪ ತುಪ್ಪದೊಡನೆ ನುಣ್ಣಗೆ ಅರೆದು, ವಸಡುಗಳ ಮೇಲೆ ಲೇಪಿಸಿ, ಸ್ವಲ್ಪ ಮಟ್ಟಿಗೆ ಊತ ಕಡಿಮೆಯಾಗುವುದು ಮತ್ತು ನೋವು ಉಪಶಮನವಾಗುವುದು.

2-3 ಲವಂಗಗಳನ್ನು ನುಣ್ಣಗೆ ಅರೆದು ಸ್ವಲ್ಪ ನಿಂಬೆರಸದೊಡನೆ ಮಿಶ್ರ ಮಾಡಿ, ನೋಯುತ್ತಿರುವ ವಸಡು ಮತ್ತು ಹಲ್ಲುಗಳ ಮೇಲೆ ಇದನ್ನು ನಿಧಾನಕ್ಕೆ ಮಸಾಜ್ ಮಾಡುವುದರಿಂದ ನೋವು ಕಡಿಮೆಯಾಗುತ್ತದೆ.



## ತ್ವಚೆಯ ಆರೈಕೆಗೆ ಆಪಲ್ ಸೈಡರ್ ವಿನೇಗರ್

ಆಪಲ್ ಸೈಡರ್ ವಿನೇಗರ್ ನ್ನು ತೂಕ ಇಳಿಕೆಗೂ ಬಳಸಲಾಗುತ್ತದೆ ಜತೆಗೆ ತ್ವಚೆಯ ಆರೈಕೆಗೂ ಬಳಸುತ್ತಾರೆ. ಈ ಆಪಲ್ ಸೈಡರ್ ವಿನೇಗರ್ ಅನ್ನು ತ್ವಚೆಗೆ ಹೇಗೆಲ್ಲಾ ಬಳಸಬಹುದು ಎಂಬುದನ್ನು ನೋಡೋಣ. ನಿಮ್ಮ ಮುಖದಲ್ಲಿ ಮೊಡವೆ, ಕಲೆಗಳು ಇದ್ದರೆ ಒಂದು ಬೌಲ್ ಗೆ 1 ಚಮಚ ಆಯಪಲ್ ಸೈಡರ್ ವಿನೇಗರ್ ಹಾಕಿ ಅದಕ್ಕೆ ಸ್ವಲ್ಪ ನೀರು ಸೇರಿಸಿ ಚೆನ್ನಾಗಿ ಮಿಕ್ಸ್ ಮಾಡಿ. ಒಂದು ಹತ್ತಿ ಉಂಡೆಯ ಸಹಾಯದಿಂದ ಈ ಮಿಶ್ರಣವನ್ನು ನಿಮ್ಮ ಮುಖದಲ್ಲಿ ಎಲ್ಲಿ ಮೊಡವೆ ಇದೆಯೋ ಅಲ್ಲಿ ಹಾಕಿ 10 ನಿಮಿಷಗಳ ಕಾಲ ಬಿಟ್ಟು ಉಗುರು ಬೆಚ್ಚಗಿನ ನೀರಿನಿಂದ ಮುಖ ತೊಳೆಯಿರಿ. ವಾರಕ್ಕೆ 3 ಬಾರಿ ಇದನ್ನು ಅನುಸರಿಸಿ. ಇನ್ನು ತ್ವಚೆಯ ಮೇಲಿರುವ ಡೆಡ್ ಸ್ಕಿನ್ ಅನ್ನು ತೆಗೆಯಲು ಕೂಡ ಈ ಆಯಪಲ್ ಸೈಡರ್ ವಿನೇಗರ್ ಅನ್ನು ಬಳಸಬಹುದು. ನೀರಿಗೆ ಸ್ವಲ್ಪ ಆಯಪಲ್ ಸೈಡರ್ ವಿನೇಗರ್ ಹಾಕಿ ಚೆನ್ನಾಗಿ ಕದಡಿ ಮುಖಕ್ಕೆ ಹಚ್ಚಿ 10 ನಿಮಿಷ ಬಿಟ್ಟು ನಿಧಾನಕ್ಕೆ ತಿಕ್ಕಿದರೆ ಡೆಡ್ ಸ್ಕಿನ್ ನಿವಾರಣೆಯಾಗುತ್ತದೆ. ಹಾಗೇ ಇದನ್ನು ಟೋನರ್ ರೀತಿ ಬಳಸಬಹುದು. ಸ್ವಲ್ಪ ನೀರಿಗೆ ಇದನ್ನು ಹಾಕಿ ಅದಕ್ಕೆ ಯಾವುದಾದರೂ ಎಸೆನ್ಸಿಯಲ್ ಆಯಿಲ್ 2 ಹನಿ ಹಾಕಿ ಮುಖಕ್ಕೆ ಟೋನರ್ ರೀತಿ ಬಳಸಿದರೆ ಮುಖದಲ್ಲಿನ ರಂಧ್ರಗಳನ್ನು ಕಡಿಮೆ ಮಾಡುತ್ತದೆ.

### ಬ್ಯೂಟಿ ಟಿಪ್ಸ್



# 19ನೇ ಮಹೀಂದ್ರಾ ಎಕ್ಸಲೆನ್ಸ್ ಇನ್ ಥಿಯೇಟರ್ ಅವಾರ್ಡ್ಸ್

ಕಮಾನಿ ಆಡಿಟೋರಿಯಂನಲ್ಲಿ ಅದ್ದೂರಿಯಾಗಿ ಜರುಗಿದ 19ನೇ ಮಹೀಂದ್ರ ಎಕ್ಸಲೆನ್ಸ್ ಇನ್ ಥಿಯೇಟರ್ ಅವಾರ್ಡ್ಸ್ (ಮೆಟಾ) ಕಾರ್ಯಕ್ರಮದಲ್ಲಿ ರಾಷ್ಟ್ರೀಯ ರಂಗಭೂಮಿ ಸಮುದಾಯದ ಸದಸ್ಯರು ಮತ್ತು ಬಹು ಸಂಖ್ಯೆಯ ವಿವಿಧ ಕ್ಷೇತ್ರದ ಪ್ರೇಕ್ಷಕರು ಭಾಗವಹಿಸಿದರು. ಮಹೀಂದ್ರಾ ಗ್ರೂಪ್ನಿಂದ ಸ್ಥಾಪಿಸಲ್ಪಟ್ಟ ಮತ್ತು ಟೀಮ್ವರ್ಕ್ ಆರ್ಟ್ಸ್ ನಿರ್ಮಾಣದ ಈ ರಂಗೋತ್ಸವ ಒಂದು ವಾರ ಅವಧಿಯಲ್ಲಿ ಕಮಾನಿ ಮತ್ತು ಶ್ರೀ ರಾಮ್ ಸೆಂಟರ್ ಆಡಿಟೋರಿಯಾದಲ್ಲಿ ಜರುಗಿ ದೇಶದಾದ್ಯಂತ ಇರುವ ಭಾರತೀಯ ರಂಗಭೂಮಿಯ ಸಂಭ್ರಮಕ್ಕೆ ಕಾರಣವಾಗಿದ್ದು, ಕಾರ್ಯಕ್ರಮಕ್ಕೆ ಇದೀಗ ತೆರೆ ಬಿದ್ದಿದೆ. ಮಾರ್ಚ್ 20ರಂದು ಬುಧವಾರ, ರಾಷ್ಟ್ರೀಯ ರಾಜಧಾನಿಯಲ್ಲಿ ಈ ವರ್ಷದ ಪ್ರದರ್ಶನಗಳಲ್ಲಿನ ಟಾಪ್ 10 ನಾಮನಿರ್ದೇಶಿತ ನಾಟಕಗಳಿಗೆ ಮೆಟಾ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಭಾರತೀಯ ರಂಗಭೂಮಿಯ ಅತ್ಯಂತ ಮಹತ್ವದ ವಾರ್ಷಿಕ ಪ್ರಶಸ್ತಿ ಮತ್ತು ರಂಗೋತ್ಸವವಾದ ಮಹೀಂದ್ರಾ ಎಕ್ಸಲೆನ್ಸ್ ಇನ್ ಥಿಯೇಟರ್ ಅವಾರ್ಡ್ಸ್(ಮೆಟಾ) ರಾಷ್ಟ್ರ ಮಟ್ಟದಲ್ಲಿ ರಂಗಭೂಮಿಯಲ್ಲಿನ ಶ್ರೇಷ್ಠತೆಯನ್ನು ಗುರುತಿಸುತ್ತದೆ. ಇದು ರಂಗಭೂಮಿ ಸಮುದಾಯದಲ್ಲಿಯೇ ಅತಿ ಹೆಚ್ಚು ಗೌರವಾನ್ವಿತ ವೇದಿಕೆಯಾಗಿದೆ. ಏಕೆಂದರೆ ಇದು 13 ಪ್ರಶಸ್ತಿ ವಿಭಾಗಗಳಲ್ಲಿ ಆನ್-ಸ್ಟೇಜ್ ಮತ್ತು ಆಫ್-ಸ್ಟೇಜ್ ಪ್ರತಿಭೆಗಳಿಗೆ ಮನ್ನಣೆ ನೀಡುತ್ತದೆ. ಪ್ರತಿ ವರ್ಷದಂತೆ, ಈ ವರ್ಷವೂ ಮೆಟಾ ಬಹು ಭಾಷೆಗಳಲ್ಲಿನ 390 ಪ್ರವೇಶಗಳನ್ನು ಶಾರ್ಟ್ಲಿಸ್ಟ್ ಮಾಡಿತ್ತು. ಮೆಟಾದ ಈ ಸೀಸನ್ ನ ತೀರ್ಪುಗಾರರಾಗಿ ಭಾರತೀಯ ರಂಗಭೂಮಿ ನಟಿ, ಕಾಸ್ಟಿಂಗ್ ಡೈರೆಕ್ಟರ್ ಮತ್ತು ಬರಹಗಾರ್ತಿ ಡಾಲಿ ಠಾಕೋರ್, ಪ್ರತಿಭಾವಂತ ಮತ್ತು ಪ್ರಸಿದ್ಧ ಭಾರತೀಯ ನಟ ಕುಲಭೂಷಣ ಖರ್ಬಂದ, ಖ್ಯಾತ ನಿರ್ದೇಶಕ, ನಟ, ಖ್ಯಾತ ನಾಟಕಕಾರ ಮತ್ತು ಬರಹಗಾರ ಮಹೇಶ್ ದತ್ತಾನಿ, ಖ್ಯಾತ ಭಾರತೀಯ ನಟ, ಸಂಗೀತ ಸಂಯೋಜಕ, ಗಾಯಕ ಮತ್ತು ಸೆಟ್ ಡಿಸೈನರ್ ರಘುವೀರ್ ಯಾದವ್, ಸೆರೆಂಡಿಪಿಟಿ ಆರ್ಟ್ಸ್ ಫೌಂಡೇಶನ್ ಮತ್ತು ಸೆರೆಂಡಿಪಿಟಿ ಆರ್ಟ್ಸ್ ಫೆಸ್ಟಿವಲ್ ಡೈರೆಕ್ಟರ್ ಸ್ಮೃತಿ ರಾಜ್ಗರ್ಹಿಯಾ, ರಂಗಭೂಮಿ ಮತ್ತು ಚಲನಚಿತ್ರ ನಟ ವಿನಯ್ ಪಾಠಕ್ ಅವರು ಇದ್ದರು. ಮೆಟಾ ನೀಡುವ ಜೀವಮಾನದ ಸಾಧನೆ ಪ್ರಶಸ್ತಿಯು ಅತ್ಯುನ್ನತ ಪ್ರಶಸ್ತಿ ಆಗಿದೆ. ಈ ವರ್ಷ ಜೀವಮಾನ ಸಾಧನೆ ಪ್ರಶಸ್ತಿಯನ್ನು ಹೆಸರಾಂತ ನಟ, ನಿರ್ದೇಶಕ ಮತ್ತು ನ್ಯಾಷನಲ್ ಸ್ಕೂಲ್ ಆಫ್ ಡ್ರಾಮಾದ ಮಾಜಿ ನಿರ್ದೇಶಕ ರಾಮ್ ಗೋಪಾಲ್ ಬಜಾಜ್ ಅವರಿಗೆ ನೀಡಿ ಗೌರವಿಸಲಾಯಿತು. ಬಜಾಜ್ ಅವರ ಗೌರವಾನ್ವಿತ ವೃತ್ತಿಜೀವನವು ಅವರಿಗೆ 1996ರಲ್ಲಿ ಪದ್ಮಶ್ರೀ ಮತ್ತು 2003ರಲ್ಲಿ ಸಂಗೀತ ನಾಟಕ ಅಕಾಡೆಮಿ ಪ್ರಶಸ್ತಿ ಸೇರಿದಂತೆ ಹಲವಾರು ಪುರಸ್ಕಾರಗಳನ್ನು ಗಳಿಸಿ ಕೊಟ್ಟಿದೆ. ಮಹೀಂದ್ರಾ ಗ್ರೂಪ್ನ ಕಲ್ಚರಲ್ ಔಟ್ರೀಚ್ನ ಉಪಾಧ್ಯಕ್ಷ ಮತ್ತು ಮುಖ್ಯಸ್ಥ ಜಯ್ ಶಾ, ''19ನೇ ಮೆಟಾ, ಭಾರತದಾದ್ಯಂತ ಇರುವ ಭಾರತೀಯ ರಂಗಭೂಮಿಯ ಪ್ರತಿಭೆಗಳಿಗೆ ಅತ್ಯುತ್ತಮವಾದ ವೇದಿಕೆಯಲ್ಲಿ ಮನ್ನಣೆ ಒದಗಿಸುವ ಕಾರ್ಯವನ್ನು ಮುಂದುವರೆಸಿದೆ. ಕಾರ್ಯಕ್ರದಲ್ಲಿ ಪ್ರಧಾನ ಮಾಡಿದ ಅಂತಿಮ ಪ್ರಶಸ್ತಿಗಳು ಬಹಳ ಮುಖ್ಯವಾದ ಮನ್ನಣೆಗಳಾಗಿದ್ದರೂ, ಮೆಟಾ ಪ್ರಶಸ್ತಿಗೆ ಬಂದ ಎಲ್ಲಾ ಪ್ರವೇಶಗಳು ಕೂಡ ಅವರ ಬದ್ಧತೆ, ದಕ್ಷತೆ ಮತ್ತು ತೇಜಸ್ಸಿಗೆ ಸಾಕ್ಷಿಗಳಾಗಿವೆ. ಮಹೀಂದ್ರಾ ಗ್ರೂಪ್ ಈ ವರ್ಷದ ಎಲ್ಲಾ ಭಾಗವಹಿಸಿದವರನ್ನು ಮೆಟಾ ಕುಟುಂಬಕ್ಕೆ ಸ್ವಾಗತಿಸುತ್ತದೆ ಮತ್ತು ಮುಂದಿನ ದಾರಿಯಲ್ಲಿ ಯಶಸ್ಸು ಗಳಿಸಲು ಬೇಕಾದ ಅವಕಾಶಗಳು ಸಿಗಲಿ ಎಂದು ಹಾರೈಸುತ್ತದೆ'' ಎಂದು ಹೇಳಿದರು.



### ವಿಜೇತರ ಸಂಪೂರ್ಣ ಪಟ್ಟಿ ಇಲ್ಲಿದೆ

**ಅತ್ಯುತ್ತಮ ವೇದಿಕೆ ವಿನ್ಯಾಸ - ರಘುನಾಥ್ - ಬಿದ್ಯುತ್ ಕೃ. ನಾಥ್, ಅತ್ಯುತ್ತಮ ಬೆಳಕಿನ ವಿನ್ಯಾಸ - ರಘುನಾಥ್- ಗೌತಮ್ ಸೈಕಿಯಾ ಅತ್ಯುತ್ತಮ ಧ್ವನಿ ಮತ್ತು ಸಂಗೀತ ವಿನ್ಯಾಸ -ಡೂ ಯು ನೋ ದಿಸ್ ಸಾಂಗ್? - ಚಯಣ್ ಅಧಿಕಾರಿ, ಬಿಂದುಮಾಲಿನಿ ಎನ್.,ಅತ್ಯುತ್ತಮ ವಸ್ತ್ರವಿನ್ಯಾಸ - ಹಯವದನ- ಮೆಲೋಡಿಡೋರ್ಕಾಸ್ ,ಪೋಷಕ ಪಾತ್ರದಲ್ಲಿ ಅತ್ಯುತ್ತಮ ನಟ (ಪುರುಷ) - ಗೋಪಾಲ್ ಉರೆ ಮತ್ತು ಸಹ-ತರುಣ್ ಭಟ್ಟಾಚಾರ್ಯ, ಪೋಷಕ ಪಾತ್ರದಲ್ಲಿ ಅತ್ಯುತ್ತಮ ನಟ (ಹೆಣ್ಣು) -ಗೋಪಾಲ್ ಉರೆ ಮತ್ತು ಸಹ- ನಿಬೇದಿತಾ ಮುಖೋಪಾಧ್ಯಾಯ, ಹಯವದನಾ- ಪಲ್ಲವಿ ಜಾಧೋ, ಪ್ರಮುಖ ಪಾತ್ರದಲ್ಲಿ ಅತ್ಯುತ್ತಮ ನಟ (ಪುರುಷ) - ರಘುನಾಥ್ - ಬಿದ್ಯುತ್ ಕೃ. ನಾಥ್ , ಪ್ರಮುಖ ಪಾತ್ರದಲ್ಲಿ ಅತ್ಯುತ್ತಮ ನಟ (ಹೆಣ್ಣು) - ಡೂ ಯು ನೋ ದಿಸ್ ಸಾಂಗ್?- ಮಲ್ಲಿಕಾ ತನೇಜಾ, ಘುಂಟಾಘುಂಟಾಘುಂಟಾಘುಂಟಾಘುಂಟಾ- ಮಲ್ಲಿಕಾ ಸಿಂಗ್ ಹಂಸಪಾಲ್ , ಅತ್ಯುತ್ತಮ ನೃತ್ಯ ಸಂಯೋಜನೆ - ಅಗ್ನಿಸುತ ದ್ರೌಪದಿ- ಮೈಸ್ನಮ್ ಜಾಯ್ ಮೀಟೆಯಿ ಮೆಹಕ್, ಅತ್ಯುತ್ತಮ ಮೇಳ ?ಹಯವದನ, ಅತ್ಯುತ್ತಮ ಮೂಲ ಸ್ಕ್ರಿಪ್ಟ್ -ರಘುನಾಥ್- ಬಿದ್ಯುತ್ ಕೃ. ನಾಥ್, ಅತ್ಯುತ್ತಮ ನಿರ್ದೇಶಕ - ರಘುನಾಥ್ - ಬಿದ್ಯುತ್ ಕೃ. ನಾಥ್, ಅತ್ಯುತ್ತಮ ನಿರ್ಮಾಣ ರಘುನಾಥ್**

## ಬೋಲ್ಡ್ ಫೋಟೋದಲ್ಲಿ ಸಮಂತಾ!

ಸಿನಿಮಾ ಕೆಲಸಕ್ಕೆ ಬ್ರೇಕ್ ಕೊಟ್ಟಿರುವ ನಟಿ ಸಮಂತಾ, ಸೋಶಿಯಲ್ ಮೀಡಿಯಾದಲ್ಲಿ ಸಖತ್ ಆಯಕ್ಟಿವ್ ಆಗಿದ್ದಾರೆ. ಈ ಮೂಲಕ ಅಭಿಮಾನಿಗಳ ಟಚ್ ನಲ್ಲಿರುವ ಸ್ಯಾಮ್, ಆಗಾಗ ಫೋಟೋ ಹಾಗೂ ವಿಡಿಯೋಗಳನ್ನು ಅಪ್ಲೋಡ್ ಮಾಡುತ್ತಿರುತ್ತಾರೆ. ಫೇಸ್ ಬುಕ್, ಇನ್ಸ್ಟಾಗ್ರಾಮ್ ನಲ್ಲಿ ಅಪಾರ ಫಾಲೋವರ್ಸ್ ಹೊಂದಿರುವ ನಟಿ ಸಮಂತಾ ಪೋಸ್ಟ್ ಗಾಗಿ ಅಭಿಮಾನಿಗಳು ಕೂಡ ಕಾಯುತ್ತಿರುತ್ತಾರೆ. ಇದೀಗ ಸ್ಯಾಮ್ ಬೋಲ್ಡ್ ಫೋಟೋ ಮೂಲಕ ಸೋಶಿಯಲ್ ಮೀಡಿಯಾವನ್ನೇ ಶೇಕ್ ಮಾಡಿದ್ದಾರೆ.

ಬ್ಲ್ಯಾಕ್ ಕಲರ್ ಡ್ರೆಸ್ ನಲ್ಲಿ ಮಿಂಚುತ್ತಿರುವ ಸಮಂತಾ, ಜಾಕೆಟ್ ಬಟನ್ ತೆಗೆದು ಫೋಟೋಗಳಿಗೆ ಹಾಟ್ ಆಗಿ ಪೋಸ್ ಕೊಟ್ಟಿದ್ದಾರೆ. ಬೋಲ್ಡ್ ಫೋಟೋಶೂಟ್ ನಲ್ಲಿ ಸಮಂತಾ ಮಿಂಚುತ್ತಿದ್ದಾರೆ. ಗ್ಲಾಮರಸ್ ಫೋಟೋಗಳನ್ನು ಸಮಂತಾ ತಮ್ಮ ಇನ್ಸ್ಟಾದಲ್ಲಿ ಶೇರ್ ಮಾಡಿದ್ದಾರೆ. ಈ ಫೋಟೋಗಳಿಗೆ ಲೈಕ್ ಗಳ ಜೊತೆಗೆ ನಾನಾ ಕಮೆಂಟ್ಗಳು ಕೂಡ ಹರಿದು ಬರ್ತಿದೆ.

ಯಶೋದಾ ಮತ್ತು ಶಾಕುಂತಲಂ ನಂತರ ಸಮಂತಾ ವಿಜಯ್ ದೇವರಕೊಂಡ ಜೊತೆ ಖುಷಿ ಸಿನಿಮಾ ಮಾಡಿ ಸಕಸ್ ಪಡೆದಿದ್ದಾರೆ. ಈ ಚಿತ್ರವನ್ನು ಶಿವ ನಿರ್ವಾಣ ನಿರ್ದೇಶಿಸಿದ್ದಾರೆ. ಒಳ್ಳೆ ನಿರೀಕ್ಷೆಗಳ ನಡುವೆ ತೆರೆಕಂಡ ಸಿನಿಮಾ ಫ್ಯಾಮಿಲಿ ಮಂದಿಗೆ ಇಷ್ಟವಾಯ್ತು. ಮೈತ್ರಿ ಮೂವೀ ಮೇಕರ್ಸ್ ನಿರ್ಮಾಣದ ಖುಷಿ ಸಿನಿಮಾ ಸದ್ಯ ಓಜಣಜಿಟಥ ನಲ್ಲಿ ಸ್ಟ್ರೀಮಿಂಗ್ ಆಗ್ತಿದೆ.

ಈ ಚಿತ್ರದ ನಂತರ ಅವರು ಯಾವುದೇ ಸಿನಿಮಾ ಒಪ್ಪಿಕೊಂಡಿರಲಿಲ್ಲ. ಆದರೆ ವೆಬ್ ಸೀರಿಸ್ ಶೂಟಿಂಗ್ ಮಾಡಿದ ಬಳಿಕ ಬ್ರೇಕ್ ತೆಗೆದುಕೊಂಡ್ರು. ಸಿಟಾಡೆಲ್ ವೆಬ್ ಸೀರಿಸ್ ನಲ್ಲಿ ವರುಣ್ ಧವನ್ ಜೊತೆ ಸಮಂತಾ ಕಾಣಿಸಿಕೊಳ್ಳಲಿದ್ದಾರೆ. ಇದು ಅಮೇರಿಕನ್ ಸರಣಿಯ ಸಿಟಾಡೆಲ್ ವೆಬ್ ಸರಣಿಯ ರಿಮೇಕ್ ಆಗಿದೆ. ರಾಜ್, ಡಿಕೆ ಸಿಟಾಡೆಲ್ ನಿರ್ದೇಶನ ಮಾಡಿದ್ದಾರೆ.ವೆಬ್ ಸರಣಿಯು ಶೀಘ್ರದಲ್ಲೇ ಅಮೆಜಾನ್ ಪ್ರೈಮ್ ವಿಡಿಯೋದಲ್ಲಿ ರಿಲೀಸ್ ಆಗಲಿದೆ.

ಅಷ್ಟೇ ಅಲ್ಲದೇ ಸದ್ಯದಲ್ಲೇ ಸಮಂತಾ ಬಾಲಿವುಡ್ ಗೆ ಎಂಟ್ರಿ ಕೊಡಲಿದ್ದಾರಂತೆ. ಸಲ್ಮಾನ್ ಖಾನ್ ಜೊತೆ ನಟಿಸಲಿದ್ದಾರೆ ಎಂಬ ಮಾತು ಕೂಡ ಕೇಳಿಬರುತ್ತಿದೆ. ಕರಣ್ ಜೋಹರ್ ಅವರ ಧರ್ಮ ಪ್ರೊಡಕ್ಷನ್ಸ್ ಅಡಿಯಲ್ಲಿ ವಿಷ್ಣುವರ್ಧನ್ ಅವರ ಚಿತ್ರದಲ್ಲಿ ಸಮಂತಾ ನಾಯಕಿಯಾಗಿ ಆಯ್ಕೆಯಾಗಿದ್ದಾರೆಯಂತೆ.

ನಟಿ ಸಮಂತಾ ಏ ಮಾಯಾ ಚೇಸಾವೇ ಸಿನಿಮಾ ಮೂಲಕ ಟಾಲಿವುಡ್ ಇಂಡಸ್ಟ್ರಿಗೆ ಕಾಲಿಟ್ರು. 7 ವರ್ಷಗಳ ಕಾಲ ನಟ ನಾಗ ಚೈತನ್ಯ ಅವರನ್ನು ಪ್ರೀತಿಸಿ ಮದುವೆಯಾದ ಸಮಂತಾ, ನಾಲ್ಕು ವರ್ಷಗಳ ವಿಚ್ಛೇದನ ಪಡೆದು ಅಭಿಮಾನಿಗಳಿ ಶಾಕ್ ಕೊಟ್ರು.2021ರಲ್ಲಿ ಇಬ್ಬರೂ ಬೇರೆಯಾಗುತ್ತಿರುವುದಾಗಿ ಘೋಷಿಸಿದರು. ಸದ್ಯ ಅವರು ತಮ್ಮ ದಾರಿಯಲ್ಲಿ ಸಿನಿಮಾ ಮಾಡುವುದರಲ್ಲಿ ಬ್ಯುಸಿಯಾಗಿದ್ದಾರೆ.





ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

## ರಾಶಿ ಭವಿಷ್ಯ

**ಮೇಷ:** ಕೌಟುಂಬಿಕ ವಿಚಾರಗಳಲ್ಲಿ ಪ್ರಗತಿ, ಉತ್ತಮ ಆರೋಗ್ಯ, ಹಣದ ಒಳಹರಿವು ಮಂದಗತಿ.

**ವೃಷಭ:** ಸಂತಸದಿಂದ ಇರಲು ಪ್ರಯತ್ನಿಸಿ, ಕುಟುಂಬದಲ್ಲಿ ಶಾಂತಿ, ಆದಾಯದಲ್ಲಿ ಹೆಚ್ಚಳ.

**ಮಿಥುನ:** ನಿರೀಕ್ಷಿಸಿದಂತೆ ಕೆಲಸಗಳು ನೆರವೇರುತ್ತದೆ, ವಾಸಸ್ಥಳ ಬದಲಾವಣೆ, ಲೇವಾದೇವಿ ವ್ಯವಹಾರದಲ್ಲಿ ಲಾಭ.

**ಕಟಕ:** ವ್ಯವಹಾರದಲ್ಲಿ ಜಯ, ಅಪಮಾನ ನಷ್ಟ, ಆಸ್ತಿ ಲಾಭ. ಅಧಿಕ ಖರ್ಚು, ನಿದ್ರಾಭಂಗ

**ಸಿಂಹ:** ಉದ್ಯೋಗದಲ್ಲಿ ಅವಮಾನ ಅಪಕೀರ್ತಿ, ವಾದ ವಿವಾದಗಳಲ್ಲಿ ಜಯ, ಕೌಟುಂಬಿಕ ಕಲಹ ಅಧಿಕ.

**ಕನ್ಯಾ:** ಸಹೋದ್ಯೋಗಿಗಳೊಂದಿಗೆ ವೈಮನಸ್ಸು, ವಿದ್ಯಾರ್ಥಿಗಳಿಗೆ ಅಭ್ಯಾಸದಲ್ಲಿ ಆಸಕ್ತಿ, ಭೂಮಿ ಅಥವಾ ಮನೆ ಖರೀದಿ ಯೋಗ.

**ತುಲಾ:** ವಿವಾಹ ಪ್ರಯತ್ನದಲ್ಲಿ ಯಶಸ್ಸು, ದಾಂಪತ್ಯದಲ್ಲಿ ಸುಖ, ಕೋರ್ಟ್ ಮೆಟ್ಟಿಲೇರುವ ಸಂಭವ.

**ವೃಶ್ಚಿಕ:** ಮಾನಸಿಕ ಕಿರಿಕಿರಿ, ಸಹೋದರರನೊಂದಿಗೆ ಜಗಳ, ರಕ್ತದೊತ್ತಡ ಅಧಿಕ.

**ಧನಸ್ಸು :** ಸಮಸ್ಯೆಗಳಿಗೆ ಆತ್ಮವಿಶ್ವಾಸದಿಂದ ಪರಿಹಾರ, ಆದಾಯಕ್ಕೆ ತಕ್ಕ ವೆಚ್ಚ, ಉದ್ಯೋಗದಲ್ಲಿ ಬದಲಾವಣೆ.

**ಮಕರ:** ಮಹಿಳಾ ಉದ್ಯೋಗಿಗಳಿಗೆ ಲಾಭ, ಸರ್ಕಾರಿ ಕಾರ್ಯಗಳಲ್ಲಿ ಆಸಕ್ತಿ, ಸಲಹೆ.

**ಕುಂಭ:** ಸಾಲಗಾರರಿಂದ ಅವಮಾನ, ವಿವಾಹಕಾಂಕ್ಷಿಗಳಿಗೆ ಶುಭ, ಹಿರಿಯರ ಸಲಹೆ ಪಡೆಯಿರಿ.

**ಮೀನ:** ಕುಟುಂಬ ಸದಸ್ಯರ ಜೊತೆ ಕಾಲಹರಣ, ಶ್ರಮ ಹೆಚ್ಚಾಗಲಿದೆ, ದೈವಾನುಗ್ರಹ ಇರಲಿದೆ. ಮಕ್ಕಳ ನಡವಳಿಕೆಯಲ್ಲಿ ಸಂಶಯ.

## ವಿಶ್ವ ಕ್ಷಯರೋಗ ದಿನ




ಒಂದು ಕಾಲದಲ್ಲಿ ಜನರನ್ನು ಭಯಭೀತರನ್ನಾಗಿಸಿದ್ದ ಕಾಯಿಲೆಗಳಲ್ಲಿ ಈ ಕ್ಷಯ ರೋಗ ಅಥವಾ ಟಿಬಿ ಕೂಡ ಒಂದು. ಒಬ್ಬರಿಂದ ಇನ್ನೊಬ್ಬರಿಗೆ ಸಾಂಕ್ರಾಮಿಕವಾಗಿ ಹರಡುವ ಈ ಕ್ಷಯರೋಗಕ್ಕೆ ಸರಿಯಾದ ಚಿಕಿತ್ಸೆ ಪಡೆದುಕೊಳ್ಳದೇ ಹೋದರೆ ಜೀವಕ್ಕೆ ಕಂಟಕ ಎದುರಾಗಬಹುದು. ಈ ರೋಗದ ಬಗ್ಗೆ ಜಾಗೃತಿ ಮೂಡಿಸುವ ಉದ್ದೇಶದಿಂದ ಪ್ರತಿ ವರ್ಷ ಮಾರ್ಚ್ 24ರಂದು ವಿಶ್ವದಾದ್ಯಂತ ಕ್ಷಯರೋಗ (ಟಿಬಿ) ದಿನವನ್ನು ಆಚರಿಸಲಾಗುತ್ತದೆ.

ಕ್ಷಯ ರೋಗವೆನ್ನುವುದು ಅತ್ಯಂತ ಭಯಾನಕ ಹಾಗೂ ನೋವನ್ನು ಉಂಟು ಮಾಡುವ ಸಾಂಕ್ರಾಮಿಕ ರೋಗಗಳಲ್ಲಿ ಒಂದು. ಇದು 'ಬ್ಯಾಕ್ಟೀರಿಯಂ ಟ್ಯೂಬರ್ಕ್ಯುಲೋಸಿಸ್' ಎಂಬ ಬ್ಯಾಕ್ಟೀರಿಯಾದಿಂದ ರೋಗವು ಬರುತ್ತದೆ. ಸಾಂಕ್ರಾಮಿಕ ಕಾಯಿಲೆವಾಗಿರುವ ಈ ಕ್ಷಯರೋಗವು ಒಬ್ಬರಿನಿಂದ ಇನ್ನೊಬ್ಬರಿಗೆ ಸುಲಭವಾಗಿ ಹರಡಬಲ್ಲದು. ಸೋಂಕಿತ ವ್ಯಕ್ತಿಯು ಕೆಮ್ಮಿದಾಗ, ಸೀನಿದಾಗ ಅಥವಾ ಆ ವ್ಯಕ್ತಿಯ ಕಫದಿಂದಲೂ ಹರಡುವ ಸಾಧ್ಯತೆಯಿದೆ. ಶ್ವಾಸಕೋಶದ ಮೇಲೆ ದೀರ್ಘ ಪರಿಣಾಮ ಬೀರುವ ಕಾರಣ ಪ್ರಾರಂಭದಲ್ಲಿಯೇ ಸರಿಯಾದ ಚಿಕಿತ್ಸೆಯನ್ನು ಮಾಡುವುದು ಒಳ್ಳೆಯದು.

ರೋಗ ಲಕ್ಷಣಗಳು ಗಂಭೀರವಾದರೆ ದೇಹದ ಇತರ ಭಾಗಗಳಿಗೂ ಹಾನಿಯಾಗುತ್ತದೆ. ರೋಗ ನಿರೋಧಕ ಶಕ್ತಿ ಕಡಿಮೆಯಿರುವ ವ್ಯಕ್ತಿಗಳಲ್ಲಿ ಈ ರೋಗ ಬರುವ ಸಾಧ್ಯತೆಯೂ ಅಧಿಕವಾಗಿರುತ್ತದೆ. ಈ ಗಂಭೀರ ಆರೋಗ್ಯ ಸಮಸ್ಯೆಯ ಬಗ್ಗೆ ಜಾಗೃತಿ ಮೂಡಿಸುವ ಸಲುವಾಗಿ ವಿಶ್ವ ಕ್ಷಯ ರೋಗ ದಿನವನ್ನು ಆಚರಿಸಲಾಗುತ್ತದೆ

ಡಾ.ರಾಬರ್ಟ್ ಕೋಚ್ ಟಿಬಿಗೆ ಕಾರಣವಾಗುವ ಬ್ಯಾಕ್ಟೀರಿಯಾವನ್ನು1882ರಲ್ಲಿ ಕಂಡುಹಿಡಿದರು. ವಿಜ್ಞಾನಿಯ ಈ ಆವಿಷ್ಕಾರವನ್ನು ನೆನಪಿಸಲು ಮಾರ್ಚ್ 24 ರಂದು ವಿಶ್ವ ಕ್ಷಯ ದಿನವೆಂದು ಆಚರಿಸಲಾಗುತ್ತದೆ.

ಪ್ರತಿ ವರ್ಷ ಮಾರ್ಚ್ 26 ರಂದು ವಿಶ್ವದೆಲ್ಲೆಡೆಯಲ್ಲಿ ಟಿವಿ ದಿನವನ್ನಾಗಿ ಆಚರಿಸಲಾಗುತ್ತದೆ. ವಿಶ್ವದೆಲ್ಲೆಡೆ ಅನೇಕರು ಈ ಕಾಯಿಲೆಗೆ ತುತ್ತಾಗಿ ಸಾವನ್ನಪ್ಪುತ್ತಿದ್ದಾರೆ. ಆರೋಗ್ಯದ ಮೇಲೆ ಗಂಭೀರ ಬ್ಯಾಕ್ಟೀರಿಯಾವು ಬೀರುವ ಪರಿಣಾಮದ ಬಗ್ಗೆ ಜಾಗೃತಿ ಮೂಡಿಸುವ ಸದುದ್ದೇಶವನ್ನು ಹೊಂದಿದೆ. ಈ ದಿನದಂದು ಕ್ಷಯ ರೋಗದ ಬಗ್ಗೆ ಜಾಗೃತಿ ಮೂಡಿಸುವ ಕಾರ್ಯಕ್ರಮಗಳು ಹಾಗೂ ಅಭಿಯಾನಗಳನ್ನು ಹಮ್ಮಿಕೊಳ್ಳಲಾಗುತ್ತದೆ.

# ಬೆಸ್ಟ್ ಆಫ್ ಎಎಸ್ ಸಿಒ ಸಮ್ಮೇಳನಕ್ಕೆ ಚಾಲನೆ




**ಬೆಂಗಳೂರು:** ಭಾರತ ಮತ್ತು ಅದರಾಚೆಗೆ ಮಾರಕ ಕ್ಯಾನ್ಸರ್ ವಿರುದ್ಧದ ಹೋರಾಟದ ರೂಪುರೇಶೆಗಳ ಬಗ್ಗೆ ಚರ್ಚಿಸುವ ಸಂಬಂಧ ದಿ ಗ್ಲೋಬಲ್ ಹೆಲ್ತ್ ಕೇರ್ ಅಕಾಡೆಮಿ ಏರ್ಪಡಿಸಲಾಗಿದ್ದ ಮೂರು ದಿನಗಳ ''ಬೆಸ್ಟ್ ಆಫ್ ಎಎಸ್ ಸಿಒ'' ಸಮ್ಮೇಳನಕ್ಕೆ ಬೆಂಗಳೂರಿನಲ್ಲಿ ಚಾಲನೆ ನೀಡಲಾಯಿತು. ಕ್ಯಾನ್ಸರ್ ರೋಗ ನಿರ್ಮೂಲನೆ ಮತ್ತು ಈ ಸಮಸ್ಯೆಗೆ ಪರಿಹಾರಗಳನ್ನು ಕಂಡುಕೊಳ್ಳುವ ನಿಟ್ಟಿನಲ್ಲಿ ನಡೆದಿರುವ ಸಂಶೋಧನೆಗಳು ಮತ್ತು ಸುಧಾರಣೆಗಳ ಬಗ್ಗೆ ಬೆಳಕು ಚೆಲ್ಲುವ ಸಮ್ಮೇಳನ ಇದಾಗಿದೆ. ಈ ಸಮ್ಮೇಳನದಲ್ಲಿ ದೇಶಾದ್ಯಂತ ಆಗಮಿಸಿರುವ ಪ್ರಮುಖ ಕ್ಯಾನ್ಸರ್ ರೋಗ ತಜ್ಞರು ಸಮಗ್ರ ಚರ್ಚೆ ನಡೆಸಲಿದ್ದಾರೆ. ಅದೇ ರೀತಿ ಅಮೇರಿಕನ್ ಸೊಸೈಟಿ ಆಫ್ ಕ್ಲಿನಿಕಲ್ ಆಂಕಾಲಾಜಿ ನ ವಾರ್ಷಿಕ ಸಭೆಯಲ್ಲಿ ಚರ್ಚಿಸಲಾದ ಮತ್ತು ತೆಗೆದುಕೊಂಡ ಪರಿಣಾಮಕಾರಿ ನಿರ್ಧಾರಗಳನ್ನು ಮಂಡಿಸಲಾಗುತ್ತಿದೆ.

ಈ ಸಮ್ಮೇಳನವನ್ನು ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಉಪಕುಲಪತಿ ಡಾ.ಎಂ.ಕೆ.ರಮೇಶ್ ಅವರು ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಹೆಲ್ತ್ ಕೇರ್ ಎಂಟರ್ ಪ್ರೈಸಸ್ ನ ಗ್ರೂಪ್ ಮೆಡಿಕಲ್ ಅಡ್ವೈಸರ್ ಡಾ.ರಾಧೇಶ್ಯಾಂ ನಾಯಕ್ ಮತ್ತು ಹೆಲ್ತ್ ಕೇರ್ ಗ್ಲೋಬಲ್ ಎಂಟರ್ ಪ್ರೈಸಸ್ ನ ಕಾರ್ಯಕಾರಿ ಅಧ್ಯಕ್ಷ ಡಾ.ಬಿ.ಎಸ್.ಅಜಯಕುಮಾರ್ ಅವರು ಮುಖ್ಯ ಭಾಷಣ ಮಾಡಿದರು.

ಬಡ ಮತ್ತು ಮಧ್ಯಮ ಆದಾಯವಿರುವ ಭಾರತದಂತಹ ದೇಶಗಳಲ್ಲಿ ಹೆಚ್ಚಾಗುತ್ತಿರುವ ಕ್ಯಾನ್ಸರ್ ಹೊರೆಯನ್ನು ಪರಿಹರಿಸುವ ಜರೂರು ಅಗತ್ಯದ ಬಗ್ಗೆ ಗಮನಹರಿಸಿದ ''ಬೆಸ್ಟ್ ಆಫ್ ಎಎಸ್ ಸಿಒ'' ಸಮ್ಮೇಳನವು, ಈ ನಿಟ್ಟಿನಲ್ಲಿ ವಿಶೇಷವಾಗಿ ಇಮ್ಯುನೋಥೆರಪಿಯೊಂದಿಗೆ ಕ್ಯಾನ್ಸರ್ ಚಿಕಿತ್ಸೆಗಳಲ್ಲಿ ಆಗಿರುವ ಇತ್ತೀಚಿನ ಟ್ರೆಂಡ್ ಗಳ ಬಗ್ಗೆ ಸುದೀರ್ಘ ಚರ್ಚೆ ನಡೆಸಿತು.

ಜಿಎಚ್‌ಎ ಮತ್ತು ಎಚ್ ಸಿಜಿ ಹಾಸ್ಪಿಟಲ್ಸ್ ನ ಅಧ್ಯಕ್ಷ ಡಾ.ಅಜಯಕುಮಾರ್ ಅವರು, ರೋಗಿಗಳ ಚೇತರಿಕೆ ಮತ್ತು ಗುಣಮುಖ ಪ್ರಮಾಣದಲ್ಲಿ ಗಣನೀಯವಾಗಿ ಸುಧಾರಣೆ ತರುವ ನವೀನ ಚಿಕಿತ್ಸಾ ವಿಧಾನಗಳನ್ನು ಅಳವಡಿಸುವ ಗುರಿಯನ್ನು ಹೊಂದಲಾಗಿದೆ. ಇದು ನೈಜ-ಪ್ರಪಂಚದ ಸನ್ನಿವೇಶಗಳ ಕಡೆಗೆ ಆಂಕಾಲಾಜಿ ಆರೈಕೆಯನ್ನು ರೀ-ಓರಿಯೆಂಟ್ ಮಾಡುವ ಅಥವಾ ತೀವ್ರ ರೀತಿಯ ಗಮನಹರಿಸುವ ವೇದಿಕೆಯಾಗಿ ಸಮ್ಮೇಳನ ಪ್ರಮುಖ ಪಾತ್ರ ವಹಿಸಬೇಕು ಎಂದು ಸಲಹೆ ನೀಡಿದರು.

ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಉಪಕುಲಪತಿ ಡಾ.ರಮೇಶ್‌ಎಂ.ಕೆ, ಅವರು, ಸಮ್ಮೇಳನದ ಶೈಕ್ಷಣಿಕ ಪರಿಣಾಮಗಳ ಬಗ್ಗೆ ಪ್ರಮುಖವಾಗಿ ಪ್ರಸ್ತಾಪಿಸಿದರು.ಕ್ಯಾನ್ಸರ್ ರೋಗಕ್ಕೆ ಚಿಕಿತ್ಸೆಯನ್ನು ಗಣನೀಯವಾಗಿ ಮುನ್ನಡೆಸಲು ಅಥವಾ ಕೈಗೊಳ್ಳಲುಇಮ್ಯುನೋಥೆರಪಿ ವಿಧಾನಗಳು ಪೂರಕವಾಗಿವೆ ಎಂಬುದನ್ನು ಸಭೆಯ ಮುಂದಿಟ್ಟರು. ಈಸಮ್ಮೇಳನ ಕೇವಲ ಕಲಿಕೆಯ ವೇದಿಕೆಯಾಗಿ ಮಾತ್ರವಲ್ಲದೇ ವೈದ್ಯಕೀಯ ವೃತ್ತಿಪರರಿಗೆಮತ್ತಷ್ಟು ಆರೋಗ್ಯ ಸುಧಾರಣೆಗಳು ಹಾಗೂ ಅವಕಾಶಗಳಿಗೆ ಒಂದು ಪ್ರಮುಖ ವೇದಿಕೆಯಾಗಿಕಾರ್ಯ ನಿರ್ವಹಿಸಬೇಕಿದೆ ಎಂದು ಕರೆ ನೀಡಿದರು.

## ಹಣೆಗೆ ಸಿಂಧೂರ ಇಟ್ಟುಕೊಳ್ಳುವುದು ಹೆಣ್ಣಿನ ಧರ್ಮ: ಮಧ್ಯಪ್ರದೇಶ ಕೋರ್ಟ್

**ಇಂದೋರ್:** ಹಣೆಗೆ ಸಿಂಧೂರ ಇಟ್ಟುಕೊಳ್ಳುವುದು ಹಿಂದೂ ಕುಟುಂಬದ ವಿವಾಹಿತ ಮಹಿಳೆಯ ಧರ್ಮ ಹಾಗೂ ಕರ್ತವ್ಯ. ಹಣೆಗೆ ಇಟ್ಟುಕೊಂಡ ಸಿಂಧೂರ ವಿವಾಹದ ಸಂಕೇತವಾಗಿದೆ ಎಂದು ಮಧ್ಯಪ್ರದೇಶದ ಕೌಟುಂಬಿಕ ನ್ಯಾಯಾಲಯ ಅಭಿಪ್ರಾಯ ಪಟ್ಟಿದೆ. ಇಂದೋರ್ನ ಮಹಿಳೆಯೊಬ್ಬಳು ಪತಿಯನ್ನು ತೊರೆದು ಮನೆಬಿಟ್ಟುಹೋಗಿದ್ದಳು, ಜತೆಗೆ ವಿಚ್ಛೇದನಕ್ಕೆ ಬೇಡಿಕೆ ಇಟ್ಟಿದ್ದಳು. ಈ ಹಿನ್ನೆಲೆ ಆಕೆಯ ಪತಿ ಹಿಂದೂ ಮ್ಯಾರೇಜ್ ಆಯಕ್ಟ್ ಅಡಿ, ನನ್ನ ಪತ್ನಿ ಮನೆಗೆ ವಾಪಸ್ ಕರೆಸಿಕೊಳ್ಳಲು ಅನುವು ಮಾಡಿಕೊಡುವಂತೆ ಕೋರಿ ಕೋರ್ಟ್ ಮೆಟ್ಟಿಲೇರಿದ್ದರು. ಈ ಪ್ರಕರಣದ ವಿಚಾರಣೆ ನಡೆಸಿದ ಜಡ್ಜ್, ಮಹಿಳೆಯ ಹೇಳಿಕೆಯನ್ನು ದಾಖಲಿಸಿಕೊಂಡರು. ಈ ಸಂದರ್ಭದಲ್ಲಿ ಆಕೆ ಹಣೆಗೆ ಸಿಂಧೂರವನ್ನು ಇಟ್ಟುಕೊಂಡಿರಲಿಲ್ಲ. ಜೊತೆಗೆ ಗಂಡನ ಮನೆಯಲ್ಲಿ ಸಿಂಧೂರ ಇಟ್ಟುಕೊಂಡಿರಲಿಲ್ಲ ಎಂಬುವುದನ್ನು ಕೋರ್ಟ್ನಲ್ಲಿ ಒಪ್ಪಿಕೊಂಡಿದ್ದಾಳೆ. ಹೀಗಾಗಿ, ಹಿಂದೂ ಧರ್ಮದಲ್ಲಿ ಸಾಂಪ್ರದಾಯಿಕವಾಗಿ ಸಿಂಧೂರ ಇಟ್ಟುಕೊಳ್ಳುವುದು ಪತ್ನಿಯ ಧರ್ಮ ಹಾಗೂ ಕರ್ತವ್ಯ. ಸಿಂಧೂರ ವಿವಾಹದ ಸಂಕೇತವಾಗಿದೆ ಎಂದು ನ್ಯಾಯಾಧೀಶರು ಅಭಿಪ್ರಾಯಪಟ್ಟಿದ್ದು, ವಿಚ್ಛೇದನ ನೀಡಲು ಸಾಧ್ಯವಿಲ್ಲ ಎಂಬುವುದಾಗಿಯೂ ಹೇಳಿದ್ದಾರೆ.



## 15.78 ಕೋಟಿ ನಗದು, 23.37 ಕೋಟಿ ರೂ ಮೌಲ್ಯದ ಮದ್ಯ ವಶ



**ಬೆಂಗಳೂರು:** ಲೋಕಸಭಾ ಚುನಾವಣೆ 2024 ಕ್ಕೆ ನೀತಿ ಸಂಹಿತೆ ಉಲ್ಲಂಘನೆಯಾಗಿರುವ ಪ್ರಕರಣದಲ್ಲಿ ಕಳೆದ 24 ಗಂಟೆಗಳಲ್ಲಿ 6.13 ಕೋಟಿ ರೂಪಾಯಿ ವಶಕ್ಕೆ ಪಡೆಯಲಾಗಿದೆ ಎಂದು ಆಯೋಗ ಮಾಹಿತಿ ನೀಡಿದೆ. ಈ ವರೆಗೂ ರಾಜ್ಯದಲ್ಲಿ 15.78 ಕೋಟಿ ರೂಪಾಯಿಗಳನ್ನು ವಶಕ್ಕೆ ಪಡೆಯಲಾಗಿದ್ದರೆ, 23.37 ಕೋಟಿ ರೂಪಾಯಿ ಮೌಲ್ಯದ ಮದ್ಯವನ್ನು ವಶಪಡಿಸಿಕೊಳ್ಳಲಾಗಿದೆ. ಮಾ.16 ರಿಂದ ರಾಜ್ಯದಲ್ಲಿ ಚುನಾವಣಾ ನೀತಿ ಸಂಹಿತೆ ಜಾರಿಯಾಗಿದೆ.

ಫಿರಾಜ್ಯದಲ್ಲಿ ಏ.26 ಹಾಗೂ ಮೇ.7 ರಂದು 2 ಹಂತಗಳಲ್ಲಿ 28 ಲೋಕಸಭಾ ಕ್ಷೇತ್ರಗಳಿಗೆ ಮತದಾನ ನಡೆಯಲಿದೆ. ನೀತಿ ಸಂಹಿತೆ ಪ್ರಕರಣದಲ್ಲಿ 17.3 ಲಕ್ಷ ಮೌಲ್ಯದ ಉಚಿತ ಉಡುಗೊರೆಗಳು, 7.41 ಲಕ್ಷ ಲೀಟರ್ ಗಳಷ್ಟು ಮದ್ಯ, 66.34 ಕೆಜಿಯಷ್ಟು 65 ಲಕ್ಷ ರೂ ಮೌಲ್ಯದ ನಾರ್ಕೊಟಿಕ್ ವಸ್ತುಗಳು, 43 ಕೋಟಿ ರೂಪಾಯಿ ಮೌಲ್ಯದ ಅಮೂಲ್ಯ ಲೋಹಗಳನ್ನು ವಶಕ್ಕೆ ಪಡೆಯಲಾಗಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ನಗದು, ಮದ್ಯ, ಡ್ರಗ್ಸ್, ಬೆಲೆಬಾಳುವ ಲೋಹ ಮತ್ತು ಉಚಿತ ವಸ್ತುಗಳನ್ನು ವಶಪಡಿಸಿಕೊಳ್ಳಲು ಸಂಬಂಧಿಸಿದಂತೆ ಆಯೋಗದ ಅಧಿಕಾರಿಗಳು 496 ಎಫ್‌ಐಆರ್‌ಗಳನ್ನು ದಾಖಲಿಸಿದ್ದಾರೆ. 72,627 ಶಸ್ತ್ರಾಸ್ತ್ರಗಳನ್ನು ವಶಕ್ಕೆ ಪಡೆಯಲಾಗಿದೆ. 836 ಶಸ್ತ್ರಾಸ್ತ್ರಗಳನ್ನು ವಶಪಡಿಸಿಕೊಳ್ಳಲಾಗಿದೆ, 8 ಶಸ್ತ್ರಾಸ್ತ್ರ ಪರವಾನಗಿಗಳನ್ನು ರದ್ದುಪಡಿಸಲಾಗಿದೆ, 4,175 ಪ್ರಕರಣಗಳನ್ನು ಸಿಆರ್‌ಪಿಸಿಯ ತಡೆಗಟ್ಟುವ ವಿಭಾಗಗಳ ಅಡಿಯಲ್ಲಿ ದಾಖಲಿಸಲಾಗಿದೆ. ಅದರಲ್ಲಿ 4,826 ವ್ಯಕ್ತಿಗಳನ್ನು ಬಂಧಿಸಲಾಗಿದೆ.

ಅಬಕಾರಿ ಇಲಾಖೆ 552 ಹೇಯ ಪ್ರಕರಣಗಳು, ಪರವಾನಗಿ ಷರತ್ತುಗಳ ಉಲ್ಲಂಘನೆಗಾಗಿ 430 ಪ್ರಕರಣಗಳು, 29 ಓಆಕಖ (ಮಾದಕ ಔಷಧಗಳು ಮತ್ತು ಮಾನಸಿಕ ಪದಾರ್ಥಗಳ ಕಾಯ್ದೆ) ಮತ್ತು 1,815 ಪ್ರಕರಣಗಳನ್ನು ಕರ್ನಾಟಕ ಅಬಕಾರಿ ಕಾಯಿದೆ 1965 ರ ಸೆಕ್ಷನ್ 15 (ಎ) ಅಡಿಯಲ್ಲಿ ಮತ್ತು 329 ವಿವಿಧ ರೀತಿಯ ವಾಹನಗಳನ್ನು ದಾಖಲಿಸಲಾಗಿದೆ. ವಶಪಡಿಸಿಕೊಂಡಿದ್ದಾರೆ. ಬೆಂಗಳೂರು ಗ್ರಾಮಾಂತರ ಸಂಸದೀಯ ಕ್ಷೇತ್ರದಲ್ಲಿ ಪೊಲೀಸ್ ಇಲಾಖೆ 5.36 ಕೋಟಿ ವಶಪಡಿಸಿಕೊಂಡಿದೆ ಎಂದು ಕರ್ನಾಟಕ ಮುಖ್ಯ ಚುನಾವಣಾಧಿಕಾರಿಗಳ ಕಚೇರಿ ಪ್ರಕಟಣೆಯಲ್ಲಿ ತಿಳಿಸಿದೆ.

ಮಾದರಿ ನೀತಿ ಸಂಹಿತೆ ಉಲ್ಲಂಘನೆ: 27,62,47,214 ರೂ. ಮೌಲ್ಯದ ವಸ್ತುಗಳ ವಶ, 205 ಎಫ್‌ಐಆರ್ ದಾಖಲು, ಬಳ್ಳಾರಿ ವಿಧಾನಸಭಾ ಕ್ಷೇತ್ರದಲ್ಲಿ 30 ಲಕ್ಷಕ್ಕೂ ಅಧಿಕ ಮೌಲ್ಯದ 203 ಕೆಜಿ ಶ್ರೀಗಂಧವನ್ನು ವಶಪಡಿಸಿಕೊಂಡಿದ್ದಾರೆ. ಇದೇ ವೇಳೆ ಮೈಸೂರು ಲೋಕಸಭಾ ಕ್ಷೇತ್ರದಲ್ಲಿ ಸುಮಾರು 16 ಲಕ್ಷ ನಗದು ವಶಪಡಿಸಿಕೊಳ್ಳಲಾಗಿದ್ದು, ಬಳ್ಳಾರಿ ಲೋಕಸಭಾ ಕ್ಷೇತ್ರದಲ್ಲಿ 26 ಲಕ್ಷ ನಗದು ವಶಪಡಿಸಿಕೊಳ್ಳಲಾಗಿದೆ.

### ಕೇಜ್ರಿವಾಲ್ ಬಂಧನ ಪ್ರಕರಣ

## ಸ್ಪಷ್ಟ ಹಸ್ತಕ್ಷೇಪ ಮಾಡಿದ ಜರ್ಮನಿಗೆ ಭಾರತದ ತಪರಾಕಿ!



**ನವದೆಹಲಿ:** ದೆಹಲಿ ಸಿಎಂ ಅರವಿಂದ್ ಕೇಜ್ರಿವಾಲ್ ಬಂಧನ ಪ್ರಕರಣದ ಸಂಬಂಧ ಅನವಶ್ಯಕ ಹೇಳಿಕೆ ನೀಡಿದ್ದ ಜರ್ಮನಿಗೆ ಭಾರತ ಎಚ್ಚರಿಕೆ ರವಾನಿಸಿದೆ. ಜರ್ಮನಿಯ ರಾಯಭಾರ ಕಚೇರಿಯ ಹಿರಿಯ ಅಧಿಕಾರಿಯನ್ನು ಕರೆಸಿರುವ ವಿದೇಶಾಂಗ ಸಚಿವಾಲಯ ಜರ್ಮನಿಯ ಹೇಳಿಕೆಗೆ ತನ್ನ ಪ್ರತಿರೋಧವನ್ನು ವ್ಯಕ್ತಪಡಿಸಿದೆ.

ಹೇಳಿಕೆಯೊಂದರಲ್ಲಿ, ಜರ್ಮನಿಯ ವಿದೇಶಾಂಗ ವ್ಯವಹಾರಗಳ ವಕ್ತಾರರು ನ್ಯಾಯಾಂಗದ ಸ್ವಾತಂತ್ರ್ಯ ಮತ್ತು ಮೂಲಭೂತ ಪ್ರಜಾಪ್ರಭುತ್ವದ ತತ್ವಗಳಿಗೆ ಸಂಬಂಧಿಸಿದ ಮಾನದಂಡಗಳನ್ನು ಕೇಜ್ರಿವಾಲ್ ಪ್ರಕರಣದಲ್ಲಿ ಅನ್ವಯಿಸಬಹುದು ಎಂದು ಆಶಿಸಿದ್ದರು.

ಆರೋಪಗಳನ್ನು ಎದುರಿಸುತ್ತಿರುವ ಯಾರೊಬ್ಬರಂತೆ, ಕೇಜ್ರಿವಾಲ್ ಅವರು ನ್ಯಾಯಯುತ ಮತ್ತು ನಿಷ್ಪಕ್ಷಪಾತ ವಿಚಾರಣೆಗೆ ಅರ್ಹರಾಗಿದ್ದಾರೆ, ಇದು ಅವರು ಲಭ್ಯವಿರುವ ಎಲ್ಲಾ ಕಾನೂನು ಮಾರ್ಗಗಳನ್ನು ನಿರ್ಬಂಧಗಳಿಲ್ಲದೆ ಬಳಸಿಕೊಳ್ಳಬಹುದು. ಮುಗ್ಧತೆಯ ಊಹೆಯು ಕಾನೂನಿನ ನಿಯಮದ ಕೇಂದ್ರ ಅಂಶವಾಗಿದೆ ಮತ್ತು ಅವರಿಗೆ ಅನ್ವಯಿಸಬೇಕು ಎಂದು ವಕ್ತಾರರು ಹೇಳಿದ್ದರು.

ಜರ್ಮನಿಯ ವಿದೇಶಾಂಗ ಸಚಿವಾಲಯದ ವಕ್ತಾರರ ಹೇಳಿಕೆಗಳಿಗೆ ಪ್ರತಿಕ್ರಿಯಿಸಿದ ಭಾರತ, ಜರ್ಮನ್ ರಾಯಭಾರಿ ಕಚೇರಿಯ ಡೆಪ್ಯುಟಿ ಹೆಡ್ ಆಫ್ ಮಿಷನ್ ಜಾರ್ಜ್ ಎಂಜ್‌ವೀಲರ್ ಅವರನ್ನು ಕರೆಸಿ ಬಲವಾದ ಪ್ರತಿಭಟನೆಯನ್ನು ದಾಖಲಿಸಿದೆ. ಇದು ಭಾರತದ ನ್ಯಾಯಾಂಗ ಪ್ರಕ್ರಿಯೆಯಲ್ಲಿ ಜರ್ಮನಿಯ ಹಸ್ತಕ್ಷೇಪ ಎಂದು ಭಾರತ ವ್ಯಾಖ್ಯಾನಿಸಿದೆ.

ನಮ್ಮ ಆಂತರಿಕ ವ್ಯವಹಾರಗಳ ಕುರಿತು ವಿದೇಶಾಂಗ ಕಚೇರಿಯ ವಕ್ತಾರರ ಹೇಳಿಕೆಗಳ ವಿಷಯವಾಗಿನವದೆಹಲಿಯಲ್ಲಿರುವಜರ್ಮನ್ ಡೆಪ್ಯುಟಿ ಚೀಫ್ ಆಫ್ ಮಿಷನ್ ಅವರನ್ನು ಇಂದು ಕರೆಸಲಾಯಿತು ಮತ್ತು ಭಾರತದ ತೀವ್ರ ಪ್ರತಿಭಟನೆಯನ್ನು ತಿಳಿಸಲಾಯಿತು. ನಮ್ಮ ನ್ಯಾಯಾಂಗ ಪ್ರಕ್ರಿಯೆಯಲ್ಲಿ ಹಸ್ತಕ್ಷೇಪ ಮತ್ತು ನಮ್ಮ ನ್ಯಾಯಾಂಗದ ಸ್ವಾತಂತ್ರ್ಯವನ್ನು ದುರ್ಬಲಗೊಳಿಸುವಂತಹ ಹೇಳಿಕೆಗಳನ್ನು ನಾವು ಇದರಲ್ಲಿ ಗಮನಿಸಿದ್ದೇವೆ. ಕಾನೂನು ತಕ್ಷಣದ ವಿಷಯದಲ್ಲಿ ತನ್ನದೇ ಆದ ಮಾರ್ಗವನ್ನು ತೆಗೆದುಕೊಳ್ಳುತ್ತದೆ. ಈ ಬಗ್ಗೆ ಮಾಡಲಾದ ಪಕ್ಷಪಾತದ ಊಹೆಗಳು ಅತ್ಯಂತ ಅನಪೇಕ್ಷಿತ ಎಂದು ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ.

## ಉಕ್ರೇನ್‌ಗೆ ಪರಾರಿಯಾಗಲು ದಾಳಿಕೋರರ ಪ್ರಯತ್ನ: ಪುಟಿನ್

**ಮಾಸ್ಕೋ :** ಇಲ್ಲಿ ನಡೆಯುತ್ತಿದ್ದ ಸಂಗೀತ ಕಾರ್ಯಕ್ರಮದಲ್ಲಿ ಗುಂಡಿನ ದಾಳಿ ನಡೆಸಿದ ಭಯೋತ್ಪಾದಕರು ಉಕ್ರೇನ್ಗೆ ಪರಾರಿಯಾಗಲು ಪ್ರಯತ್ನಿಸಿದ್ದರು. ಇವರನ್ನು ಗಡಿದಾಟಿಸಲು ಉಕ್ರೇನ್ನ ಬದಿಯಲ್ಲಿ ಕೆಲವರು ಸನ್ನದ್ಧರಾಗಿದ್ದರು. ಈ ಭಯೋತ್ಪಾದಕ ದಾಳಿಯಲ್ಲಿ ಉಕ್ರೇನ್ನ ಕೈವಾಡ ಇರುವುದು ಸ್ಪಷ್ಟವಾಗಿದೆ ಎಂದು ರಶ್ಯ ಅಧ್ಯಕ್ಷ ವ್ಲಾದಿಮಿರ್ ಪುಟಿನ್ ಶನಿವಾರ ಆರೋಪಿಸಿದ್ದಾರೆ. ಈ ಭಯೋತ್ಪಾದಕ ದಾಳಿಯಲ್ಲಿ ಉಕ್ರೇನ್ನ ಕೈವಾಡ ಇರುವುದು ಸ್ಪಷ್ಟವಾಗಿದೆ ಎಂದು ರಶ್ಯ ಅಧ್ಯಕ್ಷ ವ್ಲಾದಿಮಿರ್ ಪುಟಿನ್ ಶನಿವಾರ ಆರೋಪಿಸಿದ್ದಾರೆ. ಟಿವಿ ವಾಹಿನಿಯಲ್ಲಿ ದೇಶವನ್ನುದ್ದೇಶಿಸಿ ಮಾತನಾಡಿದ ಅವರು ' ಬರ್ಬರ ಭಯೋತ್ಪಾದಕ ದಾಳಿಯಲ್ಲಿ ಅಮಾಯಕರು ಬಲಿಯಾಗಿದ್ದಾರೆ. ಮಾರ್ಚ್ 24ನ್ನು(ರವಿವಾರ) ರಾಷ್ಟ್ರೀಯ ಶೋಕಾಚರಣೆ ದಿನವಾಗಿ ಘೋಷಿಸಲಾಗಿದೆ' ಎಂದರು. ಗುಂಡಿನ ದಾಳಿ ನಡೆಸಿದ ಬಳಿಕ ತಪ್ಪಿಸಿಕೊಂಡು ಉಕ್ರೇನ್ ಗಡಿಯತ್ತ ಓಡಲು ಅವರು ಪ್ರಯತ್ನಿಸಿದ್ದಾರೆ. ರಶ್ಯದ ಗಡಿದಾಟಿ ಬರಲು ಅವರಿಗೆ ದಾರಿಯೊಂದನ್ನು ತೆರೆಯಲಾಗಿತ್ತು ಎಂಬುದು ಪ್ರಾಥಮಿಕ ಮಾಹಿತಿಯಿಂದ ದೃಢಪಟ್ಟಿದೆ. ದಾಳಿ ನಡೆಸಿದವರು, ಅವರನ್ನು ಬೆಂಬಲಿಸಿದವರು, ಸಂಚು ರೂಪಿಸಿದವರು ಎಲ್ಲರನ್ನೂ ಸೂಕ್ತ ರೀತಿಯಲ್ಲಿ ಶಿಕ್ಷಿಸಲಾಗುವುದು. ಅವರು ಯಾರೇ ಆಗಿರಲಿ, ಅಥವಾ ಅವರಿಗೆ ಮಾರ್ಗದರ್ಶನ ನೀಡುವವರು ಯಾರೇ ಆಗಿರಲಿ ಅವರನ್ನು ಗುರುತಿಸಿ ಶಿಕ್ಷಿಸಲಾಗುವುದು. ಇದು ರಶ್ಯದ ವಿರುದ್ಧದ, ರಶ್ಯದ ಜನತೆಯ ವಿರುದ್ಧದ ದಾಳಿಯಾಗಿದೆ ಎಂದು ಪುಟಿನ್ ಹೇಳಿದ್ದಾರೆ.



## ಕೇಜ್ರಿವಾಲ್ ಜೈಲಿನಲ್ಲಿ ಕಚೇರಿ ಸ್ಥಾಪಿಸಲು ಅನುಮತಿ ಕೋರಿ ಕೋರ್ಟ್ ಗೆ ಅರ್ಜಿ: ಪಂಜಾಬ್ ಸಿಎಂ ಮಾನ್



**ಚಂಡೀಗಢ:** ದೆಹಲಿ ಅಬಕಾರಿ ನೀತಿ ಪ್ರಕರಣದಲ್ಲಿ ಬಂಧನಕ್ಕೊಳಗಾಗಿರುವ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರನ್ನು ಜೈಲಿಗೆ ಕಳುಹಿಸಿದರೆ, ಅಲ್ಲಿಂದಲೇ ಸರ್ಕಾರ ನಡೆಸಲು ಜೈಲಿನಲ್ಲಿ ಕಚೇರಿ ಸ್ಥಾಪಿಸಲು ಅನುಮತಿ ಕೋರಿ ನ್ಯಾಯಾಲಯವನ್ನು ಸಂಪರ್ಕಿಸುತ್ತೇವೆ ಎಂದು ಆಮ್ ಆದ್ಮಿ ಪಕ್ಷದ ನಾಯಕ ಮತ್ತು ಪಂಜಾಬ್ ಮುಖ್ಯಮಂತ್ರಿ ಭಗವಂತ್ ಮಾನ್ ಅವರು ಶನಿವಾರ ಹೇಳಿದ್ದಾರೆ.

ಆಮ್ ಆದ್ಮಿ ಪಕ್ಷದ ರಾಷ್ಟ್ರೀಯ ಸಂಚಾಲಕ ಕೇಜ್ರಿವಾಲ್ ಅವರ ಸ್ಥಾನವನ್ನು ಯಾರೂ ತುಂಬಲು ಸಾಧ್ಯವಿಲ್ಲ ಎಂದು ಪಂಜಾಬ್ ಸಿಎಂ ಪ್ರತಿಪಾದಿಸಿದ್ದಾರೆ.

ಅಬಕಾರಿ ನೀತಿ ಪ್ರಕರಣದಲ್ಲಿ ಜಾರಿ ನಿರ್ದೇಶನಾಲಯ ದೆಹಲಿ ಮುಖ್ಯಮಂತ್ರಿಯನ್ನು ಬಂಧಿಸಿರುವ ಬಗ್ಗೆ ಮತ್ತು ಅವರು ಹೇಗೆ ಸರ್ಕಾರ ನಡೆಸುತ್ತಾರೆ? ಎಂಬ ವರದಿಗಾರರ ಪ್ರಶ್ನೆಗೆ ಉತ್ತರಿಸಿದ ಮಾನ್, ಸರ್ಕಾರವನ್ನು ಜೈಲಿನಿಂದ ನಡೆಸಲು ಸಾಧ್ಯವಿಲ್ಲ ಎಂದು ಎಲ್ಲಿಯೂ ಬರೆಯಲಾಗಿಲ್ಲ ಎಂದಿದ್ದಾರೆ.

ಸದ್ಯ ಇಡಿ ವಶದಲ್ಲಿರುವ ದೆಹಲಿ ಸಿಎಂ ಕೇಜ್ರಿವಾಲ್ ಅವರನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದರೆ, ಜೈಲಿನಿಂದಲೇ ದೆಹಲಿ ಸರ್ಕಾರ ನಡೆಸಲಿದ್ದಾರೆ ಎಂದು ಭಗವಂತ್ ಮಾನ್ ಹೇಳಿದ್ದಾರೆ. ಕಾನೂನು ಅವರು ತಪ್ಪಿತಸ್ಥರೆಂದು ಸಾಬೀತಾಗುವವರೆಗೆ ಜೈಲಿನಿಂದ ಕೆಲಸ ಮಾಡಬಹುದು ಎಂದು ಹೇಳುತ್ತದೆ. ನಾವು ಜೈಲಿನಲ್ಲಿ ಕಚೇರಿ ಸ್ಥಾಪಿಸಲು ಸುಪ್ರೀಂ ಕೋರ್ಟ್, ಹೈಕೋರ್ಟ್‌ನಿಂದ ಅನುಮತಿ ಪಡೆಯುತ್ತೇವೆ ಮತ್ತು ಸರ್ಕಾರ ಕಾರ್ಯನಿರ್ವಹಿಸುತ್ತದೆ ಎಂದು ಮಾನ್ ತಿಳಿಸಿದರು.

## ಸಾಲ ಮನ್ನಾ ಮಾಡಿ : ಮಾಲ್ಡೀವ್ಸ್ ಅಧ್ಯಕ್ಷ ಮನವಿ

**ಮಾಲೆ :** ಭಾರತದ ಜೊತೆ ಕಿರಿಕ್ ಮಾಡಿಕೊಂಡಿದ್ದ ಮಾಲ್ಡೀವ್ಸ್ ಅಧ್ಯಕ್ಷ ಮೊಹಮ್ಮದ್ ಮುಯಿಜು ಈಗ ತಣ್ಣಗಾಗಿದ್ದಾರೆ. ಭಾರತವನ್ನು ಸ್ನೇಹಿತ ದೇಶ ಎಂದು ಕರೆದಿದ್ದಾರೆ. ಅಲ್ಲದೆ ಭಾರತದ ಬಳಿ ಮಾಲ್ಡೀವ್ಸ್ ಮಾಡಿರುವ 34500 ಕೋಟಿ ಸಾಲ ಮನ್ನಾ ಮಾಡುವಂತೆ ಕೋರುವುದಾಗಿ ಹೇಳಿದ್ದಾರೆ. ಸ್ಥಳೀಯ ಸುದ್ದಿ ಸಂಸ್ಥೆಗೆ ನೀಡಿದ ಸಂದರ್ಶನದಲ್ಲಿ ಮಾತನಾಡಿರುವ ಅವರು, ಕಳೆದ ಸರ್ಕಾರಗಳು ಆರ್ಥಿಕತೆಯ ಗಾತ್ರವನ್ನೂ ಮೀರಿ ಭಾರತದ ಬಳಿ ಸಾಲ ಪಡೆದಿವೆ. ಅದನ್ನು ಬಳಸಿಕೊಂಡು ನಮ್ಮ ದೇಶದಲ್ಲಿ ಹಲವು ಅಭಿವೃದ್ಧಿ ಯೋಜನೆಗಳನ್ನು ಕೈಗೆತ್ತಿಕೊಳ್ಳಲಾಗಿದೆ. ಸದ್ಯಕ್ಕೆ ನಮ್ಮಲ್ಲಿ ಆರ್ಥಿಕ ಪರಿಸ್ಥಿತಿ ತುಸು ಹದಗೆಟ್ಟಿದ್ದು, ಸಾಲವನ್ನು ಮರುಪಾವತಿಸುವ ಸ್ಥಿತಿಯಲ್ಲಿಲ್ಲ. ಹೀಗಾಗಿ ಅಭಿವೃದ್ಧಿ ಯೋಜನೆಗಳನ್ನು ನಿಲ್ಲಿಸುವ ಬದಲು ಭಾರತದ ಬಳಿ ಸಾಲ ಮರುಪಾವತಿ ಮಾಡುವಲ್ಲಿ ತುಸು ವಿನಾಯಿತಿ ನೀಡುವಂತೆ ಕೋರಲು ಚಿಂತಿಸಲಾಗುತ್ತಿದೆ ಎಂದು ತಿಳಿಸಿದ್ದಾರೆ.

## ರಫಾ ಕಾರ್ಯಾಚರಣೆ ನಿಲ್ಲಿಸಲು ನೆತನ್ಯಾಹು ನಕಾರ

**ಟೆಲ್‌ಅವೀವ್:** ದಕ್ಷಿಣ ಗಾಝಾದ ರಫಾ ನಗರದಲ್ಲಿ ಉದ್ದೇಶಿತ ಪದಾತಿ ದಳದ ಆಕ್ರಮಣ ಯೋಜನೆಯನ್ನು ಕೈಬಿಡುವಂತೆ ಅಮೆರಿಕ ನೀಡಿದ ಸಲಹೆಯನ್ನು ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ತಿರಸ್ಕರಿಸಿದ್ದಾರೆ. ಇದರೊಂದಿಗೆ ಅಮೆರಿಕದ ವಿದೇಶಾಂಗ ಕಾರ್ಯದರ್ಶಿ ಆಂಟನಿ ಬ್ಲಿಂಕೆನ್ ಅವರ ಮಧ್ಯಪ್ರಾಚ್ಯ ಪ್ರವಾಸ ಉದ್ದೇಶಿತ ಗುರಿ ಸಾಧಿಸಲು ವಿಫಲವಾಗಿದೆ. ಸ್ಥಳಾಂತರಗೊಂಡ ಫೆಲೆಸ್ತೀನೀಯರು ಕಿಕ್ಕಿರಿದು ತುಂಬಿರುವ ರಫಾದಲ್ಲಿ ಉದ್ದೇಶಿತ ಕಾರ್ಯಾಚರಣೆ ಕೈಬಿಡುವಂತೆ ಅಮೆರಿಕದ ಆಗ್ರಹವನ್ನು ನೆತನ್ಯಾಹು ತಿರಸ್ಕರಿಸಿರುವುದು ಮುಂದಿನ ವಾರ ವಾಷಿಂಗ್ಟನ್ನಲ್ಲಿ ಅಮೆರಿಕ ಮತ್ತು ಇಸ್ರೇಲ್ನ ನಿಯೋಗದ ನಡುವೆ ನಿಗದಿಯಾಗಿರುವ ಉನ್ನತ ಮಟ್ಟದ ಸಭೆಗೆ ಹಿನ್ನಡೆಯಾಗುವ ಸಾಧ್ಯತೆಯಿದೆ. ಅಗತ್ಯ ಬಿದ್ದರೆ ರಫಾದಲ್ಲಿ ಏಕಾಂಗಿಯಾಗಿ ಕಾರ್ಯಾಚರಣೆಗೂ ಇಸ್ರೇಲ್ ಹಿಂಜರಿಯುವುದಿಲ್ಲ ಎಂದು ನೆತನ್ಯಾಹು ಸ್ಪಷ್ಟಪಡಿಸಿದ್ದಾರೆ. ಇಸ್ರೇಲ್ಗೆ ಅಮೆರಿಕ ರಾಜತಾಂತ್ರಿಕ ಮತ್ತು ಮಿಲಿಟರಿ ನೆರವು ಒದಗಿಸುತ್ತಿದೆ. ಗಾಝಾದಲ್ಲಿ ಉಳಿದಿರುವ ಹಮಾಸ್ನ ಅಂತಿಮ ಭದ್ರಕೋಟೆ ಆಗಿರುವ ರಫಾದಲ್ಲಿ ಹಮಾಸ್ ಗುಂಪನ್ನು ಸೋಲಿಸುವವರೆಗೆ ತನ್ನ ಯುದ್ಧದ ಉದ್ದೇಶ ಈಡೇರುವುದಿಲ್ಲ ಎಂದು ಇಸ್ರೇಲ್ ಹೇಳುತ್ತಿದೆ. ಆದರೆ ಗಾಝಾದ ಇತರೆಡೆ ಇಸ್ರೇಲ್ನ ಕಾರ್ಯಾಚರಣೆಯ ಬಳಿಕ ನೆಲೆ ಕಳೆದುಕೊಂಡಿರುವ ಸುಮಾರು 1 ದಶಲಕ್ಷಕ್ಕೂ ಅಧಿಕ ಫೆಲೆಸ್ತೀನೀಯರು ಈಗ ರಫಾದಲ್ಲಿ ಆಶ್ರಯ ಪಡೆದಿದ್ದಾರೆ.

## ಟಿಎಂಸಿ ನಾಯಕಿ ಮಹುವಾ ಮೊಯಿತ್ರಾ ನಿವಾಸದಲ್ಲಿ ಸಿಬಿಐನಿಂದ ಶೋಧ

**ಕೋಲ್ಕತ್ತಾ:** ಪಶ್ಚಿಮ ಬಂಗಾಳದ ಟಿಎಂಸಿ ನಾಯಕಿ ಮಹುವಾ ಮೊಯಿತ್ರಾ ಅವರ ನಿವಾಸ ಸೇರಿದಂತೆ ಕೋಲ್ಕತ್ತಾ ಮತ್ತು ಅವರಿಗೆ ಸಂಬಂಧಿಸಿದ ಇತರ ಸ್ಥಳಗಳಲ್ಲಿ ಸಿಬಿಐ ಶೋಧ ನಡೆಸುತ್ತಿದೆ ಎಂದು ವರದಿ ಹೇಳಿದೆ. ಕೇಂದ್ರ ತನಿಖಾ ಸಂಸ್ಥೆಯ ತಂಡಗಳು ಶನಿವಾರ ಬೆಳಗ್ಗೆ ಮೊಯಿತ್ರಾ ಅವರ ಕೋಲ್ಕತ್ತಾ ನಿವಾಸ ಮತ್ತು ಇತರ ನಗರಗಳನ್ನು ಶೋಧ ಕಾರ್ಯಾಚರಣೆಯನ್ನು ನಡೆಸಿದ್ದಾರೆ. ಆರು ತಿಂಗಳೊಳಗೆ ವರದಿ ಸಲ್ಲಿಸುವಂತೆ ಲೋಕಪಾಲ್ ನಿರ್ದೇಶನದ ಮೇರೆಗೆ ಸಿಬಿಐ ಗುರುವಾರ ಟಿಎಂಸಿ ಮಾಜಿ ಸಂಸದರ ವಿರುದ್ಧ ಎಫ್‌ಐಆರ್ ದಾಖಲಿಸಿದೆ. ಡಿಸೆಂಬರ್ನಲ್ಲಿ ಸಂಸತ್ತಿನಿಂದ ಮಹುವಾ ಮೊಯಿತ್ರಾ ಅವರನ್ನು ಹೊರಹಾಕಲಾಯಿತು. ಈ ಕ್ರಮವನ್ನು ಪ್ರಶ್ನಿಸಿ ಸುಪ್ರೀಂ ಕೋರ್ಟ್ಗೆ ಅರ್ಜಿ ಸಲ್ಲಿಸಿದ್ದರು ಮತ್ತು ಮುಂಬರುವ ಸಾರ್ವತ್ರಿಕ ಚುನಾವಣೆಯಲ್ಲಿ ಪಶ್ಚಿಮ ಬಂಗಾಳದ ಕೃಷ್ಣನಗರ ಕ್ಷೇತ್ರದಿಂದ ಟಿಎಂಸಿ ಅಭ್ಯರ್ಥಿಯಾಗಿ ಮತ್ತೆ ಕಣಕ್ಕಿಳಿಯಲಿದ್ದಾರೆ. ಲೋಕಸಭೆಯಲ್ಲಿ ಪ್ರಧಾನಿ ಮೋದಿ ಮತ್ತು ಅದಾನಿ ವಿರುದ್ಧ ಮಾತನಾಡಲು ಹಣ ಪಡೆದಿದ್ದಾರೆ ಎಂದು ಬಿಜೆಪಿ ಸಂಸದ ನಿಶಿಕಾಂತ್ ದುಬೆ ಅವರು ಮೊಯಿತ್ರಾ ವಿರುದ್ಧ ಆರೋಪಿಸಿದ್ದರು.

ಈ ಆರೋಪಕ್ಕೆ ಸಂಬಂಧಿಸಿದಂತೆ ಪ್ರಾಥಮಿಕ ತನಿಖೆಯ ವರದಿಯನ್ನು ಪಡೆದು ಭ್ರಷ್ಟಾಚಾರ ವಿರೋಧಿ ಸಂಸ್ಥೆ ಒಂಬುಡ್ಸ್ಮನ್ ಲೋಕಪಾಲ್, ಸಿಬಿಐಗೆ ಈ ಬಗ್ಗೆ ನಿರ್ದೇಶನಗಳನ್ನು ನೀಡಿದರು.

## ಏ. 1ರಿಂದ ಎನ್‌ಪಿಎಸ್ ವಹಿವಾಟಿಗೆ ಆಧಾರ್ ದೃಢೀಕರಣ ಕಡ್ಡಾಯ

ನವದೆಹಲಿ: ದೇಶಾದ್ಯಂತ ಆನ್ಲೈನ್ ವಂಚನೆ ಪ್ರಕರಣಗಳ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದ್ದು, ಈ ಹಿನ್ನೆಲೆಯಲ್ಲಿ ಪಿಂಚಣಿ ನಿಧಿ ನಿಯಂತ್ರಣ ಮತ್ತು ಅಭಿವೃದ್ಧಿ ಪ್ರಾಧಿಕಾರವು ರಾಷ್ಟ್ರೀಯ ಪಿಂಚಣಿ ವ್ಯವಸ್ಥೆಯ ಖಾತೆಗಳ ಲಾಗಿನ್ ಪ್ರಕ್ರಿಯೆಯಲ್ಲಿ ಬದಲಾವಣೆ ತಂದಿದೆ. ಏಪ್ರಿಲ್ 1ರಂದು ಹೊಸ ನಿಯಮ- ಕಡ್ಡಾಯ ಆಧಾರ್ ಅಥೆಂಟಿಕೇಷನ್ ಜಾರಿಗೆ ಬರಲಿದೆ.

ಯಾಕಾಗಿ ಈ ನಿಯಮ?: ಹೆಚ್ಚಿನ ಭದ್ರತೆಯನ್ನು ಜನರಿಗೆ ಒದಗಿಸಲು ಮತ್ತು ಎನ್‌ಪಿಎಸ್ ಚಂದಾದಾರರ ಹಿತಾಸಕ್ತಿಗಳನ್ನು ಕಾಪಾಡುವ ದೃಷ್ಟಿಯಿಂದಾಗಿ ಪಿಂಚಣಿ ನಿಯಂತ್ರಣ ಪ್ರಾಧಿಕಾರವು ಹೆಚ್ಚು ಸುರಕ್ಷಿತವಾದ ಈ ವಿಧಾನವನ್ನು ಘೋಷಿಸಿದೆ. ಇದಕ್ಕಾಗಿ ಎರಡು ಅಂಶಗಳ ಆಧಾರ್ ದೃಢೀಕರಣ(ಅಥೆಂಟಿಕೇಷನ್) ಅನ್ನು ಪರಿಚಯಿಸಿದ್ದು, ಇನ್ನು ಮುಂದೆ ಪಾಸ್ವರ್ಡ್‌ನೊಂದಿಗೆ ಆಧಾರ್ ದೃಢೀಕರಣವನ್ನೂ ಪೂರ್ಣಗೊಳಿಸಬೇಕು. ಆಗ ಮಾತ್ರ ಲಾಗಿನ್ ಯಶಸ್ವಿಯಾಗುತ್ತದೆ. ಇದರಿಂದ ಅನಧಿಕೃತ ಎನ್‌ಪಿಎಸ್ ವಹಿವಾಟು ನಡೆಸಲು ಸಾಧ್ಯವಾಗುವುದಿಲ್ಲ ಎಂದು ಅಧಿಕಾರಿಗಳು ಮಾಹಿತಿಯನ್ನು ನೀಡಿದ್ದಾರೆ.

ಯೂಸರ್ ಐಡಿ ಮತ್ತು ಪಾಸ್ವರ್ಡ್ ಬಳಸಿ ಲಾಗಿನ್ ಆಗುವ ಬದಲು ಆಧಾರ್ ಆಧಾರಿತ ಲಾಗಿನ್ ವ್ಯವಸ್ಥೆಯನ್ನು ಪರಿಚಯಿಸಲಾಗುವುದು ಎಂದು ಪಿಎಫ್‌ಆರ್‌ಡಿಎ ಹೇಳಿದೆ.

## ಗಡ್ಕರಿ, ಪಿಯೂಷ್ ಗೋಯಲ್ ಸೇರಿದಂತೆ ಮೂವರು ಮಾಜಿ ಮುಖ್ಯಮಂತ್ರಿಗಳಿಗೆ ಟಿಕೆಟ್



**ನವದೆಹಲಿ:** ಮುಂಬರುವ ಲೋಕಸಭೆ ಚುನಾವಣೆಗೆ ಬಿಜೆಪಿ 72 ಅಭ್ಯರ್ಥಿಗಳ ತನ್ನ ಎರಡನೇ ಪಟ್ಟಿ ಬಿಡುಗಡೆ ಮಾಡಿದ್ದು ಇದರಲ್ಲಿ ಕೇಂದ್ರ ಸಚಿವರಾದ ನಿತಿನ್ ಗಡ್ಕರಿ, ಪಿಯೂಷ್ ಗೋಯಲ್ ಮತ್ತು ಅನುರಾಗ್ ಸಿಂಗ್ ಠಾಕೂರ್ ಮತ್ತು ಹರಿಯಾಣದ ಮನೋಹರ್ ಲಾಲ್ ಖಟ್ಟರ್ ಸೇರಿದಂತೆ ಮೂವರು ಮಾಜಿ ಮುಖ್ಯಮಂತ್ರಿಗಳಿಗೆ ಟಿಕೆಟ್ ನೀಡಲಾಗಿದೆ. ಇಬ್ಬರು ಮಾಜಿ ಕೇಂದ್ರ ಸಚಿವರು ಮತ್ತು ಮಾಜಿ ಮುಖ್ಯಮಂತ್ರಿಗಳಾದ ರಮೇಶ್ ಪೋಖ್ರಿಯಾಲ್ ನಿಶಾಂಕ್ ಮತ್ತು ಸದಾನಂದಗೌಡ ಅವರಿಗೆ ಟಿಕೆಟ್ ನಿರಾಕರಿಸಲಾಗಿದೆ. ಬಿಜೆಪಿ ಬಿಡುಗಡೆ ಮಾಡಿರುವ ಎರಡನೇ ಪಟ್ಟಿಯ ಪ್ರಕಾರ, ಗಡ್ಕರಿ ಮತ್ತು ಠಾಕೂರ್ ಕ್ರಮವಾಗಿ ಮಹಾರಾಷ್ಟ್ರದ ನಾಗ್ಪುರ ಮತ್ತು ಹಿಮಾಚಲ ಪ್ರದೇಶದ ಹಮೀರ್‌ಪುರದಿಂದ ಸ್ಪರ್ಧಿಸಲಿದ್ದು, ಖಟ್ಟರ್ ಅವರು ಹರಿಯಾಣದ ಕರ್ನಾಲ್‌ನಿಂದ ಮತ್ತು ಗೋಯಲ್ ಮುಂಬೈ ಉತ್ತರದಿಂದ ಲೋಕಸಭೆಗೆ ಸ್ಪರ್ಧಿಸಲಿದ್ದಾರೆ. ಉತ್ತರಾಖಂಡದ ಮಾಜಿ ಮುಖ್ಯಮಂತ್ರಿ ತ್ರಿವೇಂದ್ರ ಸಿಂಗ್ ರಾವತ್ ಹರಿದ್ವಾರದಿಂದ ಸ್ಪರ್ಧಿಸಲಿದ್ದಾರೆ.ಬಿಜೆಪಿಯ ರಾಷ್ಟ್ರೀಯ ಮಾಧ್ಯಮ ಉಸ್ತುವಾರಿ ಅನಿಲ್ ಬಲೂನಿ ಕೂಡ ಮೊದಲ ಬಾರಿಗೆ ಲೋಕಸಭೆ ಚುನಾವಣೆಯಲ್ಲಿ ಸ್ಪರ್ಧಿಸಲಿದ್ದಾರೆ. ಉತ್ತರಾಖಂಡದ ಮಾಜಿ ಮುಖ್ಯಮಂತ್ರಿ ತಿರತ್ ಸಿಂಗ್ ರಾವತ್ ಬದಲಿಗೆ ಪೌರಿ ಗರ್ವಾಲ್ ಲೋಕಸಭಾ ಕ್ಷೇತ್ರದಿಂದ ಬಿಜೆಪಿ ಬಲುನಿ ಅವರನ್ನು ಕಣಕ್ಕಿಳಿಸಿದೆ. ಮಹಾರಾಷ್ಟ್ರದ ಬೀಡ್ ಕ್ಷೇತ್ರದಲ್ಲಿ ಪಂಕಜಾ ಮುಂಡೆ ಅವರ ಸಹೋದರಿ ಮತ್ತು ಹಾಲಿ ಸಂಸದ ಪ್ರೀತಮ್ ಮುಂಡೆ ಅವರ ಸ್ಥಾನವನ್ನು ಅಲಂಕರಿಸಿದ್ದಾರೆ.

ಬಿಜೆಪಿ ತನ್ನ ಅಭ್ಯರ್ಥಿಗಳನ್ನು ಘೋಷಿಸಿರುವ 72 ಲೋಕಸಭಾ ಕ್ಷೇತ್ರಗಳಲ್ಲಿ ಮಹಾರಾಷ್ಟ್ರ ಮತ್ತು ಕರ್ನಾಟಕದಿಂದ ತಲಾ 20, ಗುಜರಾತ್‌ನಿಂದ 7, ಹರಿಯಾಣ ಮತ್ತು ತೆಲಂಗಾಣದಿಂದ ತಲಾ 6, ಮಧ್ಯಪ್ರದೇಶದಿಂದ 5, ದೆಹಲಿ, ಉತ್ತರಾಖಂಡ ಮತ್ತು ಹಿಮಾಚಲ ಪ್ರದೇಶದಿಂದ ತಲಾ 2, ತ್ರಿಪುರಾ , ದಾದ್ರಾ ಮತ್ತು ನಗರ ಹವೇಲಿ ಮತ್ತು ದಮನ್ ಮತ್ತು ದಿಯು ತಲಾ ಒಂದು ಸಂಸದೀಯ ಸ್ಥಾನವನ್ನು ಹೊಂದಿವೆ.

## ಕೇಜ್ರಿವಾಲ್ ಅರ್ಜಿ ಆಲಿಸಲಿರುವ ದೆಹಲಿ ಹೈಕೋರ್ಟ್



**ದೆಹಲಿ:** ತಮ್ಮ ಬಂಧನ ಹಾಗೂ ಜಾರಿ ನಿರ್ದೇಶನಾಲಯಕ್ಕೆ (ಇಡಿ) ಏಳು ದಿನಗಳ ಕಾಲ ಕಸ್ಟಡಿಗೆ ನೀಡಿರುವ ಕೆಳ ನ್ಯಾಯಾಲಯದ ಆದೇಶವನ್ನು ಪ್ರಶ್ನಿಸಿ ಸಲ್ಲಿಸಿರುವ ಅರ್ಜಿಯ ತುರ್ತು ವಿಚಾರಣೆಗೆ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರ ಮನವಿಯನ್ನು ದೆಹಲಿ ಹೈಕೋರ್ಟ್ ತಿರಸ್ಕರಿಸಿದೆ.

ಆಮ್ ಆದ್ಮಿ ಪಕ್ಷದ ಮುಖ್ಯಸ್ಥರನ್ನು ಮದ್ಯ ನೀತಿ ಪ್ರಕರಣದಲ್ಲಿ ಗುರುವಾರ ಬಂಧಿಸಲಾಯಿತು. ಶುಕ್ರವಾರ ರೋಸ್ ಅವೆನ್ಯೂ ನ್ಯಾಯಾಲಯವು ಅವರನ್ನು ಮಾರ್ಚ್ 28 ರವರೆಗೆ ಇಡಿ ವಶಕ್ಕೆ ನೀಡಿತು. ಅವರ ಬಂಧನದ ವಿರುದ್ಧ ಶನಿವಾರ ಕೇಜ್ರಿವಾಲ್ ಅವರು ಅರ್ಜಿ ಸಲ್ಲಿಸಿ, ಭಾನುವಾರದೊಳಗೆ ಪ್ರಕರಣದ ತುರ್ತು ವಿಚಾರಣೆ ನಡೆಸುವಂತೆಯೂ ಕೋರಿದ್ದರು. ಹೋಳಿಗಾಗಿ ಎರಡು ರಜಾದಿನಗಳ ನಂತರದ ಮೊದಲ ಕೆಲಸದ ದಿನವಾದ ಬುಧವಾರ ಪುನಃ ವಿಚಾರಣೆ ನಡೆಸಲಾಗುವುದು ಎಂದು ದೆಹಲಿ ಹೈಕೋರ್ಟ್ ಹೇಳಿದೆ. ಶನಿವಾರ ಸಲ್ಲಿಸಿದ ಅರ್ಜಿಯಲ್ಲಿ ಕೇಜ್ರಿವಾಲ್ ಅವರು ತಮ್ಮ ಬಂಧನ ಮತ್ತು ರಿಮಾಂಡ್ ಆದೇಶವನ್ನು ಕಾನೂನುಬಾಹಿರ ಎಂದು ಹೇಳಿದ್ದು, ಎಎಪಿ ಮುಖ್ಯಸ್ಥರಿಗೆ ಬಂಧನದಿಂದ ರಕ್ಷಣೆ ನೀಡಲು ಹೈಕೋರ್ಟ್ ಗುರುವಾರ ನಿರಾಕರಿಸಿದ್ದು, ಕೆಲವು ಗಂಟೆಗಳ ನಂತರ ಇಡಿ ಅವರನ್ನು ವಶಕ್ಕೆ ತೆಗೆದುಕೊಂಡಿತು. ನಾವು ಎರಡೂ ಕಡೆಯವರನ್ನು ಕೇಳಿದ್ದೇವೆ. ನಾವು ಈ ಹಂತದಲ್ಲಿ ರಕ್ಷಣೆ ನೀಡಲು ಒಲವು ತೋರುತ್ತಿಲ್ಲ. ಪ್ರತಿವಾದಿಯು (ಇಡಿ) ಉತ್ತರವನ್ನು ಸಲ್ಲಿಸಲು ಸ್ವತಂತ್ರವಾಗಿದೆ ಎಂದು ಇಬ್ಬರು ನ್ಯಾಯಾಧೀಶರ ಪೀಠ ಹೇಳಿತ್ತು.

## ರಷ್ಯಾದಲ್ಲಿ ಉಗ್ರರ ಅಟ್ಟಹಾಸ: ಸಾವಿನ ಸಂಖ್ಯೆ 150ಕ್ಕೆ ಏರಿಕೆ

ರಷ್ಯಾದ ಮಾಸ್ಕೊದಲ್ಲಿ ನಡೆದ ಉಗ್ರರದಾಳಿಯಲ್ಲಿ ಮೃತಪಟ್ಟವರ ಸಂಖ್ಯೆ 150 ಕ್ಕೆಏರಿಕೆಯಾಗಿದ್ದು, ನಾಲ್ವರು ಬಂದೂಕು ಧಾರಿಗಳು ಸೇರಿದಂತೆ ಒಟ್ಟು 11 ಮಂದಿಯನ್ನು ಬಂಧಿಸಲಾಗಿದೆ. ಘಟನೆ ನಡೆದು ಸಾಕಷ್ಟು ಸಮಯ ಕಳೆದಿದ್ದರು ರಷ್ಯಾದ ಅಧ್ಯಕ್ಷ ವ್ಲಾದಿಮಿರ್ ಪುಟಿನ್ ದಾಳಿಯ ಬಗ್ಗೆ ಇನ್ನೂ ಸಾರ್ವಜನಿಕವಾಗಿ ಪ್ರತಿಕ್ರಿಯಿಸಿಲ್ಲ. 20 ವರ್ಷಗಳಲ್ಲಿ ರಷ್ಯಾದಲ್ಲಿ ನಡೆದ ಅತ್ಯಂತ ಭೀಕರ ದಾಳಿಯ ಹೊಣೆಯನ್ನು ಉಗ್ರ ಸಂಘಟನೆ ದಾಯೆಶ್ ಹೊತ್ತುಕೊಂಡಿದೆ. ಆದರೆ ಉಕ್ರೇನ್ ಅಧ್ಯಕ್ಷೀಯ ಸಲಹೆಗಾರ ಮೈಖೈಲೊ ಪೊಡೊಲ್ಯಾಕ್ ಅವರ ಹೇಳಿಕೆಯ ಹೊರತಾಗಿಯೂ, ರಷ್ಯಾ ಉಕ್ರೇನಿಯನ್ ಸಂಪರ್ಕವನ್ನು ಅನುಸರಿಸುತ್ತಿದೆ ಎಂಬ ಸೂಚನೆಗಳಿವೆ. ಉಕ್ರೇನ್ ಗಡಿಗೆ ಹೋಗುವಾಗ ಎಲ್ಲಾ ನಾಲ್ವರು ಭಯೋತ್ಪಾದಕರನ್ನು ಬಂಧಿಸಲಾಗಿದೆ ಮತ್ತು ಅವರು ಉಕ್ರೇನ್ನಲ್ಲಿ ಸಂಪರ್ಕಗಳನ್ನು ಹೊಂದಿದ್ದಾರೆ ಎಂದು ಎಫ್‌ಎಸ್ಬಿ ಭದ್ರತಾ ಸೇವೆ ತಿಳಿಸಿದೆ. ಪ್ರಮುಖ ಅಪರಾಧಗಳ ತನಿಖೆ ನಡೆಸುತ್ತಿರುವ ರಷ್ಯಾದ ತನಿಖಾ ಸಮಿತಿ, ರಕ್ಷಣಾ ಕಾರ್ಯಕರ್ತರು ಕಟ್ಟಡದಿಂದ ಶವಗಳನ್ನು ಹೊರತೆಗೆಯುತ್ತಿದ್ದು ಮೃತರ ಸಂಖ್ಯೆ ಮತ್ತಷ್ಟು ಏರಿಕೆಯಾಗುವ ಸಾಧ್ಯತೆ ಇದೆ.

## 2 ಬಿಲಿಯನ್ ಜನರಿಗೆ ಶುದ್ಧ ನೀರು ಲಭ್ಯವಿಲ್ಲ



**ನವದೆಹಲಿ :** ಜಗತ್ತು ತನ್ನ ಸಿಹಿನೀರಿನ ಸಂಪನ್ಮೂಲಗಳನ್ನು ಉತ್ತಮವಾಗಿ ನಿರ್ವಹಿಸಬೇಕಾಗಿದೆ ಆದರೆ ಪರಿಹಾರಗಳು ಎಂದು ಹೇಳಲಾಗುವ ಹೊಸ ತಂತ್ರಜ್ಞಾನಗಳನ್ನು ಪರಿಶೀಲಿಸದಿದ್ದರೆ ಗಂಭೀರ ಸಮಸ್ಯೆಗಳಿಗೆ ಕಾರಣವಾಗಬಹುದು ಎಂದು ಯುಎನ್ ವರದಿ ಶುಕ್ರವಾರ ಎಚ್ಚರಿಸಿದೆ.

2002 ಮತ್ತು 2021 ರ ನಡುವೆ ಹವಾಮಾನ ಬದಲಾವಣೆ-ಸಂಬಂಧಿತ ಬರಗಾಲವು 1.4 ಬಿಲಿಯನ್ ಗಿಂತ ಹೆಚ್ಚು ಜನರ ಮೇಲೆ ಪರಿಣಾಮ ಬೀರುವುದರೊಂದಿಗೆ ವಿಶ್ವದ ಜನಸಂಖ್ಯೆಯ ಸರಿಸುಮಾರು ಅರ್ಧದಷ್ಟು ಜನರು ತೀವ್ರ ನೀರಿನ ಕೊರತೆಯನ್ನು ಎದುರಿಸುತ್ತಿದ್ದಾರೆ ಎಂದು ಯುಎನ್ ಸಾಂಸ್ಕೃತಿಕ ಸಂಸ್ಥೆ ಯುನೆಸ್ಕೋದ ವರದಿ ತಿಳಿಸಿದೆ.

2022 ರ ಹೊತ್ತಿಗೆ, 2 ಬಿಲಿಯನ್ ಗಿಂತ ಹೆಚ್ಚು ಜನರು ಸುರಕ್ಷಿತವಾಗಿ ನಿರ್ವಹಿಸಲ್ಪಟ್ಟ ಕುಡಿಯುವ ನೀರಿನ ಲಭ್ಯತೆಯಿಲ್ಲ, ಆದರೆ 3.5 ಬಿಲಿಯನ್ ಜನರು ಯೋಗ್ಯವಾದ ಶೌಚಾಲಯಗಳಿಗೆ ಪ್ರವೇಶವನ್ನು ಹೊಂದಿಲ್ಲ ಎಂದು ಅದು ಹೇಳಿದೆ.

ಇದಲ್ಲದೆ, ಔಷಧಿಗಳು, ಹಾರ್ಮೋನುಗಳು ಮತ್ತು ಕೈಗಾರಿಕಾ ರಾಸಾಯನಿಕಗಳು ವಿಶ್ವದ ನದಿಗಳಿಗೆ ಹರಿಯುತ್ತಿವೆ. ಸಮೃದ್ಧಿ ಮತ್ತು ಶಾಂತಿಗಾಗಿ ನೀರು ಎಂಬ ಶೀರ್ಷಿಕೆಯ ವರದಿಯು ಬಿಕ್ಕಟ್ಟನ್ನು ಪರಿಹರಿಸಲು ಹೆಚ್ಚಿನ ಜಲ ಶಿಕ್ಷಣ, ದತ್ತಾಂಶ ಸಂಗ್ರಹಣೆ ಮತ್ತು ಹೂಡಿಕೆಗೆ ಕರೆ ನೀಡಿದೆ. ಇದು ಹೊಸ ಕಂಪ್ಯೂಟರ್-ನೇತೃತ್ವದ ಪರಿಹಾರಗಳ ಮಿತಿಗಳನ್ನು ಎತ್ತಿ ತೋರಿಸಿದೆ.ನೀರು ಸರಬರಾಜು, ನೀರಿನ ಬಳಕೆಯ ದಕ್ಷತೆ ಮತ್ತು ನೈರ್ಮಲ್ಯ ಸೇವೆಗಳ ಗುಣಮಟ್ಟ ಮತ್ತು ವಿಸ್ತರಣೆ ಎರಡನ್ನೂ ಸುಧಾರಿಸಲು ಹಲವಾರು ತಂತ್ರಜ್ಞಾನಗಳು ಲಭ್ಯವಿದೆ ಎಂದು ಅದು ಹೇಳಿದೆ.

ಸಂಜೆ ಮುಗಿಲು

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054



# 'ಸಾವರ್ಕರ್' ಚಿತ್ರಕ್ಕೆ ಮಿಶ್ರ ಪ್ರತಿಕ್ರಿಯೆ




ನಾನಾ ಕಾರಣಗಳಿಂದ ಅತೀ ನಿರೀಕ್ಷೆ ಮೂಡಿಸಿದ್ದ 'ಸ್ವಾತಂತ್ರ ವೀರ್ ಸಾವರ್ಕರ್' ಸಿನಿಮಾ ಇತ್ತೀಚೆಗಷ್ಟೇ ಬಿಡುಗಡೆ ಆಗಿದೆ. ಆದರೆ, ಅಂದುಕೊಂಡಷ್ಟು ಚಿತ್ರಕ್ಕೆ ಪ್ರತಿಕ್ರಿಯೆ ಸಿಕ್ಕಿಲ್ಲ ಎನ್ನುವುದು ಬಾಕ್ಸ್ ಆಫೀಸಿಗೆ ಹರಿದು ಬಂದ ಹಣವೇ ಹೇಳುತ್ತಿದೆ. ಮೊದಲ ದಿನದ ಕಲೆಕ್ಷನ್ 1.15 ಲಕ್ಷ ರೂಪಾಯಿ ಬಂದಿದೆ ಎಂದು ಅಂದಾಜಿಸಲಾಗಿದೆ.

ವಿವಾದಿತ ಚಿತ್ರಗಳು ಬಂದಾಗ ಜನರು ಅದನ್ನು ಮುಗಿಬಿದ್ದು ನೋಡಿ ಬಾಕ್ಸ್ ಆಫೀಸ್ ಕೂಡ ತುಂಬಿಸಿದ್ದಾರೆ. ಅದರಲ್ಲೂ ದಿ ಕಾಶ್ಮೀರ ಫೈಲ್ಸ್, ದಿ ಕೇರಳ ಸ್ಟೋರಿ ಚಿತ್ರಗಳನ್ನು ಸಖತ್ತಾಗಿಯೇ ಪ್ರೇಕ್ಷಕರಿಗೆ ಪ್ರಮೋಟ್ ಮಾಡಿದರು. ಆದರೆ, ವೀರ ಸಾವರ್ಕರ್ ಚಿತ್ರವನ್ನು ಅಷ್ಟಾಗಿ ಪ್ರೇಕ್ಷಕರು ಅಪ್ಪಿಕೊಂಡಿಲ್ಲ.

ರಣ್ ದೀಪ್ ಹೂಡ ನಿರ್ದೇಶನದ ಹಾಗೂ ನಟನೆಯಲ್ಲಿ ಈ ಸಿನಿಮಾ ಮೂಡಿ ಬಂದಿದ್ದು, ನಿರ್ದೇಶಕರ ಕೆಲಸವನ್ನು ಪ್ರೇಕ್ಷಕ ಮೆಚ್ಚಿಕೊಂಡಿದ್ದಾನೆ. ರಣ್ ದೀಪ್ ಈ ಸಿನಿಮಾದಲ್ಲಿ ಸಾವರ್ಕರ್ ಪಾತ್ರ ಮಾಡಿದ್ದರೆ, ಅವರ ಪತ್ನಿಯಾಗಿ ಅಂಕಿತಾ ಲೋಖಂಡೆ ನಟಿಸಿದ್ದಾರೆ. ಕಲಾ ನಿರ್ದೇಶಕರು ಆ ಕಾಲವನ್ನು ಚಿತ್ರದಲ್ಲಿ ಸೊಗಸಾಗಿ ಕಟ್ಟಿಕೊಟ್ಟಿದ್ದಾರೆ. ಆದರೂ, ಪ್ರೇಕ್ಷಕ ಮಾತ್ರ ತುಂಬಿದ ಪ್ರದರ್ಶನಕ್ಕೆ ಸಾಕ್ಷಿಯಾಗಿಲ್ಲ.

# ರಾಕಿಂಗ್‌ಸ್ಟಾರ್ ಯಶ್ ಜೊತೆ 'ಟಾಕ್ಸಿಕ್'ನಲ್ಲಿ ನಟಿಸಬೇಕಾ






ರಾಕಿಂಗ್ ಸ್ಟಾರ್ ಯಶ್ ಜೊತೆ ನಟಿಸೋಕೆ ಅವಕಾಶವನ್ನು ಕಲ್ಪಿಸಿದ್ದಾರೆ ಕೆವಿಎನ್ ಪ್ರೊಡಕ್ಷನ್. ಈ ಕುರಿತಂತೆ ಅವರು ಸೋಷಿಯಲ್ ಮೀಡಿಯಾದಲ್ಲಿ ಪೋಸ್ಟ್ ಮಾಡಿದ್ದಾರೆ. ಟಾಕ್ಸಿಕ್ ಸಿನಿಮಾದಲ್ಲಿ ನಟಿಸಲು ಯಾರಿಗೆಲ್ಲ ಅವಕಾಶವಿದೆ ಎನ್ನುವುದನ್ನು ಅವರು ಬರೆದುಕೊಂಡಿದ್ದಾರೆ. ಹಾಗಾಗಿ ಅವರ ರೂಲ್ಸ್ ಫಾಲೋ ಮಾಡಿ, ಯಾರು ಬೇಕಾದರೂ ಆಡಿಷನ್‌ನಲ್ಲಿ ಭಾಗಿಯಾಗಬಹುದು.




ಚಿತ್ರದ ಶೂಟಿಂಗ್ ಇನ್ನೂ ನಿಯಮಿತವಾಗಿ ಆರಂಭವೇ ಆಗಿಲ್ಲ. ಆಗಲೇ ಚಿತ್ರದ ಬಗ್ಗೆ ಸಾಕಷ್ಟು ವಿಷಯಗಳು ಆಚೆ ಬರುತ್ತಿವೆ. ಟಾಕ್ಸಿಕ್ ಸಿನಿಮಾದಲ್ಲಿ ಬಾಲಿವುಡ್ ನಟಿ ಕರೀನಾ ಕಪೂರ್ ನಟಿಸ್ತಾರಾ ಇಂಥದ್ದೊಂದು ಪ್ರಶ್ನೆ ಹಲವು ತಿಂಗಳ ಹಿಂದೆಯೇ ಶುರುವಾಗಿತ್ತು. ಅದಕ್ಕೀಗ ಉತ್ತರ ಸಿಕ್ಕಂತೆ ಕಾಣುತ್ತಿದೆ. ಬಿಟೌನ್ ನಲ್ಲಿ ಸುದ್ದಿ ಆಗಿರುವ ಪ್ರಕಾರ, ಸ್ವತಃ ಕರೀನಾ ಅವರೇ ಹೇಳಿಕೊಂಡಂತೆ ಬಾಲಿವುಡ್ ಚಿತ್ರದಲ್ಲಿ ಕರೀನಾ ನಟಿಸುತ್ತಿದ್ದಾರಂತೆ. ಆದರೆ, ಆ ಸಿನಿಮಾ ಯಾವುದನ್ನು ಎನ್ನುವುದನ್ನು ಸದ್ಯಕ್ಕೆ ಹೇಳಲಾರೆ ಎಂದು ಹೇಳುವ ಮೂಲಕ ಕುತೂಹಲ ಮೂಡಿಸಿದ್ದಾರೆ.

ಈ ಹಿಂದೆಯೇ ಸಂದರ್ಶನವೊಂದರಲ್ಲಿ ಕರೀನಾ ಅವರು, ಯಶ್ ಜೊತೆ ಮಾತ್ರ ನಟಿಸುತ್ತೇನೆ. ಪ್ರಭಾಸ್, ಅಲ್ಲು ನಕೋ ಬಾಬಾ ಎಂದಿದ್ದರು. ಯಶ್ ಜೊತೆ ನಟಿಸೋದು ಹೆಚ್ಚಿ ಇಷ್ಟ. ಅದೇ ಲೈಫ್ ಟೈಮ್ ಅಚೀವ್‌ಮೆಂಟು ಎಂದಿದ್ದರು. ಈ ಮೂಲಕ ತಾವು ಯಶ್ ಜೊತೆ ನಟಿಸುವ ಉತ್ಸಾಹವನ್ನೂ ತೋರಿಸಿದ್ದರು. ಆ ಕನಸು ನನಸಾದಂತೆ ಕಾಣುತ್ತಿದೆ.

ಈ ನಡುವೆ ಯಶ್ ಅಭಿಮಾನಿಗಳಿಗೆ ಮತ್ತೊಂದು ಗುಡ್ ನ್ಯೂಸ್ ಇದೆ. ಟಾಕ್ಸಿಕ್) ಸಿನಿಮಾವನ್ನು ಗೀತು ಮೋಹನ್ ದಾಸ್ ನಿರ್ದೇಶನ ಮಾಡಲಿದ್ದಾರೆ ಎನ್ನುವ ವಿಷಯ ಬಿಟ್ಟರೆ, ಈ ಜೋಡಿ ಒಟ್ಟಾಗಿ ಕಾಣಿಸಿಕೊಂಡಿದ್ದ ಒಂದೇ ಒಂದು ಫೋಟೋ ಕೂಡ ಆಚೆ ಬಂದಿರಲಿಲ್ಲ. ಇದೇ ಮೊದಲ ಬಾರಿಗೆ ಯಶ್ ಮತ್ತು ಗೀತು ಅವರ ಫೋಟೋ ಸಿಕ್ಕಿದೆ. ಗೋವಾದಲ್ಲಿ ಸಿನಿಮಾದ ಶೂಟಿಂಗ್ ನಡೆದಿದ್ದು, ಆ ಫೋಟೋ ಅದು ಎನ್ನಲಾಗುತ್ತಿದೆ.

ಟೆಂಪಲ್ ರನ್ ಮುಗಿಸಿಕೊಂಡು ಸದ್ಯ ಯಶ್ ಗೋವಾದಲ್ಲಿ ಬೀಡು ಬಿಟ್ಟಿದ್ದಾರೆ. ಗೋವಾದ ಏರ್ ಪೋರ್ಟ್ ನಲ್ಲಿ ಕಾಣಿಸಿಕೊಂಡು ಅಭಿಮಾನಿಗಳಿಗೆ ಅಚ್ಚರಿ ಮೂಡಿಸಿದ್ದರು. ಸದ್ಯ ಅವರು ಗೋವಾನಲ್ಲಿ ಬೀಡು ಬಿಟ್ಟಿರೋದು ಟಾಕ್ಸಿಕ್ ಸಿನಿಮಾದ ಶೂಟಿಂಗ್ ಗಾಗಿ ಎನ್ನುವ ವಿಚಾರ ಹರಿದಾಡುತ್ತಿತ್ತು. ಅದು ಈಗ ನಿಜವಾಗಿದೆ. ಶೂಟಿಂಗ್ ಸಮಯದ್ದು ಎನ್ನಲಾದ ಫೋಟೋ ವೈರಲ್ ಆಗಿದೆ.

ಟಾಕ್ಸಿಕ್ ಸಿನಿಮಾದ ಬಗ್ಗೆ ಯಾವುದೇ ಅಪ್ ಡೇಟ್ ನೀಡದ ಯಶ್ ಮೊನ್ನೆಯಷ್ಟೇ ಈ ಕುರಿತಂತೆ ಮಾತನಾಡಿದ್ದರು. ತಮ್ಮ 19ನೇ ಸಿನಿಮಾದ ಪ್ರಾಜೆಕ್ಟ್ ಎಲ್ಲಿಗೆ ಬಂತು ಎಂಬುದರ ಬಗ್ಗೆ ಸುದ್ದಿಗೋಷ್ಠಿಯೊಂದರಲ್ಲಿ ಮಾತನಾಡಿದ್ದರು. ಡೈರೆಕ್ಟರ್ ಗೀತು ಮೋಹನ್ ದಾಸ್ ನಿರ್ದೇಶನದಲ್ಲಿ ಈ ಸಿನಿಮಾ ಮೂಡಿ ಬರುತ್ತಿದ್ದು, ಕೆವಿಎನ್ ಸಂಸ್ಥೆ ಜೊತೆ ಯಶ್ ಕೈಜೋಡಿಸಿದ್ದಾರೆ.

# 'ಮ್ಯಾಕ್ಸ್' ಸಿನಿಮಾ ಮೇ ತಿಂಗಳಲ್ಲಿ ರಿಲೀಸ್ ಎಂದ ಸುದೀಪ್



ಕ್ರಿಕೆಟ್ ಪಂದ್ಯ ಮುಗಿಸಿಕೊಂಡು ಮತ್ತೆ ಮ್ಯಾಕ್ಸ್ ಚಿತ್ರೀಕರಣದಲ್ಲಿ ತೊಡಗಿರುವ ಸುದೀಪ್, ಇದೀಗ ಮ್ಯಾಕ್ಸ್ ಚಿತ್ರದ ಬಗ್ಗೆ ಹೊಸ ಅಪ್ ಡೇಟ್ ನೀಡಿದ್ದಾರೆ. 15 ದಿನಗಳ ಕಾಲ ಶೂಟಿಂಗ್ ಮುಗಿಸಿದರೆ, ಮ್ಯಾಕ್ಸ್ ಚಿತ್ರದ ಚಿತ್ರೀಕರಣ ಮುಕ್ತಾಯವಂತೆ. ನಂತರ ಮೇ ತಿಂಗಳಿನಲ್ಲಿ ಚಿತ್ರ ರಿಲೀಸ್ ಆಗಬಹುದು ಅಂದಿದ್ದಾರೆ ಕಿಚ್ಚ ಸುದೀಪ್. ಚಂದನ್ ಅವರ ಹೋಟೆಲ್ ಗೆ ಆಗಮಿಸಿದ್ದ ಸುದೀಪ್ ಮ್ಯಾಕ್ಸ್ ಬಗ್ಗೆ ಕೆಲವು ವಿಷಯಗಳನ್ನೂ ಮಾತನಾಡಿದ್ದಾರೆ.

'ಮ್ಯಾಕ್ಸ್' ಸಿನಿಮಾ ಬಗ್ಗೆ ಅಭಿಮಾನಿಗಳು ಪದೇ ಪದೇ ಅಪ್‌ಡೇಟ್ ಕೇಳುತ್ತಲೇ ಇರುತ್ತಾರೆ. ಅದಕ್ಕೆ ಈ ಹಿಂದೆಯೂ ಪ್ರತಿಕ್ರಿಯೆ ನೀಡಿದ್ದರು ಸುದೀಪ್, 'ನಿಮ್ಮ ಪ್ರೀತಿ, ಕ್ಯೂರಿಯಾಸಿಟಿ ನನಗೆ ಅರ್ಥವಾಗುತ್ತದೆ. ಆದರೆ, ಸಿನಿಮಾ



ಶೂಟ್ ಪೂರ್ಣಗೊಳ್ಳದೆ ಆ ಬಗ್ಗೆ ಅಪ್‌ಡೇಟ್ ನೀಡೋದು ಹೇಗೆ' ಅನ್ನೋದು ಸುದೀಪ್ ಅವರ ಪ್ರಶ್ನೆಯಾಗಿತ್ತು. ನವೆಂಬರ್‌ನಲ್ಲಿ ಮಳೆಯಿಂದ ಶೂಟ್ ಮಾಡಲು ಸಾಧ್ಯವಾಗಿರಲಿಲ್ಲ. ಡಿಸೆಂಬರ್ ನಲ್ಲಿ ಕೆಲವು ಅಡೆತಡೆಗಳು ಎದುರಾದವು. ಈಗ ಸಂಕ್ರಾಂತಿ ಬಳಿಕ ಮತ್ತೆ 'ಮ್ಯಾಕ್ಸ್' ಶೂಟಿಂಗ್ ಶುರು ಆಗಿದೆ ಎಂದು ತಿಳಿಸಿದ್ದರು.

ಮೊನ್ನೆಯಷ್ಟೇ ಸಿನಿಮಾದ ಪ್ರಮುಖ ದೃಶ್ಯವನ್ನು ಶೂಟ್ ಮಾಡಿ ಮುಗಿಸಿದ್ದಾರೆ. ಅದೊಂದು ಪ್ರಮುಖ ಘಟ್ಟ. ಜೊತೆಗೆ ಸಣ್ಣದೊಂದು ಭಾಗದ ಚಿತ್ರೀಕರಣ ಮುಗಿದರೆ ಸಿನಿಮಾ ಮುಗಿದಂತೆ. ಎಲ್ಲ ರಫ್ ಕಟ್ ದೃಶ್ಯಗಳನ್ನು ನೋಡಿದೆ. ಸೂಪರ್. ಅದ್ಭುತವಾಗಿ ಸಿನಿಮಾ ಮೂಡಿ ಬಂದಿದೆ. ಪ್ರತಿಯೊಬ್ಬರ ಎಫರ್ಟ್ ಕಾಣುತ್ತಿದೆ ಎಂದು ಸುದೀಪ್ ಈ ಹಿಂದೆ ಎಕ್ಸ್ (ಟ್ವಿಟ್) ಮಾಡಿದ್ದರು.

ಕ್ರಿಕೆಟ್, ಬಿಗ್ ಬಾಸ್ ನಡುವೆಯೂ ನಿರೀಕ್ಷಿತ ಮ್ಯಾಕ್ಸ್ ಸಿನಿಮಾದ ಚಿತ್ರೀಕರಣ ಮುಗಿಸುತ್ತಿದ್ದಾರೆ ಕಿಚ್ಚ ಸುದೀಪ್. ಈಗಷ್ಟೇ ಚಿತ್ರದ ಕ್ಲೈಮ್ಯಾಕ್ಸ್ ಶೂಟಿಂಗ್ ಮುಗಿಸಿದ್ದಾರೆ. ಅಂದುಕೊಂಡ ತಿಂಗಳಲ್ಲೇ ಸಿನಿಮಾ ತೆರೆಗೆ ತರಬೇಕಾಗಿದ್ದರಿಂದ ಚಿತ್ರೀಕರಣಕ್ಕೆ ಹೆಚ್ಚು ಒತ್ತು ನೀಡಿದ್ದಾರಂತೆ. ಇನ್ನು ಕೆಲವೇ ದಿನಗಳಲ್ಲಿ ಮ್ಯಾಕ್ಸ್ ಸಿನಿಮಾದ ಸಂಪೂರ್ಣ ಚಿತ್ರೀಕರಣ ಕೂಡ ಮುಗಿಯಲಿದೆ.

ಈ ಸಿನಿಮಾ ಮುಗಿಯುತ್ತಿದ್ದಂತೆಯೇ ಬೇರೆ ಯಾವ ಸಿನಿಮಾದಲ್ಲಿ ಅವರು ತೊಡಗಿಕೊಳ್ಳಲ್ಲಿದ್ದಾರೆ ಎನ್ನುವ ಬಗ್ಗೆ ಮಾಹಿತಿ ನೀಡಿಲ್ಲ. ಮ್ಯಾಕ್ಸ್ ಮುಗಿದ ನಂತರ ಬಹುಶಃ ಅನೂಪ್ ಭಂಡಾರಿ ನಿರ್ದೇಶನದ ಚಿತ್ರದಲ್ಲಿ ಸುದೀಪ್ ತೊಡಗಿಕೊಳ್ಳಲಿದ್ದಾರೆ ಎನ್ನಲಾಗುತ್ತಿದೆ.

### ಫಲಿಸದ ಪಂತ್ ಮ್ಯಾಜಿಕ್; ಕರ್‍ರನ್ ಅಮೋಘ ಅರ್ಧಶತಕ

# ಪಂಜಾಬ್ ಕಿಂಗ್ಸ್‌ಗೆ 4 ವಿಕೆಟ್ ಜಯ

ಸ್ಯಾಮ್ ಕರ್‍ರನ್ ಅಮೋಘ ಅರ್ಧಶತಕದ ಬ್ಯಾಟಿಂಗ್ ಹಾಗೂ ಸಂಘಟಿತ ಬೌಲಿಂಗ್ ಪ್ರದರ್ಶನದಿಂದ ಪಂಜಾಬ್ ಕಿಂಗ್ಸ್ ತಂಡವು ಡೆಲ್ಲಿ ಕ್ಯಾಪಿಟಲ್ಸ್ ವಿರುದ್ಧ 4 ವಿಕೆಟ್‌ಗಳ ಜಯ ಸಾಧಿಸಿದೆ.

ಪಂಜಾಬ್ ಗೆಲುವಿಗೆ ಕೊನೇ ಓವರ್‌ನಲ್ಲಿ 6 ರನ್‌ಗಳ ಅಗತ್ಯವಿತ್ತು. ಆದ್ರೆ ಬೌಲಿಂಗ್‌ನಲ್ಲಿದ್ದ ಸುಮಿತ್ ಕುಮಾರ್ ಆರಂಭದಲ್ಲೇ 2 ವೈಡ್ ಎಸೆದರು. ಮೊದಲ ಎಸೆತದಲ್ಲಿ ಯಾವುದೇ ರನ್ ಬರಲಿಲ್ಲವಾದರೂ ಕ್ರೀಸ್‌ನಲ್ಲಿದ್ದ ಲಿಯಾಮ್ ಲಿವಿಂಗ್‌ಸ್ಟೋನ್ 2ನೇ ಎಸೆತದಲ್ಲಿ ಸಿಕ್ಸರ್ ಬಾರಿಸಿ ಗೆಲುವು ತಂದುಕೊಟ್ಟರು.

ಪಂಜಾಬ್‌ನ ಮುಲ್ಲನ್ಪುರ್‌ನಲ್ಲಿರುವ ಮಹಾರಾಜ ಯಾದವೀಂದ್ರ ಸಿಂಗ್ ಕ್ರೀಡಾಂಗಣದಲ್ಲಿ ಟಾಸ್ ಗೆದ್ದು ಮೊದಲು ಫೀಲ್ಡಿಂಗ್ ಆಯ್ದುಕೊಂಡ ಪಂಜಾಬ್ ಕಿಂಗ್ಸ್ ಬ್ಯಾಟಿಂಗ್ ಮಾಡುವ ಅವಕಾಶವನ್ನು ಡೆಲ್ಲಿ ಕ್ಯಾಪಿಟಲ್ಸ್‌ಗೆ ಬಿಟ್ಟುಕೊಟ್ಟಿತು. ಮೊದಲು ಬ್ಯಾಟಿಂಗ್ ಮಾಡಿದ ರಿಷಭ್ ಪಂತ್ ನಾಯಕತ್ವದ ಡೆಲ್ಲಿ ಕ್ಯಾಪಿಟಲ್ಸ್ ತಂಡ 20 ಓವರ್‌ಗಳಲ್ಲಿ 9 ವಿಕೆಟ್ ನಷ್ಟಕ್ಕೆ 174 ರನ್ ಗಳಿಸಿತ್ತು. 175 ರನ್ ಗಳ ಗುರಿ ಬೆನ್ನತ್ತಿದ್ದ ಪಂಜಾಬ್ ಕಿಂಗ್ಸ್ 19.2 ಓವರ್‌ಗಳಲ್ಲೇ 6 ವಿಕೆಟ್‌ಗೆ 177 ರನ್ ಗಳಿಸಿ ಗೆಲುವು ಸಾಧಿಸಿತು.

ಚೇಸಿಂಗ್ ಆರಂಭಿಸಿದ ಕಿಂಗ್ಸ್ ಪಂಜಾಬ್ ಉತ್ತಮ ಆರಂಭ ಪಡೆಯುವಲ್ಲಿ ವಿಫಲವಾಯಿತು.



ಪವರ್‌ಪ್ಲೇನಲ್ಲೇ ಎರಡು ಪ್ರಮುಖ ವಿಕೆಟ್ ಕಳೆದುಕೊಂಡಿತು. ಆದ್ರೆ ಕ್ರೀಸ್‌ನಲ್ಲಿ ಭದ್ರವಾಗಿ ನೆಲೆಯೂರಿದ ಸ್ಯಾಮ್ ಕರ್‍ರನ್ 63 ರನ್ ಬಾರಿಸುವ ಮೂಲಕ ತಂಡಕ್ಕೆ ನೆರವಾದರು. ಕರ್‍ರನ್ ಜೊತೆಗೂಡಿದ ಲಿವಿಂಗ್‌ಸ್ಟೋನ್ ಸಹ ಇದಕ್ಕೆ ಸಾಥ್ ನೀಡಿದರು. ಕಿಂಗ್ಸ್ ಪಂಜಾಬ್ ಪರ ಸ್ಯಾಮ್ ಕರ್‍ರನ್ 63 ರನ್ (47 ಎಸೆತ, 6 ಬೌಂಡರಿ, 1 ಸಿಕ್ಸರ್), ಲಿವಿಂಗ್‌ಸ್ಟೋನ್ 38 ರನ್, ಶಿಖರ್ ಧವನ್ 22 ರನ್, ಜಾನಿ ಬೈರ್‌ಸ್ಟೋವ್ 9 ರನ್, ಪ್ರಭ್‌ಸಿಮ್ರನ್ ಸಿಂಗ್ 26 ರನ್, ಜಿತೇಶ್ ಶರ್ಮಾ 9 ರನ್, ಹರ್ಪ್ರೀರ್ ಬ್ರಾರ್ 2 ರನ್ ಗಳಿಸಿದರು.

**ಕೊನೇ ಓವರ್‌ನಲ್ಲಿ 25 ರನ್ ಚಚ್ಚಿದ ಅಭಿಷೇಕ್:** ಮೊದಲು ಬ್ಯಾಟಿಂಗ್ ಮಾಡಿದ ಡೆಲ್ಲಿ ಕ್ಯಾಪಿಟಲ್ಸ್ ಸ್ಫೋಟಕ ಆರಂಭದ ಹೊರತಾಗಿಯೂ ಅಗ್ರಕ ಕ್ರಮಾಂಕದ ವಿಕೆಟ್‌ಗಳನ್ನು ಕಳೆದುಕೊಂಡು ಸಂಕಷ್ಟಕ್ಕೀಡಾಯಿತು. 19 ಓವರ್‌ಗಳಲ್ಲಿ 8 ವಿಕೆಟ್ ನಷ್ಟಕ್ಕೆ 149 ರನ್ ಗಳಿಸಿತ್ತು. ಡೆಲ್ಲಿ ತಂಡ 160 ರನ್ ತಲುಪುವುದೂ ಕಷ್ಟವಾಗಿತ್ತು. ಆದ್ರೆ ಇಂಪ್ಯಾಕ್ಟ್ ಪ್ಲೇಯರ್ ಆಗಿ ಕಣಕ್ಕಿಳಿದ ಪಶ್ಚಿಮ ಬಂಗಾಳದ ಅಭಿಷೇಕ್ ಪೋರೆಲ್ ಒಂದೇ ಓವರ್‌ನಲ್ಲಿ 25 ರನ್ ಚಚ್ಚಿದರು. ಇದರಿಂದ ತಂಡದ ಮೊತ್ತ 170 ರನ್ ಗಳ ಗಡಿ ದಾಟಿತು.

**ಪಂತ್ ಕಂಬ್ಯಾಕ್: ಅಭಿಮಾನಿಗಳಿಂದ ವೆಲ್ ಕಮ್:** ಕಾರು ಅಪಘಾತದಿಂದ ಗಂಭೀರವಾಗಿ ಗಾಯಗೊಂಡಿದ್ದ ಟೀಂ ಇಂಡಿಯಾ ಕ್ರಿಕೆಟಿಗ ರಿಷಭ್ ಪಂತ್ 14 ತಿಂಗಳ ಬಳಿಕ ಮತ್ತೆ ಕ್ರೀಸ್ ಗಿಳಿದು ಬ್ಯಾಟಿಂಗ್ ಮಾಡಿದರು. ರಿಷಭ್ ಕ್ರೀಸ್ ಗೆ ಬರುತ್ತಿದ್ದಂತೆ ಅಭಿಮಾನಿಗಳು ಎದ್ದು ನಿಂತು ಚಪ್ಪಾಳೆಯೊಂದಿಗೆ ಸ್ವಾಗತಿಸಿದರು.

ಡೆಲ್ಲಿ ಪರ ಡೇವಿಡ್ ವಾರ್ನರ್ 29 ರನ್, ಮಿಚೆಲ್ ಮಾರ್ಷ್ 20 ರನ್, ಶಾಯಿ ಹೋಪ್ 33 ರನ್, ರಿಷಭ್ ಪಂತ್ 18 ರನ್, ರಿಕಿ ಭುಯಿ 3 ರನ್, ಟ್ರಿಸ್ಟಾನ್ ಸ್ಟಬ್ಸ್ 5 ರನ್, ಅಕ್ಷರ್ ಪಟೇಲ್ 21 ರನ್, ಸುಮಿತ್ ಕುಮಾರ್ 2 ರನ್, ಕುಲ್ದೀಪ್ 1 ರನ್ ಗಳಿಸಿದ್ರೆ, ಅಭಿಷೇಕ್ 10 ಎಸೆತಗಳಲ್ಲಿ 32 ರನ್ ಬಾರಿಸಿ ಕ್ರೀಸ್‌ನಲ್ಲಿ ಉಳಿದರು.

ಪಂಜಾಬ್ ಪರ ಅರ್ಷ್‌ದೀಪ್ ಸಿಂಗ್, ಹರ್ಷಲ್ ಪಟೇಲ್ ತಲಾ 2 ವಿಕೆಟ್ ಕಿತ್ತರೆ, ಕಗಿಸೋ ರಬಾಡ, ಹರ್ಪ್ರೀತ್ ಬ್ರಾರ್, ರಾಹುಲ್ ಚಹಾರ್ ತಲಾ ಒಂದೊಂದು ವಿಕೆಟ್ ಪಡೆದರು.

# ಸಿದ್ದರಾಮಯ್ಯರ ಇಳಿಸುವ ಗ್ಯಾಂಗ್ ಕಾಂಗ್ರೆಸ್‌ನಲ್ಲೇ ಇದೆ

**ಬೆಂಗಳೂರು:** ಕರ್ನಾಟಕದಲ್ಲಿ ಕಾಂಗ್ರೆಸ್ ಒಡೆದ ಮನೆಯಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯರನ್ನು ಹುದ್ದೆಯಿಂದ ಕೆಳಗೆ ಇಳಿಸಲು ಸಂಚು ಹೂಡುವ ಗ್ಯಾಂಗ್ ಕಾಂಗ್ರೆಸ್ ಪಕ್ಷದಲ್ಲೇ ಇದೆ ಎಂದು ಪ್ರತಿಪಕ್ಷ ನಾಯಕ ಆರ್ ಅಶೋಕ್ ಹೇಳಿದರು.



ಬೆಂಗಳೂರಿನ ಅರಮನೆ ಮೈದಾನದಲ್ಲಿ ನಡೆದ ರಾಜ್ಯ ಬಿಜೆಪಿ ಚುನಾವಣಾ ಸಿದ್ದತಾ ಕಾರ್ಯಗಾರದಲ್ಲಿ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿಯವರು ಕರ್ನಾಟಕ ಕಾಂಗ್ರೆಸ್ ಪಕ್ಷದ ಸ್ಥಿತಿಯ ಬಗ್ಗೆ ಈಗಾಗಲೇ ಹೇಳಿದ್ದಾರೆ. ರಾಜ್ಯದಲ್ಲಿ ಸೂಪರ್ ಸಿಎಂ, ಶಾಡೋ ಸಿಎಂ ಬಹಳಷ್ಟು ಮಂದಿ ಇದ್ದಾರೆ. ಬಿಕೆ ಹರಿಪ್ರಸಾದ್ ಕೂಡ ಮಸಾಲತ್ತು ಮಾಡುತ್ತಿದ್ದಾರೆ. ಗುಬ್ಬಿ ಶಾಸಕ ಶ್ರೀನಿವಾಸ್ ನಿಜ ಹೇಳಿದ್ದಾರೆ ಎಂದು ಹೇಳಿದರು.

ಕೇಂದ್ರದಲ್ಲಿ ನರೇಂದ್ರ ಮೋದಿ ನೇತೃತ್ವದ ಸ್ಥಿರ ಸರ್ಕಾರವನ್ನು ಜನ ಬಯಸಿದ್ದಾರೆ. ಅತಂತ್ರ ಕಿಚಡಿ ಸರ್ಕಾರ ಜನರಿಗೆ ಬೇಕಾಗಿಲ್ಲ. ಕರ್ನಾಟಕದಲ್ಲೂ ಕೆಲವು ಬಾರಿ ಕಿಚಡಿ ಸರ್ಕಾರ ಆಗಿತ್ತು. ಆವಾಗಲೆಲ್ಲ ಪಚಡಿ ಆಗಿಹೋಗಿತ್ತು. ಜನರಿಗೆ ಈಗ ಅದು ಬೇಕಾಗಿಲ್ಲ. ಜನ ಸುಭದ್ರ ಸರ್ಕಾರವನ್ನು ಬಯಸುತ್ತಿದ್ದಾರೆ ಎಂದು ಅಶೋಕ್ ಹೇಳಿದರು.

ಐದು ವರ್ಷ ಸುಭದ್ರ ಸರ್ಕಾರ ನೀಡುವ ಸಾಮರ್ಥ್ಯ ಇರುವುದು ರೇಂದ್ರ ಮೋದಿ ಅವರಿಗೆ ಮಾತ್ರ. ಇದನ್ನು ಕರ್ನಾಟಕದ ಜನ ಅರ್ಥ ಮಾಡಿಕೊಂಡಿದ್ದಾರೆ. ಹೀಗಾಗಿ ಈ ಬಾರಿ ರಾಜ್ಯದ ಜನ ನರೇಂದ್ರ ಮೋದಿಯವರನ್ನು ಮತ್ತೊಮ್ಮೆ ಆಯ್ಕೆ ಮಾಡುತ್ತಾರೆ ಎಂದು ಅಶೋಕ್ ಭರವಸೆ ವ್ಯಕ್ತಪಡಿಸಿದರು.

ಕಾಂಗ್ರೆಸ್‌ನವರದ್ದು ನಾಲಾಯಕ್ ಸರ್ಕಾರ

ರಾಜ್ಯದಲ್ಲಿರುವುದು ಕಾಂಗ್ರೆಸ್ ಪಕ್ಷದ ನಾಲಾಯಕ್ ಸರ್ಕಾರ. ಇದು ಜನರಿಗೆ ದ್ರೋಹ ಮಾಡಿದಂಥ ಸರ್ಕಾರ. ಮೇಕೆದಾಟು ವಿಚಾರದಲ್ಲಿ ದ್ವಂದ್ವ ನೀಲು ಪ್ರದರ್ಶಿಸಿದ ಸರ್ಕಾರ ಇಲ್ಲಿದೆ. ಈ ಸರ್ಕಾರ ಬರ ಪರಿಸ್ಥಿತಿಯನ್ನು ಸಮರ್ಥವಾಗಿ ನಿಭಾಯಿಸಿಲ್ಲ. ಜನ ಕುಡಿಯುವ ನೀರಿಗೆ ಒದ್ದಾಡುತ್ತಿದ್ದರೂ ಸ್ಪಂದಿಸದ ಸರ್ಕಾರ ಇಲ್ಲಿದೆ. ಈ ಭ್ರಷ್ಟ ಸರ್ಕಾರಕ್ಕೆ ಜನ ಬೆಂಬಲ ನೀಡಲ್ಲ. ಬದಲಿಗೆ ನರೇಂದ್ರ ಮೋದಿ ನೇತೃತ್ವದ ಬಿಜೆಪಿಗೆ ಬೆಂಬಲ ನೀಡುತ್ತಾರೆ ಎಂದು ಅಶೋಕ್ ಹೇಳಿದರು.

ಮಂಡ್ಯ ರಾಜಕಾರಣಕ್ಕೆ ಸಂಬಂಧಿಸಿ ಸಂಸದೆ ಸುಮಲತಾ ಅಧಿಕೃತ ಟಿಕೆಟ್ ಘೋಷಣೆ ಬಳಿಕ ನಿರ್ಧಾರ ಎಂಬ ಹೇಳಿಕೆ ನೀಡಿರುವುದಕ್ಕೆ ಪ್ರತಿಕ್ರಿಯಿಸಿದ ಅಶೋಕ್, ಅವರು ಕೇಂದ್ರ ನಾಯಕರನ್ನು ಭೇಟಿ ಮಾಡಿದ್ದಾರೆ. ಅಲ್ಲಿಯೇ ಅವರ ವಿಚಾರ ತೀರ್ಮಾನ ಆಗಲಿದೆ. ಚೆಂಡು ಕೇಂದ್ರದ ಅಂಗಳದಲ್ಲಿದೆ. ಇಂದು ರಾತ್ರಿ ಅಥವಾ ನಾಳೆ ಟಿಕೆಟ್ ಘೋಷಣೆ ಆಗಲಿದೆ. ಬಿಜೆಪಿ ಜೆಡಿಎಸ್ ಹಾಲು ಜೇನಿನಂತೆ ಒಟ್ಟಾಗಿ ಕೆಲಸ ಮಾಡಲಿವೆ ಎಂದು ಹೇಳಿದರು. ನಮಗೆ ಮೋದಿ ನಾಯಕತ್ವ, ಎನ್‌ಡಿಎ ಮೈತ್ರಿಕೂಟವಿದೆ. ಆದರೆ, 'ಇಂಡಿಯಾ' ಮೈತ್ರಿಕೂಟದಲ್ಲಿ ಯಾರೂ ಇಲ್ಲ ಎಂದು ಅಶೋಕ್ ಟೀಕಿಸಿದರು.

# ಹೈದರಾಬಾದ್ ವಿರುದ್ಧ ಕೆಕೆಆರ್‌ಗೆ 4 ರನ್‌ಗಳ ರೋಚಕ ಜಯ

ಆಂಡ್ರೆ ರಸೆಲ್ ಹಾಗೂ ಫಿಲಿಪ್ ಸ್ಟಾಲ್ ಅರ್ಧಶತಕ ನೆರವಿನಿಂದ ಸನ್‌ರೈಸರ್ಸ್ ಹೈದರಾಬಾದ್ ವಿರುದ್ಧ ಕೋಲ್ಕತ್ತಾ ನೈಟ್‌ರೈಡರ್ಸ್ ತಂಡವು 4 ರನ್‌ಗಳ ರೋಚಕ ಗೆಲುವು ಸಾಧಿಸಿದೆ.

ಕೋಲ್ಕತ್ತಾದ ಈಡನ್ ಗಾರ್ಡನ್ ಮೈದಾನದಲ್ಲಿ ನಡೆದ ಐಪಿಎಲ್ ಟಿ-20 ಕ್ರಿಕೆಟ್ ಟೂರ್ನಿಯಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ಕೋಲ್ಕತ್ತಾ ಉತ್ತಮ ಬ್ಯಾಟಿಂಗ್ ಪ್ರದರ್ಶನ ನೀಡಿ 20 ಓವರ್‌ಗೆ 208 ರನ್ ಗಳಿಸಿತ್ತು. 209 ಬೃಹತ್ ಮೊತ್ತದ ಗುರಿ ಬೆನ್ನತ್ತಿದ ಹೈದರಾಬಾದ್ ಕೊನೆವರೆಗೂ ಹೋರಾಡಿ 20 ಓವರ್ ಮುಕ್ತಾಯಕ್ಕೆ 7 ವಿಕೆಟ್ ನಷ್ಟಕ್ಕೆ 204 ರನ್ ಗಳಿಸಿ ಸೋಲೊಪ್ಪಿಕೊಂಡಿತು.



ಟಾಸ್ ಗೆದ್ದ ಹೈದರಾಬಾದ್ ಫೀಲ್ಡಿಂಗ್ ಆಯ್ದುಕೊಂಡಿತು. ಮೊದಲು ಬ್ಯಾಟಿಂಗ್ ಮಾಡಿದ ಕೆಕೆಆರ್ ಅಮೋಘ ಪ್ರದರ್ಶನ ನೀಡಿತು. ಆರಂಭಿಕ ಬ್ಯಾಟರ್ ಫಿಲಿಪ್ ಸಾಲ್ಟ್ ಸಮಯೋಜಿತ ಅರ್ಧಶತಕ (54) ಗಳಿಸಿ ತಂಡಕ್ಕೆ ಉತ್ತಮ ಅಡಿಪಾಯ ಹಾಕಿದರು.

ಈ ಮಧ್ಯೆ, 51 ರನ್‌ಗಳಿರುವಾಗಲೇ ತಂಡವು 4 ಪ್ರಮುಖ ವಿಕೆಟ್ ಕಳೆದುಕೊಂಡು ಸಂಕಷ್ಟಕ್ಕೆ ಸಿಲುಕಿತ್ತು. ಸುನಿಲ್ ನರೈನ್ (2), ವೆಂಕಟೇಶ್ ಅಯ್ಯರ್ (7), ನಾಯಕ ಶ್ರೇಯಸ್ ಅಯ್ಯರ್ (0) ಮತ್ತು ನಿತೀಶ್ ರಾಣಾ (9) ಅಲ್ಪ ಮೊತ್ತಕ್ಕೆ ಪೆವಿಲಿಯನ್ ಪರೇಡ್ ನಡೆಸಿದರು.

ಈ ವೇಳೆ ರಮನ್‌ದೀಪ್ ಸಿಂಗ್ ಮತ್ತು ಫಿಲಿಪ್ 54 ರನ್‌ಗಳ ಜೊತೆಯಾಟವಾಡಿದರು. ರಮನ್‌ದೀಪ್ 35 ರನ್ ಗಳಿಸಿದರು. ಸ್ಟಾಲ್ ಅರ್ಧಶತಕ ಗಳಿಸಿ ಮಿಂಚಿದರು. ಇವರ ಬಳಿಕ ಮತ್ತೆ ಜೊತೆಗೂಡಿದ ರಸೆಲ್ ಮತ್ತು ರಿಂಕು ಸಿಂಗ್ ಹೈದರಾಬಾದ್ ಬೌಲರ್‌ಗಳನ್ನು ಮನಬಂದಂತೆ ದಂಡಿಸಿದರು. ರಸೆಲ್ ಔಟಾಗದೇ 25 ಬಾಲ್‌ಗಳಿಗೆ 64 ರನ್ ಸಿಡಿಸಿ ಆರ್ಭಟಿಸಿದರು. ರಿಂಕು ಸಿಂಗ್ 23 ರನ್ ಗಳಿಸಿ ಸವಾಲಿನ ಮೊತ್ತ ಪೇರಿಸುವಲ್ಲಿ ತಂಡಕ್ಕೆ ನೆರವಾದರು. ಒಟ್ಟಾರೆ 20 ಓವರ್‌ಗೆ ಕೆಕೆಆರ್ 7 ವಿಕೆಟ್ ಕಳೆದುಕೊಂಡು 208 ರನ್ ಗಳಿಸಿತು.

ಕೆಕೆಆರ್ ನೀಡಿದ 209 ಬೃಹತ್ ಮೊತ್ತದ ಗುರಿ ಬೆನ್ನತ್ತಿದ ಹೈದರಾಬಾದ್ ಕೊನೆ ಕ್ಷಣದವರೆಗೂ ಗೆಲುವಿನ ಭರವಸೆ ಮೂಡಿಸಿತ್ತು. ಮಯಾಂಕ್ ಅಗರ್ವಾಲ್ (32), ಅಭಿಷೇಕ್ ಶರ್ಮಾ (32), ರಾಹುಲ್ ತ್ರಿಪಾಠಿ (20), ಐಡೆನ್ ಮಾರ್ಕ್ರಾಮ್ (18) ತಂಡದ ಮೊತ್ತವನ್ನು ಒಂದು ಹಂತಕ್ಕೆ ತಂದು ನಿಲ್ಲಿಸಿದರು. ಈ ಹಂತದಲ್ಲಿ ಬಂದ ಹೆನ್ರಿಕ್ ಕ್ಲಾಸೆನ್ ಅಬ್ಬರದ ಬ್ಯಾಟಿಂಗ್ ಪ್ರದರ್ಶನ ನೀಡಿ ತಂಡಕ್ಕೆ ಗೆಲುವಿನ ಭರವಸೆ ಮೂಡಿಸಿದ್ದರು. ಕ್ಲಾಸೆನ್ 29 ಬಾಲ್‌ಗೆ 63 ರನ್ (8 ಸಿಕ್ಸ್) ಗಳಿಸಿದರು. ಕೊನೆವರೆಗೂ ಪಂದ್ಯ ರೋಚಕತೆಯಿಂದ ಕೂಡಿತ್ತು. ಆದರೆ ಕೊನೆ ಹಂತದಲ್ಲಿ ಹೈದರಾಬಾದ್‌ಗೆ ಅದೃಷ್ಟ ಲಕ್ಷ್ಮಿ ಒಲಿಯಲಿಲ್ಲ. ಕ್ಲಾಸೆನ್, ಅಬ್ದುಲ್ ಸಮದ್, ಶಹಬಾಜ್ ಅಹಮದ್ ದೊಡ್ಡ ಹೊಡೆತಕ್ಕೆ ಮುಂದಾಗಿ ಕ್ಯಾಚ್ ಇತ್ತು ಔಟಾದರು. ಇದು ತಂಡದ ಭರವಸೆ ಕುಗ್ಗುವಂತೆ ಮಾಡಿತು. ಕೊನೆ ಬಾಲ್‌ಗೆ 4 ರನ್ ಬೇಕಿತ್ತು. ಆದರೆ ಪ್ಯಾಟ್ ಕಮಿನ್ಸ್ ಡಾಟ್ ಬಾಲ್ ಮಾಡಿದರು. ಎಲ್ಲಾ ಓವರ್‌ಗೆ 7 ವಿಕೆಟ್ ನಷ್ಟಕ್ಕೆ ಹೈದರಾಬಾದ್ 204 ರನ್ ಗಳಿಸಿ ಸೋತಿತು. ಕೆಕೆಆರ್ ಪರ ಹರ್ಷಿತ್ ರಾಣಾ 3 ವಿಕೆಟ್ ಕಬಳಿಸಿ ಮಿಂಚಿದರು. ಆಂಡ್ರೆ ರಸೆಲ್ 2 ಹಾಗೂ ವರುಣ್ ಚಕ್ರವರ್ತಿ, ಸುನಿಲ್ ನರೈನ್ ತಲಾ 1 ವಿಕೆಟ್ ಪಡೆದರು.

# ಸದೃಢ ದೇಶಕ್ಕಾಗಿ ಮೋದಿ– ದೇವೇಗೌಡ್ರು ಒಂದಾಗಿದ್ದಾರೆ

**ರಾಮನಗರ:** ಪ್ರಧಾನಿ ನರೇಂದ್ರ ಮೋದಿ ಹಾಗೂ ಮಾಜಿ ಪ್ರಧಾನಿ ದೇವೇಗೌಡ್ರು ಇಬ್ಬರೂ ಸದೃಢ ದೇಶಕ್ಕಾಗಿ ಒಂದಾಗಿದ್ದಾರೆ. ಮೋದಿಯವರು ಮತ್ತೊಮ್ಮೆ ಪ್ರಧಾನಿ ಆಗಬೇಕು ಅಂತ ಜೆಡಿಎಸ್ ಒಂದಾಗಿವೆ. ಅದೇ ಥರಾ ಕಾರ್ಯಕರ್ತರು ಗ್ರಾಮೀಣ ಭಾಗದಲ್ಲಿ ಒಂದಾಗಬೇಕು ಎಂದು ಮಾಜಿ ಸಚಿವ ಸಿ.ಪಿ. ಯೋಗೇಶ್ವರ್ ರಾಮನಗರದಲ್ಲಿ ಹೇಳಿದರು.



32 ವರ್ಷಗಳ ಹಿಂದೆ ರಾಮನಗರದಲ್ಲಿ ಪಕ್ಷ ಇರಲಿಲ್ಲ. ಆಗ ದೇವೇಗೌಡರು ಪಕ್ಷ ಕಟ್ಟಿದ್ರೂ. ರಾಮಕೃಷ್ಣ ಹೆಗಡೆ ಇದ್ದರು, ಬೊಮ್ಮಾಯಿ ಇದ್ರು, ಆ ಪಕ್ಷ ಪಡೆದುಹೋಯ್ತು. ಕೆಲವರು ಜನತಾದಳಕ್ಕೆ ಹೋದ್ರು, ಕೆಲವರು ಬಿಜೆಪಿಗೆ ಹೋದ್ರು. ಹಾಗೆ ನೋಡಿದ್ರೆ, ಬಿಜೆಪಿ ಮತ್ತು ಜೆಡಿಎಸ್ ಎರಡೂ ಒಂದೇ ಪಕ್ಷ. ಮೂರು ಬಾರಿ ಸಂಸದರಾದ ಡಿ.ಕೆ. ಸುರೇಶ್ ಮತ್ತೊಮ್ಮೆ ಆಯ್ಕೆ ಮಾಡಿ ಅಂತ ತಿರುಗುತ್ತಿದ್ದಾರೆ. ಸೀರೆಗಳನ್ನೆಲ್ಲ ಹಂಚುತ್ತಿದ್ದಾರೆ. ನಿಖಿಲ್ ಕುಮಾರಸ್ವಾಮಿ ಕೂಡ ಪತ್ರಿಕಾಗೋಷ್ಠಿ ನಡೆಸಿ ಹೇಳಿದ್ರು. ಇಕ್ಬಾಲ್ ಹುಸೇನ್ ಇದೆಲ್ಲಾ ಮಾಡಿದ್ದಾರೆ ಅಂತ. ಡಿಕೆ ಬ್ರದರ್ಸ್ ಯಾರೋ ಬರ್ತಾರೆ ಅಂತ ಊಹಿಸಿದ್ರು. ಬೇರೆ ಯಾರಾದ್ರೂ ಬಂದ್ರೆ ದಬಾಯಿಸಿಬಿಡಬಹುದು ಅಂದ್ಕೊಂಡಿದ್ರು. ಆದರೆ ಡಾ. ಮಂಜುನಾಥ್ ಬಂದ ನಂತರ ಏನ್ ಮಾಡೋದಕ್ಕೂ ತಿಳಿಯುತ್ತಿಲ್ಲ. ಹಾಗಾಗಿ ತಡಬಡಾಯಿಸ್ತಿದ್ದಾರೆ. ನಮ್ಮದು ದೊಡ್ಡ ಕ್ಷೇತ್ರ. ಇಪ್ಪತ್ತೇಳು ವರೆ ಲಕ್ಷ ಮತದಾರರಿದ್ದಾರೆ. ಮೊನ್ನೆ ಚನ್ನಪಟ್ಟಣದಲ್ಲಿ ಕಾಂಗ್ರೆಸ್ ಗೆ ಸಿಕ್ಕಿದ್ದು 14 ಸಾವಿರ ಓಟು. ಉಳಿದಿದ್ದು ನಾನೂ ಕುಮಾರಸ್ವಾಮಿ ಹಂಚಿಕೊಂಡ್ವಿ. ಆರ್. ಆರ್. ನಗರದಲ್ಲಿ 50 ಸಾವಿರ ಲೀಡ್ ಸಿಗುತ್ತೆ. ಬೆಂಗಳೂರು ದಕ್ಷಿಣದಲ್ಲಿ 1 ಲಕ್ಷ ಲೀಡ್ ಬರುತ್ತೆ. ಡಾ ಮಂಜುನಾಥ್ ರವರು ಸಂಸದರಾಗಿ, ಮಂತ್ರಿ ಆಗ್ತಾರೆ. ಜೆಡಿಎಸ್ ಬಿಜೆಪಿ ಅಣ್ಣ ತಮ್ಮಂದಿರಿದ್ದಂಗೆ. ಇವರ ಗೆಲವು ಬಹಳಷ್ಟು ಪ್ರಶ್ನೆಗಳಿಗೆ ಉತ್ತರ ಕೊಡುತ್ತೆ ಎಂದರು.

**ಮಂಡ್ಯದಲ್ಲಿ ಸ್ಪರ್ಧಿಸುವಂತೆ ನಿಖಿಲ್‌ಗೆ ಒತ್ತಾಯ:** ಮಂಡ್ಯ ಕ್ಷೇತ್ರದಲ್ಲಿ ಹೆಚ್.ಡಿ.ಕುಮಾರಸ್ವಾಮಿ ಸ್ಪರ್ಧೆ ಸಾಧ್ಯತೆ ಹಿನ್ನಲೆ, ರಾಮನಗರ ಜಿಲ್ಲೆ ಚನ್ನಪಟ್ಟಣದಲ್ಲಿ ನಿಖಿಲ್‌ಗೆ ಕಾರ್ಯಕರ್ತರ ಮುತ್ತಿಗೆ ಹಾಕಿದ್ರು. ಕುಮಾರಸ್ವಾಮಿ ಚನ್ನಪಟ್ಟಣ ಕ್ಷೇತ್ರ ಬಿಟ್ಟು ಹೋಗಬಾರದೆಂದು ಆಗ್ರಹಿಸಿದ್ರು. ಮಂಡ್ಯ ಕ್ಷೇತ್ರದಲ್ಲಿ ನೀವೇ ಸ್ಪರ್ಧಿಸಿ, ನಾವು ಬಂದು ಪ್ರಚಾರ ಮಾಡ್ತೇವೆ. ಆದ್ರೆ ಮಂಡ್ಯ ಕ್ಷೇತ್ರದಿಂದ ಹೆಚ್‌ಡಿಕೆ ಸ್ಪರ್ಧೆ ಮಾಡಲು ಬಿಡುವುದಿಲ್ಲ ಎಂದು ಕಾರ್ಯಕರ್ತರು ಪಟ್ಟು ಹಿಡಿದ್ರು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com